

ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಸಂಪುಟ: 22, ಸಂಚಿಕೆ: 225, ಪುಟಗಳು: 8, ಭಾನುವಾರ, 25 ಮೇ 2025 RNI NO. KARKAN/2002/08054

epaper: www.sanjemugilu.com

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3





ದಶಪ್ರಮತಿ ಮುದ್ರಣಾಲಯ

dashapramathi mudranalaya

PRE-PRESS PRINTERS

Contact: +91 9483589085 | e-mail: dashapramathimudranalaya@gmail.com

We Undertake Printing of Newspapers | Tabloids | Magazines




**ಸುಭಾಷಿತ**

ದುಡಿ, ಮೈ ಮುರಿದು ದುಡಿ, ಹೆಚ್ಚು ಹೆಚ್ಚಾಗಿ ದುಡಿ, ಆ ನಿನ್ನ ದುಡಿಮೆಯಲ್ಲಿ ಕ್ರಮ, ನಿಯಮ ಗುರಿ, ದಕ್ಷತೆ ಇರಲಿ

। ಸರ್.ಎಂ.ವಿಶ್ವೇಶ್ವರಯ್ಯ

## ಪಂಚಾಂಗ

(ಭಾನುವಾರ 25 ಮೇ-2025)

- ಶ್ರೀ ವಿಶ್ವಾವಸು ನಾಮ ಸಂವತ್ಸರ,
- ಉತ್ತರಾಯಣ, ವಸಂತ ಋತು,
- ವೈಶಾಖ ಮಾಸ, ಕೃಷ್ಣ ಪಕ್ಷ, ತ್ರಯೋದಶಿ,
- ಅಶ್ವಿನಿ ನಕ್ಷತ್ರ
- ಯೋಗ: ಸೌಭಾಗ್ಯ
- ರಾಹುಕಾಲ - 05:05 ರಿಂದ 06:41
- ಗುಳಿಕಕಾಲ - 03:29 ರಿಂದ 05:05
- ಯಮಗಂಡಕಾಲ - 12:17 ರಿಂದ 01:53

## ಸಂಕ್ಷಿಪ್ತ ಸುದ್ದಿ

### ಆಮಿಷವೊಡ್ಡಿ 3 ವರ್ಷದ ಬಾಲಕಿ ಮೇಲೆ ಅತ್ಯಾಚಾರವೆಸಗಿ ಕೊಂದ ಯುವಕ




**ಅಮರಾವತಿ:** ಆಂಧ್ರಪ್ರದೇಶದ ಕಡಪ ಜಿಲ್ಲೆಯ ಕಂಬಲದಿನ್ನೆ ಗ್ರಾಮದಲ್ಲಿ 3 ವರ್ಷದ ಬಾಲಕಿಯ ಮೇಲೆ ಕ್ರೂರವಾಗಿ ಅತ್ಯಾಚಾರ ಮಾಡಿ ಕೊಲೆ ಮಾಡಲಾಗಿದೆ. ಆ ಬಾಲಕಿಯ ಪೋಷಕರು ಸಂಬಂಧಿಕರ ಮದುವೆಗೆ ಹೋಗಿದ್ದಾಗ ಈ ಭೀಕರ ಅಪರಾಧ ನಡೆದಿದೆ. ಆರೋಪಿಯು ಬಾಲಕಿಗೆ ಬಾಳೆಹಣ್ಣಿನಿಂದ ಆಮಿಷವೊಡ್ಡಿ, ತೋಟಕ್ಕೆ ಕರೆದೊಯ್ದು ಈ ಹೇಯ ಕೃತ್ಯ ಎಸಗಿದ್ದಾನೆ ಎಂದು ಆರೋಪಿಸಲಾಗಿದೆ. ಗ್ರಾಮಸ್ಥರು ಬಾಲಕಿಯ ಶವವನ್ನು ಮುಳ್ಳಿನ ಪೊದೆಯಲ್ಲಿ ಬಿಟ್ಟು ಹೋಗಿರುವುದು ಗೊತ್ತಾದಾಗ ಈ ಘಟನೆ ಬೆಳಕಿಗೆ ಬಂದಿದೆ. ನಂತರ ಸ್ಥಳೀಯರು ಆರೋಪಿಯನ್ನು ಹಿಡಿದು ಮೈಲವರಂ ಪೊಲೀಸರಿಗೆ ಒಪ್ಪಿಸಿದ್ದಾರೆ. ಪುಟ 2

### ಸೊಸೆಯ ಕುತ್ತಿಗೆಯನ್ನು ಕತ್ತಿಯಿಂದ ಸೀಳಿ ಕೊಂದ ಮಾವ!



**ಜಮುಯಿ:** ಬಿಹಾರದ ಜಮುಯಿ ಜಿಲ್ಲೆಯಲ್ಲಿ ಭಯಾನಕ ಘಟನೆಯೊಂದು ಬೆಳಕಿಗೆ ಬಂದಿದೆ. ಮಾವನೊಬ್ಬ ತನ್ನ ಸೊಸೆಯನ್ನು ಕತ್ತಿಯಿಂದ ಕತ್ತು ಸೀಳಿ ಕೊಂದಿದ್ದಾನೆ ಎನ್ನಲಾಗಿದೆ. ಕೊಲೆ ನಡೆದ ತಕ್ಷಣ ಆರೋಪಿ ಸ್ಥಳದಿಂದ ಪರಾರಿಯಾಗಿದ್ದಾನೆ. ಪೊಲೀಸರು ಶವವನ್ನು ವಶಕ್ಕೆ ಪಡೆದು ತನಿಖೆ ಆರಂಭಿಸಿದ್ದಾರೆ. ಜಮುಯಿ ನಗರದ ಸಿಕಂದ್ರ ಪೊಲೀಸ್ ಠಾಣೆ ವ್ಯಾಪ್ತಿಯ ಈತಸಾಗರ್ ಗ್ರಾಮದಲ್ಲಿ ಈ ಘಟನೆ ನಡೆದಿದೆ. ಶುಕ್ರವಾರ ರಾತ್ರಿ ಖೇಲನ್ ಮಾಂಝಿ ಎಂಬ ವ್ಯಕ್ತಿ ತನ್ನ ಸೊಸೆ ಖುಷ್ಬೂ ದೇವಿ ಮನೆಕೆಲಸ ಮಾಡುತ್ತಿದ್ದಾಗ ಆಕೆಯ ಮೇಲೆ ಕತ್ತಿಯಿಂದ ಹಲ್ಲೆ ನಡೆಸಿದ್ದಾನೆ. ಆಕೆಯ ಕುತ್ತಿಗೆಗೆ ತೀವ್ರ ಪೆಟ್ಟು ಬಿದ್ದ ಪರಿಣಾಮ ಆಕೆ ಸ್ಥಳದಲ್ಲೇ ಸಾವನ್ನಪ್ಪಿದ್ದಾಳೆ. ಖುಷ್ಬೂ ದೇವಿ ಖೇಲನ್ ಮಾಂಝಿ ಅವರ ಮಗ ರಮಣ್ ಮಾಂಝಿಯನ್ನು ಮದುವೆಯಾಗಿ ಸುಮಾರು 5 ವರ್ಷಗಳಾಗಿವೆ. ಈ ದಂಪತಿಗೆ ಒಬ್ಬ ಚಿಕ್ಕ ಮಗನೂ ಇದ್ದಾನೆ. ವರದಿಗಳ ಪ್ರಕಾರ, ಈ ಕೊಲೆ ನಡೆಯುವ ಮೊದಲು ಯಾವುದೇ ವಾದ ಅಥವಾ ಜಗಳದ ಲಕ್ಷಣಗಳು ಕಂಡುಬಂದಿಲ್ಲ. ಪುಟ 2

## ಬೆಂಗಳೂರಿನ ಬೆಳ್ಳಂದೂರು ಕೆರೆಯಲ್ಲಿ ಮತ್ತೆ ವಿಷಕಾರಿ ನೊರೆ ಹಾವಳಿ

» **ಅಕ್ಕಪಕ್ಕದ ನಿವಾಸಿಗಳಲ್ಲಿ ಆತಂಕ!**

**ಬೆಂಗಳೂರು:** ಕೆಲ ವರ್ಷಗಳ ಹಿಂದಷ್ಟೇ ಬೆಳ್ಳಂದೂರು ಕೆರೆಯಲ್ಲಿ ವಿಷಕಾರಿ ನೊರೆ ಕಾಣಿಸಿಕೊಂಡು ರಾಷ್ಟ್ರಮಟ್ಟದಲ್ಲಿ ಸುದ್ದಿಯಾಗಿತ್ತು. ನಂತರ ಕೆರೆ ಸ್ವಚ್ಛ ಮಾಡುವುದಾಗಿ ಹೇಳಲಾಗಿತ್ತು. ಆದರೆ ಇಲ್ಲಿಯವರೆಗೆ ಕೆರೆಯಲ್ಲಿ ಅಭಿವೃದ್ಧಿ ಆಗಲೇ ಇಲ್ಲ. ಇದೀಗ ಮತ್ತೆ ಕೆರೆಯಲ್ಲಿ ನೊರೆ ಕಾಣಿಸಿಕೊಂಡಿದ್ದು ಜನರಲ್ಲಿ ಆತಂಕ ಹೆಚ್ಚಿಸಿದೆ.

ಸಿಲಿಕಾನ್ ಸಿಟಿ ಬೆಂಗಳೂರಲ್ಲಿ ಕೆಲ ದಿನಗಳಿಂದ ಸುರಿಯುತ್ತಿರುವ ಮಳೆಯ ಬಳಿಕ, ಬೆಳ್ಳಂದೂರು ಕೆರೆಯಲ್ಲಿ ಭಾರಿ ಪ್ರಮಾಣದಲ್ಲಿ ನೊರೆ ಕಾಣಿಸಿಕೊಳ್ಳುತ್ತಿದೆ. ಕೆರೆಗೆ ನೀರಿನ ಹರಿವು ಹೆಚ್ಚಾಗಿದ್ದರಿಂದ ನೊರೆ ಪ್ರಮಾಣವು ಏರಿಕೆಯಾಗಿದೆಯಂತೆ. ಬೆಳ್ಳಂದೂರು



ಕೆರೆ ಕಲುಷಿತವಾಗಿದೆಂದು ಸ್ಥಳೀಯರು ಆತಂಕಗೊಂಡಿದ್ದು, ಕಲುಷಿತ ನೀರು ಕೆರೆಗೆ ಸೇರ್ಪಡೆಯಾದ ಕಾರಣ, ಮಲಿನವಾಗಿ ಕೆರೆ ಕೋಡಿಯಲ್ಲಿ ನೊರೆ ಎದ್ದು, ಗಾಳಿ ಮೂಲಕ ಜನವಸತಿ ಪ್ರದೇಶದ ಕಡೆಗೆ ಹೋಗುತ್ತಿದೆ.

ಬೆಳ್ಳಂದೂರು, ಕರಿಯಮ್ಮ ಅಗ್ರಹಾರ, ಯಮಲೂರು, ಕೆಂಪಾಪುರ, ಚಲಘಟ್ಟ, ನಾಗಸಂದ್ರ, ಇಬ್ಬಲೂರು, ದೇವರ ಬೀಸನಹಳ್ಳಿ ಕಾಡುಬೀಸನಹಳ್ಳಿ ಪ್ರದೇಶದ ಜನರಿಗೆ ಮತ್ತೆ ತೊಂದರೆ ಉಂಟಾಗಿದ್ದು, ಪದೇ ಪದೇ ಬೆಳ್ಳಂದೂರು ಕೆರೆಯಲ್ಲಿ ದೊಡ್ಡ ಪ್ರಮಾಣದಲ್ಲಿ ನೊರೆ ಕಾಣಿಸಿಕೊಳ್ಳುತ್ತಿದೆ.

**ಕೆರೆಯಲ್ಲಿ ನೊರೆ ಕಾಣಿಸಿಕೊಳ್ಳಲು ಕಾರಣವೇನು?:** ಇನ್ನು ಕೆರೆಯಲ್ಲಿ ನೊರೆ ಕಾಣಿಸಿಕೊಳ್ಳಲು ಕಾರಣ ಏನೆಂದರೆ ಸಂಸ್ಕರಿಸದ ಮಾಲಿನ್ಯಯುಕ್ತ ನೀರನ್ನು ಕೆರೆಗೆ ಬಿಡಲಾಗುತ್ತಿದೆಯಂತೆ. ಈ ಮಾಲಿನ್ಯಯುಕ್ತ ನೀರು ಕೆರೆಯಿಂದ ಹೊರ ಹೋಗಲು ಕನಿಷ್ಠ 10-15 ದಿನಗಳು ಬೇಕಾಗುತ್ತಂತೆ. ಈ ಅವಧಿಯಲ್ಲಿ ಸಾವಯವ ವಸ್ತುಗಳು ಕೆರೆಯ ನೀರಿನಲ್ಲಿ ಆಮ್ಲಜನಕವಿಲ್ಲದೇ ತಳ ಸೇರುತ್ತದೆ. ನಂತರ ಅದು ಕೆಸರಿನ ರೂಪವನ್ನ ಪಡೆಯುತ್ತದೆ. ಭಾರಿ ಮಳೆ ಆದ ಸಂದರ್ಭದಲ್ಲಿ ಅಪಾರ ಪ್ರಮಾಣದ ನೀರು ಹರಿದು ಬರುತ್ತದೆ. ರಾತ್ರಿ ಇಡೀ ಒಳ ಹರಿವಿನ ಪ್ರಮಾಣ ಹೆಚ್ಚಿದಂತೆ ಕೆರೆಯ ಅಡಿಯಲ್ಲಿ ಕೆಸರು ಮತ್ತು ಮಾಲಿನ್ಯದ ನೀರಿನ ಮಂಥನ ಆರಂಭವಾಗುತ್ತದೆ. ಇದು ನೊರೆ ಸೃಷ್ಟಿಯಾಗಲು ವೇದಿಕೆಯನ್ನು ಸೃಷ್ಟಿ ಮಾಡುತ್ತದೆ.

ಕೆರೆಯ ಆಳದಲ್ಲಿ ಅಲ್ಪ ಪ್ರಮಾಣದ ನೊರೆ ಇರುತ್ತದೆ. ಮಳೆಯಿಂದಾಗಿ ಕೆರೆಯಲ್ಲಿ ಯಾವಾಗ ನೀರಿನ ಪ್ರಮಾಣ ಹೆಚ್ಚುತ್ತಾ ಹೋಗುತ್ತೋ ಆಗ 25 ಅಡಿ ಎತ್ತರದಷ್ಟು ಗಾಳಿ ಗುಳ್ಳೆಗಳು ಪುಟ 2

## ರಾಜ್ಯ ಸರ್ಕಾರಗಳಿಗೆ ಪ್ರಧಾನಿ ಮೋದಿ ಕರೆ

# ಎಲ್ಲರೂ ಒಂದಾಗಿ ಕೆಲಸ ಮಾಡೋಣ

**ನವದೆಹಲಿ:** ವಿಕಸಿತ ಭಾರತ ಪ್ರತಿಯೊಬ್ಬ ಭಾರತೀಯನ ಗುರಿ. ಪ್ರತಿಯೊಂದು ರಾಜ್ಯವೂ ವಿಕಸಿತವಾಗಿದ್ದರೆ, ಭಾರತವೂ ವಿಕಸಿತವಾಗಿರುತ್ತದೆ. ಇದು ಭಾರತದ 140 ಕೋಟಿ ನಾಗರಿಕರ ಆಕಾಂಕ್ಷೆಯಾಗಿದೆ. ಆಪರೇಷನ್ ಸಿಂಧೂರ್ ಮತ್ತು ಪಾಕಿಸ್ತಾನದೊಂದಿಗಿನ ಭಾರತದ ಹಗೆತನದ ನಂತರ ಹಲವು ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ಪ್ರಧಾನಿ ನರೇಂದ್ರ ಮೋದಿ ನೀತಿ ಆಯೋಗದ ಸಭೆ ನಡೆಸಿದ್ದಾರೆ. ನೀತಿ ಆಯೋಗ ಸಭೆಯಲ್ಲಿ ಮಹಿಳೆಯರನ್ನು ಕಾರ್ಯಪಡೆಯಲ್ಲಿ ಸೇರಿಸಿಕೊಳ್ಳಲು ಕೆಲಸ ಮಾಡಬೇಕು ಮತ್ತು ಮಹಿಳೆಯರನ್ನು ಗೌರವಯುತವಾಗಿ ಕಾರ್ಯಪಡೆಯಲ್ಲಿ ಸೇರಿಸಲು ಕಾನೂನುಗಳನ್ನು ರೂಪಿಸಬೇಕು ಎಂದು ಪ್ರಧಾನಿ ಮೋದಿ ಹೇಳಿದ್ದಾರೆ.

2047ರ ಮೊದಲು ದೇಶವನ್ನು ವಿಕಸಿತ ಭಾರತವನ್ನಾಗಿ ಮಾಡುವ ತಮ್ಮ ದೃಷ್ಟಿಕೋನವನ್ನು ಹಂಚಿಕೊಂಡ ಪ್ರಧಾನಿ ಮೋದಿ, ಪ್ರತಿಯೊಂದು ರಾಜ್ಯ ಮತ್ತು ಅದರ ಪ್ರತಿಯೊಂದು ಸಣ್ಣ ಭಾಗವನ್ನು 'ವಿಕಸಿತ'ವನ್ನಾಗಿ ಮಾಡಬೇಕು ಎಂದು ಹೇಳಿದ್ದಾರೆ. ಭಾರತದ ರಾಜ್ಯಗಳು ಜಾಗತಿಕ ಮಾನದಂಡಗಳಿಗೆ ಸಮನಾಗಿ ಕನಿಷ್ಠ ಒಂದು ಪ್ರವಾಸಿ ತಾಣವನ್ನು ಅಭಿವೃದ್ಧಿಪಡಿಸುವಂತೆ ಮೋದಿ ಮನವ ಮಾಡಿದರು. ದೇಶಾದ್ಯಂತ ಪ್ರವಾಸೋದ್ಯಮದ



ದೊಡ್ಡ ಅಭಿಯಾನದಲ್ಲಿ, ಪ್ರಧಾನಿ ಮೋದಿ ''ಒಂದು ರಾಜ್ಯ, ಒಂದು ಜಾಗತಿಕ ತಾಣ'' ಎಂಬ ಕಲ್ಪನೆಯನ್ನು ಮುಂದಿಟ್ಟರು.

''ರಾಜ್ಯಗಳು ಜಾಗತಿಕ ಮಾನದಂಡಗಳಿಗೆ ಅನುಗುಣವಾಗಿ ಮತ್ತು ಎಲ್ಲಾ ಸೌಲಭ್ಯಗಳು ಮತ್ತು ಮೂಲಸೌಕರ್ಯಗಳನ್ನು ಒದಗಿಸುವ ಮೂಲಕ ಪ್ರತಿ ರಾಜ್ಯಕ್ಕೆ ಕನಿಷ್ಠ ಒಂದು ಪ್ರವಾಸಿ ತಾಣವನ್ನು ಅಭಿವೃದ್ಧಿಪಡಿಸಬೇಕು. ಇದು ನೆರೆಯ ನಗರಗಳನ್ನು ಪ್ರವಾಸಿ ಸ್ಥಳಗಳಾಗಿ ಅಭಿವೃದ್ಧಿಪಡಿಸಲು ಕಾರಣವಾಗುತ್ತದೆ'' ಎಂದು ಅವರು ಹೇಳಿದರು. ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲಿನ ದಾಳಿಯ ಹೊರತಾಗಿಯೂ ಸರ್ಕಾರವು ಧೈರ್ಯದಿಂದ ಉಳಿದಿದೆ ಎಂದು ಪ್ರವಾಸೋದ್ಯಮ ಕುರಿತಾದ ಈ ಹೇಳಿಕೆ ತೋರಿಸುತ್ತದೆ. ಪುಟ 2

## ನೀತಿ ಆಯೋಗದ ಸಭೆಗೆ ಸಿಎಂ ಸಿದ್ದರಾಮಯ್ಯ ಗೈರು

**ದೆಹಲಿ:** ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಇಂದು ಮಹತ್ವದ ನೀತಿ ಆಯೋಗದ ಸಭೆ ನಡೆಯಿತು. ನವದೆಹಲಿಯಲ್ಲಿ 10ನೇ ನೀತಿ ಆಯೋಗದ ಆಡಳಿತ ಮಂಡಳಿ ಸಭೆ ನಡೆದಿದ್ದು, ಪ್ರಧಾನಿ ಮೋದಿ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಕೇಂದ್ರ ಸಚಿವರಾದ ರಾಜನಾಥ ಸಿಂಗ್, ಜೆಪಿ ನಡ್ಡಾ, ನಿರ್ಮಲಾ ಸೀತಾರಾಮನ್ ಸೇರಿದಂತೆ ಪ್ರಮುಖರು ಭಾಗಿಯಾಗಿದ್ದರು. ಇನ್ನು ಉತ್ತರ ಪ್ರದೇಶ, ಪಂಜಾಬ್ ಸೇರಿದಂತೆ ಹಲವು ರಾಜ್ಯಗಳ ಸಿಎಂಗಳು ಭಾಗಿಯಾಗಿದ್ದರು. ಇತ್ತ ಆಂಧ್ರ ಸಿಎಂ ಚಂದ್ರಬಾಬು ನಾಯ್ಡು, ತೆಲಂಗಾಣ ಸಿಎಂ ರೇವಂತ್ ರೆಡ್ಡಿ, ತಮಿಳುನಾಡು ಸಿಎಂ ಸ್ಟಾಲಿನ್ ಸೇರಿದಂತೆ ಹಲವರು ಭಾಗಿಯಾಗಿದ್ರು. ಆದ್ರೆ ಕರ್ನಾಟಕದ ಸಿಎಂ ಸಿದ್ದರಾಮಯ್ಯ ಮಾತ್ರ ಈ ಮಹತ್ವದ ಸಭೆಗೆ ಹೋಗದೇ ಗೈರಾಗಿದ್ದಾರೆ.



**ಕರ್ನಾಟಕ ಸಿಎಂ ಸಿದ್ದರಾಮಯ್ಯ ಗೈರು:** ಇತ್ತ ಕಾಂಗ್ರೆಸ್ ಆಡಳಿತದ ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತ್ರ ಸಭೆಗೆ ಗೈರಾಗಿದ್ದಾರೆ. ತಮಗೆ ಪೂರ್ವ ನಿಯೋಜಿತ ಕಾರ್ಯಕ್ರಮ ಇದೆ ಅಂತ ತಿಳಿಸಿದ್ದಾರೆ. ಇನ್ನು ತಮ್ಮ ಭಾಷಣವನ್ನು ಪರಿಷತ್ತಿನಲ್ಲಿ ಓದಲು ಕಳುಹಿಸಿದ್ದಾರೆ. ಮುಖ್ಯಮಂತ್ರಿ ಸಭೆಯನ್ನು ಬಹಿಷ್ಕರಿಸುತ್ತಿಲ್ಲ ಆದರೆ ಮೈಸೂರಿನಲ್ಲಿ ನಿಗದಿತ ಕಾರ್ಯಕ್ರಮವನ್ನು ಹೊಂದಿದ್ದಾರೆ ಎಂದು ಮೂಲಗಳು ತಿಳಿಸಿವೆ.

**ಕೇರಳ ಸಿಎಂ ಬದಲು, ಹಣಕಾಸು ಸಚಿವರು ಭಾಗಿ:** ಕೇರಳದಲ್ಲಿ, ಮಾರ್ಕ್ಸ್‌ವಾದಿ ಹಿರಿಯ ಮತ್ತು ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಅವರು ತಮ್ಮ ಪರವಾಗಿ ರಾಜ್ಯ ಹಣಕಾಸು ಸಚಿವ ಕೆ.ಎನ್. ಬಾಲಗೋಪಾಲ್ ಅವರನ್ನು ಪುಟ 2

## ಮನುಷ್ಯರನ್ನು ಕೊಂದು, ರಕ್ತ ಕುಡಿದು, ಮೆದುಳು ತಿನ್ನುತ್ತಿದ್ದ ನರಭಕ್ಷಕ

# ಜೀವಾವಧಿ ಶಿಕ್ಷೆ

**ಲಕ್ನೋ:** ಮನುಷ್ಯರನ್ನು ಕೊಂದು ರಕ್ತ ಕುಡಿದು, ಮೆದುಳು ತಿನ್ನುತ್ತಿದ್ದ ಹಂತಕ ರಾಮ್ ನಿರಂಜನ್ ಕೋಲ್ ಅಲಿಯಾಸ್ ರಾಜಾ ಕೋಲಂದರ್‌ಗೆ ಲಕ್ನೋ ನ್ಯಾಯಾಲಯವು ಜೀವಾವಧಿ ಶಿಕ್ಷೆ ವಿಧಿಸಿದೆ. 2000ರಲ್ಲಿ ನಡೆದ ಜೋಡಿ ಕೊಲೆ ಪ್ರಕರಣದಲ್ಲಿ ಲಕ್ನೋ ನ್ಯಾಯಾಲಯವ ಜೀವಾವಧಿ ಶಿಕ್ಷೆ ಹಾಗೂ 1 ಲಕ್ಷ ರೂ. ದಂಡವನ್ನು ವಿಧಿಸಿದೆ. ಪುಟ 2



## ನಾವಿನ್ನು ಸುಮ್ಮನೆ ಕುಳಿತುಕೊಳ್ಳುವುದಿಲ್ಲ

### ಅಮೆರಿಕದಲ್ಲಿ ಭಯೋತ್ಪಾದನೆ, ಪಾಕಿಸ್ತಾನದ ವಿರುದ್ಧ ಶಶಿ ತರೂರ್ ವಾಗ್ದಾಳಿ

**ವಾಷಿಂಗ್ಟನ್:** ಗಡಿಯಾಚೆಗಿನ ಭಯೋತ್ಪಾದನೆಯ ಕುರಿತು ಜಾಗತಿಕ ಮಟ್ಟದಲ್ಲಿ ಭಾರತದ ದೃಷ್ಟಿಕೋನವನ್ನು ಮಂಡಿಸಲು ಸರ್ವಪಕ್ಷ ನಿಯೋಗವು ವಿಶ್ವ ಪ್ರವಾಸ ಮಾಡುತ್ತಿದೆ. ಶಶಿ ತರೂರ್ ನೇತೃತ್ವದ ನಿಯೋಗವು ಭಯೋತ್ಪಾದನೆಯ ವಿರುದ್ಧದ ಯುದ್ಧದಲ್ಲಿ ಅಮೆರಿಕದ ಜನರಿಂದ ಸಹಕಾರವನ್ನು ಕೋರಿತು. ಈ ಸಂದರ್ಭದಲ್ಲಿ, ನಮ್ಮ ಮೇಲೆ ದಾಳಿ ನಡೆದರೆ ನಾವು ಸುಮ್ಮನಿರುವುದಿಲ್ಲ ಎಂಬ ಸಂದೇಶವನ್ನು ಜಗತ್ತಿಗೆ ನೀಡಲು ಈ ಭಾರತೀಯ ನಿಯೋಗ ಬಂದಿದೆ ಎಂದು ತರೂರ್ ಹೇಳಿದರು.



ಹೆಚ್ಚುತ್ತಿರುವ ಭಯೋತ್ಪಾದನೆಯ ಬೆದರಿಕೆಯ ವಿರುದ್ಧ ಒಗ್ಗಟ್ಟು ಮತ್ತು ಬಲದಿಂದ ನಿಲ್ಲುವಂತೆ ಅಮೆರಿಕ ಕಾಂಗ್ರೆಸ್ ಸಂಸದ ಶಶಿ ತರೂರ್ ಜಾಗತಿಕ ಸಮುದಾಯಕ್ಕೆ ಕರೆ ನೀಡಿದರು. ನಮಗೆ ಪಾಕಿಸ್ತಾನದೊಂದಿಗಿನ ಯುದ್ಧದಲ್ಲಿ ಯಾವುದೇ ಆಸಕ್ತಿ ಇಲ್ಲ. ನಮ್ಮ ಆರ್ಥಿಕತೆಯನ್ನು ಬೆಳೆಸಲು ಮತ್ತು ನಮ್ಮ ಜನರನ್ನು 21 ನೇ ಶತಮಾನದ ಜಗತ್ತಿಗೆ ತರಲು ನಾವು ಏಕಾಂಗಿಯಾಗಿರಲು ಬಯಸುತ್ತೇವೆ.

ಅವರು ಭಾರತದ ನಿಯಂತ್ರಣದಲ್ಲಿರುವ ಪ್ರದೇಶವನ್ನು ಬಯಸುತ್ತಾರೆ ಮತ್ತು ಅವರು ಅದನ್ನು ಯಾವುದೇ ಬೆಲೆ ತೆತ್ತಾದರೂ ಪಡೆಯಲು ಬಯಸುತ್ತಾರೆ. ಅವರು ಅದನ್ನು ಸಾಂಪ್ರದಾಯಿಕ ವಿಧಾನಗಳ ಮೂಲಕ ಪಡೆಯಲು ಸಾಧ್ಯವಾಗದಿದ್ದರೆ, ಅವರು ಅದನ್ನು ಭಯೋತ್ಪಾದನೆಯ ಮೂಲಕ ಪಡೆಯಲು ಬಯಸುತ್ತಾರೆ ಮತ್ತು ಇದು ಸ್ವೀಕಾರಾರ್ಹವಲ್ಲ ಎಂದು ಕಾಂಗ್ರೆಸ್ ಸಂಸದ ತರೂರ್ ಹೇಳಿದರು.

ಶಶಿ ತರೂರ್ ನೇತೃತ್ವದ ನಿಯೋಗವು ದಕ್ಷಿಣ ಅಮೆರಿಕಾದ ದೇಶಗಳಾದ ಗಯಾನಾ, ಪನಾಮ, ಬ್ರೆಜಿಲ್ ಮತ್ತು ಕೊಲಂಬಿಯಾಕ್ಕೂ ಭೇಟಿ ನೀಡಲಿದೆ. ಭಯೋತ್ಪಾದನೆಯ ಪಿಡುಗಿನ ವಿರುದ್ಧ ಎಲ್ಲರೂ ಒಟ್ಟಾಗಿ ನಿಲ್ಲುವುದು ಎಷ್ಟು ಮುಖ್ಯ ಎಂಬುದನ್ನು ಜಗತ್ತಿಗೆ ವಿವರಿಸಲು ಬಯಸಿದ್ದೇವೆ. 9/11 ರ ನಂತರ ಅಮೆರಿಕ ತನ್ನ ಪುಟ 2

## ಬೆಂಗಳೂರಿನಲ್ಲಿ ಮತ್ತೆ ಟೋಯಿಂಗ್

# ವಾಹನ ಸವಾರರಿಗೆ ಎಚ್ಚರಿಕೆ ಕೊಟ್ಟ ಡಿಕೆಶಿ



**ಬೆಂಗಳೂರು:** ಹಲವು ವರ್ಷಗಳ ಬಳಿಕ ಬೆಂಗಳೂರಿನಲ್ಲಿ ಮತ್ತೆ ವಾಹನಗಳ ಟೋಯಿಂಗ್ ಆರಂಭವಾಗಲಿದೆ. ಈ ಹಿಂದೆ ಬಿಜೆಪಿ ಸರ್ಕಾರದ ಅವಧಿಯಲ್ಲಿ ಸ್ಥಗಿತಗೊಂಡಿದ್ದ ಟೋಯಿಂಗ್ ಮತ್ತೆ ಆರಂಭವಾಗಲಿದ್ದು, ಈ ಬಗ್ಗೆ ಉಪಮುಖ್ಯಮಂತ್ರಿ, ಬೆಂಗಳೂರು ಉಸ್ತುವಾರಿ ಸಚಿವ ಡಿಕೆ ಶಿವಕುಮಾರ್ ಅವರು ಟೋಯಿಂಗ್ ಆರಂಭಿಸುವುದಾಗಿ ಹೇಳಿದ್ದಾರೆ. ಹೀಗಾಗಿ ರಸ್ತೆ ಮೇಲೆ ವಾಹನ ನಿಲ್ಲಿಸುವವರಿಗೆ ಖಡಕ್ ಎಚ್ಚರಿಕೆ ನೀಡಿದ್ದಾರೆ. ಸುರಂಗ ರಸ್ತೆ ನಿರ್ಮಾಣ ಹಾಗೂ ಕಾವೇರಿ ಆರತಿ ಕಾರ್ಯಕ್ರಮದ ಪೂರ್ವಭಾವಿ ಸಭೆ ನಡೆಸಿದ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಡಿಕೆಶಿ, ರಸ್ತೆಗಳ ಮೇಲೆ ನಿಲ್ಲಿಸಿದ ವಾಹನಗಳನ್ನು ಟೋಯಿಂಗ್ ಮಾಡುತ್ತೇವೆ. 21 ದಿನಗಳಲ್ಲಿ ಆ ವಾಹನಗಳನ್ನು ಹರಾಜು ಹಾಕುತ್ತೇವೆ ಎಂದು ಸ್ಪಷ್ಟಪಡಿಸಿದರು. ಪುಟ 2

## ಕೇರಳಕ್ಕೆ ಮುಂಗಾರು ಪ್ರವೇಶ

# ಈ ಬಾರಿ ಬೇಗ ಮಳೆಗಾಲ ಶುರು

**ತಿರುವನಂತಪುರಂ:** ನೈಋತ್ಯ ಮಾನ್ಸೂನ್ ಕೇರಳವನ್ನು ತಲುಪಿದೆ. 2009ರಲ್ಲಿ ಮೇ 23ರಂದು ಮಾನ್ಸೂನ್ ಆಗಮನವಾಗಿತ್ತು. ಅದಾದ ಬಳಿಕ ಇದೇ ಮೊದಲ ಬಾರಿ ಅಂದರೆ 16 ವರ್ಷಗಳ ಬಳಿಕ ಮೇ ಕೊನೆಯ ವಾರದೊಳಗೆ ಮಾನ್ಸೂನ್ ಆರಂಭವಾಗಿದೆ. ಸಾಮಾನ್ಯವಾಗಿ, ನೈಋತ್ಯ ಮಾನ್ಸೂನ್ ಜೂನ್ 1ರ ಬಳಿಕ ಕೇರಳಕ್ಕೆ ಪ್ರವೇಶವಾಗಲಿದೆ. ಜುಲೈ 8ರ ವೇಳೆಗೆ ಇಡೀ ದೇಶವನ್ನು ಆವರಿಸುತ್ತದೆ. ಇದು ಸೆಪ್ಟೆಂಬರ್ 17ರ ಸುಮಾರಿಗೆ ವಾಯುವ್ಯ ಭಾರತದಿಂದ ಹಿಮ್ಮೆಟ್ಟಲು ಪ್ರಾರಂಭಿಸುತ್ತದೆ ಮತ್ತು ಅಕ್ಟೋಬರ್ 15ರ ವೇಳೆಗೆ ಸಂಪೂರ್ಣವಾಗಿ ಕಡಿಮೆಯಾಗುತ್ತದೆ.

ಕಳೆದ ವರ್ಷ ಮೇ 30ರಂದು ದಕ್ಷಿಣ ರಾಜ್ಯದ ಮೇಲೆ ಮಾನ್ಸೂನ್ ಪ್ರವೇಶಿಸಿತು. 2023ರಲ್ಲಿ ಜೂನ್ 8, 2022ರಲ್ಲಿ ಮೇ 29, 2021ರಲ್ಲಿ ಜೂನ್ 3, 2020ರಲ್ಲಿ ಜೂನ್ 1, 2019ರಲ್ಲಿ ಜೂನ್ 8 ಮತ್ತು 2018ರಲ್ಲಿ ಮೇ 29ಎಂದು



ಕೇರಳಕ್ಕೆ ಮಾನ್ಸೂನ್ ಆಗಮನವಾಗಿತ್ತು. ಹವಾಮಾನಶಾಸ್ತ್ರಜ್ಞರ ಪ್ರಕಾರ, ಮಳೆಗಾಲದ ಋತುವಿನಲ್ಲಿ ಮಳೆಯ ಪ್ರಾರಂಭದ ದಿನಾಂಕ ಮತ್ತು ದೇಶದಲ್ಲಿ ಒಟ್ಟು ಮಳೆಯ ನಡುವೆ ಯಾವುದೇ ನೇರ ಸಂಬಂಧವಿಲ್ಲ. ಕೇರಳದಲ್ಲಿ ಮುಂಗಾರು ಬೇಗ ಅಥವಾ ತಡವಾಗಿ ಆಗಮಿಸುತ್ತದೆ ಎಂದರೆ ಅದು ದೇಶದ ಇತರ ಭಾಗಗಳನ್ನು ಅದಕ್ಕೆ ಅನುಗುಣವಾಗಿ ಆವರಿಸುತ್ತದೆ ಎಂದರ್ಥವಲ್ಲ. ಪುಟ 2

## ಕರಾವಳಿ ಸೇರಿ 6 ಜಿಲ್ಲೆಗಳಿಗೆ ಮಳೆಯ ರೆಡ್ ಅಲರ್ಟ್

**ಬೆಂಗಳೂರು:** ಕರ್ನಾಟಕದಾದ್ಯಂತ ಮಳೆ ಚುರುಕುಗೊಳ್ಳಲಿದ್ದು, ಮೇ 25ರಿಂದ ಕರಾವಳಿ ಸೇರಿ 6 ಜಿಲ್ಲೆಗಳಲ್ಲಿ ಭಾರಿ ಮಳೆಯಾಗುವ ಮುನ್ಸೂಚನೆ ದೊರೆತಿದ್ದು, ರೆಡ್ ಅಲರ್ಟ್ ಘೋಷಿಸಲಾಗಿದೆ. ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಚಿಕ್ಕಮಗಳೂರು, ಕೊಡಗು, ಶಿವಮೊಗ್ಗ ಜಿಲ್ಲೆಗಳಿಗೆ ರೆಡ್ ಅಲರ್ಟ್ ಘೋಷಿಸಲಾಗಿದೆ.

ಬೆಳಗಾವಿ, ಧಾರವಾಡ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ , ಮೈಸೂರು, ಮಂಡ್ಯ, ಹಾಸನ, ಚಾಮರಾಜನಗರ, ಹಾವೇರಿ, ಗದಗ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಪುಟ 2

## ಕರ್ನಾಟಕದಲ್ಲಿ ಮತ್ತೆ ಕೊರೊನಾ ಅಟ್ಟಹಾಸ: ಓರ್ವ ಬಲಿ

# 38ಕ್ಕೆ ಏರಿಕೆ

**ಬೆಂಗಳೂರು:** ರಾಜ್ಯಕ್ಕೆ ಕೊರೊನಾ ವೈರಸ್ ಮತ್ತೆ ಒಕ್ಕರಿಸಿದೆ. ರಾಜ್ಯದಲ್ಲಿ ಶನಿವಾರ ಐವರಿಗೆ ಕೊರೊನಾ ಸೋಂಕು ತಗುಲಿದೆ. ಬೆಂಗಳೂರಿನಲ್ಲಿ 85 ವರ್ಷದ ವೃದ್ಧ ಕೊರೊನಾ ಸೋಂಕಿಗೆ ಮೃತಪಟ್ಟಿದ್ದಾರೆ. ರಾಜ್ಯದಲ್ಲಿ ಒಟ್ಟು 38 ಸಕ್ರಿಯ ಕೋವಿಡ್ ಪ್ರಕರಣಗಳು ಪತ್ತೆಯಾಗಿದ್ದು, ಅವುಗಳಲ್ಲಿ 32 ಬೆಂಗಳೂರಿನಲ್ಲಿ ದೃಢಪಟ್ಟಿವೆ. ಶನಿವಾರ (ಮೇ.24) ವಿಜಯನಗರ ಜಿಲ್ಲೆಯಲ್ಲಿ ಒಬ್ಬರು, ಮೈಸೂರಿನಲ್ಲಿ ಇಬ್ಬರಿಗೆ ಮತ್ತು ಬೆಂಗಳೂರಿನಲ್ಲಿ ಇಬ್ಬರಿಗೆ ಕೊರೊನಾ ಸೋಂಕು ತಗುಲಿದೆ ಎಂದು ಆರೋಗ್ಯ ಇಲಾಖೆ ತಿಳಿಸಿದೆ.



ವಿಜಯನಗರ ಜಿಲ್ಲೆಯಲ್ಲಿ 54 ವರ್ಷದ ಮಹಿಳೆಗೆ ಕೊರೊನಾ ಸೋಂಕು ತಗುಲಿದೆ. ಸೋಂಕಿತ ಮಹಿಳೆ ವಿಪರೀತ ನೆಗಡಿ, ಕೆಮ್ಮಿನಿಂದ ಬಳಲುತ್ತಿದ್ದರು. ಪುಟ 2

# ಕೊರೊನಾ ಹೆಚ್ಚಳ: ಇನ್ಮುಂದೆ ಕೋವಿಡ್ ಟೆಸ್ಟ್ ಕಡ್ಡಾಯ

**ಬೆಂಗಳೂರು** ಕರ್ನಾಟಕದಲ್ಲಿ ಕೊರೊನಾ ವೈರಸ್ ಸೋಂಕು ಪ್ರಕರಣಗಳು ಹೆಚ್ಚುತ್ತಿರುವ ಕಾರಣ ಉಸಿರಾಟ ಸಮಸ್ಯೆ ಮತ್ತು ಹೃದಯಸಂಬಂಧಿ ಕಾಯಿಲೆ ಇರುವವರಿಗೆ ಕಡ್ಡಾಯವಾಗಿ ಕೋವಿಡ್ ಟೆಸ್ಟ್ ಮಾಡುವಂತೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಈ ಕುರಿತು ಮಾಧ್ಯಮ ಪ್ರಕಟಣೆ ಹೊರಡಿಸಿರುವ ಸಚಿವ ದಿನೇಶ್ ಗುಂಡೂರಾವ್, ಒಂದು ತಿಂಗಳಿಗಾಗುವಷ್ಟು ಟೆಸ್ಟ್ ಕಿಟ್ ತೆಗೆದಿಡುವಂತೆ ಸೂಚನೆ ಎಲ್ಲ ಆಸ್ಪತ್ರೆಗಳಿಗೆ ಸೂಚನೆ ನೀಡಿದ್ದಾರೆ. ರಾಜ್ಯದಲ್ಲಿ ಒಟ್ಟು 35 ಸಕ್ರಿಯ ಕೋವಿಡ್ ಪ್ರಕರಣಗಳು ಪತ್ತೆಯಾಗಿದ್ದು, ಅವುಗಳಲ್ಲಿ 32 ಬೆಂಗಳೂರಿನಲ್ಲಿ ದೃಢಪಟ್ಟಿವೆ.



ಉಸಿರಾಟ ಹಾಗೂ ಹೃದಯಸಂಬಂಧಿ ಕಾಯಿಲೆಯಿಂದ ದಾಖಲಾಗಿರುವ ರೋಗಿಗಳಿಂದ ಆಸ್ಪತ್ರೆ ಸಿಬ್ಬಂದಿ ಸ್ಯಾಂಪಲ್ಸ್ ಕಲೆಕ್ಟ್ ಮಾಡಿ ಕಡ್ಡಾಯವಾಗಿ ಕೋವಿಡ್ ಟೆಸ್ಟ್ ಮಾಡಬೇಕು. ಜನಸಂದಣಿಯಲ್ಲಿ ಮಾಸ್ಕ್ ಧರಿಸಿ. ಯಾರೂ ಕೂಡ ಭಯ ಪಡುವ ಅಗತ್ಯವಿಲ್ಲ. ಕೋವಿಡ್ ಬಂದಿದೆ ಎಂದು ಆತಂಕ ಪಡುವ ಅಗತ್ಯವಿಲ್ಲ. ಆರೋಗ್ಯ ಇಲಾಖೆಯ ಮಾರ್ಗಸೂಚಿಯನ್ನು ಪಾಲಿಸಿ, ಮುಂಜಾಗ್ರತೆ ವಹಿಸಿದರೆ ಸಾಕು ಎಂದು ಸಲಹೆ ನೀಡಿದ್ದಾರೆ.

# ಅಡ್ರೆಸ್ ತಪ್ಪಾಗಿದ್ದಕ್ಕೆ ಗಲಾಟೆ: ಗ್ರಾಹಕನಿಗೆ ಹಿಗ್ಗಾಮುಗ್ಗಾ ಥಳಿಸಿದ ಡೆಲಿವರಿ ಬಾಯ್!



**ಬೆಂಗಳೂರು:** ಅಡ್ರೆಸ್‌ನಲ್ಲಿ ಸಿಂಗಲ್ ಡಿಜಿಟ್ ತಪ್ಪಾಗಿದ್ದಕ್ಕೆ ಗ್ರಾಹಕನ ಮೇಲೆ ಡೆಲಿವರಿ ಬಾಯ್ ಹಲ್ಲೆ ನಡೆಸಿರುವ ಘಟನೆ ಬೆಂಗಳೂರಿನ ಬಸವೇಶ್ವರ ನಗರದಲ್ಲಿ ನಡೆದಿದೆ. ಹಲ್ಲೆಗೊಳಗಾದ ಗ್ರಾಹಕ ಶಶಾಂಕ್ ಹಾಗೂ ಡೆಲಿವರಿ ಬಾಯ್‌ನ್ನು ವಿಷ್ಣುವರ್ಧನ್ ಎಂದು ಗುರುತಿಸಲಾಗಿದೆ. ಮೇ 21ರಂದು ಆ್ಯಪ್‌ವೊಂದರಲ್ಲಿ ಶಶಾಂಕ್ ಪತ್ನಿ ಆರ್ಡರ್ ಮಾಡಿದ್ದರು. ಡೆಲಿವರಿ ಬಾಯ್ ಬಂದಾಗ ಶಶಾಂಕ್ ನಾದಿನಿ ಸಾಮಗ್ರಿ ತೆಗೆದುಕೊಳ್ಳಲು ಹೋದಾಗ ಅಡ್ರೆಸ್ ವಿಚಾರವಾಗಿ ಬಾಯಿಗೆ ಬಂದಹಾಗೇ ಮಾತಾಡುತ್ತಿದ್ದ. ಇದನ್ನು ಕೇಳಿಸಿಕೊಂಡು ಶಶಾಂಕ್ ಹೊರಗಡೆ ಹೋಗಿ ಆತನೊಂದಿಗೆ ಸ್ವಲ್ಪ ಜೋರಾಗಿ ಮಾತನಾಡಿದ್ದರು. ಆಗ ಒಮ್ಮೆಲೆ ಡೆಲಿವರಿ ಬಾಯ್ ಹಲ್ಲೆ ನಡೆಸಿದ್ದು, ಕಣ್ಣಿಗೆ ಗಾಯವಾಗಿದೆ. ಹಲ್ಲೆ ನಡೆಸಿದ ದೃಶ್ಯಗಳು ಅದೇ ಮನೆಯ ಸಿಸಿಟಿವಿಯಲ್ಲಿ ಸೆರೆಯಾಗಿದೆ. ಸದ್ಯ ಈ ಘಟನೆ ಕುರಿತು ಶಶಾಂಕ್ ಬಸವೇಶ್ವರನಗರ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದು, ಎಫ್‌ಐಆರ್ ದಾಖಲಾಗಿದೆ.

ಈ ಕುರಿತು ಶಶಾಂಕ್ ಮಾತನಾಡಿ, ಹಲ್ಲೆಯಿಂದಾಗಿ ನನ್ನ ಕಣ್ಣಿನ ಕೆಳಗಿನ ಮೂಳೆ ಕಟ್ ಆಗಿದೆ. ಹೀಗಾಗಿ ಡಾಕ್ಟರ್ ಇನ್ನೊಮ್ಮೆ ಚೆಕ್ ಮಾಡುತ್ತೇನೆ ಎಂದಿದ್ದು, ಒಂದು ವೇಳೆ ಸರಿಹೋಗದಿದ್ದರೆ ಆಪರೇಷನ್ ಮಾಡಬೇಕು ಎಂದು ಹೇಳಿದ್ದಾರೆ. ಸಂಬಂಧಪಟ್ಟ ಕಂಪನಿಯವರು, ಪೊಲೀಸರು ನನಗೆ ನ್ಯಾಯಕೊಡಿಸಬೇಕು ಎಂದು ಕೇಳಿಕೊಂಡಿದ್ದಾರೆ.

## ಪ್ರಿಯಾಂಕ್ ಖರ್ಗೆ ವಿರುದ್ಧ ಬಿಜೆಪಿ ಕಲಬುರಗಿ ದಂಡಯಾತ್ರೆ

# ಕೇಸರಿ ಪಡೆ ಏಟಿಗೆ ಸಚಿವ ತಿರುಗೇಟು



**ಬೆಂಗಳೂರು:** ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಆಡಿದ ಅವಹೇಳನಕಾರಿ ಮಾತು ತೀವ್ರ ವಿರೋಧಕ್ಕೆ ಗುರಿಯಾಗಿತ್ತು. ಕಾಂಗ್ರೆಸ್ ಕಾರ್ಯಕರ್ತರು ಮತ್ತು ಸಚಿವ ಪ್ರಿಯಾಂಕ್ ಖರ್ಗೆ ಬೆಂಬಲಿಗರು ಛಲವಾದಿ ನಾರಾಯಣಸ್ವಾಮಿ ಅವರಿಗೆ ಘೆರಾವ್ ಹಾಕಿದ್ದರು. ಛಲವಾದಿ ನಾರಾಯಣಸ್ವಾಮಿ ಇದ್ದ ಚಿತ್ತಾಪುರ ಪ್ರವಾಸಿ ಮಂದಿರದ ಎದುರು ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದ್ದರು. ಅಲ್ಲದೇ, ತಿರಂಗಾಯಾತ್ರೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಬಿಡದಂತೆ ಘೆರಾವ್ ಹಾಕಿದ್ದರು.

ಪ್ರವಾಸಿ ಮಂದಿರದ ಎದುರು ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದ್ದು ಮಾತ್ರವಲ್ಲದೆ, ಛಲವಾದಿ ನಾರಾಯಣಸ್ವಾಮಿ ಅವರ ಕಾರಿನ ಮೇಲೆ ಬಣ್ಣ ಎರಚಿ, ಅವರ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದ್ದರು.

**ಸಚಿವ ಸ್ಥಾನದಿಂದ ವಜಾ ಮಾಡುವಂತೆ ಮನವಿ:** ಸಚಿವ ಪ್ರಿಯಾಂಕ್ ಖರ್ಗೆ ಮತ್ತು ಕಾಂಗ್ರೆಸ್ ಕಾರ್ಯಕರ್ತರ ಈ ವರ್ತನೆಯನ್ನು ರಾಜ್ಯ ಬಿಜೆಪಿ ನಾಯಕರು ವಿರೋಧ ವ್ಯಕ್ತಪಡಿಸಿದ್ದಾರೆ. ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ವಾಗ್ದಾಳಿ ಮಾಡಿದ್ದಾರೆ. ಇನ್ನು ರಾಜ್ಯ ಬಿಜೆಪಿ ನಾಯಕರು ರಾಜ್ಯಪಾಲ ಥಾವರ್ ಚೆಂದ್ ಗೆಹ್ಲೋಟ್ ಅವರನ್ನು ಭೇಟಿ ಮಾಡಿ, ತಕ್ಷಣ ಘಟನೆ ಸಂಬಂಧ ರಾಜ್ಯಪಾಲರು ಮಧ್ಯಪ್ರವೇಶ ಮಾಡಬೇಕು. ಅಲ್ಲದೇ ಸಚಿವ ಸ್ಥಾನದಿಂದ ಪ್ರಿಯಾಂಕ್ ಖರ್ಗೆ ಅವರನ್ನು ವಜಾ ಮಾಡಬೇಕು ಎಂದು ಮನವಿ ಮಾಡಿದ್ದರು.

**ಕಲಬುರಗಿ ಚಲೋ ಕರೆ ಕೊಟ್ಟ ಬಿಜೆಪಿ:** ಛಲವಾದಿ ನಾರಾಯಣಸ್ವಾಮಿ ಅವರಿಗೆ ಘೆರಾವ್ ಹಾಕಿದ್ದನ್ನು ಖಂಡಿಸಿ ರಾಜ್ಯ ಬಿಜೆಪಿ ನಾಯಕರು ಶನಿವಾರ ಕಲಬುರಗಿ ಚಲೋ ಕರೆ ಕೊಟ್ಟಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಪ್ರತಿಪಕ್ಷ ನಾಯಕ ಆರ್.ಅಶೋಕ್, ವಿಧಾನ ಪರಿಷತ್ ವಿರೋಧ ಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಸಂಸದ ಗೋವಿಂದ ಕಾರಜೋಳ ಕಲಬುರಗಿಗೆ ತೆರಳಿ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ವಾಗ್ದಾಳಿ ಮಾಡಿದ್ದಾರೆ.

**ಬೆಂಗಳೂರಿನಲ್ಲಿ ಬಿಜೆಪಿ ವಿರುದ್ಧ ಪ್ರಿಯಾಂಕ್ ವಾಗ್ದಾಳಿ:** ಈ ಹಿಂದೆ ಕಲಬುರಗಿಗೆ ಬಿಜೆಪಿಯ ಎಲ್ಲ ನಾಯಕರು ಅಕ್ಕಿ ಕಳ್ಳ, ಮಕ್ಕಳ ಹಾಲಿನ ಪೌಡರ್ ಕಳ್ಳನ ಪರ ಬಂದಿದ್ದರು. ಆತನ ಮೇಲೆ ದೌರ್ಜನ್ಯ ಮಾಡಿದ್ದಾರೆ ಅಂತಾ ಬಿಜೆಪಿಗರು ಬಂದಿದ್ದರು. ಅವರೇ ಕಾರನ್ನು ಎಲ್ಲೋ ಬಿಟ್ಟು ಅಪಘಾತ ಆಗಿದೆ ಅಂತ ಬಂದಿದ್ದರು. ಬಿಜೆಪಿಯವರು ಅಕ್ಕಿ ಕಳ್ಳನಿಗೆ ಟಿಕೆಟ್ ಬೇರೆ ಕೊಡುತ್ತಾರೆ ಎಂದು ಬಿಜೆಪಿ ನಾಯಕ ಮಣಿಕಂಠ ರಾಠೋಡ್ ವಿರುದ್ಧ ಸಚಿವ ಪ್ರಿಯಾಂಕ್ ಖರ್ಗೆ ವಾಗ್ದಾಳಿ ಮಾಡಿದರು.

ಎಂಎಲ್‌ಸಿ ಸಿ.ಟಿ.ರವಿ ಪದೇಪದೆ ರಜಾಕರು, ನಿಜಾಮರು ಅಂತಾ ಹೇಳುತ್ತಾರೆ. ನಿಮ್ಮ ಆರ್‌ಎಸ್‌ಎಸ್ ನಾಯಕರನ್ನು ಪಾಕಿಸ್ತಾನಕ್ಕೆ ಕಳುಹಿಸಿ. ಅಲ್ಲಿ ಸೆಟಲ್ ಆಗಿ ಅಖಂಡ ಭಾರತದ ಕನಸು ನನಸು ಮಾಡಿ. ರಜಾಕರು, ನಿಜಾಮರು ಅಂತ ಇಲ್ಲಿ ಕುಳಿತು ಮಾತನಾಡಬೇಡಿ. ವಿಧಾನಪರಿಷತ್‌ನಲ್ಲಿ ಲಕ್ಷ್ಮೀ ಹೆಬ್ಬಾಳ್ಕರ್ ಪ್ರಕರಣ ಆಯಿತು. ಈ ಕೇಸ್‌ನಲ್ಲಿ ಸಿ.ಟಿ.ರವಿ ವಾಯ್ಸ್ ಸ್ಯಾಂಪಲ್ ಏಕೆ ಕೊಡಲಿಲ್ಲ. ಸುಪ್ರೀಂಕೋರ್ಟ್‌ಗೆ ಹೋಗಿ ತಡೆಯಾಜ್ಞೆ ತರಬೇಕಾ ಎಂದು ಪ್ರಶ್ನಿಸಿದರು.

ಛಲವಾದಿ ನಾರಾಯಣಸ್ವಾಮಿಗೆ ಎರಡು ನಾಲಿಗೆ ಇದೆ. ಕಲಬುರಗಿಯಲ್ಲಿ ಒಂದು ನಾಲಿಗೆ ಇದೆ. ಬೆಂಗಳೂರಿನಲ್ಲಿ ಮತ್ತೊಂದು ನಾಲಿಗೆ ಇದೆ. ಅಲ್ಲೊಂದು ಇಲ್ಲೊಂದು ರೀತಿ ಮಾತನಾಡ್ತಾರೆ. ನಾನು ಪ್ರಿಯಾಂಕ್ ಖರ್ಗೆ ಬಗ್ಗೆ ಏನೂ ಹೇಳಿಲ್ಲ ಅಂತಾರೆ. ಕಲಬುರಗಿಯಲ್ಲಿ ನನ್ನನ್ನು ಕೂಡಿ ಹಾಕಲಿಲ್ಲ ಅಂತಾರೆ. ಬೆಂಗಳೂರಿನಲ್ಲಿ ಕೂಡಿ ಹಾಕಿದರು ಅಂತಾರೆ ಛಲವಾದಿ ನಾರಾಯಣಸ್ವಾಮಿಗೆ ಎರಡು ನಾಲಿಗೆ ಇದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

# ಅಲೋಕ್ ಕುಮಾರ್ ವಿರುದ್ಧ ತನಿಖೆ ಪೂರ್ಣಗೊಂಡಿದ್ದರೂ ಬಡ್ತಿ ನೀಡದೇ ಮತ್ತೆ ತನಿಖೆಗೆ ಆದೇಶಿಸಿದ ಸರ್ಕಾರ

**ಬೆಂಗಳೂರು:** ಎಡಿಜಿಪಿ ಅಲೋಕ್ ಕುಮಾರ್ ವಿರುದ್ಧ ಸರ್ಕಾರ ಈಗ ಇಲಾಖಾ ತನಿಖೆಗೆ ಆದೇಶ ನೀಡಿದೆ. ಆದರೆ ಈಗಾಗಲೇ ಇಲಾಖಾ ತನಿಖೆ ಪೂರ್ಣಗೊಂಡಿರುವ ಸ್ಫೋಟಕ ವಿಚಾರ ಬಯಲಾಗಿದೆ.

ಹೌದು. ರಾಜ್ಯ ಪೊಲೀಸ್ ಇಲಾಖೆಯ ತರಬೇತಿ ವಿಭಾಗದ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ ಅಲೋಕ್ ಕುಮಾರ್ ಅವರಿಗೆ ಮುಂಬಡ್ತಿ ನೀಡದ ಸರ್ಕಾರ 6 ವರ್ಷದ ಹಿಂದಿನ ಪ್ರಕರಣವನ್ನು ಕೆದಕಿ ಇಲಾಖಾ ತನಿಖೆಗೆ ಆದೇಶಿಸಿದೆ.



ಸರ್ಕಾರ ಈಗ ಇಲಾಖಾ ತನಿಖೆಗೆ ಆದೇಶಿಸಿದ್ದರೂ ಈ ತನಿಖೆ ಈಗಾಗಲೇ ಪೂರ್ಣಗೊಂಡಿರುವ ಬಗ್ಗೆ ಅಲೋಕ್ ಕುಮಾರ್ ಅವರು ಆರ್‌ಟಿಐ ಅಡಿ ಪ್ರಶ್ನಿಸಿ ಉತ್ತರ ಪಡೆದಿದ್ದಾರೆ. ವಿಧಾನಸೌಧ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಸಾರ್ವಜನಿಕ ಮಾಹಿತಿ ಅಧಿಕಾರಿ ಹಾಗೂ ಸರ್ಕಾರದ ಅಧೀನ ಕಾರ್ಯದರ್ಶಿ ಇಲಾಖಾ ತನಿಖೆ ಪೂರ್ಣಗೊಂಡಿದೆ ಎಂದು ಮಾಹಿತಿ ನೀಡಿದ್ದಾರೆ. ಈ ಎಲ್ಲಾ ಮಾಹಿತಿಗಳು ಲಭ್ಯವಿದ್ದರೂ ಮುಂಬಡ್ತಿ ನೀಡದ ಸರ್ಕಾರದ ನಡೆಯಿಂದ ಬೇಸತ್ತಿರುವ ಅಲೋಕ್ ಕುಮಾರ್ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಲೀಗಲ್ ನೋಟಿಸ್ ನೀಡಿದ್ದಾರೆ.

**ಆರ್‌ಟಿಐ ಉತ್ತರದಲ್ಲಿ ಏನಿದೆ?:** ಪ್ರಕರಣದ ತನಿಖೆ ನಡೆಸಿದ ಸಿಬಿಐ ಬಿ ರಿಪೋರ್ಟ್ ಸಲ್ಲಿಕೆ ಮಾಡಿತ್ತು. ಈ ವೇಳೆ ಭಾಸ್ಕರ್ ರಾವ್ (ನಿವೃತ್ತ) ಮತ್ತು ಅಲೋಕ್ ಕುಮಾರ್ ವಿರುದ್ಧ ಇಲಾಖಾ ವಿಚಾರಣೆಗೆ ಸಿಬಿಐ ಶಿಫಾರಸು ಮಾಡಿತ್ತು. ಈ ಇಬ್ಬರು ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆ ಪ್ರಾರಂಭಿಸದೇ ಪ್ರಾಥಮಿಕ ಹಂತದಲ್ಲಿಯೇ ಮುಖ್ಯಮಂತ್ರಿಯವರ ಅನುಮೋದನೆಯೊಂದಿಗೆ ಮುಕ್ತಾಯಗೊಳಿಸಲಾಗಿದೆ. ಪ್ರಸ್ತುತ ಇಬ್ಬರು ಅಧಿಕಾರಿಗಳ ಇಲಾಖಾ ವಿಚಾರಣೆಗೆ ಸಂಬಂಧಿಸಿದ ಕಡತಗಳು ಮುಖ್ಯಮಂತ್ರಿಯವರ ಕಚೇರಿಯಲ್ಲಿರುತ್ತದೆ.

ಇಲಾಖಾ ವಿಚಾರಣೆ ಪ್ರಾಥಮಿಕ ಹಂತದಲ್ಲಿಯೇ ಮುಕ್ತಾಯವಾಗಿದ್ದರೂ ಈಗ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಮುಂಬಡ್ತಿ ನೀಡದೇ ಇರಲು ಸ್ಪಷ್ಟವಾದ ಕಾರಣ ತಿಳಿದು ಬರುತ್ತಿಲ್ಲ.

ಈ ಹಿಂದೆ ಕೇಳಿ ಬಂದಿದ್ದ ಫೋನ್ ಟ್ಯಾಪಿಂಗ್ ಹಾಗೂ ಅಕ್ರಮವಾಗಿ ಮೊಬೈಲ್ ಕರೆ ವಿವರ(ಸಿಡಿಆರ್) ಪಡೆದ ಪ್ರಕರಣದಲ್ಲಿ ಅಲೋಕ್ ಕುಮಾರ್ ವಿರುದ್ಧ ಸರ್ಕಾರ ಇಲಾಖಾ ವಿಚಾರಣೆಗೆ ಆದೇಶ ನೀಡಿದೆ. ಒಂದು ಡಿಜಿಪಿ ಸ್ಥಾನ ತೆರವಾದ ಹಿನ್ನೆಲೆ 1994ನೇ ಬ್ಯಾಚ್‌ನ ಐಪಿಎಸ್ ಅಧಿಕಾರಿಯಾಗಿರುವ ಅಲೋಕ್ ಕುಮಾರ್ ಅವರಿಗೆ ಈ ತಿಂಗಳಲ್ಲಿ ಡಿಜಿಪಿ ಆಗಿ ಮುಂಬಡ್ತಿ ಸಿಗಬೇಕಿತ್ತು. ಆದರೆ ಈಗ ಇಲಾಖಾ ವಿಚಾರಣೆಗೆ ಆದೇಶ ನೀಡಿರುವುದರಿಂದ ಮುಂಬಡ್ತಿ ನೀಡಲು ಸಾಧ್ಯವಿಲ್ಲ. ಇದರಿಂದಾಗಿ ಅದೇ ಬ್ಯಾಚ್‌ನ ಹಿರಿಯ ಅಧಿಕಾರಿಯಾದ ನಗರ ಪೊಲೀಸ್ ಆಯುಕ್ತ ಬಿ.ದಯಾನಂದ್ ಅವರಿಗೆ ಡಿಜಿಪಿಯಾಗಿ ಮುಂಬಡ್ತಿ ಸಿಗುವ ಸಾಧ್ಯತೆಯಿದೆ.

**ಏನಿದು ಪ್ರಕರಣ?:** ಕಾಂಗ್ರೆಸ್– ಜೆಡಿಎಸ್ ಸಮ್ಮಿಶ್ರ ಸರ್ಕಾರ ಅಧಿಕಾರದ ಅವಧಿಯಲ್ಲಿ ಅಲೋಕ್ ಕುಮಾರ್ ಸಿಸಿಬಿ ಮುಖ್ಯಸ್ಥರಾಗಿದ್ದರು. 2019 ರಲ್ಲಿ ಬಿಜೆಪಿ ಆಪರೇಷನ್ ಕಮಲ ನಡೆಸಲು ಕಾಂಗ್ರೆಸ್–ಜೆಡಿಎಸ್ ಶಾಸಕರನ್ನು ಸೆಳೆಯಲು ಪ್ರಯತ್ನಿಸುತ್ತಿದೆ ಎಂಬ ಸುದ್ದಿಗಳು ಹರಿದಾಡಲು ಆರಂಭವಾಗಿತ್ತು. ಈ ವೇಳೆ ಕುಮಾರಸ್ವಾಮಿ ಸರ್ಕಾರ ಕೆಲ ಅಧಿಕಾರಿಗಳು, ಸ್ವಾಮೀಜಿಗಳು ಮತ್ತು ರಾಜಕೀಯ ಮುಖಂಡರ ಫೋನ್ ಟ್ಯಾಪಿಂಗ್ ಮತ್ತು ಸಿಡಿಆರ್ ಸಂಗ್ರಹಿಸಿದೆ ಎಂಬ ಗಂಭೀರ ಆರೋಪ ಕೇಳಿ ಬಂದಿತ್ತು. ಇದು ಭಾರೀ ಚರ್ಚೆಗೆ ಗ್ರಾಸವಾಗಿತ್ತು.

ಚರ್ಚೆ ಜೋರಾಗುತ್ತಿದ್ದ ಸಮಯದಲ್ಲೇ ಕುಮಾರಸ್ವಾಮಿ ಅವರು ಅಲೋಕ್ ಕುಮಾರ್ ಅವರನ್ನು ಎಡಿಜಿಪಿಯಾಗಿ ಮುಂಬಡ್ತಿ ನೀಡಿ, ನಗರ ಪೊಲೀಸ್ ಆಯುಕ್ತರನ್ನಾಗಿ ನೇಮಕ ಮಾಡಿದ್ದರು. ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಫೋನ್ ಟ್ಯಾಪಿಂಗ್ ಪ್ರಕರಣವನ್ನು ಸಿಬಿಐಗೆ ವಹಿಸಿತ್ತು. ಸಿಬಿಐ ಅಲೋಕ್ ಕುಮಾರ್ ಮನೆ ಮೇಲೆ ದಾಳಿ ಸಹ ನಡೆಸಿತ್ತು. ಈ ವೇಳೆ ಭಾಸ್ಕರ್‌ರಾವ್ ಯಾರೊಂದಿಗೆ ಸಂಪರ್ಕದಲ್ಲಿದ್ದಾರೆ ಎಂದು ಫೋನ್ ಟ್ಯಾಪಿಂಗ್ ಮಾಡಿದ್ದ ಆಡಿಯೋ ಒಂದು ವೈರಲ್ ಮಾಡಲಾಗಿತ್ತು. ಪ್ರಕರಣದ ತನಿಖೆ ನಡೆಸಿದ ಬಳಿಕ ಸಿಬಿಐ ನ್ಯಾಯಾಲಯಕ್ಕೆ ಬಿ ರಿಪೋರ್ಟ್ ಸಲ್ಲಿಸಿತ್ತು.

# ಬೆಂಗಳೂರಲ್ಲಿ 9 ತಿಂಗಳ ಮಗು ಸೇರಿ 3 ಮಕ್ಕಳಿಗೆ ಕೊರೊನಾ ಪಾಸಿಟಿವ್

**ಬೆಂಗಳೂರು:** ರಾಜ್ಯದಲ್ಲಿ ಮತ್ತೆ ಕೋವಿಡ್ ತೀವ್ರತೆ ಹೆಚ್ಚಾಗುತ್ತಿದೆ. ಬೆಂಗಳೂರಿನಲ್ಲಿ 9 ತಿಂಗಳ ಮಗು ಸೇರಿ ಮೂರು ಮಕ್ಕಳಿಗೆ ಕೊರೊನಾ ಪಾಸಿಟಿವ್ ದೃಢಪಟ್ಟಿದೆ.

ಎಲ್ಲಾ ಮಕ್ಕಳು ಆರೋಗ್ಯವಾಗಿದ್ದಾರೆ. ಯಾವುದೇ ಆರೋಗ್ಯ ಸಮಸ್ಯೆ ಇಲ್ಲ. ಸಕ್ರಿಯ ಪ್ರಕರಣಗಳ ಸಂಖ್ಯೆ ಏರಿಕೆಯಾಗುತ್ತಿದ್ದು, ನಾಳೆಯಿಂದಲೇ ಕೋವಿಡ್ ಪರೀಕ್ಷೆ ಆರಂಭಿಸುವ ಸಾಧ್ಯತೆ ಇದೆ.




ರಾಜ್ಯದಲ್ಲಿ ಒಟ್ಟು 35 ಕೊರೊನಾ ಪ್ರಕರಣಗಳು. ಆ ಪೈಕಿ ಬೆಂಗಳೂರಿನಲ್ಲೇ 33 ಕೇಸ್‌ಗಳು ವರದಿಯಾಗಿವೆ. ಗರ್ಭಿಣಿಯರು, ಮಕ್ಕಳು, ಹಿರಿಯರು ಎಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ.

ದೇಶಾದ್ಯಂತ 257 ಸಕ್ರಿಯ ಕೊರೊನಾ ಪ್ರಕರಣಗಳು ವರದಿಯಾಗಿವೆ. ಕೇರಳ, ತಮಿಳುನಾಡು ಮತ್ತು ಮಹಾರಾಷ್ಟ್ರದಲ್ಲಿ ಹೆಚ್ಚು ಪ್ರಕರಣಗಳು ವರದಿಯಾಗಿದ್ದು, ಮೂರು ರಾಜ್ಯಗಳು ಒಟ್ಟಾಗಿ 85% ಕ್ಕಿಂತ ಹೆಚ್ಚು ಸಕ್ರಿಯ ಪ್ರಕರಣಗಳನ್ನು ಹೊಂದಿವೆ.

ಕೇರಳವು 95 ಸಕ್ರಿಯ ಪ್ರಕರಣಗಳೊಂದಿಗೆ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದೆ. ತಮಿಳುನಾಡಿನಲ್ಲಿ 66 ಮತ್ತು ಮಹಾರಾಷ್ಟ್ರ 56 ಸಕ್ರಿಯ ಪ್ರಕರಣಗಳು ಇವೆ. ದೆಹಲಿ (23), ಪುದುಚೇರಿ (10), ಕರ್ನಾಟಕ (13), ಗುಜರಾತ್ (7), ರಾಜಸ್ಥಾನ (2), ಹರಿಯಾಣ (1), ಸಿಕ್ಕಿಂ (1), ಮತ್ತು ಪಶ್ಚಿಮ ಬಂಗಾಳ (1) ಸೇರಿವೆ.

ಮೇ 12 ರಿಂದ ಭಾರತದಲ್ಲಿ 164 ಹೊಸ ಪ್ರಕರಣಗಳು ದಾಖಲಾಗಿವೆ. ಹೆಚ್ಚಿನ ಪ್ರಕರಣಗಳು ಸೌಮ್ಯವಾಗಿದ್ದು, ಸೋಂಕಿತರು ಆಸ್ಪತ್ರೆಗೆ ದಾಖಲಾಗಿಲ್ಲ. ಸಿಂಗಾಪುರ ಮತ್ತು ಹಾಂಕಾಂಗ್‌ನಲ್ಲಿ ಕೊರೊನಾದ ರೂಪಾಂತರಿ ಒಮಿಕ್ರಾನ್ ಜೆಎನ್1 ಉಪ ತಳಿಗಳಾದ ಎನ್‌ಬಿ.1.8 ಮತ್ತು ಎಲ್‌ಎಫ್.7 ಹಾವಳಿ ಹೆಚ್ಚಾಗಿದೆ.

# ಸರ್ಕಾರದ ಇ ಸ್ವತ್ತು ಸಾಫ್ಟ್‌ವೇರ್ ಹ್ಯಾಕ್ ಮಾಡಿ ದಾಖಲೆಗಳ ತಿದ್ದುಪಡಿ: ಮೂವರ ಬಂಧನ

**ರಾಮನಗರ:** ಸರ್ಕಾರದ ಇ ಸ್ವತ್ತು ಸಾಫ್ಟ್‌ವೇರ್‌ಗೆ ಕನ್ನ ಹಾಕಿ ದಾಖಲೆಗಳ ತಿದ್ದುಪಡಿ ಮಾಡುತ್ತಿದ್ದ ಮೂವರು ಖದೀಮರನ್ನು ಬಂಧಿಸುವಲ್ಲಿ ರಾಮನಗರದ ಸೆನ್ ಪೊಲೀಸರು ಯಶಸ್ವಿಯಾಗಿದ್ದಾರೆ.



ಲೋಪದೋಷವುಳ್ಳ ಖಾತೆಗಳ ದಾಖಲಾತಿಗಳನ್ನು ಅಕ್ರಮ ತಿದ್ದುಪಡಿ ಮಾಡುತ್ತಿದ್ದ ಆರೋಪಿಗಳು ಸುಮಾರು 500ಕ್ಕೂ ಹೆಚ್ಚು ಇ ಸ್ವತ್ತು ದಾಖಲೆಗಳ ತಿದ್ದುಪಡಿ ಮಾಡಿದ್ದಾರೆ. ಶರತ್ (30), ನದೀಮ್ (38), ದೀಪಕ್ (27) ಬಂಧಿತ ಆರೋಪಿಗಳು. ಮಾಗಡಿ ತಾಲೂಕಿನ ನಾರಸಂದ್ರ, ಗ್ರಾ.ಪಂ ಮಾಜಿ ನೌಕರ ಶರತ್ ಪ್ರಕರಣದ ಮಾಸ್ಟರ್ ಮೈಂಡ್.

ಇ ಸ್ವತ್ತು ಸಾಫ್ಟ್‌ವೇರ್‌ನ ಲೋಪದೋಷ ಅರಿತಿದ್ದ ಶರತ್ ನಕಲಿ ಪಾಸ್‌ವರ್ಡ್ ಹಾಕಿ ಸಾಫ್ಟ್‌ವೇರ್ ಹ್ಯಾಕ್ ಮಾಡಿದ್ದಾನೆ. ಕಂಪ್ಯೂಟರ್ ರಿಪೇರಿ ಮಾಡುತ್ತಿದ್ದ ನದೀಮ್ ಹಾಗೂ ದೀಪಕ್ ಜೊತೆ ಸೇರಿ ಖಾತೆಗಳ ಅಕ್ರಮ ತಿದ್ದುಪಡಿ ಮಾಡುತ್ತಿದ್ದ ಖದೀಮ ರಾಮನಗರ, ಬೆಂಗಳೂರು, ಹಾಸನ, ತುಮಕೂರು ಜಿಲ್ಲೆಗೆ ಸೇರಿದ ಹಲವು ಗ್ರಾ.ಪಂಗಳ ದಾಖಲೆಗಳನ್ನ ತಿದ್ದುಪಡಿ ಮಾಡಿದ್ದಾನೆ. ಖಾತೆಗೆ ಯೋಗ್ಯವಲ್ಲದ ದಾಖಲೆಗಳು, ಖಾತೆ ಬದಲಾವಣೆ, ನಕಾಶೆ, ಚೆಕ್ ಬಂಧಿಗಳ ಅಕ್ರಮ ತಿದ್ದುಪಡಿ ಮಾಡಿ ಜನರಿಂದ ಹಣ ವಸೂಲಿ ಮಾಡುತ್ತಿದ್ದ ಖದೀಮರ ಬಳಿ ವ್ಯಕ್ತಿಯೋರ್ವ ಅಕ್ರಮ ತಿದ್ದುಪಡಿ ಮಾಡಿಸಿ ಬಳಿಕ ಸಕ್ರಮಕ್ಕಾಗಿ ಗ್ರಾ.ಪಂಗೆ ಅರ್ಜಿ ಸಲ್ಲಿಸಿದ್ದ. ಈ ವೇಳೆ ಇ ಸ್ವತ್ತು ಖಾತೆ ಗಮನಿಸಿದ ಅಧಿಕಾರಿಗಳು ಪರಿಶೀಲನೆ ನಡೆಸಿದಾಗ ಸಾಫ್ಟ್‌ವೇರ್ ಹ್ಯಾಕ್ ಮಾಡಿ ದಾಖಲಾತಿಗಳ ತಿದ್ದುಪಡಿ ಮಾಡುತ್ತಿರುವುದು ಬೆಳಕಿಗೆ ಬಂದಿದೆ.

ಈ ಬಗ್ಗೆ ಮಾಗಡಿ ತಾಲೂಕಿನ ನಾರಸಂದ್ರ, ಗ್ರಾ.ಪಂ ಪಿಡಿಓ ರಾಮನಗರ ಸೈಬರ್ ಠಾಣೆಗೆ ದೂರು ನೀಡಿದ ಹಿನ್ನೆಲೆ ಪ್ರಕರಣದ ತನಿಖೆ ನಡೆಸಿದ ಸೆನ್ ಪೊಲೀಸರು ಆರೋಪಿಗಳನ್ನ ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಪ್ರಕರಣದಲ್ಲಿ ಮತ್ತಷ್ಟು ಆರೋಪಿಗಳು ಭಾಗಿಯಾಗಿದ್ದು, ತನಿಖೆ ಮುಂದುವರಿದಿದೆ ಎಂದು ರಾಮನಗರ ಎಸ್ಪಿ ಶ್ರೀನಿವಾಸ್ ಗೌಡ ಮಾಹಿತಿ ನೀಡಿದ್ದಾರೆ.

## ವಿಷಕಾರಿ ನೊರೆ ಹಾವಳಿ

ಹಾರುತ್ತವೆ. ಈ ಗಾಳಿಗುಳ್ಳೆಗಳು ನೊರೆಯನ್ನು ಸೃಷ್ಟಿಸುತ್ತದೆ. ಕೆಲವು ವಿಸರ್ಜಿತ ಘನವಸ್ತುಗಳಲ್ಲಿ ಬ್ಯಾಕ್ಟೀರಿಯಾಗಳೂ ಇರುತ್ತವೆ. ಇವು ಕೂಡ ನೊರೆ ಸೃಷ್ಟಿಯಾಗಲು ಕಾರಣವಾಗುತ್ತದೆ. ಈ ಬಗ್ಗೆ ಮಾತನಾಡಿದ ಸ್ಥಳೀಯ ನಿವಾಸಿ ರಾಮಣ್ಣ, ಈ ನೊರೆಯಿಂದ ಅನಾರೋಗ್ಯದ ಸಮಸ್ಯೆ ಕಾಣಿಸಿಕೊಳ್ಳುತ್ತಿವೆ ಎಂದು ಹೇಳಿದ್ದಾರೆ.

ಒಟ್ನಲ್ಲಿ ಮತ್ತೆ ಬೆಳ್ಳಂದೂರು ಕೆರೆಯಲ್ಲಿ ನೊರೆ ಕಾಣಿಸಿಕೊಳ್ತಿದ್ದು, ಇದರಿಂದ ಆ ಭಾಗದ ನಿವಾಸಿಗಳಲ್ಲಿ ಆತಂಕ ಹೆಚ್ಚಾಗಿದೆ. ಅನಾರೋಗ್ಯದ ಸಮಸ್ಯೆ ಎದುರಾಗಲಿದೆ ಅನ್ನೋ ಭಯ ಕೂಡ ಆರಂಭವಾಗಿರುವುದಂತು ಸುಳ್ಳಲ್ಲ.

## ಒಂದಾಗಿ ಕೆಲಸ ಮಾಡೋಣ

ನೀತಿ ಆಯೋಗದ ಸಭೆಯಲ್ಲಿ ಪುದುಚೇರಿ, ಕರ್ನಾಟಕ ಮತ್ತು ಕೇರಳದ ಮುಖ್ಯಮಂತ್ರಿಗಳು ಗೈರುಹಾಜರಾಗಿದ್ದರು. ಆಂಧ್ರಪ್ರದೇಶ, ತಮಿಳುನಾಡು ಮತ್ತು ತೆಲಂಗಾಣ ಮುಖ್ಯಮಂತ್ರಿಗಳಾದ ಎನ್. ಚಂದ್ರಬಾಬು ನಾಯ್ಡು, ಎಂ.ಕೆ. ಸ್ಟಾಲಿನ್ ಮತ್ತು ರೇವಂತ್ ರೆಡ್ಡಿ ಉಪಸ್ಥಿತರಿದ್ದರು. ಜಮ್ಮು ಮತ್ತು ಕಾಶ್ಮೀರದ ಒಮರ್ ಅಬ್ದುಲ್ಲಾ ಮತ್ತು ಹಿಮಾಚಲ ಪ್ರದೇಶದ ಸುಖವಿಂದರ್ ಸುಖು ಕೂಡ ಸಭೆಯಲ್ಲಿ ಭಾಗವಹಿಸಿದ್ದರು. ಪ್ರಧಾನಿ ಮೋದಿ ಜೊತೆಗೆ, ಕೇಂದ್ರ ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ಇತರ ಕೇಂದ್ರ ಸಚಿವರು ಉಪಸ್ಥಿತರಿದ್ದರು.

## ಸಿಎಂ ಸಿದ್ದರಾಮಯ್ಯ ಗೈರು

ಸಭೆಯಲ್ಲಿ ಭಾಗವಹಿಸಲು ನಿಯೋಜಿಸಿದರು. ತಿರುವನಂತಪುರದ ಸರ್ಕಾರಿ ಮೂಲಗಳು ಈ ಕಾರ್ಯಕ್ರಮವನ್ನು ಮುಖ್ಯಮಂತ್ರಿಗಳಿಗಾಗಿ ಗೊತ್ತುಪಡಿಸಲಾಗಿರುವುದರಿಂದ, ಬಾಲಗೋಪಾಲ್ ಅವರಿಗೆ ಭಾಗವಹಿಸಲು ಅವಕಾಶ ನೀಡಲಾಯಿತಾ ಎನ್ನುವುದು ತಿಳಿದು ಬಂದಿಲ್ಲ.

ಕಳೆದ ವರ್ಷವೂ ಕೇರಳದ ಮುಖ್ಯಮಂತ್ರಿಯೊಬ್ಬರು ನೀತಿ ಆಯೋಗದ ಸಭೆಗೆ ಗೈರುಹಾಜರಾಗಿರುವುದು ಇದೇ ಮೊದಲಲ್ಲ, ವಿಜಯನ್ ಅವರ ಸ್ಥಾನದಲ್ಲಿ ಬಾಲಗೋಪಾಲ್ ಅವರನ್ನು ಕಳುಹಿಸಿದ್ದರು.

**ಸಭೆಯಲ್ಲಿ ಭಾಗಿಯಾದ ಎಂಕೆ ಸ್ಟಾಲಿನ್:** 2021 ರಲ್ಲಿ ಕೊನೆಯ ಬಾರಿಗೆ ಆಡಳಿತ ಮಂಡಳಿ ಸಭೆಯಲ್ಲಿ ಭಾಗವಹಿಸಿದ್ದ ತಮಿಳುನಾಡು ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ಈ ಬಾರಿ ಭಾಗಿಯಾಗಿದ್ದರು. ಈ ವರ್ಷ ಭಾಗವಹಿಸುವ ತಮ್ಮ ನಿರ್ಧಾರವನ್ನು ಸಮರ್ಥಿಸಿಕೊಂಡರು. ಅವರ ಉದ್ದೇಶಗಳನ್ನು ಪ್ರಶ್ನಿಸಿದ ವಿರೋಧ ಪಕ್ಷ ಎಐಎಡಿಎಂಕೆಯ ಟೀಕೆಗಳ ನಡುವೆ, ಸ್ಟಾಲಿನ್, ತಮಿಳುನಾಡಿನ ನ್ಯಾಯಯುತ ಆರ್ಥಿಕ ಹಕ್ಕುಗಳನ್ನು ಪ್ರತಿಪಾದಿಸಲು ಹಾಜರಾಗುತ್ತಿರುವುದಾಗಿ ಹೇಳಿದ್ದಾರೆ. ನಾನು ಸಿದ್ಧಾಂತದ ಮೇಲೆ ದೃಢವಾಗಿರುತ್ತೇನೆ! ಹೋರಾಟದ ಮೂಲಕ ತಮಿಳುನಾಡಿಗೆ ಹಣವನ್ನು ಪಡೆಯುತ್ತೇನೆ ಎಂದು ಅವರು ಹೇಳಿದ್ದಾರೆ.

## ಸುಮ್ಮನೆ ಕುಳಿತುಕೊಳ್ಳುವುದಿಲ್ಲ

ದೃಢಸಂಕಲ್ಪ ತೋರಿಸಿದಂತೆಯೇ, ನಮ್ಮ ದೇಶವೂ ಏಪ್ರಿಲ್ 22 ರಂದು ನಮ್ಮ ಮೇಲೆ ದಾಳಿ ಮಾಡಿದ ದುಷ್ಟ ಶಕ್ತಿಗಳ ವಿರುದ್ಧ ನಿಂತಿದೆ ಎಂದು ತರೂರ್ ಹೇಳಿದರು.

ಈ ಭಯೋತ್ಪಾದಕ ದಾಳಿಯನ್ನು ನಡೆಸಿದವರು ಮತ್ತು ಅವರಿಗೆ ಹಣಕಾಸು ಒದಗಿಸಿದವರು, ತರಬೇತಿ ನೀಡಿದವರು, ಸಿದ್ಧತೆ ನಡೆಸಿದವರು ಮತ್ತು ಹಿಂದೆ ನಿಂತವರು ಪಾಠ ಕಲಿತಿದ್ದಾರೆ ಎಂದು ನಾವು ಭಾವಿಸುತ್ತೇವೆ. ಇದು ಮತ್ತೆ ಸಂಭವಿಸಿದರೆ, ನಾವು ಮೌನವಾಗಿರುವುದಿಲ್ಲ.

ಕಾಂಗ್ರೆಸ್ ಸಂಸದ ಶಶಿ ತರೂರ್ ನೇತೃತ್ವದ ಸರ್ವಪಕ್ಷ ನಿಯೋಗದಲ್ಲಿ ಶಾಂಭವಿ ಚೌಧರಿ (ಲೋಕಜನಶಕ್ತಿ ಪಕ್ಷ–ರಾಮ್ ವಿಲಾಸ್ ಪಾಸ್ವಾನ್), ಸರ್ಫರಾಜ್ ಅಹ್ಮದ್ (ಜಾರ್ಖಂಡ್ ಮುಕ್ತಿ ಮೋರ್ಚಾ), ಜಿಎಂ ಹರೀಶ್ ಬಲಯಾಗಿ (ತೆಲುಗು ದೇಶಂ ಪಕ್ಷ), ಶಶಾಂಕ್ ಮಣಿ ತ್ರಿಪಾಠಿ, ಬಿಜೆಪಿಯಿಂದ ತೇಜಸ್ವಿ ಸೂರ್ಯ, ಭುವನೇಶ್ವರ್, ಭುಬನಲ್ಸ್‌ವಾರ್ (ಶಿವಸೇನೆ) ಮತ್ತು ಗಖ ನಲ್ಲಿನ ಮಾಜಿ ಭಾರತೀಯ ರಾಯಭಾರಿ ತರಂಜಿತ್ ಸಿಂಗ್ ಸಂಧು ಇದ್ದಾರೆ.

## 38ಕ್ಕೆ ಏರಿಕೆ

ಬಳ್ಳಾರಿಯ ವಿಮ್ಸ್ ಆಸ್ಪತ್ರೆಯಲ್ಲಿ ತಪಾಸಣೆ ನಡೆಸಿದಾಗ ಕೊರೊನಾ ಸೋಂಕು ತಗುಲಿರುವುದು ದೃಢಪಟ್ಟಿದೆ. ಸದ್ಯ ಮಹಿಳೆ ಹೋಂ ಐಸೋಲೇಷನ್ ನಲ್ಲಿದ್ದಾರೆ. ಮಹಿಳೆ ಇತ್ತೀಚೆಗೆ ಮುಂಬೈನಿಂದ ವಾಪಸಾಗಿದ್ದಾರೆ.

**ಬೆಳಗಾವಿ ಜಿಲ್ಲೆಗೂ ಕಾಲಿಟ್ಟ ಕೊರೊನಾ:** ಬೆಳಗಾವಿ ಜಿಲ್ಲೆಗೂ ಕೊರೊನಾ ವೈರಸ್ ಕಾಲಿಟ್ಟಿದೆ. ಬೆಳಗಾವಿ ನಗರದ ಓರ್ವ ಗರ್ಭಿಣಿಯಲ್ಲಿ ಕೊರೊನಾ ವೈರಸ್ ಪತ್ತೆಯಾಗಿದೆ. ಗರ್ಭಿಣಿ ನ್ಯುಮೋನಿಯಾದಿಂದ ಬಳಲುತ್ತಿದ್ದು, ಬೆಳಗಾವಿಯ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಬೆಳಗಾವಿ ಡಿಹೆಚ್ ಒ ಡಾ.ಈಶ್ವರ ಗಡಾದಿ ಮಾಹಿತಿ ನೀಡಿದರು. ಗರ್ಭಿಣಿ ತಿಂಗಳ ಹಿಂದೆ ಮಹಾರಾಷ್ಟ್ರದ ಪುಣೆಗೆ ಹೋಗಿ ಬಂದಿದ್ದರು ಎಂದು ತಿಳಿದುಬಂದಿದೆ.

**ಕೋವಿಡ್ ರೋಗಿಗಳಿಗೆ ಪ್ರತ್ಯೇಕ ವಾರ್ಡ್:** ಧಾರವಾಡ ಜಿಲ್ಲಾಸ್ಪತ್ರೆಯಲ್ಲಿ ವೆಂಟಿಲೇಟರ್ ವ್ಯವಸ್ಥೆಯುಳ್ಳ ಅತ್ಯಾಧುನಿಕ 10 ಬೆಡ್‌ಗಳ ವಾರ್ಡ್ ತೆರೆಯಲಾಗಿದೆ. ಪುರುಷ ಮತ್ತು ಮಹಿಳಾ ಕೋವಿಡ್ ರೋಗಿಗಳಿಗೆ ತಲಾ 5 ಬೆಡ್ ಮೀಸಲು ಇಡಲಾಗಿದೆ. ಧಾರವಾಡ ಜಿಲ್ಲಾಸ್ಪತ್ರೆ ಕೊವಿಡ್ 1ನೇ ಮತ್ತು 2ನೇ ಅಲೆಯಲ್ಲಿ ಉತ್ತಮ ಸೇವೆ ನೀಡಿತ್ತು. ಬೆಳಗಾವಿ, ಉತ್ತರ ಕನ್ನಡ ಜಿಲ್ಲೆಯಿಂದ ಜಿಲ್ಲಾಸ್ಪತ್ರೆಗೆ ರೋಗಿಗಳು ಬಂದಿದ್ದರು.

**8 ಮೆಡಿಕಲ್ ಕಾಲೇಜುಗಳಲ್ಲಿ ಕೋವಿಡ್ ಟೆಸ್ಟ್:** ಕೋವಿಡ್ ಹೆಚ್ಚಳ ಹಿನ್ನೆಲೆಯಲ್ಲಿ ತಾಂತ್ರಿಕ ಸಲಹಾ ಸಮಿತಿ ಸಭೆ ನಡೆಸಲಾಗಿತ್ತು. ಸಭೆಯಲ್ಲಿ ಸಚಿವ ದಿನೇಶ್ ಗುಂಡೂರಾವ್ ಅವರಿಗೆ ತಾಂತ್ರಿಕ ಸಲಹಾ ಸಮಿತಿ ಸದಸ್ಯರು ಕೆಲ ಸಲಹೆಗಳನ್ನು ನೀಡಿದ್ದಾರೆ. ಸಲಹಾ ಸಮಿತಿ ಸೂಚನೆ ಮೇರೆಗೆ ರವಿವಾರ (ಮೇ.25) ದಿಂದ ರಾಜ್ಯದ 8 ಮೆಡಿಕಲ್ ಕಾಲೇಜುಗಳಲ್ಲಿ ಕೋವಿಡ್ ಟೆಸ್ಟ್ ಮತ್ತೆ ಆರಂಭಿಸುವಂತೆ ಸಚಿವರು ಸೂಚನೆ ನೀಡಿದ್ದಾರೆ. ಬೆಂಗಳೂರಿನಲ್ಲಿಯೇ ಹೆಚ್ಚು ಕೋವಿಡ್ ಟೆಸ್ಟ್ ಮಾಡಲು ಸೂಚನೆ ನೀಡಲಾಗಿದೆ.

## ಬೇಗ ಮಳೆಗಾಲ ಶುರು

ಐಎಂಡಿ ಪ್ರಕಾರ, ಮುಂಗಾರು ಕೇರಳದಲ್ಲಿ ಮಾತ್ರವಲ್ಲದೆ ಕರ್ನಾಟಕದ ಕೆಲವು ಭಾಗಗಳು, ಪುದುಚೇರಿ, ತಮಿಳುನಾಡು ಮತ್ತು ಮಿಜೋರಾಂನಲ್ಲಿಯೂ ಆಗಮಿಸಿದೆ. ಇದು ವೇಗವಾಗಿ ಮುಂದುವರಿಯುತ್ತಿದ್ದು, ಮುಂದಿನ 2–3 ದಿನಗಳಲ್ಲಿ ಮಹಾರಾಷ್ಟ್ರ, ಆಂಧ್ರಪ್ರದೇಶ, ತಮಿಳುನಾಡಿನ ಉಳಿದ ಪ್ರದೇಶಗಳು ಹಾಗೂ ಪಶ್ಚಿಮ ಬಂಗಾಳ ಮತ್ತು ಸಿಕ್ಕಿಂನ ಕೆಲವು ಭಾಗಗಳನ್ನು ತಲುಪುವ ನಿರೀಕ್ಷೆಯಿದೆ. ಕೇರಳಕ್ಕೆ ಕೊನೆಯ ಬಾರಿಗೆ ಮುಂಗಾರು ಮಳೆ 2009 ಮತ್ತು 2001ರಲ್ಲಿ ಇಷ್ಟು ಬೇಗ ಆಗಮಿಸಿತ್ತು. ಆಗ ಮೇ 23ರಂದು ಮುಂಗಾರು ಕೇರಳ ರಾಜ್ಯವನ್ನು ತಲುಪಿತ್ತು.

ಕಳೆದ 25 ವರ್ಷಗಳಲ್ಲಿ, ಅತ್ಯಂತ ವಿಳಂಬವಾದ ಆಗಮನ 2016ರಲ್ಲಿ ಸಂಭವಿಸಿತ್ತು. ಆಗ ಮಾನ್ಸೂನ್ ಜೂನ್ 9ರಂದು ಕೇರಳವನ್ನು ಪ್ರವೇಶಿಸಿತ್ತು. ಕಳೆದ ಎರಡು ದಿನಗಳಿಂದ ಕೇರಳ ರಾಜ್ಯದಲ್ಲಿ ಮಾನ್ಸೂನ್ ಆರಂಭಕ್ಕೆ ಅನುಕೂಲಕರವಾದ ಎಲ್ಲಾ ಪರಿಸ್ಥಿತಿಗಳು ಅಭಿವೃದ್ಧಿಗೊಂಡಿವೆ. ಕಡಿಮೆ ಒತ್ತಡದ ಪ್ರದೇಶ ಮತ್ತು ಮುಂದುವರಿಯುತ್ತಿರುವ ಮಾನ್ಸೂನ್ ವ್ಯವಸ್ಥೆಯ ಸಂಯೋಜನೆಯಿಂದಾಗಿ ಕೇರಳದ ಹಲವಾರು ಭಾಗಗಳಲ್ಲಿ ಭಾರೀ ಮಳೆಯಾಗಲಿದೆ.

ಮೇ 29ರವರೆಗೆ ಕೇರಳ ಮತ್ತು ಕರ್ನಾಟಕದ ಕರಾವಳಿಯಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದ್ದು, ಗಾಳಿಯು ಗಂಟೆಗೆ 40–50 ಕಿ.ಮೀ. ವೇಗದಲ್ಲಿ ಬೀಸಲಿದೆ. ಮುಂದಿನ ಐದು ದಿನಗಳಲ್ಲಿ ತಮಿಳುನಾಡು, ತೆಲಂಗಾಣ ಮತ್ತು ಆಂಧ್ರಪ್ರದೇಶದಲ್ಲಿಯೂ ಚದುರಿದ ಮಳೆ ಮತ್ತು ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

### ಮೊದಲನೇ ಪುಟದಿಂದ...

## ರೆಡ್ ಅಲರ್ಟ್

ಬೆಂಗಳೂರುನಗರ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಕೋಲಾರ, ತುಮಕೂರು, ವಿಜಯನಗರ, ಯಾದಗಿರಿ, ರಾಯಚೂರು, ಕೊಪ್ಪಳ, ಬೀದರ್ ನಲ್ಲಿ ಸಾಧಾರಣ ಮಳೆಯಾಗಲಿದೆ. ಇಂದಿನಿಂದ ರಾಜ್ಯಾದ್ಯಂತ ಮಳೆಯ ಪ್ರಮಾಣ ಹೆಚ್ಚಾಗಲಿದೆ.

ಎಲ್ಲೆಲ್ಲಿ ಮಳೆಯಾಗಿದೆ ಕ್ಯಾಸಲ್ ರಾಕ್,ಕೊಟ್ಟಿಗೆಹಾರ, ಭಾಗಮಂಡಲ, ಬೆಳ್ತಂಗಡಿ, ಮಂಕಿ, ಮಂಗಳೂರು, ಗೇರುಸೊಪ್ಪ, ಕುಂದಾಪುರ, ಮಾಣಿ, ಕುಮಟಾ, ಧರ್ಮಸ್ಥಳ, ಗೋಕರ್ಣ, ಕುಮಟಾ, ಕಳಸ, ಲೋಂಡಾ, ಶೃಂಗೇರಿ, ಯಲ್ಲಾಪುರ, ಹೊನ್ನಾವರ, ಸಿದ್ದಾಪುರ, ಪುತ್ತೂರು, ಮುಲ್ಕಿ, ಮಂಗಳೂರು, ಕಾರವಾರ, ಔರಾದ್, ಖಾನಾಪುರ, ಕೋಟಾ, ಉಪ್ಪಿನಂಗಡಿಯಲ್ಲಿ ಮಳೆಯಾಗಿದೆ.

ಅರಬ್ಬಿ ಸಮುದ್ರದಲ್ಲಿ ವಾಯುಭಾರ ಕುಸಿತ ಉಂಟಾಗಿದ್ದು, ಹೀಗಾಗಿ ಕರ್ನಾಟಕ, ಗೋವಾ, ಕೇರಳ ಹಾಗೂ ತಮಿಳುನಾಡು ಕರಾವಳಿಗೆ ಮುಂಗಾರು ಏಕಕಾಲಕ್ಕೆ ಪ್ರವೇಶಿಸಿದೆ. ಮುಂದಿನ ನಾಲ್ಕೈದು ದಿನ ರಾಜ್ಯದಲ್ಲಿ ಭಾರಿ ಮಳೆಯಾಗುವ ಮುನ್ಸೂಚನೆ ಸಿಕ್ಕಿದೆ.

## ಎಚ್ಚರಿಕೆ ಕೊಟ್ಟ ಡಿಕೆಶಿ

**ಸ್ಥಗಿತಗೊಂಡಿದ್ದ ಟೋಯಿಂಗ್:** ಜನಾಕ್ರೋಶ ವ್ಯಕ್ತವಾದ ಹಿನ್ನೆಲೆಯಲ್ಲಿ 2022ರ ಫೆಬ್ರವರಿಯಲ್ಲಿ ಟೋಯಿಂಗ್ ಬಂದ್ ಆಗಿತ್ತು. ಕೆಲವು ಹೊಸ ನಿಯಮ, ಗೈಡ್ ಲೈನ್ಸ್ ನೊಂದಿಗೆ ಟೋಯಿಂಗ್ ಪ್ರಾರಂಭಿಸಲಾಗುವುದು ಎಂದು ಈ ಹಿಂದಿನ ಸರ್ಕಾರ ಹೇಳಿತ್ತು. ಆದರೆ, ಮತ್ತೆ ಟೋಯಿಂಗ್ ಪ್ರಾರಂಭವಾಗಿರಲಿಲ್ಲ. ಇದೀಗ ಮತ್ತೆ ಟೋಯಿಂಗ್ ಆರಂಭಿಸುವ ಬಗ್ಗೆ ಬೆಂಗಳೂರು ನಗರಾಭಿವೃದ್ಧಿ ಸಚಿವ ಡಿಕೆ ಶಿವಕುಮಾರ್ ಹೇಳಿದ್ದಾರೆ.

**ಟ್ರಾಫಿಕ್ ಸಮಸ್ಯೆಗೆ ಕಡಿವಾಣ:** ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಡೆಯುವ ಮೆಟ್ರೋ ಕಾಮಗಾರಿಗಳ ಪಕ್ಕದಲ್ಲಿ ಸರ್ವಿಸ್ ರಸ್ತೆ ನಿರ್ಮಾಣ ಮಾಡುತ್ತೇವೆ. ಇದರಿಂದ ಟ್ರಾಫಿಕ್ ಸಮಸ್ಯೆ ಕಡಿಮೆಯಾಗುತ್ತದೆ. ಟನಲ್ ರೋಡ್ ನಿರ್ಮಾಣಕ್ಕೆ ಬಿಜೆಪಿ ಮತ್ತು ಜೆಡಿಎಸ್ ನ ಎಲ್ಲ ಶಾಸಕರ ಬೆಂಬಲ ಇದೆ ಎಂದು ಹೇಳಿದರು.

ಫುಟ್ ಪಾತ್ ಮೇಲಿನ ವ್ಯಾಪಾರವನ್ನು ನಿಲ್ಲಿಸಬೇಕೆಂದು ತೀರ್ಮಾನಿಸಿದ್ದೇವೆ. ನಿರ್ದಿಷ್ಟವಾದ ಜಾಗದಲ್ಲಿ ಮಾತ್ರ ವ್ಯಾಪಾರ ಮಾಡಬೇಕು. ಬೀದಿ ಬದಿ ವ್ಯಾಪಾರಿಗಳಿಗೆ ತಳ್ಳುವ ಗಾಡಿ ನೀಡಲು ಸಿದ್ಧರಿದ್ದೇವೆ. ನಾಲ್ಕು ರೀತಿಯ ಗಾಡಿ ಡಿಸೈನ್ ಮಾಡಿದ್ದೇವೆ. 3000ಕ್ಕೂ ಹೆಚ್ಚು ಜನರಿಗೆ ಗಾಡಿ ಕೊಡುವಂತೆ ಶಾಸಕರು ಮನವಿ ಮಾಡಿದ್ದಾರೆ ಎಂದು ತಿಳಿಸಿದರು.

**ಬೆಂಗಳೂರಿನ ಎಲ್ಲ ಆಸ್ತಿಗಳಿಗೆ ಇ–ಖಾತಾ:** ಬೆಂಗಳೂರಿನ ಎಲ್ಲ ಆಸ್ತಿಗಳಿಗೆ ಇ–ಖಾತಾ ಮಾಡಬೇಕು. ಈಗಾಗಲೇ ಎಲ್ಲ ಆಸ್ತಿಗಳ ಡಿಜಿಟಲೀಕರಣ ಆಗುತ್ತಿದೆ. ತೆರಿಗೆ ಪಾವತಿಗೂ ಸಹ ಪಾರದರ್ಶಕತೆ ತರಲು ನಿರ್ಧಾರ ಮಾಡಿದ್ದೇವೆ. ಸ್ಕೈಡೆಕ್ ನಿರ್ಮಾಣ ಕೆಲಸ ಆರಂಭವಾಗಿದೆ. ಕೆಂಪೇಗೌಡ ಲೇಔಟ್ ಬಳಿ ಸ್ಕೈಡೆಕ್ ಶಿಫ್ಟ್ ಮಾಡುತ್ತೇವೆ.

**ಗ್ರೇಟರ್ ಬೆಂಗಳೂರು ನೋಟಿಫಿಕೇಷನ್:** ಮೇ 15 ರಂದು ಗ್ರೇಟರ್ ಬೆಂಗಳೂರು ನೋಟಿಫಿಕೇಷನ್ ಆಗಿದೆ. 120 ದಿನಗಳಲ್ಲಿ ಪಾಲಿಕೆ ಆರಂಭವಾಗಬೇಕು. ಈ ಬಗ್ಗೆ ಬೆಂಗಳೂರಿನ ಎಲ್ಲ ಶಾಸಕರ ಸಲಹೆ ನೀಡಿದ್ದು, ಅಂತಿಮ ತೀರ್ಮಾನ ಕೈಗೊಳ್ಳುತ್ತೇವೆ. ಇದೇ ವರ್ಷ ಸೆಪ್ಟೆಂಬರ್ 15 ರ ಒಳಗಾಗಿ ಬಿಬಿಎಂಪಿ ವಿಭಜನೆ ಪ್ರಕ್ರಿಯೆ ಪೂರ್ಣಗೊಂಡು ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚನೆಯಾಗಲಿದೆ. ಈಗಾಗಲೇ ಅಧಿಕಾರಿಗಳನ್ನು ನಿಯೋಜಿಸಲಾಗಿದ್ದು, ಬಜೆಟ್ ನೀಡುತ್ತೇವೆ. ಕುಡಿಯುವ ನೀರಿನ ಟ್ಯಾಂಕರ್ ಕುರಿತು ದೂರು ಬಂದಿತ್ತು. ಸೀಸನ್ ತಕ್ಕಂತೆ ನೀರಿನ ವ್ಯವಸ್ಥೆ ಮಾಡುತ್ತೇವೆ ಎಂದರು.

**ಬೆಂಗಳೂರು ಕಸದ ಕುರಿತು ಪ್ಲಾನ್ ಆಫ್ ಆಯಕ್ಷನ್:** ಬೆಂಗಳೂರು ಕಸದ ಕುರಿತು ಪ್ಲಾನ್ ಆಫ್ ಆ ಯಕ್ಷನ್ ಮಾಡಿದ್ದೇವೆ. ಬೆಂಗಳೂರಿಗೆ ಹೊಸ ರೂಪ ನೀಡಬೇಕು. ಎಲ್ಲೆಲ್ಲಿ ರಸ್ತೆ ಅಗಲೀಕರಣ ಆಗಬೇಕು ಎಂದು ಶಾಸಕರಿಗೆ ತಿಳಿಸಿದ್ದೇನೆ. ರಾಜಕಾಲುವೆ ಪಕ್ಕದಲ್ಲಿ ರಸ್ತೆ ನಿರ್ಮಾಣವಾಗಬೇಕು ಎಂದು ಹೇಳಿದರು.

**ಮಳೆಯಿಂದ ಹಾನಿಗೊಳಗಾದವರಿಗೆ ಪರಿಹಾರ:** ಮಳೆಯಿಂದ ಹಾನಿಯಾದವರಿಗೆ 10 ಸಾವಿರ ರೂಪಾಯಿ ಪರಿಹಾರ ನೀಡುತ್ತೇವೆ ಎಂದು ಹೇಳಿದರು. ಲೋ ಲೇವಲಿಂಗ್ ಬೇಸ್ಮೆಂಟ್ ಕಟ್ಟಲು ಬಿಡಲ್ಲ. ಇದಕ್ಕೂ ನಿಯಮ ತರುತ್ತೇವೆ. ಬಹಳ ಕಡೆ ಲೋ ಲೆವಲಿಂಗ್ ಬೇಸ್ಮೆಂಟ್ ನಿಂದ ಸಮಸ್ಯೆ ಆಗಿದೆ. ಆಪ್ಟಿಕಲ್ ಫೈಬರ್ ಕೇಬಲ್ ನಿಂದಲೂ ಸಮಸ್ಯೆಯಾಗಿದೆ. ಅಕ್ರಮವಾಗಿ ಕೇಬಲ್ ಹಾಕಿದನ್ನು ಕಟ್ ಮಾಡಲು ತಿಳಿಸಿದ್ದೇನೆ ಎಂದು ಹೇಳಿದರು.

## ಯುವಕ

ವರದಿಗಳ ಪ್ರಕಾರ, ಆ ಬಾಲಕಿಯ ಪೋಷಕರು ಆಕೆಯನ್ನು ಹಳ್ಳಿಯೊಂದರಲ್ಲಿ ಸಂಬಂಧಿಕರ ಮದುವೆಗೆ ಕರೆದುಕೊಂಡು ಹೋಗಿದ್ದರು. ಆಗ ಈ ಘಟನೆ ನಡೆದಿದೆ. ಬಾಲಕಿ ಹೊರಗೆ ಆಟವಾಡುತ್ತಿದ್ದಾಗ ಆರೋಪಿ ರಹಮತುಲ್ಲಾ ಬಾಳೆಹಣ್ಣಿನ ಆಮಿಷವೊಡ್ಡಿ ಆಕೆಯನ್ನು ತೋಟಕ್ಕೆ ಕರೆದೊಯ್ದು, ಅಲ್ಲಿ ಅತ್ಯಾಚಾರ ಮಾಡಿ ಕೊಂದಿದ್ದಾನೆ ಎಂದು ಆರೋಪಿಸಲಾಗಿದೆ.

ಆ ಬಾಲಕಿಯ ಪೋಷಕರು ಆಕೆಗಾಗಿ ಹುಡುಕಾಡಿದರು. ಆದರೆ ಆಕೆ ಸಿಗಲಿಲ್ಲ. ನಂತರ, ಆಕೆಯ ಶವ ಪೊದೆಯಲ್ಲಿ ಪತ್ತೆಯಾಗಿದೆ. ಪೊಲೀಸರು ಸಂಬಂಧಿತ ವಿಭಾಗಗಳ ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡು ಆರೋಪಿಯನ್ನು ಹೆಚ್ಚಿನ ತನಿಖೆಗಾಗಿ ವಶಕ್ಕೆ ಪಡೆದಿದ್ದಾರೆ.

ಇದೇ ರೀತಿಯ ಮತ್ತೊಂದು ಪ್ರಕರಣದಲ್ಲಿ, ಮುಂಬೈನಲ್ಲಿ ಒಂದು ಪುಟ್ಟ ಮಗುವನ್ನು ಆಕೆಯ ತಾಯಿಯ ಪ್ರಿಯಕರ ಅತ್ಯಾಚಾರ ಮಾಡಿ ಕೊಲೆ ಮಾಡಿದ್ದಾನೆ. ಆದರೆ ತಾಯಿ ಈ ಭಯಾನಕ ಕೃತ್ಯವನ್ನು ನೋಡುತ್ತಾ ನಿಂತಿದ್ದಳು. ಆಕೆ ಅದನ್ನು ತಡೆಯಲು ಯಾವುದೇ ಕ್ರಮ ಕೈಗೊಳ್ಳಲಿಲ್ಲ. ಆ ಮಗುವನ್ನು ಸ್ಥಳೀಯ ಆಸ್ಪತ್ರೆಗೆ ಕರೆದೊಯ್ಯುವಾಗ ಮೃತಪಟ್ಟಿರುವುದಾಗಿ ಘೋಷಿಸಿದಾಗ ಈ ಘಟನೆ ಬೆಳಕಿಗೆ ಬಂದಿದೆ.

## ಮಾವ!

ಆಕೆಯ ಮೇಲೆ ಇದ್ದಕ್ಕಿದ್ದಂತೆ ಮತ್ತು ಆಕೆಗೆ ಗೊತ್ತಿಲ್ಲದೆ ದಾಳಿ ನಡೆದಿದೆ. ಈ ದಾಳಿಯ ನಂತರ, ಖೇಲನ್ ಮಾಂಝಿ ಮನೆಯಿಂದ ಓಡಿಹೋಗಿದ್ದಾರೆ. ಈ ಕ್ರೂರ ಹತ್ಯೆ ಇಡೀ ಮನೆ ಮತ್ತು ಗ್ರಾಮವನ್ನು ಆಘಾತಕ್ಕೀಡು ಮಾಡಿತು. ನೆರೆಹೊರೆಯವರು ಸ್ಥಳೀಯ ಪೊಲೀಸರಿಗೆ ಮಾಹಿತಿ ನೀಡಿದಾಗ ಪೊಲೀಸರು ತಕ್ಷಣ ಸ್ಥಳಕ್ಕೆ ತಲುಪಿದರು. ಕೊಲೆಗೆ ಬಳಸಲಾದ ಕತ್ತಿಯನ್ನು ಪೊಲೀಸರು ಅಪರಾಧ ಸ್ಥಳದಿಂದ ವಶಪಡಿಸಿಕೊಂಡಿದ್ದಾರೆ.

ಖುಷ್ಬೂ ದೇವಿಯ ಮೃತದೇಹವನ್ನು ಸದರ್ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಯಿತು. ನಂತರ ಅವರ ಕುಟುಂಬಕ್ಕೆ ಹಸ್ತಾಂತರಿಸಲಾಯಿತು. ಕೊಲೆಗೆ ನಿಖರವಾದ ಕಾರಣ ಇನ್ನೂ ಸ್ಪಷ್ಟವಾಗಿಲ್ಲವಾದರೂ, ಆರಂಭಿಕ ತನಿಖೆಗಳು ಇದು ಕೌಟುಂಬಿಕ ಕಲಹದಿಂದ ಉಂಟಾಗಿರಬಹುದು ಎಂದು ಸೂಚಿಸುತ್ತವೆ. ಆರೋಪಿ ಮಾವನನ್ನು ಪತ್ತೆಹಚ್ಚಲು ಮತ್ತು ಬಂಧಿಸಲು ಪೊಲೀಸರು ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಿದ್ದಾರೆ.

## ಜೀವಾವಧಿ ಶಿಕ್ಷೆ

2000 ರಲ್ಲಿ ನಡೆದ ಪತ್ರಕರ್ತ ಮನೋಜ್ ಸಿಂಗ್ ಮತ್ತು ಅವರ ಚಾಲಕ ರವಿ ಶ್ರೀವಾಸ್ತವ್ ಅವರ ಕೊಲೆಗೆ ಸಂಬಂಧಿಸಿದಂತೆ ಆರೋಪಿಯನ್ನು ದೋಷಿ ಎಂದು ಘೋಷಿಸಿದ್ದಾರೆ, ಆದರೆ ಆರೋಪಿ ಮುಖದಲ್ಲಿ ಯಾವುದೇ ಪಶ್ಚಾತಾಪ ಕಾಣಿಸಲಿಲ್ಲ ಬದಲಾಗಿ, ಕುಹಕ ನಗು ಇತ್ತು. ರಾಜ ಕೊಲಂದರ್ 14 ಜನರನ್ನು ಕೊಂದ ಆರೋಪ ಹೊತ್ತಿದ್ದಾನೆ. ಲಕ್ನೋದ ಸಿಜೆಎಂ ನ್ಯಾಯಾಲಯ ಶುಕ್ರವಾರ ರಾಜಾ ಕೊಲಂದರ್ ಮತ್ತು ಅವರ ಸೋದರ ಮಾವ ವಕ್ಷರಾಜ್‌ಗೆ ಜೀವಾವಧಿ ಶಿಕ್ಷೆ ವಿಧಿಸಿದೆ.

ಇಬ್ಬರನ್ನೂ ಲಕ್ನೋದಿಂದ ಟ್ಯಾಕ್ಸಿಯಲ್ಲಿ ರಾಯ್ ಬರೇಲಿಗೆ ಕರೆದೊಯ್ದು ಕಾಡಿನಲ್ಲಿ ಕೊಲೆ ಮಾಡಲಾಗಿತ್ತು. ಕೆಲವು ದಿನಗಳ ನಂತರ ಬರ್ಗಢ ಕಾಡಿನಲ್ಲಿ ಅವರ ಬೆತ್ತಲೆ ಶವಗಳು ಪತ್ತೆಯಾಗಿದ್ದವು. ರಾಜಾ ಕುಲಂದರ್ ಪ್ರಯಾಗರಾಜ್‌ನ ನೈನಿ ಪ್ರದೇಶದ ನಿವಾಸಿ. 2000 ಇಸವಿಯಲ್ಲಿ ಪತ್ರಕರ್ತ ಧೀರೇಂದ್ರ ಸಿಂಗ್ ಅವರ ಹತ್ಯೆಯ ತನಿಖೆ ನಡೆಸಿದಾಗ, ಅವರ ಮನೆಯಿಂದ ಹಲವಾರು ಅಸ್ಥಿಪಂಜರಗಳು ಮತ್ತು ಮಾನವ ತಲೆಬುರುಡೆಗಳು ಪತ್ತೆಯಾಗಿದ್ದವು.

ತನಿಖೆಯಲ್ಲಿ ಅವನು ತನ್ನ ಮಾನಸಿಕ ಶಕ್ತಿಯನ್ನು ಹೆಚ್ಚಿಸಲು ತಲೆಬುರುಡೆಗಳನ್ನು ಕುದಿಸಿ ಅದರ ಸೂಪ್ ಕುಡಿಯುತ್ತಿದ್ದನು ಎಂದು ತಿಳಿದುಬಂದಿದೆ. ಕೊಲೆಯ ನಂತರ ಲೂಟಿ ಮಾಡಲಾದ ಟಾಟಾ ಸುಮೋವನ್ನು ಅವರು ತಮ್ಮ ಪತ್ನಿ ಫೂಲನ್ ದೇವಿಯವರ ಜಿಲ್ಲಾ ಪಂಚಾಯತ್ ಚುನಾವಣಾ ಪ್ರಚಾರದ ಸಮಯದಲ್ಲಿಯೂ ಬಳಸಿದ್ದ, ರಾಜಾಗೆ ಅದಾಲತ್ ಮತ್ತು ಜಮಾನತ್ ಎಂಬ ಇಬ್ಬರು ಗಂಡು ಮಕ್ಕಳಿದ್ದಾರೆ.

ಕುಟುಂಬವು ಅವನನ್ನು ನಿರಪರಾಧಿ ಎಂದು ಪರಿಗಣಿಸುತ್ತದೆ ಆದರೆ ಆತ ವಾಸವಿರುವ ಪ್ರದೇಶದ ಜನರು ಆತನ ಹೆಸರನ್ನು ಕೇಳಿದರೆ ಇನ್ನೂ ನಡುಗುತ್ತಾರೆ. ಪತ್ರಕರ್ತ ಧೀರೇಂದ್ರ ಸಿಂಗ್ ಅವರ ಕುಟುಂಬವು ನ್ಯಾಯಾಲಯದ ತೀರ್ಪಿನಿಂದ ತೃಪ್ತರಾಗಿದ್ದರೂ, ಸಂಪೂರ್ಣ ನ್ಯಾಯ ಇನ್ನೂ ಸಿಕ್ಕಿಲ್ಲ ಎಂದು ಅವರು ಹೇಳುತ್ತಾರೆ.

ಕೊಲಂದರ್ ಧೀರೇಂದ್ರ ಸಿಂಗ್ ಅವರನ್ನು ಗುಂಡಿಕ್ಕಿ ಕೊಂದು, ಅವರ ದೇಹವನ್ನು ಹೂಳುವ ಮೊದಲು ವಿರೂಪಗೊಳಿಸಿದ್ದ ಎಂದು ವರದಿಯಾಗಿದೆ. ಇಬ್ಬರೂ ಆರೋಪಿಗಳು ತಮ್ಮ ಇಡೀ ಜೀವನಪರ್ಯಂತ ಜೈಲಿನಲ್ಲಿಯೇ ಇರುತ್ತಾರೆ.

ಕೊಲಂದರ್ ಸಾಮಾನ್ಯ ಅಪರಾಧಿಯಲ್ಲ, ಆತನಿಂದ ನಡೆದ ಕೊಲೆಗಳ ತನಿಖೆಯ ಸಮಯದಲ್ಲಿ ಪೊಲೀಸರು ಆತನ ತೋಟದ ಮನೆ ಹಾಗೂ ಮನೆಯನ್ನು ಪರಿಶೀಲಿಸಿದಾಗ ಒಂದು ಡೈರಿ ಸಿಕ್ಕಿತ್ತು. ಅದರಲ್ಲಿ ಆತ ಮಾಡಿದ್ದ ಎಲ್ಲಾ ಅಪರಾಧಗಳ ಕುರಿತು ಬರೆದದ್ದ.

# ಸೋದರ ಮಾವನ ಮಗಳ ಜೊತೆ ಮದುವೆಗೆ ನಕಾರ: ಯುವಕ ಆತ್ಮಹತ್ಯೆ!

**ಚಿಕ್ಕಬಳ್ಳಾಪುರ:** ಸೋದರ ಮಾವನ ಮಗಳ ಜೊತೆ ಮದುವೆಗೆ ನಕಾರ ಹಿನ್ನೆಲೆ ಸಂಬಂಧಿ ಯುವಕ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಚಿಕ್ಕಬಳ್ಳಾಪುರ ತಾಲೂಕಿನ ಅಜ್ಜವಾರ ಗ್ರಾಮದಲ್ಲಿ ನಡೆದಿದೆ.



ಅಜ್ಜವಾರ ಗ್ರಾಮದ 27 ವರ್ಷದ ಮಂಜುನಾಥ್ ನೇಣಿಗೆ ಶರಣಾದ ದುರ್ದೈವಿ. ಅಂದಹಾಗೆ ಮಂಜುನಾಥ್ ಶಿಡ್ಲಘಟ್ಟ ತಾಲೂಕಿನ ಸೋದರ ಮಾವನ ಅಪ್ರಾಪ್ತ ಮಗಳನ್ನ ಕೆಲ ವರ್ಷಗಳಿಂದ ಪ್ರೀತಿಸುತ್ತಿದ್ದ ಎನ್ನಲಾಗಿದೆ.

ನಿನ್ನೆ ಸಹ ಬಾಲಕಿಯ ಹುಟ್ಟು ಹಬ್ಬದ ಅಂಗವಾಗಿ ಮನೆಗೆ ಹೋಗಿ ವಿಶ್ ಮಾಡಿ ಬಂದಿದ್ದ. ಈ ವೇಳೆ ಬಾಲಕಿಯನ್ನ ಮದುವೆಯಾಗುವುದಾಗಿ ಮಂಜುನಾಥ್ ಹೇಳಿದ್ದು ಇದಕ್ಕೆ ಸೋದರ ಮಾವ ಹಾಗೂ ಅತ್ತೆ ಮಗಳನ್ನ ಕೊಡೋದಿಲ್ಲ ಎಂದಿದ್ದರಂತೆ. ಇದೇ ನೋವಿನಲ್ಲಿ ಮನೆಗೆ ವಾಪಸ್ ಬಂದಿದ್ದ ಮಂಜುನಾಥ್ ಆತ್ಮಹತ್ಯೆಗೆ ಶರಣಾಗಿದ್ದಾನೆ ಅಂತ ಮಾಹಿತಿ ತಿಳಿದುಬಂದಿದೆ. ಮೃತದೇಹವನ್ನ ಚಿಕ್ಕಬಳ್ಳಾಪುರ ಸರ್ಕಾರಿ ಆಸ್ಪತ್ರೆಯ ಶವಾಗಾರಕ್ಕೆ ರವಾನೆ ಮಾಡಲಾಗಿದ್ದು, ಚಿಕ್ಕಬಳ್ಳಾಪುರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ವರದರಾಜ ಶಿಕ್ಷಣ ಸಂಸ್ಥೆಯಿಂದ ಎಂಒಯು ಒಪ್ಪಂದಕ್ಕೆ ಸಹಿ

**ತುಮಕೂರು:** ಪ್ರತಿಯೊಬ್ಬ ವಿದ್ಯಾರ್ಥಿಗಳಿಗೂ ವೈದ್ಯಕೀಯ ಕ್ಷೇತ್ರದಲ್ಲಿ ಉಜ್ವಲ ಭವಿಷ್ಯವನ್ನು ರೂಪಿಸಲು ಸಹಕಾರಿಯಾಗಿದೆ. ಉತ್ತಮ ಗುಣಮಟ್ಟದ ಶಿಕ್ಷಣ ನೀಡುವುದು ನಮ್ಮ ಸಂಸ್ಥೆಯ ಮುಖ್ಯ ಗುರಿಯಾಗಿದೆ. ವರದರಾಜ ಚಾರಿಟಬಲ್ ಟ್ರಸ್ಟ್ ಶೈಕ್ಷಣಿಕ ಕ್ಷೇತ್ರದಲ್ಲಿ 22 ವರ್ಷಗಳ ಯಶಸ್ವಿ ಪಯಣವನ್ನು ಪೂರೈಸಿದೆ. ವರದರಾಜ ಇನ್‌ಸ್ಟಿಟ್ಯೂಟ್ ಆಫ್ ಅಲೈಡ್ ಹೆಲ್ತ್ ಸೈನ್ಸ್ ಸಂಸ್ಥೆಯು ಬಿ.ಎಸ್ಸಿ ಎಂಎಲ್‌ಟಿ (ವೈದ್ಯಕೀಯ ಪ್ರಯೋಗಾಲಯ ತಂತ್ರಜ್ಞಾನ), ಬಿ.ಎಸ್ಸಿ ಒಟಿ ಮತ್ತು ಎಟಿ (ಶಸ್ತ್ರ ಚಿಕಿತ್ಸೆ ಮತ್ತು ಸಹಾಯಕ ತಂತ್ರಜ್ಞಾನ) ಕೋರ್ಸ್‌ಗಳನ್ನು ನೀಡುತ್ತಿದ್ದು, ವಿದ್ಯಾರ್ಥಿಗಳಿಗೆ ಪಾತ್ರ ಬಹಳ ಮುಖ್ಯವಾಗಿದೆ ಎಂದು ವರದರಾಜ ಶಿಕ್ಷಣ ಸಂಸ್ಥೆ ಕಾರ್ಯದರ್ಶಿಯಾದ ವರುಣ್ ಅಸ್ವತ್ಥನಾರಾಯಣ ತಿಳಿಸಿದ್ದಾರೆ.

ನಗರದ ಶೆಟ್ಟಿಹಳ್ಳಿ ಹೊರವಲಯದ ಜಯನಗರ ದಕ್ಷಿಣದಲ್ಲಿರುವ ವರದರಾಜ ಇನ್‌ಸ್ಟಿಟ್ಯೂಟ್ ಆಫ್ ಅಲೈಡ್ ಹೆಲ್ತ್ ಸೈನ್ಸ್ ಕಾಲೇಜಿನಲ್ಲಿ ಮೇ.24 ರಂದು ಶನಿವಾರ ಬೆಳಿಗ್ಗೆ 11 ಗಂಟೆಗೆ ಕಾಲೇಜಿನ ಆವರಣದಲ್ಲಿ ''ವಿದ್ಯಾರ್ಥಿಗಳಿಗೆ 100% ಉದ್ಯೋಗಾವಕಾಶ ಮತ್ತು ವಿದ್ಯಾರ್ಥಿಗಳ ತರಬೇತಿಗಾಗಿ



ಹೆಸರಾಂತ ಪ್ರಯೋಗಾಲಯಗಳೊಂದಿಗೆ ಒಪ್ಪಂದಕ್ಕೆ ಸಹಿ'' ಮಾಡಿಕೊಳ್ಳಲಾಗಿತ್ತು. ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿದ್ದ ವರದರಾಜ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್ಸ್ ನಿರ್ದೇಶಕರಾದ ಡಾ.ಮುಬಾರಕ್‌ರವರು ಮಾತನಾಡುತ್ತಾ ಸಂಸ್ಥೆಯು ಕೇವಲ ಶೈಕ್ಷಣಿಕ ವಿಷಯಗಳ ಮೇಲೆ ಮಾತ್ರ ಗಮನಹರಿಸದೆ, ವಿದ್ಯಾರ್ಥಿಗಳ ವೃತ್ತಿ ಮಾರ್ಗದರ್ಶನ, ತರಬೇತಿ ಮತ್ತು ಉದ್ಯೋಗ ನಿಯುಕ್ತಿಗೂ ಹೆಚ್ಚಿನ ಪ್ರಾಮುಖ್ಯತೆ ನೀಡುತ್ತದೆ. ವಿದ್ಯಾರ್ಥಿಗಳು ತಮ್ಮ ಕೋರ್ಸ್‌ನ ಕೊನೆಯ ವರ್ಷದಲ್ಲಿ ಉತ್ತಮ ಆಸ್ಪತ್ರೆಗಳಲ್ಲಿ ಉದ್ಯೋಗ ಪಡೆಯುವುದನ್ನು ಸಂಸ್ಥೆ ಖಚಿತಪಡಿಸುತ್ತದೆ ಎಂದರು. ಬಿ.ಎಸ್ಸಿ, ಎಂಎಲ್‌ಟಿ, ವೈದ್ಯಕೀಯ ಕ್ಷೇತ್ರದಲ್ಲಿ ಅವಕಾಶಗಳ ಕದ ತೆರೆಯುವ ಕೋರ್ಸ್ ಆಗಿದೆ ವರದರಾಜ ಇನ್‌ಸ್ಟಿಟ್ಯೂಟ್ ಆಫ್ ಅಲೈಡ್ ಹೆಲ್ತ್ ಸೈನ್ಸ್ ನೀಡುತ್ತಿರುವ ಬಿ.ಎಸ್ಸಿ, ಎಂಎಲ್‌ಟಿ ಕೋರ್ಸ್ ವೈದ್ಯಕೀಯ ಕ್ಷೇತ್ರದಲ್ಲಿ ಆಸಕ್ತಿ ಹೊಂದಿರುವ ವಿದ್ಯಾರ್ಥಿಗಳಿಗೆ ಅತ್ಯುತ್ತಮ ಆಯ್ಕೆಯಾಗಿದೆ. ರೋಗಗಳನ್ನು ಪತ್ತೆಹಚ್ಚಲು ಮತ್ತು ಅವುಗಳನ್ನು ನಿರ್ವಹಿಸಲು ಅಗತ್ಯವಾದ ಪ್ರಯೋಗಾಲಯ ಪರೀಕ್ಷೆಗಳ ಬಗ್ಗೆ ಈ ಕೋರ್ಸ್ ಸಮಗ್ರ ಜ್ಞಾನವನ್ನು ನೀಡುತ್ತದೆ. ಆಧುನಿಕ ವೈದ್ಯಕೀಯ ಬೆನ್ನೆಲುಬಾಗಿರುವ ವೈದ್ಯಕೀಯ ಪ್ರಯೋಗಾಲಯ ತಂತ್ರಜ್ಞಾನಕ್ಕೆ ಹೆಚ್ಚಿನ ಬೇಡಿಕೆಯಿದೆ ಎಂದರು.

ಬಿ.ಎಸ್ಸಿ, ಎಂಎಲ್‌ಟಿ ಕೋರ್ಸ್‌ನ ಪ್ರಮುಖ ಅಂಶಗಳು ಸಮಗ್ರ ಪಠ್ಯಕ್ರಮ ಮತ್ತು ಪ್ರಾಯೋಗಿಕ ತರಬೇತಿ, ಅನುಭವಿ ಮತ್ತು ಅರ್ಹ ಬೋಧಕ ಸಿಬ್ಬಂದಿ, ಸುಸಜ್ಜಿತ ಪ್ರಯೋಗಾಲಯಗಳು ಮತ್ತು ಅತ್ಯಾಧುನಿಕ ಉಪಕರಣಗಳು, ಹೆಸರಾಂತ ಆಸ್ಪತ್ರೆಗಳು ಮತ್ತು ಪ್ರಯೋಗಾಲಯಗಳಲ್ಲಿ ತರಬೇತಿ ಮತ್ತು ಇಂಟರ್ನ್‌ಶಿಪ್ ಅವಕಾಶಗಳು, 100% ಉದ್ಯೋಗಾವಕಾಶಗಳ ಭರವಸೆಯಾಗಿದೆ. ವರದರಾಜ ಇನ್ ಸ್ಟಿಟ್ಯೂಟ್ ಆಫ್ ಅಲೈಡ್ ಹೆಲ್ತ್ ಸೈನ್ಸ್ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣವನ್ನು ನೀಡುವ ಮೂಲಕ ಅವರನ್ನು ವೈದ್ಯಕೀಯ ಕ್ಷೇತ್ರದಲ್ಲಿ ಯಶಸ್ವಿ ವೃತ್ತಿಪರರನ್ನಾಗಿ ರೂಪಿಸಲು ಬದ್ಧವಾಗಿದೆ. ಬಿ.ಎಸ್ಸಿ, ಎಂಎಲ್‌ಟಿ ಕೋರ್ಸ್‌ಗೆ ಸೇರ ಬಯಸುವ ವಿದ್ಯಾರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯನ್ನು ಸಂಪರ್ಕಿಸಬಹುದು.

ಈ ಸಂದರ್ಭದಲ್ಲಿ ಹಿರಿಯ ಸ್ತ್ರೀರೋಗ ತಜ್ಞರು ಮತ್ತು ಕಸ್ತೂರ್ಬಾ ಆಸ್ಪತ್ರೆಯ ಸಂಸ್ಥಾಪಕರು ಹಾಗೂ ವರದರಾಜ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್ಸ್‌ನ ಅಧ್ಯಕ್ಷರಾದ ಡಾ.ದುರ್ಗಾದಾಸ್ ಅಸ್ವಥನಾರಾಯಣ ಮಾರ್ಗದರ್ಶನದಲ್ಲಿ ಕಾರ್ಯನಿರ್ವಹಿಸುತ್ತಿದೆ. ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಪ್ರೊ.ಉಮೇರಾ ಪರ್ವೀನ್ ಉಪಸ್ಥಿತರಿದ್ದರು.

# ದಲಿತರಿಂದಲೆ ಡಂಗೂರ ಸಾರಿಸಿ ಅವರನ್ನು ಬಹಿಷ್ಕರಿಸುವುದು ಯಾವನ್ಯಾಯ!

**ಮಾಗಡಿ:** ರಾಮನಗರ ಜಿಲ್ಲೆಹಾರೋಹಳ್ಳಿ ತಾಲೂಕು ಬನವಾಸಿ ಜಾತ್ರಾಮಹೋತ್ಸವದಲ್ಲಿ ದಲಿತರಿಗೂ ಅವಕಾಶ ಕೊಡಿ ಎಂಬ ಕಾರಣಕ್ಕೆ ಅಲ್ಲಿನ ಮೂರು ಗ್ರಾಮಗಳ ಸವರ್ಣಿಯರು ದಲಿತರನ್ನು ಬಹಿಷ್ಕರಿಸಿದ ಬಗ್ಗೆ ಖಂಡನೆ ಎಂದು ರಾಜ್ಯ ದಲಿತ ಸೇನೆ ಮತ್ತು ಲೋಕಜನಶಕ್ತಿ (ಪಾಸ್ವಾನ್) ಪಕ್ಷದ ಅಧ್ಯಕ್ಷ ಎಂ.ಎಸ್.ಜಗನ್ನಾಥ್ ಕಿಡಿಕಾರಿದರು.



ತಿರುಮಲೆ ಬಿಸಿಲಮಾರಮ್ಮನ ಗುಡಿಗೆ ಬಂದು ಕೈಮುಗಿದು ಪತ್ರಕರ್ತರೊಂದಿಗ ಮಾತನಾಡಿದರು. ಸ್ವಾತಂತ್ರ್ಯ ಬಂದು ವಜ್ರ ಮಹೋತ್ಸವ ಆಚರಿಸಲು ಡಾ ಅಂಬೇಡ್ಕರ್ ಸಮಾನತೆಯ ಸೂತ್ರದ ಸಂವಿಧಾನವನ್ನು ರಚಿಸಿ ದೇಶದ ಒಳಿತಿಗೆ ಶ್ರಮಿಸಿದ ಅವರ ಸಂವಿಧಾನವನ್ನು ಮಾತ್ರವಲ್ಲ ದೇಶದ ನೀತಿಗೆ ಅಗೌರವ ತರುವಂತಹ ಕೆಲಸ ಇಲ್ಲಿ ನಡೆದಿದೆ. ದಲಿತರು ಮಾತ್ರವಲ್ಲ ದೇಶದ ಎಲ್ಲಾ ಸಮುದಾಯದವರು ಖಂಡಿಸುವ ವಿಚಾರ ಇದು ಎಂದರು.

ಬನವಾಸಿ ಸ್ಥಳದ ಹೆಸರೆ ಎಷ್ಟು ಚೆನ್ನಾಗಿದೆ. ಆದರೆ ಇಲ್ಲಿನ ಮನಸುಗಳು ಸರಿಯಿಲ್ಲ.ದೇವರು ಸಮಾನತೆಯನ್ನು ಕೊಡುವುದಿಲ್ಲ. ಸಂವಿಧಾನ ಸಮಾನತೆಯ ಮಾತುಗಳನ್ನು ಬೋಧಿಸುತ್ತದೆ.ಅದನ್ನು ಪಾಲಿಸಿ ಸಾಕು.ಜಾತ್ರೆ ಉತ್ಸವದಿಂದ ದಲಿತರನ್ನು ದೂರವಿಡುವುದು ಸರಿಯಲ್ಲ.ಸಾಲದ್ದಕ್ಕೆ ದಲಿತರಿಗೆ ದಿನಸಿಕೊಡಬೇಡಿ,ಅವರು ಕರೆಯುವ ಹಾಲನ್ನು ಖರೀದಿಮಾಡಬೇಡಿ,ಕುಡಿಯುವ ನೀರನ್ನು ಕೊಡದಿರಿ.ಆರೀತಿ ಅವರಿಗೆ ಸಹಕರಿಸಿದರೆ ಅಂತಹವರಿಗೆ 10 ಸಾವಿರ ದಂಡ ವಿಧಿಸುವ ಬಹಿಷ್ಕರಿಸುವ ಡಂಗೂರವನ್ನು ದಲಿತನಿಗೆ ಹೆದರಿಸಿ ಸಾರಿಸುವ ಕೆಲಸ ನಡೆದಿರುವುದು ನಾಗರಿಕ ಸಮಾಜ ತಲೆ ತಗ್ಗಿಸುವಂತಹ ವಿಚಾರ.ಈ ಬಗ್ಗೆ ಗ್ರೇಟರ್ ಬೆಂಗಳೂರಿಗೆ ಕೇವಲ 20 ಕಿಮೀ ದೂರದ ಇಲ್ಲಿಯೆ ಈ ರೀತಿ ದಲಿತರಹಕ್ಕುಗಳಿಗೆ ಧಕ್ಕೆಯಾದರೆ ತೀರ ರಾಜ್ಯದ ಒಳಭಾಗದ ಹಳ್ಳಿಗಳಲ್ಲಿ ನಮ್ಮ ದಲಿತರ ದಮನ ಹೇಗಿರಬಹುದು ಎಂಬುದು ನನಗೆ ನೋವುಂಟು ಮಾಡುತ್ತಿದೆ. ತಾಲೂಕು, ಜಿಲ್ಲಾಸರಕಾರಿ ಆಡಳಿತ ಯಾರು ನಮ್ಮದಲಿತರನ್ನು ಬಹಿಷ್ಕರಿಸಿದರೋ ಅವರನ್ನು ಮೊದಲು ಬಂದಿಸಿ ಕ್ರಮಕೈಗೊಳ್ಳಲಿ. ಇಲ್ಲವಾದರೆ ಜಿಲ್ಲಾ ಕೇಂದ್ರದಲ್ಲಿ ನಮ್ಮ ಸಂಘಟನೆಯ ಮುಖಂಡರ ಜೊತೆ ಬೃಹತ್ ಪ್ರತಿಭಟನೆ ಮಾಡುವುದಾಗಿ ಎಚ್ಚರಿಸಿದರು.

ಮಾಗಡಿ ತಾಲೂಕು ಸೋಲೂರು ಹೋಬಳಿಯ ಮುಪ್ಪೇನಹಳ್ಳಿ ಮೂಲದ ಇವರು ಹಾರೋಹಳ್ಳಿ ಬನವಾಸಿ ಭೇಟಿಗೆ ಮುನ್ನ ಬಿಸಿಲಮಾರಮ್ಮನಿಗೆ ಪೂಜೆ ಸಲ್ಲಿಸಿ ಮಾತನಾಡಿದ್ದರು.

## ಸ್ವಯಂಘೋಷಣೆ ಮಾಡಿಕೊಳ್ಳಲು 28 ರವರೆಗೆ ಅವಕಾಶ

**ಮಂಡ್ಯ:** ಪರಿಶಿಷ್ಟ ಜಾತಿ ಒಳಮೀಸಲಾತಿ ವರ್ಗೀಕರಣಕುರಿತು ನ್ಯಾಯಮೂರ್ತಿ ಹೆಚ್.ಎನ್ .ನಾಗಮೋಹನ್‌ದಾಸ್, ಏಕಸದಸ್ಯ ವಿಚಾರಣಾಆಯೋಗದಿಂದ ಪರಿಶಿಷ್ಟ ಜಾತಿಗಳ ವಿವಿಧ ಅಂಶಗಳ ಬಗ್ಗೆ ದತ್ತಾಂಶಗಳನ್ನು ಶೇಖರಿಸಿ ಸಮೀಕ್ಷೆಯನ್ನು ಜಿಲ್ಲಾಡಳಿತದ ವತಿಯಿಂದ ಮಂಡ್ಯಜಿಲ್ಲಾ ವ್ಯಾಪ್ತಿಯಲ್ಲಿ ಈಗಾಗಲೇ ಪ್ರಾರಂಭಿಸಲಾಗಿರುತ್ತದೆ. ಮನೆ ಮನೆಯ ಭೇಟಿ ಸಂದರ್ಭದಲ್ಲಿ ಮಾಹಿತಿಯನ್ನು ನೀಡದವರು ನೇರವಾಗಿಆನ್‌ಲೈನ್ ಮೂಲಕ ಸ್ವಯಂಘೋಷ್ಣಣೆ ಮಾಡಿಕೊಳ್ಳಲು ಮೇ 28 ರವರೆಗೆ ಅವಕಾಶ ಕಲ್ಪಿಸಲಾಗಿದೆ.ಆನ್ ಲೈನ್ ನೋಂದಣಿಗಾಗಿಆಧಾರ್‌ಕಾರ್ಡ್ ಹಾಗೂ ಜಾತಿ ಪ್ರಮಾಣ ಪತ್ರಆರ್.ಡಿ ನಂಬರ್‌ಅವಶ್ಯಕವಾಗಿರುತ್ತದೆ. ಸಾಮಾಜಿಕವಾಗಿ, ಆರ್ಥಿಕವಾಗಿ ಮತ್ತು ಶೈಕ್ಷಣಿಕವಾಗಿ ಹಿಂದುಳಿದವರನ್ನು ಗುರುತಿಸಲು ಪರಿಶಿಷ್ಟಜಾತಿಗಳಲ್ಲಿ(ಎಸ್.ಸಿ) ಆಂತರಿಕ ಮೀಸಲಾತಿಯ ಬೇಡಿಕೆಗಳನ್ನು ಪರಿಹರಿಸಲು ಸರ್ಕಾರಕೈಗೊಂಡಒಂದು ಮಹತ್ವಕಾಂಕ್ಷಿ ಹಾಗೂ ದಿಟ್ಟ ಹೆಜ್ಜೆಯಾಗಿರುತ್ತದೆ. ನ್ಯಾಯಯುತ ಮೀಸಲಾತಿ ಹಂಚಿಕೆಗಾಗಿ ಸಮೀಕ್ಷದಾರರಿಗೆ ಪರಿಶಿಷ್ಟ ಜಾತಿಗೆ ಸೇರಿದವರುತಮ್ಮ ಮೂಲ ಜಾತಿ, ಶಿಕ್ಷಣ, ವರಮಾನ, ಉದ್ಯೋಗ ಮತ್ತುಇನ್ನಿತರ ನಿಖರ ಮಾಹಿತಿ ನೀಡುವುದು ನಿಮ್ಮೆಲ್ಲರಆದ್ಯಕರ್ತವ್ಯವಾಗಿರುತ್ತದೆಂದು ಸಮಾಜಕಲ್ಯಾಣಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಜಾಪ್ರಭುತ್ವದಲ್ಲಿ ಜನರೇ ಮಾಲೀಕರು

**ಕೆ.ಆರ್.ನಗರ / ಬೆಂಗಳೂರು:** ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ಜನರೇ ಮಾಲೀಕರು. ಕ್ಷೇತ್ರಗಳ ಅಭಿವೃದ್ಧಿ, ಜನರ ಸಮಸ್ಯೆಗಳಿಗೆ ಪರಿಹಾರ ಒದಗಿಸುವುದು ಸರ್ಕಾರದ ಹಾಗೂ ಶಾಸಕರ ಕರ್ತವ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.



ಕೆ.ಆರ್. ನಗರ ವಿಧಾನಸಭಾ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಿ ಮಾತನಾಡಿದ ಮುಖ್ಯಮಂತ್ರಿಗಳು, ಕೆ.ಆರ್. ನಗರ ವಿಧಾನಸಭಾ ಕ್ಷೇತ್ರಕ್ಕೆ 404 ಕೋಟಿ ರೂ.ಗಳ ಶಂಕುಸ್ಥಾಪನೆ, 109 ಕೋಟಿ ರೂ.ಗಳ ವೆಚ್ಚದ ಕಾಮಗಾರಿಗಳ ಉದ್ಘಾಟನೆ ಸೇರಿ ಒಟ್ಟು 513 ಕೋಟಿ ರೂ.ಗಳ ವೆಚ್ಚದ ಕಾಮಗಾರಿಗಳಿಗೆ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿದ್ದು, ಇದಕ್ಕೆ ಸ್ಥಳೀಯ ಶಾಸಕರಾದ ರವಿಶಂಕರ್ ಕಾರಣ ಎಂದು ತಿಳಿಸಿದರು.

ಸಣ್ಣ ನೀರಾವರಿ ಸಚಿವರು 197 ಕೋಟಿ ರೂ.ಗಳ ವೆಚ್ಚದ ಶಂಕುಸ್ಥಾಪನೆ ಮತ್ತು ಉದ್ಘಾಟನೆಯನ್ನು ತಮ್ಮ ಇಲಾಖೆಯೊಂದರಲ್ಲಿಯೇ ಮಾಡಿದ್ದಾರೆ. ಆರೋಗ್ಯ ಇಲಾಖೆಯಡಿ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಉದ್ಘಾಟನೆ ನೆರವೇರಿದೆ ಎಂದರು.

ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದ್ದರಿಂದ ಅಭಿವೃದ್ಧಿ ಕಾರ್ಯಗಳಿಗೆ ಈ ಸರ್ಕಾರದ ಬಳಿ ಹಣವಿಲ್ಲ ಎಂದು ವಿರೋಧ ಪಕ್ಷದವರು ಟೀಕಿಸುತ್ತಾರೆ. ಹಣ ಇಲ್ಲದಿದ್ದರೆ ಸರ್ಕಾರವು 513 ಕೋಟಿ ರೂ.ಗಳ ಕಾಮಗಾರಿಗಳನ್ನು ಇಲ್ಲಿ ಕೈಗೊಳ್ಳಲು ಸಾಧ್ಯವಾಗುತ್ತಿತ್ತೇ ಎಂದು ಪ್ರಶ್ನಿಸಿದರು.

ಪಂಚ ಗ್ಯಾರಂಟಿ ಯೋಜನೆಗಳನ್ನು ನಮ್ಮ ಸರ್ಕಾರ ಜಾರಿ ಮಾಡಿದೆ. ಜನರು ಈ ಯೋಜನೆಗಳ ಸದುಪಯೋಗಪಡಿಸಿಕೊಳ್ಳುತ್ತಿರುವಾಗ ಸುಳ್ಳು ಎಂದು ವಿರೋಧ ಪಕ್ಷದವರು ಹೇಗೆ ಹೇಳುತ್ತಾರೆ ಎಂದರು.

ರಾಜ್ಯದ 3.50 ಕೋಟಿ ಮಹಿಳೆಯರು ಯಾವುದೇ ಬೇಧ ಭಾವವಿಲ್ಲದೇ ಶಕ್ತಿ ಯೋಜನೆಯನ್ನು ಬಳಸಿಕೊಂಡಿದ್ದಾರೆ. ಈವರೆಗೆ 500 ಕೋಟಿ ಮಹಿಳೆಯರು ಉಚಿತವಾಗಿ ಓಡಾಡಿದ್ದಾರೆ. ಪ್ರತಿ ದಿನ 50-60 ಲಕ್ಷ ಮಹಿಳೆಯರು ಇದರ ಪ್ರಯೋಜನ ಪಡೆಯುತ್ತಿದ್ದಾರೆ ಎಂದರು.

ಜಿಎಸ್ ಟಿ ಸಂಗ್ರಹಣೆಯಲ್ಲಿ ಕರ್ನಾಟಕ ಎರಡನೇ ಸ್ಥಾನದಲ್ಲಿದೆ. ಮುಂದಿನ ವರ್ಷ ನಾವು ಮೊದಲ ಸ್ಥಾನಕ್ಕೆ ಬರುವ ಪ್ರಯತ್ನ ಮಾಡುತ್ತೇವೆ ಎಂದ ಮುಖ್ಯಮಂತ್ರಿಗಳು, ಕಬಿನಿ ಸೇತುವೆಗೆ 25 ಕೋಟಿ ರೂ.ಗಳ ಅನುದಾನವನ್ನು ಒದಗಿಸಲಾಗಿದೆ. ಚುಂಚನಕಟ್ಟೆ ಶ್ರೀರಾಮ ಸಕ್ಕರೆ ಕಾರ್ಖಾನೆಯನ್ನು 40 ವರ್ಷಗಳ ಅವಧಿಗೆ ಗುತ್ತಿಗೆ ನೀಡಲಾಗಿದೆ. ಸಾಗರಕಟ್ಟೆ ಸೇತುವೆ, ರಸ್ತೆ ಅಗಲೀಕರಣ ಕಾಮಗಾರಿಗಳಿಗೆ ಅನುದಾನ ಒದಗಿಸಲಾಗಿದೆ. ಎಲ್ಲರೂ ಒಂದೇ ತಾಯಿಯ ಮಕ್ಕಳಂತೆ ಇರಬೇಕೆಂಬುದು ಸರ್ಕಾರದ ಆಶಯ ಎಂದರು. ಶಕ್ತಿ ಯೋಜನೆಯಿಂದ ಧರ್ಮಸ್ಥಳ ಕ್ಷೇತ್ರಕ್ಕೆ ಭಕ್ತಾದಿಗಳ ಸಂಖ್ಯೆ ಹೆಚ್ಚಾಗಿರುವುದನ್ನು ಪ್ರಶಂಸಿಸಿ ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆಯವರು ಪತ್ರ ಬರೆದಿದ್ದರು. ಗ್ಯಾರಂಟಿ ಯೋಜನೆಗಳು ಜನರ ಮೆಚ್ಚುಗೆಗೆ ಪಾತ್ರವಾಗಿದೆ. ಇತ್ತೀಚೆಗೆ ಹೊಸಪೇಟೆಯಲ್ಲಿ ನಡೆದ ಸರ್ಕಾರದ ಎರಡು ವರ್ಷದ ಕಾರ್ಯಕ್ರಮ ಯಶಸ್ವಿಯಾಗಿ ನಡೆದು, ಸುಮಾರು 3 ರಿಂದ 4 ಲಕ್ಷ ಜನ ಆಗಮಿಸಿದ್ದರು. ಆದರೆ ವಿರೋಧ ಪಕ್ಷದವರು ಜನಾಕ್ರೋಶ ಕಾರ್ಯಕ್ರಮ ಮಾಡಿ, ಅಭಿವೃದ್ಧಿ ನಡೆಯುತ್ತಿಲ್ಲ, ಬೆಲೆ ಏರಿಕೆಯಾಗಿದೆ ಎಂಬ ಸುಳ್ಳು ಪ್ರಚಾರ ಮಾಡುತ್ತಿದ್ದಾರೆ. ವಿರೋಧ ಪಕ್ಷದವರು ತಮ್ಮ ಅಧಿಕಾರಾವಧಿಯಲ್ಲಿ ಯಾವ ಕೆಲಸವನ್ನೂ ಮಾಡದೇ, ನಮ್ಮ ಸರ್ಕಾರದ ಯಶಸ್ಸಿಗೆ ಮರುಗುತ್ತಿದ್ದಾರೆ. ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ತಕ್ಷಣ ಶಕ್ತಿ ಯೋಜನೆ, ನಂತರ ಜುಲೈ ಮತ್ತು ಆಗಸ್ಟ್ ತಿಂಗಳಲ್ಲಿ ಅನ್ನಭಾಗ್ಯ, ಗೃಹಜ್ಯೋತಿ ಹಾಗೂ ಗೃಹಲಕ್ಷ್ಮಿ ಯೋಜನೆಗಳನ್ನು ಜಾರಿಗೆ ತರಲಾಯಿತು. ತದನಂತರ ಜನವರಿ 2024 ರಲ್ಲಿ ಯುವನಿಧಿಯನ್ನು ಜಾರಿಗೊಳಿಸಲಾಗಿದ್ದು, ಇದಕ್ಕಾಗಿ 52000 ಕೋಟಿ ರೂ.ಗಳನ್ನು ವೆಚ್ಚ ಮಾಡಲಾಗಿದೆ ಎಂದರು.**ನುಡಿದಂತೆ ನಡೆದ ಸರ್ಕಾರದ ಮೇಲೆ ಜನರ ವಿಶ್ವಾಸ:** ಇದುವರೆಗೆ ಗ್ಯಾರಂಟಿಗಳಿಗೆ 90 ಸಾವಿರ ಕೋಟಿ ರೂ.ಗಳು ವೆಚ್ಚವಾಗಿದೆ. 60 ಸಾವಿರ ಕೋಟಿ ರೂ.ಗಳಿಗೆ ವಿವಿಧ ಪಿಂಚಣಿಗಳು, 7 ನೇ ವೇತನ ಆಯೋಗ, ವಿದ್ಯುತ್ ಸಬ್ಸಿಡಿ ಸೇರಿದಂತೆ ವಿವಿಧ ಜನೋಪಯೋಗಿ ಯೋಜನೆಗಳಿಗೆ ಒಟ್ಟು 1.12 ಲಕ್ಷ ಕೋಟಿಗಳನ್ನು ವೆಚ್ಚಮಾಡಲಾಗಿದೆ. ರೂ.2.06 ಲಕ್ಷ ಕೋಟಿಗಳ ಸವಲತ್ತುಗಳನ್ನು ಕೃಷಿಯ ವಿವಿಧ ಯೋಜನೆಗಳಿಗೆ ನೀಡಲಾಗಿದೆ. ಮೈಸೂರು ಭಾಗದ ಕೃಷಿಕರು ಕೃಷಿಯನ್ನು ವೈಜ್ಞಾನಿಕವಾಗಿ ಮಾಡಬೇಕು. ಉತ್ತಮ ಯಂತ್ರೋಪಕರಣ, ಬೀಜ ಗೊಬ್ಬರ ನೀಡಲಾಗುತ್ತಿದೆ. ರೈತರು ಯಂತ್ರೋಪಕರಣ ಬಳಸಿ, ಉತ್ತಮ ರೀತಿಯಲ್ಲಿ ಬೆಳೆ ಬೆಳೆಯಬೇಕು. ಜನಾಕ್ರೋಶ ಕೇವಲ ರಾಜಕೀಯವಾಗಿಯೇ ಹೊರತು, ಜನರಲ್ಲಿ ಆಕ್ರೋಶ ಇಲ್ಲ. ನುಡಿದಂತೆ ನಡೆಯುವ ನಮ್ಮ ಸರ್ಕಾರದ ಮೇಲೆ ಜನರು ತಮ್ಮ ವಿಶ್ವಾಸವನ್ನು ತೋರಿದ್ದಾರೆ ಎಂದರು.

ಹಿಂದೆ ನಮ್ಮ ಸರ್ಕಾರ ನೀಡಿದ್ದ 165 ಭರವಸೆಗಳಲ್ಲಿ 158 ಭರವಸೆಗಳನ್ನು ಈಡೇರಿಸಿದ್ದೇವೆ. ಪ್ರಸ್ತುತ ನಮ್ಮ ಸರ್ಕಾರ 593 ಕಾರ್ಯಕ್ರಮಗಳನ್ನು ಪ್ರಣಾಳಿಕೆಯಲ್ಲಿ ತಿಳಿಸಿದ್ದು, 242 ಭರವಸೆಗಳನ್ನು ಈಡೇರಿಸಿದ್ದೇವೆ. ನಮ್ಮ ಸರ್ಕಾರ ಇನ್ನುಳಿದ ವರ್ಷಗಳಲ್ಲಿ ಉಳಿದ ಎಲ್ಲ ಭರವಸೆಗಳನ್ನೂ ಈಡೇರಿಸಲಿದೆ ಎಂದರು.

ಕೆ.ಆರ್.ನಗರದ ಶಾಸಕರು ಪ್ರಾಮಾಣಿಕರಾಗಿದ್ದು, ಕ್ಷೇತ್ರದ ಒಳಿತಿಗೆ ಶ್ರಮಿಸುತ್ತಿದ್ದಾರೆ. ಅವರನ್ನು ಮುಂದಿನ ಚುನಾವಣೆಯಲ್ಲಿ ಬೆಂಬಲಿಸಿ ಎಂದು ಜನರಲ್ಲಿ ಮುಖ್ಯಮಂತ್ರಿಗಳು ಮನವಿ ಮಾಡಿದರು. ಹಾಲಿನ ದರ ಏರಿಕೆಯಾಗಿದ್ದು, ಹೆಚ್ಚಿನ ಮೊತ್ತ ರೈತರಿಗೆ ತಲುಪುತ್ತಿದೆಯೇ ಹೊರತು, ಸರ್ಕಾರದ ಬೊಕ್ಕಸಕ್ಕೆ ಬರುತ್ತಿಲ್ಲ. ನೆರೆರಾಜ್ಯಗಳಿಗೆ ಹೋಲಿಸಿದರೆ, ಕರ್ನಾಟಕದಲ್ಲಿ ಹಾಲಿನ ದರ ಕಡಿಮೆಯಿದೆ. ವಿರೋಧ ಪಕ್ಷದವರು ಕೇಂದ್ರದಲ್ಲಿ ಹೆಚ್ಚಿಸಿರುವ ದರಗಳ ಬಗ್ಗೆ ಮಾತನಾಡುವುದಿಲ್ಲ ಎಂದರು.

# ಮೆಟ್ರೋದಲ್ಲಿ ಯುವತಿಯರ ವೀಡಿಯೋ ರೆಕಾರ್ಡ್ ಮಾಡಿ ವಿಕೃತಿ ಮರೆದಿದ್ದವ ಅರೆಸ್ಟ್!

**ಬೆಂಗಳೂರು:** ನಮ್ಮ ಮೆಟ್ರೋದಲ್ಲಿ ಪ್ರಯಾಣಿಸುವ ಯುವತಿಯರ ವಿಡಿಯೋ ರೆಕಾರ್ಡ್ ಮಾಡಿ ಸಾಮಾಜಿಕ ಜಾಲತಾಣದಲ್ಲಿ ಅಪ್ಲೋಡ್ ಮಾಡಿ ವಿಕೃತಿ ಮೆರೆದಿದ್ದವನನ್ನು ಪೊಲೀಸರು ಬಂಧಿಸಿದ್ದಾರೆ. ಟಜಜಣಡಿಅಥ್ಖಿಥಿಇ ಖಾತೆಯಿಂದ 13ಕ್ಕೂ ಹೆಚ್ಚು ವಿಡಿಯೋ ಅಪ್‌ಲೋಡ್ ಮಾಡಿದ್ದ ದಿಗಂತ್ ಎಂಬಾತನನ್ನ ಬನಶಂಕರಿ ಪೊಲೀಸರು ಬಂಧಿಸಿದ್ದಾರೆ. ಹಾವೇರಿ ಮೂಲದ ದಿಗಂತ್‌ನನ್ನು ನಿನ್ನೆ ಬೆಂಗಳೂರಿನ ಪೀಣ್ಯ ಬಳಿ ಬಂಧನ ಮಾಡಲಾಗಿದೆ.



ಟಜಜಣಡಿಅಥ್ಖಿಥಿಇ ಖಾತೆಯಿಂದ 13ಕ್ಕೂ ಹೆಚ್ಚು ವಿಡಿಯೋ ಅಪ್‌ಲೋಡ್ ಮಾಡಲಾಗಿತ್ತು. ಈ ಖಾತೆಯನ್ನು 5,538 ಮಂದಿ ಫಾಲೋ ಮಾಡುತ್ತಿದ್ದು, ಮೆಟ್ರೋ ರೈಲಿನ ಒಳಗೆ, ನಿಲ್ದಾಣದಲ್ಲಿ ಹುಡುಗಿಯರ ಆಕ್ಷೇಪಾರ್ಹ ರೀತಿಯ ವಿಡಿಯೋಗಳನ್ನು ರೆಕಾರ್ಡ್ ಮಾಡಲಾಗಿತ್ತು. ಈ ಖಾತೆಯ ವಿರುದ್ಧ ಸಾಮಾಜಿಕ ಜಾಲತಾಣದಲ್ಲಿ ಆಕ್ರೋಶ ವ್ಯಕ್ತವಾದ ಬೆನ್ನಲ್ಲೇ ವಿಡಿಯೋಗಳು ಡಿಲೀಟ್ ಆಗಿದೆ. ಈ ಸಂಬಂಧ ಇನ್‌ಸ್ಟಾ ಪೇಜ್ ವಿರುದ್ಧ ಬನಶಂಕರಿ ಠಾಣೆ ಪೊಲೀಸರು ಸ್ವಯಂಪ್ರೇರಿತ ಪ್ರಕರಣ ದಾಖಲು ಮಾಡಿಕೊಂಡು ವಿಡಿಯೋ ಅಪ್ಲೋಡ್ ಮಾಡಿದವರ ಪತ್ತೆಗೆ ಬಲೆ ಬೀಸಿದ್ದರು. ಐಟಿ ಆಕ್ಟ್ 2008 ಸೆಕ್ಷನ್ 67, ಬಿಎನ್‌ಎಸ್ 78(2)ರಡಿ ಬನಶಂಕರಿ ಠಾಣೆ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ. ಇನ್ನು ಈ ಘಟನೆ ಬಗ್ಗೆ ಕೆಲವರು ಸಾಮಾಜಿಕ ಜಾಲತಾಣಗಳಲ್ಲಿ ಧ್ವನಿ ಎತ್ತಿ ತೀವ್ರ ವಿರೋಧ ವ್ಯಕ್ತಪಡಿಸಿದ್ದರು. ಅಪರಿಚಿತನೋರ್ವ ಇನ್‌ಸ್ಟಾಗ್ರಾಂನಲ್ಲಿ ಹುಡುಗಿಯರ ಆಕ್ಷೇಪಾರ್ಹ ವಿಡಿಯೋಗಳನ್ನು ಮಾಡಿ ಅಪ್ಲೋಡ್ ಮಾಡುತ್ತಿದ್ದಾನೆ. ನಾಳೆ ಈ ವಿಡಿಯೋಗಳಲ್ಲಿ ನಮ್ಮ ಅಕ್ಕ, ತಂಗಿಯರು ಇರಬಹುದು ಹುಷಾರಾಗಿರಿ. ಮೊದಲು ಈ ಖಾತೆಯನ್ನು ರಿಪೋರ್ಟ್ ಮಾಡಿ. ಬೆಂಗಳೂರು ನಗರ ಪೊಲೀಸರಿಗೂ ಟ್ಯಾಗ್ ಮಾಡಿ. ಆದಷ್ಟು ಬೇಗ ಈ ಖಾತೆಯನ್ನು ತೆಗೆಸಲೇಬೇಕು' ಎಂದು ಒಬ್ಬರು ಹೇಳಿದ್ದರು.

ಬೆಂಗಳೂರಿನ 6 ಮೆಟ್ರೋ ನಿಲ್ದಾಣಗಳಲ್ಲಿ ಎಐ ಆಧಾರಿತ ಸಿಸಿಟಿವಿ ಕಣ್ಗಾವಲು ಅಲ್ಲದೇ ಈ ಬಗ್ಗೆ ಕೇಂದ್ರ ಬಿಜೆಪಿ ಸಂಸದ ಪಿಸಿ ಮೋಹನ್ ಟ್ವೀಟ್ ಮಾಡಿದ್ದು, ಇದು ಆಘಾತಕಾರಿ ಸಂಗತಿಯಾಗಿದೆ. ಇದು ಭಯಾನಕ ಅಪರಾಧ ಮಾತ್ರವಲ್ಲ, ಗಂಭೀರ ಅಪರಾಧವೂ ಆಗಿದೆ. ತಕ್ಷಣ ಬೆಂಗಳೂರು ಪೊಲೀಸರು ಕ್ರಮಕೈಗೊಳ್ಳುವಂತೆ ಆಗ್ರಹಿಸಿದ್ದರು. ಇದರಿಂದ ಎಚ್ಚೆತ್ತ ಬನಶಂಕರಿ ಠಾಣೆ ಪೊಲೀಸರು ಸುಮಟೋ ಕೇಸ್ ದಾಖಲಿಸಿಕೊಂಡಿದ್ದರು.

# ರಾಮನಗರ ಹೆಸರು ಬದಲಾವಣೆ ರಿಯಲ್ ಎಸ್ಟೇಟ್‌ನ ಕರಪತ್ರದಂತೆ

**ಬೆಂಗಳೂರು:** ರಾಮನಗರ ಜಿಲ್ಲೆಯ ಹೆಸರನ್ನು ಬೆಂಗಳೂರು ದಕ್ಷಿಣ ಅಂತ ಮರು ನಾಮಕರಣ ಮಾಡಿರೋ ಸರ್ಕಾರದ ನಡೆಗೆ ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಕಿಡಿಕಾರಿದ್ದಾರೆ. ಎಕ್ಸ್‌ನಲ್ಲಿ ಪೋಸ್ಟ್ ಮಾಡುವ ಮೂಲಕ ಸರ್ಕಾರದ ನಿರ್ಧಾರವನ್ನು ಖಂಡಿಸಿ, ರಿಯಲ್ ಎಸ್ಟೇಟ್ ಯೋಜನೆಯ ಕರಪತ್ರದಂತೆ ಮರು ನಾಮಕರಣ ಮಾಡಲಾಗುತ್ತಿದೆ ಎಂದು ಗುಡುಗಿದ್ದಾರೆ. ರಾಮನಗರವನ್ನು ಬೆಂಗಳೂರು ದಕ್ಷಿಣ ಎಂದು ಬದಲಾಯಿಸುವುದು ಅಭಿವೃದ್ಧಿಯಲ್ಲ, ಅದು ಒಂದು ಫಲಕ ಬದಲಾವಣೆ ಮಾತ್ರ. ಐತಿಹಾಸಿಕವಾಗಿ ಆಳವಾದ ಬೇರುಗಳು ಮತ್ತು ಇತಿಹಾಸ ಹೊಂದಿರುವ ಜಿಲ್ಲೆಯನ್ನು ರಿಯಲ್ ಎಸ್ಟೇಟ್ ಯೋಜನೆಯ ಕರಪತ್ರದಂತೆ ಮರುನಾಮಕರಣ ಮಾಡಲಾಗುತ್ತಿದೆ.

**ಎಕ್ಸ್‌ನಲ್ಲಿ ಏನಿದೆ?:** ರಾಮನಗರವನ್ನು ಬೆಂಗಳೂರು ದಕ್ಷಿಣ ಎಂದು ಬದಲಾಯಿಸುವುದು ಅಭಿವೃದ್ಧಿಯಲ್ಲ, ಅದು ಒಂದು ಫಲಕ ಬದಲಾವಣೆ ಮಾತ್ರ. ಐತಿಹಾಸಿಕವಾಗಿ ಆಳವಾದ ಬೇರುಗಳು ಮತ್ತು ಇತಿಹಾಸ ಹೊಂದಿರುವ ಜಿಲ್ಲೆಯನ್ನು ರಿಯಲ್ ಎಸ್ಟೇಟ್ ಯೋಜನೆಯ ಕರಪತ್ರದಂತೆ ಮರುನಾಮಕರಣ ಮಾಡಲಾಗುತ್ತಿದೆ ಕಿಡಿಕಾರಿದ್ದಾರೆ.

ಊರ ಹೆಸರು ಮರುನಾಮಕರಣವು ಬೆಳವಣಿಗೆಗೆ ಮಾಂತ್ರಿಕ ದಂಡವಾಗಿದ್ದರೆ, ಕನಕಪುರವನ್ನು ಕೌಲಲಾಂಪುರ್ ಎಂದು ಮರುನಾಮಕರಣ ಮಾಡಿ ಈಗ ಅಂತರರಾಷ್ಟ್ರೀಯ ನಗರವಾಗಿ ಪರಿವರ್ತಿಸಬಹುದಿತ್ತು. ಆದರೆ ದುಃಖಕರವೆಂದರೆ, ನಿಮ್ಮ ಹೊಸ ನಾಮಕರಣದಿಂದ ರಸ್ತೆ ಗುಂಡಿಗಳು ಸುಧಾರಣೆ ಕಾಣುವುದಿಲ್ಲ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಕಳೆದ 2 ವರ್ಷಗಳ ಕಾಂಗ್ರೆಸ್ ಆಡಳಿತದಲ್ಲಿ ರಾಮನಗರದಲ್ಲಿ ಒಂದೇ ಒಂದು ಅಭಿವೃದ್ಧಿ ಯೋಜನೆಯೂ ಆರಂಭಗೊಂಡಿಲ್ಲ. ನೀವು ರಾಜಕೀಯ ಹೋರ್ಡಿಂಗ್‌ಗಳನ್ನೇ ಮೂಲ ಸೌಕರ್ಯ ಅಂದುಕೊಂಡಂತಿದೆ. ಇದೇ ರೀತಿ ಮುಂದುವರೆದರೆ, ಮಾನ್ಯ ಡಿ.ಕೆ ಶಿವಕುಮಾರ್ ಅವರು ತಮ್ಮನ್ನು ಡಿ.ಕೆ ಸಿಎಂ ಕುಮಾರ್ ಎಂದು ಮರುನಾಮಕರಣ ಮಾಡಬಹುದು. ಏಕೆಂದರೆ ನಾಯಕತ್ವ ಇಲ್ಲದಿದ್ದಾಗ, ಬ್ರ್ಯಾಂಡಿಂಗ್ ಮಾತ್ರ ಪ್ರಣಾಳಿಕೆಯಾಗುತ್ತದೆ ಎಂದು ಟೀಕಿಸಿದ್ದಾರೆ.

## ಪ್ರವೇಶಾತಿಗೆ ಅರ್ಜಿ ಆಹ್ವಾನ

**ರಾಮನಗರ:** ಕನಕಪುರ ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳಲ್ಲಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪ.ಜಾ/ಪ.ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2025-26ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು 2025ರ ಜೂನ್ 16 ರೊಳಗೆ ಸಲ್ಲಿಸಬೇಕು.ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ ಇ-ಮೇಲ್ ಮುಖಾಂತರ ಅಥವಾ ಜಿಲ್ಲಾ/ತಾಲ್ಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬೇಕು. ಹೆಚ್ಚಿನ ಮಾಹಿತಿಗೆ ಸಹಾಯವಾಣಿ ಸಂಖ್ಯೆ: 080-27522254 ಅಥವಾ 9902104737, 9036858659, 8660808703, 9731151748 ಅನ್ನು ಸಂಪರ್ಕಿಸುವಂತೆ ಕನಕಪುರ ತಾಲ್ಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲ್ಲೂಕು ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಿಗೆ ಅರ್ಜಿ ಆಹ್ವಾನ

**ಮೈಸೂರು:** ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಇಲಾಖೆ ವತಿಯಿಂದ ಮೈಸೂರು ತಾಲ್ಲೂಕಿನ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ಕಲ್ಪಿಸಲು ಆನ್‌ಲೈನ್ ವಿಳಾಸಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಸಲ್ಲಿಸಲು ಜೂನ್ 16 ರವರೆಗೆ ಕೊನೆಯ ದಿನಾಂಕವಾಗಿರುತ್ತದೆ ಎಂದು ಮೈಸೂರು ತಾಲ್ಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಹಿರಂಗ ಹರಾಜು

**ಕೋಲಾರ:** ಕೋಲಾರ ತೋಟಗಾರಿಕೆ ಕಾಲೇಜಿನ ಟಮಕ ಹಲಸು ಕ್ಷೇತ್ರದಲ್ಲಿರುವ ಹಲಸು ಮರಗಳ ಪ್ರಸಕ್ತ ಸಾಲಿನ ಹಲಸು ಫಸಲನ್ನು ಮೇ 29 ರಂದು ಬೆಳಿಗ್ಗೆ 10.00 ಗಂಟೆಗೆ ಬಹಿರಂಗ ಹರಾಜಿನಲ್ಲಿ ವಿಲೇವಾರು ಮಾಡಲಾಗುವುದು. ಇಚ್ಚೆಯುಳ್ಳ ವ್ಯಾಪಾರಿಗಳು ಹರಾಜು ಪ್ರಕ್ರಿಯೆಯಲ್ಲಿ ರೂ.10,000/- ಮುಂಗಡ ಠೇವಣಿಯನ್ನು ನಗದು ರೂಪದಲ್ಲಿ ಅದೇ ದಿನ ಹರಾಜಿಗೂ ಮುನ್ನ ಪಾವತಿಸಿ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ಡಾ.ನಾಗರಾಜ ಕೆ.ಎಸ್. ಮೊ.ಸಂ 7026112404ಯನ್ನು ಸಂಪರ್ಕಿಸಬಹುದು ಎಂದು ತೋಟಗಾರಿಕಾ ಮಹಾವಿದ್ಯಾಲಯದ ಡೀನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಗೌರಿಬಿದನೂರು ತಾಲ್ಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಜೂನ್ 20 ರೊಳಗೆ ಸಲ್ಲಿಸಬಹುದು. ತಾಲ್ಲೂಕು ವ್ಯಾಪ್ತಿಯಲ್ಲಿನ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಕ್ಕೆ ಪಿ.ಯು.ಸಿ, ಐ.ಟಿ.ಐ ಮತ್ತು ಡಿಪ್ಲೋಮಾ ಕೋರ್ಸ್ ಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು 2025-2026 ನೇ ಸಾಲಿಗೆ ವಿದ್ಯಾರ್ಥಿನಿಲಯದಲ್ಲಿ ಪ್ರವೇಶ ಪಡೆಯಲು ಪ್ರವರ್ಗ-2ಎ, 2ಬಿ, 3ಎ, 3ಬಿ ವರ್ಗಗಳ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನ ಮಿತಿ ರೂ.1.00 ಲಕ್ಷ ಹಾಗೂ ಪ್ರವರ್ಗ-1, ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳಿಗೆ ರೂ.2.50 ಲಕ್ಷ ನಿಗದಿಪಡಿಸಿದ್ದು, ಆನ್‌ಲೈನ್ ಮೂಲಕ ಕಡ್ಡಾಯವಾಗಿ ಅಪ್ ಲೋಡ್ ಮಾಡಬೇಕಾದ ದಾಖಲೆಗಳು ಮತ್ತು ಇತ್ಯಾದಿ ವಿವರಗಳಿಗೆ ಸಂಪರ್ಕಿಸಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ವೆಬ್ ಸೈಟ್‌ಗೆ ಭೇಟಿ ನೀಡಬಹುದೆಂದು ಗೌರಿಬಿದನೂರು ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

## ಯುವತಿ ನಾಪತ್ತೆ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ತಾಲ್ಲೂಕಿನ ಬೋಯಿನಹಳ್ಳಿ ಗ್ರಾಮದ ನಿವಾಸಿ ನವ್ಯ, 20 ವರ್ಷದ ಯುವತಿ ಚಿಕ್ಕಬಳ್ಳಾಪುರ ನಗರ ಪ್ಯಾರಾ ಮೆಡಿಕಲ್ ಕಾಲೇಜಿನಲ್ಲಿ ತೃತೀಯ ವರ್ಷದ ಡಯಾಲಿಸಿಸ್ ವಿಭಾಗದಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದು ಪ್ರತಿ ದಿನ ಬೆಳಿಗ್ಗೆ 8 ಗಂಟೆಗೆ ಕಾಲೇಜಿಗೆ ಹೋಗಿ ರಾತ್ರಿ 7 ಗಂಟೆಗೆ ವಾಪಸ್ಸಾಗುತ್ತಿದ್ದರು. ಆದರೆ ಮೇ 19 ರಂದು ಕಾಲೇಜಿಗೆ ಹೋದವರು ಸಂಜೆಯಾದರು ಮನೆ ಬಂದಿರುವುದಿಲ್ಲ. ಸಂಬಂಧಿಕರ, ಪರಿಚಿತರ, ಸ್ನೇಹಿತರ ಮನೆಗಳಲ್ಲಿ ಹುಡುಕಾಡಲಾಗಿ ಎಲ್ಲಿಯೂ ಪತ್ತೆಯಾಗದ ಕಾರಣ ಮಹಿಳಾ ಪೊಲೀಸ್ ಠಾಣೆಯಲ್ಲಿ ದೂರು ನೀಡಿ ನವ್ಯ ರವರನ್ನು ಪತ್ತೆ ಮಾಡಿಕೊಡಬೇಕೆಂದು ಪೋಷಕರು ಮನವಿ ಮಾಡಿದ್ದಾರೆ. ಚಹರೆ: ನವ್ಯ, 20 ವರ್ಷ ವಯಸ್ಸು, ಗೋದಿ ಮೈ ಬಣ್ಣ, ಕೋಲು ಮುಖ, ಬ್ಲೂ ಟಾಪ್ ಮತ್ತು ಬ್ಲೂ ಪ್ಯಾಂಟ್ ಧರಿಸಿದ್ದು, ಕನ್ನಡ,ತೆಲುಗು ಭಾಷೆ ಮಾತನಾಡುತ್ತಾರೆ. ಈ ಯುವತಿಯ ಸುಳಿವು ಸಿಕ್ಕಲ್ಲಿ ಹತ್ತಿರದ ಪೊಲೀಸ್ ಠಾಣೆಯನ್ನು ಸಂಪರ್ಕಿಸಿ ಮಾಹಿತಿ ನೀಡುವಂತೆ ಚಿಕ್ಕಬಳ್ಳಾಪುರ ಮಹಿಳಾ ಪೊಲೀಸ್ ಠಾಣೆಯ ಠಾಣಾಧಿಕಾರಿಗಳು ತಿಳಿಸಿದ್ದಾರೆ.

## 26ರಂದು ಗ್ರಾಮ, ಮಹಿಳಾ ಹಾಗೂ ಮಕ್ಕಳ ಗ್ರಾಮ ಸಭೆ

**ಮಂಡ್ಯ:** ಬಸರಾಳು ಹೋಬಳಿಯ ಚಂದಗಾಲು(ಬ) ಗ್ರಾಮ ಪಂಚಾಯಿತಿ ಕಾರ್ಯಾಲಯ ವತಿಯಿಂದ 2025-26 ನೇ ಸಾಲಿನ ಗ್ರಾಮ ಸಭೆ ಹಾಗೂ ಮಹಿಳಾ ಮತ್ತು ಮಕ್ಕಳ ಗ್ರಾಮ ಸಭೆಯಯನ್ನು ಮೇ 26 ರಂದು ಗ್ರಾಮ ಪಂಚಾಯಿತಿ ಆವರಣದಲ್ಲಿ ಆಯೋಜಿಸಲಾಗಿದೆ. 11:00 ಗಂಟೆಗೆ ಗ್ರಾಮ ಸಭೆ ಮತ್ತು 12:00 ಗಂಟೆಗೆ ಮಹಿಳಾ ಮತ್ತು ಮಕ್ಕಳ ಗ್ರಾಮ ಸಭೆ ಜರುಗಲಿದೆ ಎಂದು ಚಂದಗಾಲು(ಬ) ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೇನ್ಸ್‌ನಲ್ಲಿ ಲಾಂಗಿಟ್ಯೂಡ್ 77 ಕಲೆಕ್ಟರ್ಸ್ ಎಡಿಶನ್ ಬಿಡುಗಡೆ

**ಮೈಸೂರು:** ಸೀಗ್ರಾಮ್‌ನ ಲಾಂಗಿಟ್ಯೂಡ್ 77 ಅನ್ನು, ಭಾರತದಲ್ಲಿ ಉತ್ತರದಿಂದ ದಕ್ಷಿಣಕ್ಕೆ ಪೂರ್ವದಲ್ಲಿ 77 ಡಿಗ್ರಿಯಲ್ಲಿ ಹಾದುಹೋಗುವ ಲಾಂಗಿಟ್ಯೂಡ್‌ಗೆ ಅನುಗುಣವಾಗಿ ಹೆಸರಿಸಲಾಗಿದೆ. ಇದು ದೇಶದ ವೈವಿಧ್ಯತೆ, ಐತಿಹಾಸಿಕ ಕರಕುಶಲತೆ ಮತ್ತು ಅದ್ಭುತ ಪರಿಸರವನ್ನು ಗೌರವಿಸುತ್ತದೆ. ಸಣ್ಣ ಬ್ಯಾಚ್‌ಗಳಲ್ಲಿ ತಯಾರಿಸಿದ ಇದು ಭಾರತದ ವೈವಿಧ್ಯಮ ಪ್ರದೇಶ ಮತ್ತು ದೇಶೀಯ ಪದಾರ್ಥಗಳ ಸ್ವಾದವನ್ನು ಪ್ರತಿಬಿಂಬಿಸುತ್ತದೆ.



ಪ್ರತಿಷ್ಠಿತ ಕೇನ್ಸ್ ಫಿಲ್ಮ್ ಫೆಸ್ಟಿವಲ್‌ನಲ್ಲಿ ಇದು ವೈಭವಯುತವಾಗಿ ಆರಂಭವಾಗಿದ್ದು, ಭಾರತದ ಅತ್ಯಂತ ಪರಿಣಿತ ಉತ್ಪನ್ನವನ್ನು ವಿಶ್ವಮಟ್ಟಕ್ಕೆ ಕೊಂಡೊಯ್ಯುವ ಗುರಿಯನ್ನು ಹೊಂದಿದೆ. ಅಲ್ಲದೆ, ಭಾರತದ ಕಲಾತ್ಮಕ ಪರಿಣಿತಿ, ಅದ್ಭುತ ಕರಕುಶಲತೆ ಮತ್ತು ಅಮೋಘ ವಿಸ್ಕಿ ತಯಾರಿಕೆ ಸಂಪ್ರದಾಯವನ್ನು ವಿಶ್ವಮಟ್ಟಕ್ಕೆ ಏರಿಸುವ ಧ್ಯೇಯವನ್ನು ಹೊಂದಿದೆ.

ಲಾಂಗಿಟ್ಯೂಡ್ 77 ಅನ್ನು ಅಧಿಕೃತ ಇಂಡಿಯಾ ಪೆವಿಲಿಯನ್‌ನಲ್ಲಿ ನಡೆದ ಎಕ್ಸ್‌ಕ್ಲೂಸಿವ್ ಕಾರ್ಯಕ್ರಮದಲ್ಲಿ ಅನಾವರಣಗೊಳಿಸಲಾಗಿದೆ. ಭಾರತದ ಅತ್ಯಂತ ಜನಪ್ರಿಯ ಕಲಾಕಾರ ಪರೇಶ್ ಮೈಟಿಯವರು ಇದರ ವಿಶಿಷ್ಟ ಪ್ಯಾಕೇಜಿಂಗ್ ಅನ್ನು ವಿನ್ಯಾಸ ಮಾಡಿರುವುದು ಎಲ್ಲರ ಗಮನ ಸೆಳೆಯಿತು. ಶ್ರೀ ಮೈಟಿಯವರು ಪ್ರದರ್ಶಿಸಿದ ಪ್ರತಿ ಪ್ಯಾಕ್ ಕೂಡಾ ಭಾರತದ ಲಾಂಗಿಟ್ಯೂಡ್ 77 ಕ್ಕೆ ಕಲಾತ್ಮಕ ವ್ಯಾಖ್ಯಾನವನ್ನು ನೀಡಿತು.

''ಕಲೆ ಮತ್ತು ಕಲಾತ್ಮಕತೆಯ ಮೂಲಕ ಭಾರತದ ಆತ್ಮವನ್ನು ಸೆರೆಹಿಡಿಯುವುದು ಈ ಸಹಭಾಗಿತ್ವವಾಗಿದೆ. ಈ ರಚನೆಗೆ ಸ್ಫೂರ್ತಿ ನೀಡಿರುವ ಅಕ್ಷಾಂಶವು ಇಡೀ ವಿಶ್ವಕ್ಕೆ ಭಾರತದ ಕೊಡುಗೆಯಾಗಿದ್ದು, ಸಂಪ್ರದಾಯ ಮತ್ತು ಆಧುನಿಕತೆಯ ಮಿಶ್ರಣವಾಗಿದೆ'' ಎಂದು ಪರೇಶ್ ಮೈಟಿ ಹೇಳಿದ್ದಾರೆ.

ಪೆರ್ನಾರ್ಡ್ ರಿಕಾರ್ಡ್ ಇಂಡಿಯಾದ ಮುಖ್ಯ ಮಾರ್ಕೆಟಿಂಗ್ ಅಧಿಕಾರಿ ಕಾರ್ತಿಕ್ ಮೊಹಿಂದ್ರಾ, ಮಾತನಾಡಿ ''ಲಾಂಗಿಟ್ಯೂಡ್ 77 ಕಲೆಕ್ಟರ್ಸ್ ಎಡಿಶನ್ ಭಾರತದ ಕರಕುಶಲತೆಗೆ ಜಾಗತಿಕ ಮಾನದಂಡವನ್ನು ನೀಡುತ್ತದೆ. ನಮ್ಮ ಸಾಂಸ್ಕೃತಿಕ ಪರಂಪರೆಯ ಶ್ರೀಮಂತಿಕೆಯನ್ನು ಇದು ಸಂಭ್ರಮಿಸುತ್ತದೆ. ಕೇನ್ಸ್‌ನಲ್ಲಿ ಇದು ಅನಾವರಣಗೊಳ್ಳುತ್ತಿರುವುದು ಕೇವಲ ಒಂದು ಸಾಂಪ್ರದಾಯಿಕ ಸಂಗತಿಯಲ್ಲ. ಇದು ಭಾರತದ ಶ್ರೀಮಂತ ಗುರುತಿಗೆ ಒಂದು ಗೌರವ ಸೂಚಕವಾಗಿದೆ. ಇದರಲ್ಲಿ ಕ್ರಿಯಾಶೀಲತೆ ಮತ್ತು ಕಾಲಾತೀತ ಸೌಂದರ್ಯವು ಸೆರೆಯಾಗಿದೆ'' ಎಂದಿದ್ದಾರೆ.

ಲಕ್ಷುರಿ, ಕಲೆ ಮತ್ತು ಸಿನಿಮಾ ವಲಯದ ಅತ್ಯಂತ ಪ್ರಭಾವಿ ವ್ಯಕ್ತಿಗಳು ಈ ಅದ್ಭುತ ಅನಾವರಣ ಕಾರ್ಯಕ್ರಮದಲ್ಲಿ ಹಾಜರಿದ್ದರು. ಜನಪ್ರಿಯ ಸಿನಿಮಾ ವಿಮರ್ಶಕಿ ಮತ್ತು ಲೇಖಕಿ ಅನುಪಮಾ ಛೋಪ್ರಾ, ಬಾಲಿವುಡ್ ಸೆಲೆಬ್ರಿಟಿಗಳಿಗೆ ಔತಣವನ್ನು ನಿರ್ವಹಿಸಿದ್ದರು. ಇದು ಕೇನ್ಸ್‌ನಲ್ಲಿ ಅತ್ಯಂತ ಆಕರ್ಷಣೆ ಪಡೆದ ಕಾರ್ಯಕ್ರಮವಾಗಿತ್ತು.

ಕಲಾ ಪೋಷಕಿ ಮತ್ತು ಸ್ಟೈಲ್ ಐಕಾನ್ ಶಾಲಿನಿ ಪಸ್ಸಿ ರೆಡ್ ಕಾರ್ಪೆಟ್‌ನಲ್ಲಿ ಹೆಜ್ಜೆ ಹಾಕಿದ್ದು, ಮನೀಶ್ ಮಲ್ಹೋತ್ರಾ ವಿನ್ಯಾಸ ಮಾಡಿದ ಉಡುಪುಗಳನ್ನು ಧರಿಸಿದ್ದರು. ಈ ಕಾರ್ಯಕ್ರಮವು ಭಾರತದ ಲಾಂಗಿಟ್ಯೂಡ್ 77 ಇಂದ ಪ್ರೇರಿತವಾಗಿತ್ತು.

''ಜಾಗತಿಕ ಮಟ್ಟದಲ್ಲಿ ಭಾರತೀಯ ಕಲೆಯನ್ನು ಪ್ರಚಾರ ಮಾಡುವ ವ್ಯಕ್ತಿಯಾಗಿ ಈ ಅದ್ಭುತ ಸಹಭಾಗಿತ್ವವು ಅತ್ಯಂತ ಕುತೂಹಲಕರವಾಗಿತ್ತು. ಇದರಲ್ಲಿ ಭಾರತದ ಕ್ರಿಯಾಶೀಲ ದೃಷ್ಟಿಕೋನ ಮತ್ತು ಕಲಾತ್ಮಕತೆಯನ್ನು ನಾವು ವಿಶ್ವಕ್ಕೆ ತಿಳಿಸಲು ಅನುವಾಯಿತು. ಭಾರತದ ಸ್ವಾದವನ್ನು ಪ್ರತಿನಿಧಿಸುವ ಪರೇಶ್ ಅವರು ಲಾಂಗಿಟ್ಯೂಡ್ 77 ಗೆ ಪೂರಕವಾಗಿ ವಿನ್ಯಾಸ ಮಾಡಿದ್ದರು ಹಾಗೂ ಮನೀಶ್ ಮಲ್ಹೋತ್ರಾ ಇದಕ್ಕೆ ಹೊಸ ರೂಪ ನೀಡಿದರು. ಇದು ನನ್ನ ಮೂರು ಮೂಲ ಆಸಕ್ತಿಯಾದ ಭಾರತ, ಕಲೆ ಮತ್ತು ಫ್ಯಾಷನ್ ಎಲ್ಲವನ್ನೂ ಸೇರಿಸಿಕೊಂಡಿತ್ತು'' ಎಂದು ಶಾಲಿನಿ ಪಸ್ಸಿ ಹೇಳಿದರು.

ವಿನ್ಯಾಸಕ ಮನೀಶ್ ಮಲ್ಹೋತ್ರಾ, ಮಾತನಾಡಿ ''ಲಾಂಗಿಟ್ಯೂಡ್ 77 ಜೊತೆಗಿನ ಈ ಸಹಭಾಗಿತ್ವವು ಭಾರತೀಯ ಲಕ್ಷುರಿ ಮತ್ತು ಕ್ರಿಯಾಶೀಲತೆಯನ್ನು ಪ್ರತಿಬಿಂಬಿಸುತ್ತದೆ. ಪರೇಶ್ ಅವರ ದೃಶ್ಯ ನಿರೂಪಣೆಗೆ ಹೊಸ ರೂಪ ನೀಡುವುದು ನಿಜಕ್ಕೂ ಸವಾಲಿನ ಸಂಗತಿಯಾಗಿತ್ತು. ಫ್ಯಾಷನ್ ಮತ್ತು ಕಲೆ ಎರಡೂ ಸಮ್ಮಿಳಿತವಾಗುವ ಸನ್ನಿವೇಶವನ್ನು ನಾವು ಈ ಸನ್ನಿವೇಶದಲ್ಲಿ ಕಟ್ಟಿಕೊಟ್ಟಿದ್ದೆವು'' ಎಂದರು.

ಕೇವಲ 650 ಕೇಸ್‌ಗಳ ಸೀಮಿತ ಬಿಡುಗಡೆಯನ್ನು ಹೊಂದಿರುವ ಇದು ಕಲೆಕ್ಟರ್‌ಗಳು ಮತ್ತು ಆಸ್ವಾದವನ್ನು ಸವಿಯುವವರ ದೃಷ್ಟಿಯಲ್ಲಿ ಅತ್ಯಂತ ಅಪರೂಪದ್ದಾಗಿತ್ತು. ಕೇನ್ಸ್‌ನಲ್ಲಿ ಇದು ಯಶಸ್ವಿಯಾಗಿ ಅನಾವರಣಗೊಂಡ ನಂತರ, ಹರ್ಯಾಣ ಮತ್ತು ಮಹಾರಾಷ್ಟ್ರದಲ್ಲಿ ಸೀಮಿತ ಪ್ರಮಾಣದಲ್ಲಿ ಇದು ಲಭ್ಯವಿರಲಿದೆ.

# ಮೂರು ದಶಕಗಳಿಂದ ಹಾಸಿಗೆ ಹಿಡಿದ ಮಗಳ ಹಾರೈಕೆಯಲ್ಲಿ ಬಡ ತಾಯಿ

**ಶಿರಾ :** ಬಾಲ್ಯದಿಂದ 35 ವರ್ಷಗಳ ವರಗೆ ಅಂಗವಿಕಲತೆಯಿಂದ ಬಳಲುತ್ತಿದ್ದ



ಶಿರಾ ತಾಲೂಕಿನ ಬೇವಿನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸಿದ್ದಾಪುರ ಗ್ರಾಮದ 35 ವರ್ಷದ ಯುವತಿ ಪುಷ್ಪಲತಾ ರವರ ಕಷ್ಟಕ್ಕೆ ಸ್ಪಂದಿಸಿದ ಶಿರಾ ಬ್ಲಾಕ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಶಿವು ಚಂಗಾವರ ಬುಧವಾರ ಪುಷ್ಪಲತಾ ರವರನ್ನು ಭೇಟಿ ಮಾಡಿ ಕುಶಲೋಪರಿ ವಿಚಾರಿಸಿ ಆರ್ಥಿಕ ಸಹಾಯ ಮಾಡುವುದರ ಮೂಲಕ ಮಾನವೀಯತೆಯ ಮೌಲ್ಯ ಹೆಚ್ಚಿಸಿದರು. ಈ ಬಗ್ಗೆ ಮಾತನಾಡಿದ ಶಿವು ಚಂಗಾವರ 35 ವರ್ಷಗಳಿಂದ ಅಂಗವಿಕಲೆಯಾಗಿ ಮನೆಯಲ್ಲಿಯೇ ಇರುವ ಪುಷ್ಪಲತಾ ರವರ ಸೇವೆ, ಅವರ ತಾಯಿ ಗೌರಮ್ಮ ನಿತ್ಯ ಮಾಡುತ್ತಿರುವುದು ಅಮ್ಮ ಎನ್ನುವ ಪದಕ್ಕೆ ನಿಜಾರ್ಥ ದೊರೆತಂತಾಗಿದೆ. ಉಳ್ಳವರು ಇಂತಹವರಿಗೆ ಸಹಾಯ ಮಾಡುವ ಮೂಲಕ ಸೇವೆಯಲ್ಲಿ ಭಗವಂತನನ್ನು ಕಾಣಬೇಕು. ವರ್ಷದಿಂದ ಸರ್ಕಾರ ನೀಡುವ ಅಂಗವಿಕಲರ ವೇತನ ನೀಡದ ಕಾರಣ ಕುಟುಂಬ ಕಂಗಾಲಾಗಿದೆ, ಎಂಬ ಮನವಿಗೆ ಸ್ಪಂದಿಸಿ ಶಿರಾ ಕ್ಷೇತ್ರದ ಶಾಸಕರಾದ ಟಿ.ಬಿ.ಜಯಚಂದ್ರ ಕರೆ ಮಾಡಿ ಪುಷ್ಪಲತಾ ರವರ ಪಿಂಚಣಿ ಸಮಸ್ಯೆ ಬಗ್ಗೆ ಶಿರಾ ದಂಡಾಧಿಕಾರಿಗಳು ವಿಶೇಷ ಮುತುವರ್ಜಿ ವಹಿಸುವಂತೆ ಮನವಿ ಮಾಡಿದರು.

ಕರೆಗೆ ಸ್ಪಂದಿಸಿದ ಶಾಸಕ ಟಿ.ಬಿ.ಜಯಚಂದ್ರ ಅವರು ಪುಷ್ಪಲತಾ ರವರ ಪಿಂಚಣಿ ಸಮಸ್ಯೆ ತಕ್ಷಣ ಬಗೆಹರಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಅಂಗವಿಕಲರು, ವೃದ್ಧರು, ವಿಧವೆಯರ ಪಿಂಚಣಿ ಬಗ್ಗೆ ಯಾವುದೇ ಸಮಸ್ಯೆ ಬಾರದಂತೆ ನೋಡಿಕೊಂಡು ಸಮಸ್ಯೆಗಳು ಬಂದಲ್ಲಿ ತಕ್ಷಣ ಸ್ಪಂದಿಸಬೇಕು ಎಂದರು. ಶಿರಾ ಬ್ಲಾಕ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಶಿವು ಚಂಗಾವರ ರವರ ಮಾನವೀಯ ಸೇವೆ ಜನ ಮೆಚ್ಚುಗೆಗೆ ಪಾತ್ರವಾಯಿತು.

## ಬೆಂಗಳೂರಿನ ಕೃಷಿ ವಿಶ್ವವಿದ್ಯಾನಿಲಯದಲ್ಲಿ ಒಡಂಬಡಿಕೆ

**ಬೆಂಗಳೂರು:** ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯ, ಹಾಗೂ ಹೋಂಡಾ ಟ್ರೇಡಿಂಗ್ ಕಾರ್ಪೊರೇಷನ್ ಇಂಡಿಯಾ ಪ್ರೈ. ಲಿಮಿಟೆಡ್, ಸಹಯೋಗದೊಂದಿಗೆ ಇಂದು ಜೈವಿಕ ಇಂಧನ ಅಭಿವೃದ್ಧಿ ಹಾಗೂ ಕೃಷಿ ಬಯೋಮಾಸ್ ಬಳಕೆಯ ಒಡಂಬಡಿಕೆಯನ್ನು ಮಾಡಿಕೊಳ್ಳಲಾಯಿತು. ಈ ಒಡಂಬಡಿಕೆಯು ಸೂರ್ಯಕಾಂತಿ ಹೈಬಿಡ್ ಬೀಜಗಳ ಉತ್ಪಾದನೆ, ಕೃಷಿ ಸಮುದಾಯಗಳನ್ನು ಒಳಗೊಂಡ ಜೈವಿಕ ಇಂಧನ ಪೂರೈಕೆ ಸರಪಳಿ ಅಭಿವೃದ್ಧಿ, ಮಣ್ಣಿನ ಸಾವಯವ ಇಂಗಾಲವನ್ನು ಹೆಚ್ಚಿಸಲು ಬಯೋಚಾರ್ ಉತ್ಪಾದನೆಗೆ ಕೃಷಿ ಬಯೋಮಾಸ್ ತ್ಯಾಜ್ಯವನ್ನು ಬಳಸುವುದು ಮತ್ತು ಕೃಷಿ ಉಪಕರಣಗಳ ಪೂರೈಕೆಯ ಉಪಕ್ರಮಗಳನ್ನು ಒಳಗೊಂಡಿದೆ. ಈ ಒಡಂಬಡಿಕೆಯು ಸುಸ್ಥಿರ ಕೃಷಿ, ಗ್ರಾಮೀಣ ಅಭಿವೃದ್ಧಿ ಮತ್ತು ನವೀಕರಿಸಬಹುದಾದ ಇಂಧನದ ಮೂಲಗಳನ್ನು ಉತ್ತೇಜಿಸಲು ಸಾರ್ವಜನಿಕ ? ಖಾಸಗಿ ಪಾಲುದಾರಿಕೆಯನ್ನು ಬಲಪಡಿಸುವಲ್ಲಿ ಮಹತ್ವದ ಪಾತ್ರವನ್ನು ವಹಿಸುತ್ತದೆ. ಕಾರ್ಯಕ್ರಮದಲ್ಲಿ ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಕುಲಪತಿ ಡಾ: ಎಸ್ .ವಿ.ಸುರೇಶ ಅವರಿಗೆ ಹೋಂಡಾಟ್ರೇಡಿಂಗ್ ಕಾರ್ಪೊರೇಷನ್ ಇಂಡಿಯಾ ಪ್ರೈ. ಲಿಮಿಟೆಡ್ ನ ವ್ಯವಸ್ಥಾಪಕ ನಿರ್ದೇಶಕರು ಕೋಜಿ ಸೈತೋಹ್, ತೋಷಿಮಿಟ್ಸು ಸುಡಾ, ಕೆಂಟಾ ಮಿಜುಟಾನಿ, ಅಂಜನಾ ಮುಖಿಜಾ ಮತ್ತು ಆಶ್ವಿನಿ ಅವರು ಒಡಂಬಡಿಕೆ ಪತ್ರವನ್ನು ಹಸ್ತಾಂತರಿಸಿದರು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

## ಅರ್ಜಿ ಆಹ್ವಾನ

**ಮಂಡ್ಯ:** ಬೆಳ್ಳೂರು ಟೌನ್ ಪಂಚಾಯಿತಿ ವ್ಯಾಪ್ತಿಯಲ್ಲಿ ಅನುಷ್ಠಾನಗೊಂಡಿರುವ ಪರಿಶಿಷ್ಠ ಜಾತಿ ಹಾಗೂ ಪಂಗಡ ಕಲ್ಯಾಣ ಕಾರ್ಯಕ್ರಮ ಹಾಗೂ ಇತರೆ ಹಿಂದುಳಿದ ವರ್ಗದ ಕಲ್ಯಾಣ ಕಾರ್ಯಕ್ರಮದಡಿ 2025-26ನೇ ಸಾಲಿಗೆ ಬಿ.ಇ, ಎಂ.ಬಿ.ಬಿ.ಎಸ್ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಹಾಗೂ ಪಂಗಡ ಮತ್ತು ಇತರೆ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಲ್ಯಾಪ್ ಟಾಪ್ ಖರೀದಿ ಸಹಾಯಧನ ನೀಡಲು ಹಾಗೂ ಪರಿಶಿಷ್ಟ ಜಾತಿಯ ಕುಟುಂಬದ ಜನರಿಗೆ ಮನೆ ಮೇಲ್ಛಾವಣೆ ದುರಸ್ಥಿ ಸಾಮಗ್ರಿ, ಸಹಾಯಧನ ಪಡೆಯಲು ಅರ್ಹ ಅರ್ಜಿದಾರರುರಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅರ್ಜಿದಾರರು ಜಾತಿ ಮತ್ತು ಆಧಾಯ ದೃಢೀಕರಣ ಪತ್ರ, ಆಧಾರ್‌ಕಾರ್ಡ್, ವ್ಯಾಸಂಗ ದೃಢೀಕರಣ ಪತ್ರ, ಇ-ಖಾತಾ ನಕಲು ಪ್ರತಿ, ಭಾವಚಿತ್ರ ಹಾಗೂ ಸೌಲಭ್ಯ ಪಡೆಯಲು ಅನ್ವಯಿಸಲ್ಪಡುವ ದಾಖಲಾತಿಗಳೊಂದಿಗೆ ಮೇ 31 ರೊಳಗೆ ಪಟ್ಟಣ ಪಂಚಾಯಿತಿ ಬೆಳ್ಳೂರು ಕಛೇರಿಯಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ:ಸಂ 7795972204 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಬೆಳ್ಳೂರುಪಟ್ಟಣ ಪಂಚಾಯಿತಿಮುಖ್ಯಾಧಿಕಾರಿ ತಿಳಿಸಿದ್ದಾರೆ.

## ಕೈಗಾರಿಕಾ ತರಬೇತಿಗಾಗಿ ಆಹ್ವಾನ

**ಮಂಡ್ಯ:** ಮದ್ದೂರುಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ವತಿಯಿಂದ ಮದ್ದೂರು ತಾಲೂಕಿನ ಸೋಮನಹಳ್ಳಿಯಲ್ಲಿ2025-26 ನೇಸಾಲಿನಲ್ಲಿ11 ವೃತ್ತಿ ಘಟಕಗಳಿಗೆ ಐ.ಟಿ.ಐ ತರಬೇತಿ ಪಡೆಯಲು ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಮೇ 28 ಕಡೆಯ ದಿನವಾಗಿದ್ದು, ಎಸ್.ಎಸ್. ಎಲ್.ಸಿ. ತೇರ್ಗಡೆಯಾಗಿರುವ, 14 ವರ್ಷ ತುಂಬಿರುವ ಅಭ್ಯರ್ಥಿಗಳುವೆಬ್ ಸೈಟ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ಅಥವಾ ದೂ.ಸಂ: 08232-298117, 9844703800, 9844770927, 9964030902 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಸೋಮನಹಳ್ಳಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ.

## ಕೈಗಾರಿಕಾ ತರಬೇತಿಗಾಗಿ ಆಹ್ವಾನ

**ಮಂಡ್ಯ:** ಚಿನಕುರಳಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ 2025 ನೇ ಸಾಲಿನಲ್ಲಿ 2 ವರ್ಷದ ವೃತ್ತಿಗಳಾದ ಎಲೆಕ್ಟ್ರೀಷಿಯನ್, ಎಲೆಕ್ಟ್ರಾನಿಕ್ ಮೆಕಾನಿಕ್, ಎಂ.ಎಂ.ವಿ, ಫಿಟ್ಟರ್ ಮತ್ತು ಉದ್ಯೋಗ ಯೋಜನೆ ಅಡಿಯಲ್ಲಿ ಎಂ.ಇ.ವಿ, ಎಂ.ಪಿ.ಸಿ.ಎ. ವಿ.ಎ.ಡಿ-ಎಫ್.ಇ.ಎಮ್ ಹಾಗೂ ಸಿ.ಎನ್.ಸಿ-ಎಮ್.ಟಿ. 1 ವರ್ಷದ ವೃತ್ತಿಗಳಾದ ಐ.ಆರ್.ಡಿ.ಎಂ, ಇ.ಡಿ.ಟಿ, ವೃತ್ತಿಗಳ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಮೇ 29 ರೊಳಗೆ ಆನ್ ಲೈನ್ ಮುಖಾಂತರ ಹಾಗೂ ಚಿನಕುರಳಿಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಎಸ್.ಎಸ್.ಎಲ್.ಸಿ. ತೇರ್ಗಡೆಯಾಗಿರುವ ಅರ್ಹ ಮಹಿಳಾ ಮತ್ತು ಪುರುಷ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದ್ದು ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 9483733891, 9980111058, 9964975394 ಸಂಪರ್ಕಿಸ ಬಹುದಾಗಿದೆ.

## ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

**ಮಂಡ್ಯ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯಗಳಲ್ಲಿ 2025-26ನೇ ಸಾಲಿನ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪಜಾ ಮತ್ತು ಪ.ವರ್ಗದ ಪಿ.ಯು.ಸಿ, ಐ.ಟಿ.ಐ ಮತ್ತು ಡಿಪ್ಲೋಮೋ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಕೊನೆಯ ಜೂನ್ 20 ರೊಳಗೆ ವೆಬ್ ಸೈಟ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ : 8050770004 / 8050770005 ಅನ್ನು ಸಂಪರ್ಕಿಸಬಹುದು .

# ಪುರಸಭಾ ಅಧಿಕಾರಿಗಳು ಪಟಾಕಿ ಸಿಡಿಸಿ ಸಂಭ್ರಮ



**ಮಾಲೂರು:** ರಾಜ್ಯ ಸರ್ಕಾರ ನಡೆಸಿದ ಸಚಿವ ಸಂಪುಟ ಸಭೆಯಲ್ಲಿ ಮಾಲೂರು ಪುರಸಭೆಯನ್ನು ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸಿ ಅನುಮೋದನೆಯನ್ನು ನೀಡಿರುವುದರಿಂದ ಪಟ್ಟಣದ ಪುರಸಭಾ ಆಡಳಿತ ವತಿಯಿಂದ ಮುಖ್ಯಮಂತ್ರಿಗಳಿಗೆ, ಉಸ್ತುವಾರಿ ಸಚಿವರು, ನಗರಾಭಿವೃದ್ಧಿ ಹಾಗೂ ಶಾಸಕರಿಗೆ ಅಭಿನಂದನೆ ಸಲ್ಲಿಸುವುದಾಗಿ ಪುರಸಭೆ ಮುಖ್ಯಾಧಿಕಾರಿ ಎ.ಬಿ.ಪ್ರದೀಪ್ ತಿಳಿಸಿದ್ದಾರೆ.

ಪಟ್ಟಣದ ಪುರಸಭೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಪುರಸಭೆ ವ್ಯಾಪ್ತಿಯು 7,12 ಚ.ಕಿ.ಮೀ ಇರುತ್ತದೆ. ಜನ ಸಾಂದ್ರತೆಯು ಪ್ರತಿ ಚ.ಕಿ.ಮೀ.ಗೆ 2024ರ ಜನಗಣತಿಯ ಪ್ರಕಾರ ಕೃಷಿಯೇತರ ಚಟುವಟಿಕೆಗಳು ಶೇ90 ರಷ್ಟು ಇದ್ದು, ಪ್ರಸ್ತುತ ನಿಗಧಿಪಡಿಸಲಾದ ಪ್ರದೇಶದಲ್ಲಿನ ಜನಸಂಖ್ಯೆಯ ಸಾಂದ್ರತೆಯು 7042 ಇರುತ್ತದೆ. ಮಾಲೂರು ಪಟ್ಟಣಕ್ಕೆ ಹೊಂದಿ ಕೊಂಡಿರುವ ಕೈಗಾರಿಕಾ ಪ್ರದೇಶ, ಹೆಂಚು ಮತ್ತು ಇಟ್ಟಿಗೆ ಕಾರ್ಖಾನೆಗಳು ಮತ್ತು ಇತರೆ ಕಂಪನಿಗಳಿದ್ದು, ಹಾಗೂ ತಾಲ್ಲೂಕು ಜೆಎಂಎಫ್‌ಸಿ ನ್ಯಾಯಾಲಯ ಸಂಕೀರ್ಣ, ಹೈಟೆಕ್ ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ, ಕೇಂದ್ರ ಆಹಾರ ನಿಗಮ, ಪಶುವೈದ್ಯಕೀಯ ಆಸ್ಪತ್ರೆ, ಸರ್ಕಾರಿ ಮತ್ತು ಖಾಸಗಿ ಕಾಲೇಜುಗಳು, ಪ್ರವಾಸೋದ್ಯಮ ಭಾಗವಾದ ಮಾರಿಕಾಂಬ ದೇವಾಲಯ, ಸುಪ್ರಸಿದ್ಧ ಧರ್ಮರಾಯಸ್ವಾಮಿ (ಕರಗ) ದೇವಾಲಯ, ಪ್ರಸನ್ನ ವೆಂಕಟರಮಣಸ್ವಾಮಿ ದೇವಾಲಯ, ಪಟ್ಟಣಕ್ಕೆ 5 ಕಿ.ಮೀ ಅಂತರದಲ್ಲಿ ಚೆನ್ನೈ ಎಕ್ಸ್‌ಪ್ರೆಸ್ ರಾಷ್ಟ್ರೀಯ ಹೆದ್ದಾರಿ ಇರುವುದರಿಂದ ಹಾಗೂ ಮಾಲೂರು ಪಟ್ಟಣವು ತಮಿಳುನಾಡು ರಾಜ್ಯದ ಹೊಸೂರು ಪಟ್ಟಣಕ್ಕೆ ಹತ್ತಿರ ಇರುವುದರಿಂದ ಪ್ರತಿ ದಿನ ಸಾವಿರಾರು ಪ್ರವಾಸಿಗರು ಹಾಗೂ ಉದ್ಯೋಗಸ್ಥರು ಆಗಮಿಸುತ್ತಿದ್ದು, ಮಾಲೂರು ಪಟ್ಟಣದಲ್ಲಿ ವಾಸ್ತವ್ಯ ಹೂಡಿರುತ್ತಾರೆ ಜನಸಾಂದ್ರತೆ 10000ಗಿಂತ ಹೆಚ್ಚಾಗಿರುತ್ತದೆ.

ಪುರಸಭೆಯ ಸಾಮಾನ್ಯ ಸಭೆಯಲ್ಲಿ ಮಾನ್ಯ ಶಾಸಕರು, ಅಧ್ಯಕ್ಷರು, ಉಪಾಧ್ಯಕ್ಷರು, ಸ್ಥಾಯಿ ಸಮಿತಿ ಅಧ್ಯಕ್ಷರು ಹಾಗೂ ಸರ್ವ ಸದಸ್ಯರುಗಳು ಚರ್ಚಿಸಿ ತೀರ್ಮಾನಿಸಿದಂತೆ ಮಾಲೂರು ಪುರಸಭೆಯನ್ನು ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ಪ್ರಸ್ತಾವನೆಯನ್ನು ಮಾನ್ಯ ಸರ್ಕಾರಕ್ಕೆ ಸಲ್ಲಿಸಲಾಗಿದ್ದು, ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಮಾಲೂರು ಮರಸಭೆಯನ್ನು ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸಿ ಅನುಮೋದನೆಯನ್ನು ನೀಡಲಾಗಿದೆ. ಎಂಬ ಅಂಶವನ್ನು ತಿಳಿಸಲು ಹರ್ಷಿಸುವುದಾಗಿ ತಿಳಿಸಿದ್ದಾರೆ.

## ಡೇ-ನಲ್ಮ್‌ನಡಿ ಅರ್ಜಿ ಆಹ್ವಾನ

**ಬಾಗೇಪಲ್ಲಿ:** ಬಾಗೇಪಲ್ಲಿ ಪುರಸಭೆ ವ್ಯಾಪ್ತಿಯಲ್ಲಿ 3 ವರ್ಷಗಳ ಪೂರ್ಣಾವದಿಗೆ ಐಇಸಿ ಚಟುವಟಿಕೆಗಳನ್ನು ಕೈಗೊಳ್ಳಲು ಆಸಕ್ತಿಯನ್ನು ಹೊಂದಿರುವ ಡೇ-ನಲ್ಮ್ ಅಡಿಯಲ್ಲಿ ನೋಂದಾಯಿತ ಎಸ್.ಹೆಚ್.ಜಿ. ಸದಸ್ಯರಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ ಎಂದು ಪುರಸಭೆ ಮುಖ್ಯಾಧಿಕಾರಿ ಎಂ. ಶ್ರೀನಿವಾಸ್ ತಿಳಿಸಿದ್ದಾರೆ. ಈ ಬಗ್ಗೆ ಮಾತನಾಡಿದ ಅವರು ಬಾಗೇಪಲ್ಲಿ ಪುರಸಭೆ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ್ ಮಿಷನ್ 2.0ರ ಅಡಿಯಲ್ಲಿ ಐಇಸಿ ಚಟುವಟಿಕೆಗಳನ್ನು ಕೈಗೊಳ್ಳಲು ಸ್ವ-ಸಹಾಯ ಗುಂಪು ಡೇ-ನಲ್ಮ್ ಎಸ್. ಹೆಚ್.ಜಿ. ಸದಸ್ಯರನ್ನು ಕಮ್ಯುನಿಟಿ ಮೊಬಲೈಜರ್ ಹುದ್ದೆಗೆ ತಾತ್ಕಾಲಿಕ ಸೇವೆ ಪಡೆದುಕೊಳ್ಳಲು ಅವಕಾಶವಿದ್ದು, ಈ ಮೂಲಕ 3 ವರ್ಷಗಳ ಪೂರ್ಣಾವದಿಗೆ ಐಇಸಿ ಚಟುವಟಿಕೆಗಳನ್ನು ಕೈಗೊಳ್ಳಲು ಆಸಕ್ತಿಯನ್ನು ಹೊಂದಿರುವ ಡೇ-ನಲ್ಮ್ ಅಡಿಯಲ್ಲಿ ನೋಂದಾಯಿತ ಎಸ್.ಹೆಚ್.ಜಿ. ಸದಸ್ಯರಿಂದ ಅರ್ಜಿಯನ್ನು ಆಹ್ವಾನಿಸಲಾಗಿದ್ದು, ಇದರ ಆಯ್ಕೆ ಪ್ರಕ್ರಿಯೆ, ವಿದ್ಯಾರ್ಹತೆ ಮತ್ತು ಮಾಸಿಕ ಗೌರವಧನ ಸಂಬಂಧಿಸಿದ ಇತರೆ ವಿವರಗಳಿಗಾಗಿ ಪುರಸಭೆ ಆರೋಗ್ಯ ಶಾಖೆಯಲ್ಲಿ ಸಂಪರ್ಕಿಸತಕ್ಕದ್ದು. ಆಸಕ್ತಿಯುಳ್ಳ ಡೇ-ನಲ್ಮ್ ಅಡಿಯಲ್ಲಿ ನೋಂದಾಯಿಸಿಕೊಂಡು ಆಸಕ್ತಿ ಎಸ್.ಹೆಚ್.ಜಿ. ಸದಸ್ಯರು ತಮ್ಮ ಇಚ್ಛನುಸಾರ ಡೇ-ನಲ್ಮ್ ಹಿಂಬರಹದೊಂದಿಗೆ ಭೇಟಿ ನೀಡಿ ಲಭ್ಯವಿರುವ ನಿಗಧಿತ ನಮೂನೆಯಲ್ಲಿ ಮಾಹಿತಿಯನ್ನು ಭರ್ತಿ ಮಾಡಿ ಅವಶ್ಯ ದಾಖಲಾತಿಗಳೊಂದಿಗೆ ದಿನಾಂಕ:-04-06-2025ರ ಸಂಜೆ 5.00 ಗಂಟೆಯ ಒಳಗಾಗಿ ನೋಂದಾಯಿತ ಅಂಚೆ ಅಥವಾ ಖುದ್ದಾಗಿ ಕಾರ್ಯಾಲಯಕ್ಕೆ ಸಲ್ಲಿಸಬೇಕು.

# ಮಾಲೂರು ಪಟ್ಟಣದ ಪುರಸಭೆ ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ರಾಜ್ಯ ಸರ್ಕಾರ ಅನುಮೋದನೆ



**ಮಾಲೂರು:** ಮಾಲೂರು ಪಟ್ಟಣದ ಪುರಸಭೆಯನ್ನು ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ರಾಜ್ಯ ಸರ್ಕಾರ ಸಚಿವ ಸಂಪುಟದಲ್ಲಿ ಅನುಮೋದನೆ ನೀಡಿದ್ದು ಶಾಸಕ ಕೆ ವೈ ನಂಜೇಗೌಡ ಜಿಲ್ಲಾ ಉಸ್ತುವಾರಿ ಸಚಿವ ಭೈರತಿ ಸುರೇಶ್ ಅವರಿಗೆ ಪಟ್ಟಣದ ಜನತೆ ಹಾಗೂ ಪುರಸಭಾ ಆಡಳಿತ ಕಾಂಗ್ರೆಸ್ ಪಕ್ಷದ ವತಿಯಿಂದ ಅಭಿನಂದನೆಗಳನ್ನು ಸಲ್ಲಿಸುವುದಾಗಿ ಜಿಲ್ಲಾ ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಸಿ.ಲಕ್ಷ್ಮಿನಾರಾಯಣ ಹೇಳಿದರು.

ರಾಜ್ಯ ಸರ್ಕಾರ ಪಟ್ಟಣದ ಪುರಸಭೆಯನ್ನು ನಗರಸಭೆಯನ್ನಾಗಿ ಮೇಲ್ದರ್ಜೆಗೆ ಏರಿಸಲು ಗುರುವಾರ ನಡೆದ ರಾಜ್ಯ ಸಚಿವ ಸಂಪುಟದಲ್ಲಿ ಅನುಮೋದನೆ ನೀಡಿರುವ ಹಿನ್ನೆಲೆಯಲ್ಲಿ ಪಟ್ಟಣದ ಮುಖ್ಯ ರಸ್ತೆಯ ಮಾರಿಕಾಂಬಾದ್ವಾರದಲ್ಲಿ ಬ್ಲಾಕ್ ಕಾಂಗ್ರೆಸ್ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ ಸಂಭ್ರಮಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಮಾಲೂರು ಇತಿಹಾಸದಲ್ಲಿ ಸುವರ್ಣ ಅಕ್ಷರಗಳಲ್ಲಿ ಬರೆದಿಡಬಹುದಾದ ದಿನ ಈ ದಿನವಾಗಿದೆ, ಮಾಲೂರಿನ ಜನತೆ ಸಂಭ್ರಮ ಪಡುವ ದಿನವಾಗಿದ್ದು, ಶಾಸಕರ ಸತತ ಪರಿಶ್ರಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ನಗರಾಭಿವೃದ್ಧಿ ಸಚಿವರ ಸಹಕಾರದಿಂದ ಪುರಸಭೆಯನ್ನು ನಗರಸಭೆಯನ್ನಾಗಿ ಮೇಲ್ದರ್ಜೆಗೆ ಸರ್ಕಾರ ಏರಿಸಿರುವುದರಿಂದ ಇದುವರೆಗೂ ಪಟ್ಟಣ ಎಂದು ಕರೆಯುತ್ತಿದ್ದ ನಾವು ಇಂದಿನಿಂದ ಮಾಲೂರು ನಗರವಾಗಿದೆ. ಪುರಸಭೆಗೆ ಸರ್ಕಾರ ಹಾಗೂ ಪೌರಾಡಳಿತ ಇಲಾಖೆಯಿಂದ ನಗರದ ಅಭಿವೃದ್ಧಿಗಾಗಿ ಹೆಚ್ಚಿನ ಅನುದಾನಗಳು ಸಹ ಬಿಡುಗಡೆಯಾಗಲಿದೆ, ಪಟ್ಟಣದ ಜನತೆ ಹಾಗೂ ಪುರಸಭಾ ಆಡಳಿತ ಕಂಡ ಕನಸು ನನಸಾಗಿದೆ. ರಾಜ್ಯ ಸರ್ಕಾರದ ಮುಖ್ಯಮಂತ್ರಿಗಳು, ಶಾಸಕ ಕೆ.ವೈ,ನಂಜೇಗೌಡ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಿಗೆ ಜಿಲ್ಲಾ ಕಾಂಗ್ರೆಸ್ ಬ್ಲಾಕ್ ಕಾಂಗ್ರೆಸ್ ಸಮಿತಿ ಹಾಗೂ ಪುರಸಭೆ ಪಟ್ಟಣದ ಜನತೆಯ ಪರವಾಗಿ ಅಭಿನಂದನೆ ಸಲ್ಲಿಸುವುದಾಗಿ ಹೇಳಿದರು.

ಮಾಸ್ತಿ ಬ್ಲಾಕ್ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಎಚ್.ಎಂ.ವಿಜಯನರಸಿಂಹ ಮಾತನಾಡಿ ಶಾಸಕರ ನಿರಂತರ ಪ್ರಯತ್ನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಭೈರತಿ ಸುರೇಶ್ ಅವರ ಮಾರ್ಗದರ್ಶನ ಸಹಕಾರದಿಂದ ರಾಜ್ಯ ಸರ್ಕಾರ ಪಟ್ಟಣದ ಪುರಸಭೆಯನ್ನು ನಗರಸಭೆಯನ್ನಾಗಿ ಮೇಲ್ದರ್ಜೆಗೆ ಏರಿಸಿದೆ ಇದು ಪಟ್ಟಣ ಹಾಗೂ ತಾಲೂಕಿನ ಜನತೆಗೆ ಸಂತಸದ ದಿನವಾಗಿದೆ. ಪಟ್ಟಣ ಸೇರಿದಂತೆ ಗ್ರಾಮೀಣ ಪ್ರದೇಶದಲ್ಲಿ ಶಾಸಕರ ಅಭಿವೃದ್ಧಿಯನ್ನು ಪ್ರಶ್ನಿಸಿರುವ ವಿರೋಧ ಪಕ್ಷದವರಿಗೆ ಅಭಿವೃದ್ಧಿ ಎಚ್ಚರಿಕೆಯ ಗಂಟೆಯಾಗಿದೆ, ರಸ್ತೆಗಳು ಅಭಿವೃದ್ಧಿ ಪಡಿಸಲು ಶಾಸಕರು ಸರ್ಕಾರದಿಂದ ಅನುದಾನ ತರುತ್ತಾರೆ, ಅಧಿಕಾರಿಗಳು ಅದನ್ನು ಕಾರ್ಯರೂಪಕ್ಕೆ ತರುತ್ತಾರೆ, ಆದರೆ ರಸ್ತೆಗಳನ್ನು ಅಭಿವೃದ್ಧಿಪಡಿಸುವುದು ತಾಲೂಕು ಆಡಳಿತದಾಗಿದೆ, ಆದರೆ ಪ್ರಚಾರಕ್ಕಾಗಿ ರಸ್ತೆಗಳನ್ನು ಗುಂಡಿ ಮುಚ್ಚಿ ಪ್ರಚಾರ ಗಿಟ್ಟಿಸಿಕೊಂಡು ಮತ ಬ್ಯಾಂಕ್ ಮಾಡಿಕೊಳ್ಳಲು ಮುಂದಾಗಿರುವುದು ಶೋಭೆತರುವಂತದಲ್ಲ ಎಂದು ಹೂಡಿ ವಿಜಯ್ ಕುಮಾರ್ ಅವರನ್ನು ಪ್ರಶ್ನಿಸಿದ ಅವರು, ಸಂವಿಧಾನ ಬದ್ಧವಾಗಿ ಜನರಿಂದ ಆಯ್ಕೆಯಾದ ಪ್ರತಿಯೊಬ್ಬ ಜನಪ್ರತಿನಿಧಿಯು 5 ವರ್ಷ ಆಡಳಿತ ನಡೆಸುವ ಹಕ್ಕು ಇರುತ್ತದೆ. ಆದರೆ ತಾಲ್ಲೂಕಿನ ಅಭಿವೃದ್ಧಿಗೆ ಶ್ರಮಿಸುತ್ತಿರುವ ಶಾಸಕರನ್ನು ರಾಜೀನಾಮೆ ಕೇಳುವ ನೈತಿಕ ಹಕ್ಕು ನಿಮಗಿಲ್ಲ, ಶಾಸಕರನ್ನು ಆಯ್ಕೆ ಮಾಡಿರುವುದು ತಾಲೂಕಿನ ಜನತೆ ಹೊರತು ನೀವಲ್ಲ ಎಂದು ತಿರುಗೇಟು ನೀಡಿದರು. ಪುರಸಭೆ ಅಧ್ಯಕ್ಷ ವಿಜಯಲಕ್ಷ್ಮಿ, ಮಾಜಿ ಅಧ್ಯಕ್ಷೆ ಕೋಮಲ, ಸ್ಥಾಯಿಸಮಿತಿ ಅಧ್ಯಕ್ಷ ಎ.ರಾಜಪ್ಪ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ಜಿ.ಮಧುಸೂದನ್, ಪ್ರದೀಪ್ ರೆಡ್ಡಿ, ಇನ್ನಿತರರು ಹಾಜರಿದ್ದರು.

## ಕನ್ನಡ ಭವನ ಉದ್ಘಾಟನಾ ಸಮಾರಂಭ

**ಚಿಕ್ಕಬಳ್ಳಾಪುರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಚಿಕ್ಕಬಳ್ಳಾಪುರ ಇವರ ಸಂಯುಕ್ತಾಶ್ರಯದಲ್ಲಿ ಚಿಕ್ಕಬಳ್ಳಾಪುರ ನಗರದಲ್ಲಿ ನಿರ್ಮಿಸಿರುವ ಕನ್ನಡ ಭವನ ಉದ್ಘಾಟನಾ ಸಮಾರಂಭವನ್ನು ಮೇ 27 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಬಿ.ಬಿ. ರಸ್ತೆಯ ಕನ್ನಡ ಭವನದಲ್ಲಿ ಆಯೋಜಿಸಲಾಗಿದೆ.

ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಪೂಜ್ಯ ಡಾ. ನಿರ್ಮಲಾನಂದನಾಥ ಮಹಾಸ್ವಾಮಿಗಳ ದಿವ್ಯ ಸಾನಿಧ್ಯದಲ್ಲಿ ನೆರವೇರಲಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಉನ್ನತ ಶಿಕ್ಷಣ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಂ.ಸಿ. ಸುಧಾಕರ್ ಅವರು ನೆರವೇರಿಸಲಿದ್ದಾರೆ.

ಕಾರ್ಯಕ್ರಮದ ಉಪಸ್ಥಿತಿಯನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಚಿವರಾದ ಶಿವರಾಜ್ ಎಸ್ ತಂಗಡಗಿ ರವರು ವಹಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ಶಾಸಕರಾದ ಪಿ.ಇ ಪ್ರದೀಪ್ ಈಶ್ವರ್ ಅವರು ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದರಾದ ಡಾ. ಕೆ.ಸುಧಾಕರ್, ಕೋಲಾರ ಲೋಕಸಭಾ ಕ್ಷೇತ್ರದ ಸಂಸದರಾದ ಎಂ. ಮಲ್ಲೇಶ್ ಬಾಬು, ಶಾಸಕರಾದ ಎಸ್.ಎನ್. ಸುಬ್ಬಾರೆಡ್ಡಿ, ಬಿ.ಎನ್. ರವಿಕುಮಾರ್, ಕೆ.ಹೆಚ್. ಪುಟ್ಟಸ್ವಾಮಿಗೌಡ, ಚಿದಾನಂದ ಎಂ. ಗೌಡ, ಎಂ.ಎಲ್.ಅನಿಲ್ ಕುಮಾರ್, ಡಿ.ಟಿ. ಶ್ರೀನಿವಾಸ್, ಡಾ.ಹೆಚ್.ನರಸಿಂಹಯ್ಯ ವಿಜ್ಞಾನ ಶೈಕ್ಷಣಿಕ ಸಾಂಸ್ಕೃತಿ ಮತ್ತು ಪ್ರವಾಸೋದ್ಯಮ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎನ್.ಹೆಚ್. ಶಿವಶಂಕರರೆಡ್ಡಿ, ಕರ್ನಾಟಕ ಜಾನಪದ ಅಕಾಡೆಮಿಯ ಅಧ್ಯಕ್ಷ ಗೊಲ್ಲಹಳ್ಳಿ ಶಿವಪ್ರಸಾದ್, ಚಿಕ್ಕಬಳ್ಳಾಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕೆ.ಎನ್. ಕೇಶವರೆಡ್ಡಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಾಧಿಕಾರದ ಅಧ್ಯಕ್ಷ ಯಲುವಹಳ್ಳಿ ಎನ್. ರಮೇಶ್, ನಗರ ಸಭೆ ಅಧ್ಯಕ್ಷ ಎ. ಗಜೇಂದ್ರ ರವರು ಭಾಗವಹಿಸಲಿದ್ದಾರೆ. ಅತಿಥಿಗಳಾಗಿ ಸರ್ಕಾರದ ಕಾರ್ಯದರ್ಶಿಗಳು ಮೂಲಭೂತ ಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಪಂಚಾಯಿತಿ ಆಡಳಿತಾಧಿಕಾರಿಗಳಾದ ಡಾ. ಎನ್.ಮಂಜುಳ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಡಾ. ಎಂ.ವಿ. ವೆಂಕಟೇಶ್, ಕರ್ನಾಟಕ ಗೃಹ ಮಂಡಳಿ ಆಯುಕ್ತರಾದ ಕವಿತಾ ಎಸ್. ಮನ್ನಿಕೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರಾದ ಕೆ.ಎಂ. ಗಾಯಿತ್ರಿ, ಜಂಟಿ ನಿರ್ದೇಶಕರಾದ ಅಶೋಕ್ ಎನ್. ಛಲವಾದಿ ರವರು ಭಾಗವಹಿಸಲಿದ್ದಾರೆ. ಜಿಲ್ಲೆಯ ಎಲ್ಲಾ ಚುನಾಯಿತ ಪ್ರತಿನಿಧಿಗಳು, ಸರ್ಕಾರಿ ನೌಕರರ ಸಂಘ ಹಾಗೂ ಇತರೆ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಕನ್ನಡಪರ ಮುಖಂಡರು ಭಾಗವಹಿಸಲಿದ್ದಾರೆ.

## ವಿಶೇಷ ಪದವಿ ಕೋರ್ಸ್‌ಗಳಿಗೆ ಉಚಿತ ಪ್ರವೇಶ

**ಆನೇಕಲ್:** ಬೆಂಗಳೂರು ನಗರದ ಎಚ್.ಎಸ್. ಆರ್ ಬಡಾವಣೆಯಲ್ಲಿರುವ ಸಮರ್ಥನಂ ಅಂಗವಿಕಲರ ಸಂಸ್ಥೆಯಲ್ಲಿ 2025 - 26 ನೇ ಸಾಲಿನ ಸಮರ್ಥನಂ ಇನ್ಸ್ಟಿಟ್ಯೂಟ್ ಆಫ್ ಮ್ಯೂಸಿಕ್ ಮತ್ತು ಪರ್ಫಾರ್ಮಿಂಗ್ ಆರ್ಟ್ಸ್ ಘಟಕದ ವತಿಯಿಂದ ಅಂಧ ಮತ್ತು ಅಂಗವಿಕಲ ಮಕ್ಕಳಿಗೆ ವಿಶೇಷ ಪದವಿ ಕೋರ್ಸ್ಗಳಿಗೆ ಉಚಿತ ಪ್ರವೇಶ ಪ್ರಕ್ರಿಯೆ ನಡೆಯುತ್ತಿದೆ ಎಂದು ಸಮರ್ಥನಂ ಅಂಗವಿಕಲರ ಸಂಸ್ಥೆಯ ಮುಖ್ಯಸ್ಥರಾದ ಡಾ. ಜಿ.ಕೆ ಮಹಾಂತೇಶ್ ರವರು ತಿಳಿಸಿದರು. ಸರ್ಜಾಪುರದ ಡಾ. ಬಿ.ಆರ್ ಅಂಬೇಡ್ಕರ್ ಆಟದ ಮೈದಾನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ ತಿಳಿಸಿದರು. ನಗರ ಮತ್ತು ಗ್ರಾಮೀಣ ಭಾಗಗಳಲ್ಲಿರುವ ಅಂದ ಮತ್ತು ಅಂಗವಿಕಲರ ಮಕ್ಕಳಲ್ಲಿ ಕಲಾ ಸಾಮರ್ಥ್ಯವನ್ನು ಅನಾವರಣಗೊಳಿಸಲು ಸಮರ್ಥನಂ ಅಂಗವಿಕಲರ ಸಂಸ್ಥೆಯ ಕಲಾ ಘಟಕವು ಪದವಿ / ಡಿಪ್ಲೊಮಗಳಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗುತ್ತಿದೆ.

ಅಂಗವಿಕಲರು ಮತ್ತು ಆರ್ಥಿಕವಾಗಿ ದುರ್ಬಲ ಹಿನ್ನೆಲೆಯ ವಿದ್ಯಾರ್ಥಿಗಳಿಗೆ ಉಚಿತ ಪ್ರವೇಶವಿದ್ದು ಮೊದಲು ಬಂದವರಿಗೆ ಮೊದಲ ಪ್ರಾಧಾನ್ಯತೆ ನೀಡಲಾಗುತ್ತದೆ ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಮತ್ತು ಇಂಗ್ಲಿಷ್ ಭಾಷಾ ಕೌಶಲ್ಯ ತರಬೇತಿ, ಕಂಪ್ಯೂಟರ್ ತರಬೇತಿಯ ಮೂಲಕ ಸಮಗ್ರ ಅಭಿವೃದ್ಧಿ, ಅಂಧರ ಕ್ರಿಕೆಟ್ ನಲ್ಲಿ ಭಾಗವಹಿಸುವ ಅವಕಾಶ, ಪದವಿ ನಂತರ ಉದ್ಯೋಗ ಬೆಂಬಲ ನೀಡಿ ಪ್ರಗತಿ ಪಡಿಸುತ್ತೇವೆ ಎಂದರು. ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ : ಸಮರ್ಥನಂ ಸಂಗೀತ ಮತ್ತುಪ್ರದರ್ಶನ ಕಲೆಗಳ ಸಂಸ್ಥೆ ಅಂ 37 ಮತ್ತು 38, 15 ನೇ ಕ್ರಾಸ್, 16 ನೇ ಮುಖ್ಯ ರಸ್ತೆ, ಸೆಕ್ಟರ್ 4, ಹೆಚ್.ಎಸ್.ಆರ್ ಲೇಔಟ್, ಬೆಂಗಳೂರು - 560102 - ಮೊಬೈಲ್ :-9148777791.

## ದ್ವಿತೀಯ ಪಿಯುಸಿ ಪರೀಕ್ಷೆ ನೋಂದಣಿಗೆ ಅವಕಾಶ

**ಚಿಕ್ಕಬಳ್ಳಾಪುರ:** 2025ರ ದ್ವಿತೀಯ ಪಿಯುಸಿ ಪರೀಕ್ಷೆ-2ಕ್ಕೆ ಹೆಚ್ಚಿನ ಅವಕಾಶ ಕಲ್ಪಿಸಿದ್ದರಿಂದ ವಿದ್ಯಾರ್ಥಿಗಳು ಉತ್ತೀರ್ಣರಾಗಿ ಒಟ್ಟಾರೆ ಫಲಿತಾಂಶ ಉತ್ತಮವಾಗಿದೆ. ವಿದ್ಯಾರ್ಥಿಗಳಿಗೆ ಹೆಚ್ಚಿನ ಅವಕಾಶ ನೀಡುವ ಸಂಬಂಧ ಪರೀಕ್ಷಾ ಪದ್ಧತಿಯಲ್ಲಿ ಸುಧಾರಣೆ ತಂದು 3ನೇ ಪರೀಕ್ಷೆಯನ್ನು ಜೂನ್ 9 ರಿಂದ 20 ರವರೆಗೆ ನಡೆಸಲಾಗುತ್ತಿದೆ. ಈ ಸಂಬಂಧ ದ್ವಿತೀಯ ಪಿಯುಸಿ ಪರೀಕ್ಷೆ-3ರ ತಾತ್ವಿಕ ಪರೀಕ್ಷೆಗೆ ಎಲ್ಲಾ ವಿದ್ಯಾರ್ಥಿಗಳು ತಮ್ಮ ಕಾಲೇಜಿನಲ್ಲಿ ನೋಂದಾಯಿಸಿಕೊಳ್ಳಲು ಮೇ 26 ರ ವರೆಗೆ ಅವಕಾಶ ಕಲ್ಪಿಸಲಾಗಿದೆ. 2023ರ ನಂತರ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳು, 2025ರ ದ್ವಿತೀಯ ಪಿಯುಸಿ ಪರೀಕ್ಷೆ-3ಕ್ಕೆ ಮಂಡಳಿಯು ಒದಗಿಸಿದ ಫಲಿತಾಂಶ ಪಟ್ಟಿಯ ಆಧಾರದ ಮೇಲೆ ನೋಂದಾಯಿಸಿಕೊಳ್ಳಬಹುದು. 2022ನೇ ಸಾಲಿನ ಅಥವಾ ಹಿಂದಿನ ವರ್ಷದ ಪರೀಕ್ಷೆಗಳಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳು 2025ರ ದ್ವಿತೀಯ ಪಿಯುಸಿ ಪರೀಕ್ಷೆ-3ಕ್ಕೆ ಒಟಿಂ ಆಧಾರದ ಮೇಲೆ ಮಾತ್ರ ನೋಂದಾಯಿಸಿಕೊಳ್ಳಬಹುದು. ಶುಲ್ಕದ ವಿವರ: ಒಂದು ವಿಷಯಕ್ಕೆ (ಪ್ರಥಮ ಬಾರಿಗೆ) ರೂ. 175/-, ಒಂದು ವಿಷಯಕ್ಕೆ (ಎರಡನೇ ಬಾರಿಗೆ) ರೂ. 350/- ಗಳನ್ನು ನಿಗದಿಪಡಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯ ಸಹಾಯವಾಣಿ ಸಂಖ್ಯೆ: 080-23310075, 080-23310076 ಗೆ ಸಂಪರ್ಕಿಸಬಹುದೆಂದು ಶಾಲಾ ಶಿಕ್ಷಣ ಇಲಾಖೆಯ (ಪದವಿ ಪೂರ್ಣ) ಉಪನಿರ್ದೇಶಕರು ತಿಳಿಸಿದ್ದಾರೆ.

## ಬಾನುಮುಷ್ತಾಕ್, ದೀಪಾ ಭಾಸ್ತಿಗೆ ಅಭಿನಂದನೆ

**ಬೆಂಗಳೂರು:** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಿಂದ (ಕೆಯುಡಬ್ಲ್ಯೂಜೆ)ಅಂತರರಾಷ್ಟ್ರೀಯ ಬೂಕರ್ ಪ್ರಶಸ್ತಿ ಪುರಸ್ಕೃತರಾದ ಖ್ಯಾತ ಸಾಹಿತಿ ಬಾನುಮುಷ್ತಾಕ್, ಅನುವಾದಕಿ ದೀಪಾ ಭಾಸ್ತಿ ಅವರಿಗೆ ಮೇ 28 ಬುಧವಾರ ಸಂಜೆ 4 ಗಂಟೆಗೆ ಗಾಂಧಿಭವನದಲ್ಲಿ ಅಭಿನಂದನಾ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಈ ಕಾರ್ಯಕ್ರಮವನ್ನು ಕರ್ನಾಟಕ ಗಾಂಧಿ ಸ್ಮಾರಕ ನಿಧಿ, ಬಹುರೂಪಿ, ಕರ್ನಾಟಕ ಪತ್ರಕರ್ತೆಯರ ಸಂಘದ ಸಹಯೋಗದಲ್ಲಿ ಸಂಘಟಿಸಲಾಗಿದೆ. ಬೂಕರ್ ಪ್ರಶಸ್ತಿಗೆ ಭಾಜನರಾಗಿರುವ ಬಾನುಮುಷ್ತಾಕ್ ಮತ್ತು ದೀಪಾಬಸ್ತಿ ಅವರು ಇಬ್ಬರೂ ಮೂಲತಃ ಪತ್ರಕರ್ತರಾಗಿದ್ದವರು ಎನ್ನುವ ಕಾರಣದಿಂದ ಮೊದಲ ಅಭಿನಂದನಾ ಕಾರ್ಯಕ್ರಮವನ್ನು ಕೆಯುಡಬ್ಲ್ಯೂಜೆ ಸಂಘಟಿಸಿದೆ. ಅಭಿನಂದನಾ ಕಾರ್ಯಕ್ರಮ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರ ಅಧ್ಯಕ್ಷತೆಯಲ್ಲಿ ನಡೆಯಲಿದ್ದು, ಬಹುರೂಪಿ ಸಂಸ್ಥೆಯ ಜಿ.ಎನ್.ಮೋಹನ್ ಅವರು ಪ್ರಸ್ತಾವಿಕವಾಗಿ ಮಾತನಾಡುವರು. ಮುಖ್ಯ ಅತಿಥಿಗಳಾಗಿ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್, ವಿಜಯವಾಣಿ ಸಂಪಾದಕ ಕೆ.ಎನ್.ಚನ್ನೇಗೌಡ, ಕರ್ನಾಟಕ ಗಾಂಧಿ ಸ್ಮಾರಕ ನಿಧಿ ಅಧ್ಯಕ್ಷ ವೂಡೇ ಪಿ.ಕೃಷ್ಣ, ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಆಯೇಷಾ ಖಾನಂ ಇದ್ದರು.

## ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ ಅವಧಿ ವಿಸ್ತರಣೆ

**ಬೆಂಗಳೂರು:** ಸರ್ಕಾರದ ಆದೇಶ ದಿನಾಂಕ 2024 ನೇ ನವೆಂಬರ್ 12 ರಲ್ಲಿ ರಾಜ್ಯದಲ್ಲಿ ಶಿಕ್ಷಣ ಮತ್ತು ಸರ್ಕಾರಿ ಸೇವೆಗಳಲ್ಲಿ ಪರಿಶಿಷ್ಟ ಜಾತಿಯ ವಿವಿಧ ಉಪ ಜಾತಿಗಳಿಗೆ ಸೇರಿದವರ ಪ್ರಾತಿನಿಧ್ಯತೆ ಕುರಿತು ಇಟಂಡಿಛಿಟ ಆಚಿಣಚಿ ಪಡೆದು ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ ಬಗ್ಗೆ ಸೂಕ್ತ ಶಿಫಾರಸ್ಸಿನೊಂದಿಗೆ ವರದಿ ಸಲ್ಲಿಸಲು ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಡಾ: ಹೆಚ್.ಎನ್. ನಾಗಮೋಹನ್ ದಾಸ್ ಇವರ ಅಧ್ಯಕ್ಷತೆಯಲ್ಲಿ ಏಕ ಸದಸ್ಯ ಆಯೋಗವನ್ನು ರಚಿಸಲಾಗಿರುತ್ತದೆ.

ಪರಿಶಿಷ್ಟ ಜಾತಿಯಲ್ಲಿನ 101 ಜಾತಿಗಳ ವೈಜ್ಞಾನಿಕ ವರ್ಗೀಕರಣ ಮಾಡಲು ದತ್ತಾಂಶವನ್ನು (ಇಟಂಜಡಿಛಿಟ ಆಚಿಣಚಿ) ಸಂಗ್ರಹಿಸಲು ಹೊಸದಾದ ಸಮೀಕ್ಷೆಯನ್ನು ನಡೆಸಲು ದಿನಾಂಕ: 27-03-2025 ರ ಆಯೋಗದ ಮಧ್ಯಂತರ ವರದಿಯಲ್ಲಿ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾದ ಹಿನ್ನೆಲೆಯಲ್ಲಿ ಸಮೀಕ್ಷೆಯನ್ನು ದಿನಾಂಕ: 05-05-2025 ರಿಂದ ಗಣತಿದಾರರು ಮನೆ-ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸುವುದರ ಮೂಲಕ ರಾಜ್ಯಾದ್ಯಂತ ಈಗಾಗಲೇ ಪ್ರಾರಂಭಿಸಲಾಗಿರುತ್ತದೆ. ಬಿಬಿಎಂಪಿ ವ್ಯಾಪ್ತಿಯ ವಲಯಗಳಲ್ಲಿ ಪರಿಶಿಷ್ಟ ಜಾತಿ ಜನಾಂಗದ ಸಮೀಕ್ಷೆ ಕಾರ್ಯವು ಇನ್ನೂ ಪ್ರಗತಿಯಾಗಬೇಕಾಗಿರುವುದರಿಂದ, ಮಳೆ/ಹವಾಮಾನ ವೈಪರೀತ್ಯ ಕಾರಣಗಳಿಂದಾಗಿ, ಅನೇಕ ಪರಿಶಿಷ್ಟ ಜಾತಿ ಸಂಘಗಳಿಂದ ಮತ್ತು ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಕೋರಿಕೆಯ ಮೇರೆಗೆ ಸಮೀಕ್ಷಾ ಕಾರ್ಯವನ್ನು ಪೂರ್ಣಗೊಳಿಸಲು ಅನುವಾಗುವಂತೆ ದಿನಾಂಕವನ್ನು ವಿಸ್ತರಿಸಲು ನಿರ್ಣಯಿಸಲಾಗಿದೆ. ಮನೆ-ಮನೆ ಭೇಟಿ ನೀಡಿ ಸಮೀಕ್ಷೆಯು ದಿನಾಂಕ:26-05-2025 ರಿಂದ 29-05-2025 ರವರೆಗೆ ವಿಸ್ತರಿಸಲಾಗಿದೆ. ವಿಶೇಷ ಶಿಬಿರ (ಸಮೀಕ್ಷಾ ಬ್ಲಾಕ್ ವ್ಯಾಪ್ತಿಯಲ್ಲಿ) - 03 ದಿನಗಳ ಕಾಲ - ಮೇ 30, 31 ಹಾಗೂ 01 ನೇ ಜೂನ್ -2025 ರವರೆಗೆ ಮರು ನಿಗದಿಪಡಿಸಲಾಗಿದೆ ಮತ್ತು ಆನ್ ಲೈನ್ ಮೂಲಕ ಸ್ವಯಂ ಘೋಷಣೆ- ದಿನಾಂಕ: 01-06-2025 ರವರೆಗೆ ಮುಂದುವರೆಯಲಿದೆ.

# ಸ್ವಚ್ಛ, ಗುಣಮಟ್ಟದ ಆಹಾರ ಪೂರೈಸಿ

**ಪಿರಿಯಾಪಟ್ಟಣ:** ರೈತರು, ಗ್ರಾಮೀಣ ಜನರು, ಕೂಲಿಕಾರ್ಮಿಕರು, ವಿದ್ಯಾರ್ಥಿಗಳು , ಮಧ್ಯಮ ವರ್ಗದ ಜನತೆಗೆ ಕಡಿಮೆ ದರದಲ್ಲಿ ತಿಂಡಿ ಮತ್ತು ಊಟ ಒದಗಿಸುವ ಉದ್ದೇಶದಿಂದ ರಾಜ್ಯ ಸರ್ಕಾರವು ಅವಶ್ಯಕತೆ ಇರುವ ಕಡೆ ಇಂದಿರಾ ಕ್ಯಾಂಟೆನ್ ಗಳನ್ನೂ ತೆರೆಯಲಾಗುತ್ತಿದೆಯೆಂದು ಗ್ಯಾರಂಟೀ ಅನುಷ್ಠಾನ ಸಮಿತಿ ಅಧ್ಯಕ್ಷ ನಿತಿನ್ ವೆಂಕಟೇಶ್ ತಿಳಿಸಿದರು.

ಪಟ್ಟಣದ ಬಿ.ಎಂ ರಸ್ತೆಯ ತೋಟಗಾರಿಕೆ ಇಲಾಖೆಯ ಪಕ್ಕದಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಇಂದಿರಾ ಕ್ಯಾಂಟೀನ್ ಅನ್ನು ಉದ್ಘಾಟಿಸಿ ಮಾತನಾಡಿದ ಅವರು ರಾಜ್ಯ ಸರ್ಕಾರದ ಮಹತ್ವಕಾಂಕ್ಷಿ ಯೋಜನೆಗಳಲ್ಲಿ ಒಂದಾದ ಇಂದಿರಾ ಕ್ಯಾಂಟೀನನ್ನು ಪಿರಿಯಾಪಟ್ಟಣದಲ್ಲಿ ತೆರೆಯುತ್ತಿರುವುದರಿಂದ ಮಧ್ಯಮ ವರ್ಗದ ಜನರಿಗೆ ಅನುಕೂಲಕರವಾಗಿದೆ. ಗುಣಮಟ್ಟದ ಆಹಾರವನ್ನು ದೊರಕಿಸಿಕೊಡುವುದರ ಮೂಲಕ ಎಲ್ಲರೂ ಈ ಯೋಜನೆ ಪಡೆಯುವಂತಾಗಬೇಕು ಇದಕ್ಕಾಗಿ ಇದರ ಜವಾಬ್ದಾರಿ ಪಡೆದವರು ಸಾಧ್ಯವಾದಷ್ಟು ಶುಚಿ ,ರುಚಿಯ ಕಡೆ ಗಮನ ಹರಿಸಬೇಕು. ಇಂಥಹ ಜನಪ್ರಿಯ ಯೋಜನೆಗಳನ್ನು ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳಬೇಕು. ಇದಕ್ಕಾಗಿ ಸಿದ್ದರಾಮಯ್ಯ ಸರ್ಕಾರ ಕೋಟ್ಯಂತರ ರೂಪಾಯಿಗಳನ್ನು ವ್ಯಯ ಮಾಡುತ್ತಿದೆ. ಬೆಳಗಿನ ತಿಂಡಿಗೆ ಇಡ್ಲಿ, ಬಾತು,ಪುಳಿಯೋಗರೆ,ಬಿಸಿಬೇಳೆ ಬಾತ್ , ಕಾರ ಬಾತು ಜೊತೆಗೆ ಚಟ್ನಿ 5 ರೂಪಾಯಿ, ಮಧ್ಯಾಹ್ನ ಮತ್ತು ರಾತ್ರಿ ಊಟಕ್ಕೆ ಅನ್ನ ಸಾಂಬಾರ,ಮುದ್ದೆ,ಚಪಾತಿ, ಕುಂಬಳಕಾಯಿ ಸಾಂಬಾರ ಅನ್ನು ಕೇವಲ 10 ರೂಪಾಯಿಗಳಿಗೆ ಸಿಗುತ್ತವೆ.ಇದರಿಂದ ಪಟ್ಟಣದಲ್ಲಿ ದುಬಾರಿ ಹಣ ಕೊಟ್ಟು ಆಹಾರಗಳನ್ನು ಕೊಳ್ಳುವ ಪರಿಸ್ಥಿತಿ ದೂರವಾಗುತ್ತದೆ.ನಿತ್ಯವೂ ಸಾವಿರಾರು ಸಂಖ್ಯೆಯಲ್ಲಿ ಜನರು ಗ್ರಾಮಾಂತರ ಪ್ರದೇಶಗಳಿಂದ ಪಟ್ಟಣಕ್ಕೆ ಕೂಲಿ ಕೆಲಸಕ್ಕಾಗಿ ಹಾಗೂ ಅಗತ್ಯವಿರುವ ವಸ್ತುಗಳನ್ನು ಕೊಳ್ಳಲು ಪಟ್ಟಣಕ್ಕೆ ಆಗಮಿಸುತ್ತಾರೆ ಇಂತಹ ಸಂದರ್ಭದಲ್ಲಿ ಕಡಿಮೆ ದರದಲ್ಲಿ ತಿಂಡಿ ಮತ್ತು ಊಟ ಸವಿಯಲ್ಲೂ ಸಾಧ್ಯವಾಗುತ್ತದೆ ಎಂದು ತಿಳಿಸಿದರು

ಈ ಸಂದರ್ಭದಲ್ಲಿ ಪುರಸಭಾ ಅಧ್ಯಕ್ಷ ಪ್ರಕಾಶ್ ಸಿಂಗ್,ಉಪಾಧ್ಯಕ್ಷೆ ಸುವರ್ಣ ರವಿ ಸದಸ್ಯರಾದ ಮಂಜುನಾಥ್ ಸಿಂಗ್, ಮಂಜುನಾಥ್ ,ಮಲ್ಲಿಕಾರ್ಜುನ್, ಎಂ.ಸುರೇಶ್, ರವಿ.ಪಿ.ವಿ, ಪುರಸಭಾ ಮುಖ್ಯಾಧಿಕಾರಿ ಮುತ್ತಪ್ಪ ಸಿಬ್ಬಂದಿಗಳಾದ ಕುಮಾರ್, ವನಿತಾ, ಪ್ರದೀಪ್, ಚೇತನ್, ರಮೇಶ್, ಪ್ರದೀಪ್ , ಶರ್ಮಿಳಾ, ಸ್ವಾಮಿ, ಸೇರಿದಂತೆ ಕಾಂಗ್ರೆಸ್ ಕಾರ್ಯಕರ್ತರು, ಸಾರ್ವಜನಿಕರು ಹಾಜರಿದ್ದರು.



## ಬಡವರ ಹಸಿವು ನೀಗಿಸುವ ಇಂದಿರಾ ಕ್ಯಾಂಟೀನ್

**ಪಿರಿಯಾಪಟ್ಟಣ:** ಹಸಿವು ಮುಕ್ತ ಭಾರತ ಹಾಗೂ ಕೈಗೆಟುಕುವ ಧರದಲ್ಲಿ ಸ್ವಚ್ಛ, ಗುಣ ಮಟ್ಟದ ಮತ್ತು ಆರೋಗ್ಯಕರ ಆಹಾರವನ್ನು ಒದಗಿಸುವ ಉದ್ದೇಶದಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದಿರಾ ಕ್ಯಾಂಟೀನ್ ಆರಂಭಿಸಿದ್ದಾರೆ ಎಂದು ತಾಲ್ಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ನಿತಿನ್ ವೆಂಕಟೇಶ್ ತಿಳಿಸಿದರು. ಪಟ್ಟಣದ ಬಸ್ ನಿಲ್ದಾಣದ ಬಳಿ ಬಿ.ಎಂ.ರಸ್ತೆಯಲ್ಲಿ ನಗರಾಭಿವೃದ್ಧಿ ಮತ್ತು ಪೌರಾಡಳಿತ ಇಲಾಖೆ ಹಾಗೂ ಪುರಸಭೆ ವತಿಯಿಂದ ನಿರ್ಮಾಣವಾಗಿರುವ ಇಂದಿರಾ ಕ್ಯಾಂಟೀನ್‌ನನ್ನು ಉದ್ಘಾಟಿಸಿ ಮಾತನಾಡಿದರು.

ಪಿರಿಯಾಪಟ್ಟಣ ಹಾಗೂ ಸುತ್ತಮುತ್ತಲಿನ ಬಡವರು, ಕಾರ್ಮಿಕರು, ರೈತರು, ಗ್ರಾಮೀಣ ಜನರು, ವಿದ್ಯಾರ್ಥಿಗಳು ಸೇರಿದಂತೆ ಎಲ್ಲ ವರ್ಗದ ಜನತೆ ಇಂದಿರಾ ಕ್ಯಾಂಟೀನ್ ಸೌಲಭ್ಯ ಪಡೆದುಕೊಳ್ಳಬೇಕು. ರಾಜ್ಯ ಹಸಿವು ಮುಕ್ತವಾಗಬೇಕು ಎಂಬುದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆಶಯ ಹಾಗಾಗಿ ಕಳೆದ 2013 ರಲ್ಲಿಯೇ ಇಂದಿರಾ ಕ್ಯಾಂಟೀನ್ ಆರಂಭಿಸಲಾಯಿತು ಆದರೆ ಕಾರಣಾಂತರಗಳಿಂದ ನಮ್ಮ ತಾಲ್ಲೂಕಿಗೆ ಈ ಸೌಲಭ್ಯ ತಡವಾಗಿ ಬಂದಿದೆ. ಬೆಳಗ್ಗೆ ಒಬ್ಬರು ಸೇವಿಸುವ ತಿಂಡಿಗೆ ಸರ್ಕಾರ 45 ರೂ ಗಳನ್ನು ಖರ್ಚು ಮಾಡುತ್ತಿದೆ. ಗ್ರಾಹಕರು ಕೇವಲ 5 ರು. ಗಳನ್ನು ನೀಡಿದರೆ ಸಾಕು. ಮಧ್ಯಾಹ್ನ ಹಾಗೂ ರಾತ್ರಿಯ ಊಟಕ್ಕೆ 55 ರು. ಗಳನ್ನು ನೀಡುತ್ತದೆ. ಕೇವಲ 10 ರು. ಗಳನ್ನು ನೀಡಿ ಊಟ ಮಾಡಬಹುದು. ಇಂತಹ ಜನಕಲ್ಯಾಣ ಯೋಜನೆಗಳು ಕಾಂಗ್ರೆಸ್ ನೇತೃತ್ವದ ಸರ್ಕಾರದಿಂದ ಮಾತ್ರ ಸಾಧ್ಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಕ್ಯಾಂಟೀನ್ ನಡೆಸುವವರು ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಸ್ವಚ್ಛತೆಯನ್ನು ಕಾಪಾಡದಿದ್ದರೆ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಸಿದ ಅವರು, ಶುಚಿ, ರುಚಿಯಾದ ಊಟವನ್ನು ಮಾತ್ರ ಇಲ್ಲಿನ ಜನತೆ ಇಷ್ಟಪಡುತ್ತಾರೆ. ಗ್ರಾಹಕರೊಂದಿಗೆ ಸೌಜನ್ಯದಿಂದ ವರ್ತಿಸಬೇಕು ಎಂದು ಕಿವಿಮಾತು ಹೇಳಿದರು.

# ಪಿರಿಯಾಪಟ್ಟಣದಲ್ಲಿ ತಿರಂಗಾ ಯಾತ್ರೆ, ನೂರಾರು ಸಂಖ್ಯೆಯಲ್ಲಿ ಪಾಲ್ಗೊಂಡ ವಿದ್ಯಾರ್ಥಿಗಳಿಂದ ದೇಶಭಕ್ತಿ ಅನಾವರಣ

**ಪಿರಿಯಾಪಟ್ಟಣ:** ಅಮಾಯಕ ಪ್ರವಾಸಿಗರನ್ನು ಕೊಂದ ಉಗ್ರರಿಗೆ ದೇಶದ ಸೈನಿಕರು ತಕ್ಕ ಉತ್ತರವನ್ನು ನೀಡುವ ಮೂಲಕ ಇಡೀ ವಿಶ್ವಕ್ಕೆ ಭಾರತದ ಶಕ್ತಿಯನ್ನು ಅನಾವರಣಗೊಳಿಸಿದ್ದಾರೆ ಎಂದು ಬಿಜೆಪಿ ತಾಲ್ಲೂಕು ಘಟಕದ ಅಧ್ಯಕ್ಷ ವಿ.ರಾಜೇಂದ್ರ ತಿಳಿಸಿದರು.

ಆಪರೇಷನ್ ಸಿಂಧೂರ್ ಕಾರ್ಯಾಚರಣೆಯನ್ನು ಯಶಸ್ವಿಯಾಗಿ ಭೇಧಿಸಿದ ದೇಶದ ಸೈನಿಕರ ಆತ್ಮಸ್ಥೈರ್ಯ ಹೆಚ್ಚಿಸುವ ನಿಟ್ಟಿನಲ್ಲಿ ಪಿರಿಯಾಪಟ್ಟಣದಲ್ಲಿ ಆಯೋಜಿಸಲಾಗಿದ್ದ ತಿರಂಗಾ ಯಾತ್ರೆಗೆ ಚಾಲನೆ ನೀಡಿ ಮಾತನಾಡಿದ ಅವರು ಅಮಾಯಕ ಪ್ರವಾಸಿಗರ ಮೇಲೆ ದುರ್ವರ್ತನೆ ದುರ್ವಾವರ್ತನೆ ತೋರಿ ಅಮಾನುಷವಾಗಿ ಕೊಂದು ವಿಕೃತ ಮೆರೆದ ಪಾಕಿಸ್ತಾನದ ಉಗ್ರರಿಗೆ ಆಪರೇಷನ್ ಸಿಂಧೂರದ ಮೂಲಕ ಅವರ ಹುಟ್ಟು ಅಡಗಿಸಿ ರಾಷ್ಟ್ರದ ರಕ್ಷಣೆಗೆ ನಿಂತವರು ನಮ್ಮ ಸೈನಿಕರು. ಅವರಿಗೆ ಗೌರವ ಸಲ್ಲಿಸುವೂದು ಪ್ರತಿಯೊಬ್ಬ ಭಾರತೀಯರ ಕರ್ತವ್ಯ. ಈ ಹಿನ್ನೆಲೆಯಲ್ಲಿ ಪಿರಿಯಾಪಟ್ಟಣದಲ್ಲಿ ನಡೆಯುತ್ತಿರುವ ತಿರಂಗಾ ಯಾತ್ರೆಗೆ ಮಠಾಧೀಶರು, ತಾಲೂಕಿನ ವಿವಿಧ ಸಂಘಟನೆಗಳು, ವಿದ್ಯಾರ್ಥಿಗಳು, ಹಾಗೂ ರಾಜಕೀಯ ಮುಖಂಡರು ಪಕ್ಷಬೇಧ ಮರೆತು ಸಹಕಾರ ನೀಡಿದ್ದಾರೆ. ಇದನ್ನು ಪಾಕಿಸ್ತಾನ ಅರ್ಥ ಮಾಡಿಕೊಳ್ಳದಿದ್ದರೆ ಭಾರತ ಯಾವುದಕ್ಕೂ ಕಡಿಮೆ ಇಲ್ಲ ಎಂಬುದನ್ನು ಮತ್ತೊಮ್ಮೆ ತೋರಿಸಬೇಕಾಗುತ್ತದೆ. ಪ್ರಧಾನಿ ಮೋದಿ ಅವರ ದೇಶದ ಅಭಿವೃದ್ಧಿಯ ಸಂಕಲ್ಪಕ್ಕೆ ಪೂರಕವಾಗಿ ಸೈನಿಕರು ಕೆಲಸ ಮಾಡಿದ್ದಾರೆ ಎಂದರು.

ಪಿರಿಯಾಪಟ್ಟಣದಲ್ಲಿ ನಡೆದ ತಿರಂಗಾ ಯಾತ್ರೆಯಲ್ಲಿ ಸಾರ್ವಜನಿಕರು ಪಾಲ್ಗೊಂಡಿದ್ದರು. ಬೃಹತ್ ರಾಷ್ಟ್ರ ಧ್ವಜವನ್ನು ಹಿಡಿದು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಮೆರವಣಿಗೆಯಲ್ಲಿ ಸಾಗಿದರು. ಈ ಸಂದರ್ಭದಲ್ಲಿ ರಾವಂದೂರು ಮುರುಘಾ ಮಠದ ಮೋಕ್ಷಾಪತಿ ಸ್ವಾಮಿಜಿ, ಟಿಬೆಟಿಯನ್ ಧರ್ಮ ಗುರು ಕರ್ಮಾಪಾ ರೆಪುಂಜೀ, ಮಾಜಿ ಶಾಸಕರಾದ ಕೆ. ಮಹದೇವ್, ಹೆಚ್.ಸಿ.ಬಸವರಾಜ್, ತಾಲ್ಲೂಕು ಜೆಡಿಎಸ್ ಅಧ್ಯಕ್ಷ ಅಣ್ಣಯ್ಯ ಶೆಟ್ಟಿ, ಬಿಜೆಪಿ ತಾಲ್ಲೋಕು ಘಟಕದ ಪ್ರಧಾನ ಕಾರ್ಯದರ್ಶಿ ಚನ್ನಬಸವರಾಜ್ ,ರವಿ ಮುಖಂಡರಾದ ಎಂ.ಎಂ.ರಾಜೇಗೌಡ, ಆರ್.ಟಿ.ಸತೀಶ್, ಹೆಚ್ .ಸಿ.ವೀರಭದ್ರ, ಲೋಕಪಾಲಯ್ಯ, ಬೆಮ್ಮತ್ತಿ ಚಂದ್ರು , ಹೆಚ್.ವಿ.ಜಗಪಾಲ್, ಹೆಚ್.ಜೆ.ಪ್ರವೀಣ, ಟೈಲರ್ ರಾಘವೇಂದ್ರ, ನಂದಿಪುರ ಲೋಕೇಶ್, ಮಂಜು ಸೇರಿದಂತೆ ತಾಲೂಕಿನ ವಿವಿಧ ಸಮುದಾಯಗಳ ಮುಖಂಡರು, ರೈತಸಂಘದ ಮುಖಂಡರು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.



ಸಂಜೆ ಮುಗಿಲು
ಭಾನುವಾರ
25.5.2025



# ಕೃಷಿಯಲ್ಲಿ ತಾಂತ್ರಿಕತೆ, ಯಂತ್ರೋಪಕರಣ ಬಳಕೆ ಮಾಡಿ



**ಮಂಡ್ಯ:** ಬದಲಾವಣೆ ಪ್ರಕೃತಿಯ ನಿಯಮ. ಕೃಷಿ ಪದ್ಧತಿಎಂದರೆಕ್ಷವಾದ ಕೆಲಸ, ಸಾಲ ಮಾಡಬೇಕು, ನ್ಷ ಅನುಭವಿಸಬೇಕು ಎಂಬ ಮನೋಭಾವವನ್ನುತೊರೆಯಬೇಕು. ಕೃಷಿಯಲ್ಲಿತಾಂತ್ರಿಕತೆ ಹಾಗೂ ಕೃಷಿ ಯಂತ್ರೋಪಕರಣಗಳನ್ನು ಬಳಸಿಕೊಂಡು ರೈತರುಆರ್ಥಿಕವಾಗಿ ಸದೃಢರಾಗಬಹುದುಎಂದು ಕೃಷಿ ಹಾಗೂ ಜಿಲ್ಲಾಉಸ್ತುವಾರಿ ಸಚಿವಎನ್‌ಚಲುವರಾಯಸ್ವಾಮಿಅವರು ತಿಳಿಸಿದರು.

ಕೃಷಿ ಮಹಾವಿದ್ಯಾಲಯ, ವಿ.ಸಿ.ಫಾರಂ, ಮಂಡ್ಯಇಲ್ಲಿಕಬ್ಬು, ಭತ್ತ, ರಾಗಿ ಬೆಳೆಗಳ ಬಗ್ಗೆ ವಿಶೇತಾಂತ್ರಿಕ ಸಂವಾದ ಬಿತ್ತನೆಯಿಂದ ಮಾರಾಟದವರೆಗೆ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು. ಮಂಡ್ಯಜಿಲ್ಲೆಯು ಕೃಷಿ ಪ್ರಧಾನಜಿಲ್ಲೆಯಾಗಿದ್ದು, ಕೃಷಿ ಪದ್ದತಿಯಲ್ಲಿ ಹೆಚ್ಚು ಇಳುವರಿ ಹಾಗೂ ಆರ್ಥಿಕವಾಗಿ ಸದೃಢರಾಗಲು ಅನೇಕ ಹೊಸ ಪದ್ಧತಿಗಳನ್ನು ಕೃಷಿ ವಿಜ್ಞಾನಿಗಳು ಕೃಷಿ ಮಹಾವಿದ್ಯಾಲಯಗಳು ಪರಿಚಯಿಸುತ್ತಿದೆ.ರೈತರು ಹೊಸ ಪದ್ಧತಿ ಗಳನ್ನು ಅಳವಡಿಸಿಕೊಳ್ಳಲು ಮುಂದಾಗಬೇಕುಎಂದರೆ.

ಒಂದೇರೀತಿಯ ಬೆಳೆಯನ್ನು ಹಲವು ವರ್ಗಗಳು ನಿರಂತರವಾಗಿ ಬೆಳೆದರೆ ಮಣ್ಣುಪೌಷ್ಟಿಕಾಂಶ ಕಳೆದುಕೊಳ್ಳುವುದರೆ ಜೊತೆಗೆ ಇಳುವರಿ ಸಹ ಕಡಿಮೆಯಾಗುತ್ತದೆ. ಮೂರುಎಕರೆಜಮೀನನ್ನು ಮೂರು ಭಾಗ ಮಾಡಿಒಂದೊಂದುಎಕರೆಯಲ್ಲಿಒಂದೊಂದು ಬೆಳೆಯನ್ನು ಬೆಳೆಯಿರಿ.ಮುಂದಿನ ವರ್ಷ ಮೂರು ವಿಭಾಗದಲ್ಲಿ ಬೆಳೆದ ಬೆಳೆಯನ್ನು ಅದಲು ಬದಲು ಮಾಡಿಕೊಳ್ಳಿ ಎಂದರು.

ರೈತರು ಹೊಸ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳಲು ಹಲವಾರು ಕಾರಣಗಳಿಂದ ಹಿಂಜರಿಯಬಹುದು. ರೈತರುತಮ್ಮಜಮೀನಿನ ಒಂದು ಭಾಗದಲ್ಲಿ ಹೊಸ ತಂತ್ರಜ್ಞಾನವನ್ನು ಅಳವಡಿಸಿಕೊಂಡು ಬೆಳೆಯನ್ನು ಬೆಳೆಯಿರಿ, ಲಾಭದಾಯಕಎಂದು ಮನದಟ್ಟುಆದ ನಂತರ ಸಂಪೂರ್ಣವಾಗಿ ಹೊಸ ತಂತ್ರಜ್ಞಾನ ಅಳವಡಿಸಿಕೊಳ್ಳಿ ಎಂದು ಕಿವಿ ಮಾತು ಹೇಳಿದರು.

ಭತ್ತ, ರಾಗಿ ಹಾಗೂ ಇನ್ನಿತರೆ ಬೆಳೆಗಳನ್ನು ಬೆಳೆಯಲು 6 ತಿಂಗಳು ತೆಗೆದುಕೊಳಲಾಗುತ್ತದೆ.ಆದರೆ ಮಾರಾಟವನ್ನು ಬೆಳೆ ಬಂದತಕ್ಷಣಜಮೀನಿನಲ್ಲೇ ಮಾರಾಟ ಮರಾಟ ಮಾಡಲಾಗುತ್ತದೆ. ಹೆಚ್ಚು ಆದಾಯ ಬರುವರೀತಿ ಚಿಂತಿಸಿ ಮೌಲ್ಯವರ್ಧನಾ ತಂತ್ರಗಳನ್ನು ಅಳವಡಿಸಿಕೊಳ್ಳಿ ಎಂದರು.

ಕೃಷಿ ಕರ್ಮಿಕರಕೊರತೆಯ ಬಗ್ಗೆ ಹೆಚ್ಚು ಚಿಂತಿಸುವ ಸರ್ಕಾರ ಕೃಷಿ ಯಂತ್ರೋಪಕರಣಗಳ ಒಂದು ಸಾವಿರಕೋಟಿಅನುದಾನವನ್ನು ಮೀಸಲಿಡಲಾಗಿದೆ.ಕೃಷಿ ಕಟಾವು ಹೈಟೆಕ್ ಯಂತ್ರಕ್ಕೆ 40 ಲಕ್ಷರೂ ಸಬ್ಸಿಡಿ ನೀಡಲಾಗುತ್ತಿದ್ದು, ಸುಮರು 350 ರೈತರಿಗೆಯಂತ್ರ ನೀಡಲಾಗಿದೆಎಂದರು.

ಮಂಡ್ಯಜಿಲ್ಲೆಗೆರೈತರ ಹಿತದೃಷ್ಟಿಯಿಂದ ಕೃಷಿ ವಿಶ್ವವಿದ್ಯಾನಿಲಯವನ್ನು ಮಂಜೂರು ಮಾಡಿಸಲಾಗಿದೆ.ಇದರಕಾರ್ಯವೈಖರಿಯನ್ನು 3 ವರ್ಷದೊಳಗೆ ಜಿ.ಕೆ.ವಿ.ಕೆರೀತ್ಯ ಮಾಡಲಾಗುವುದು. ವಿಶ್ವವಿದ್ಯಾನಿಲಯದಅಗತ್ಯತೆಯ ಬಗ್ಗೆ ಮುಂದಿನ ದಿನಗಳಲ್ಲಿ ಜನರಿಗೆಅರ್ಥವಾಗಲಿದೆಎಂದರು.

ಜಂಟಿ ಕೃಷಿ ನಿರ್ದೇಶಕಅಶೋಕ್‌ಅವರು ಪ್ರಾಸ್ತಾವಿಕವಾಗಿ ಮಾತನಾಡಿಜಿಲ್ಲೆಯಲ್ಲಿಕಬ್ಬು, ರಾಗಿ ಹಾಗೂ ಭತ್ತವನ್ನು ಹೆಚ್ಚಾಗಿ ಬೆಳೆಯಲಾಗುತ್ತದೆ. ಈ ಮೂರು ಬೆಳೆಗಳಲ್ಲಿ ವಿನೂತನ ಪದ್ಧತಿ ಹಾಗೂ ತಾಂತ್ರಿಕತೆಯನ್ನು ಅಳವಡಿಸಿ ಹೆಚ್ಚಿನರೈತರಿಗೆ ಪರಿಚಯಿಸಲು ಪ್ರಯತ್ನಿಸಲಾಗುತ್ತಿದೆಎಂದರು.

ಕಬ್ಬಿನಲ್ಲಿ ಹೆಚ್ಚು ಉತ್ಪಾದಕತೆಗಾಗಿ 5 ಪಟ ಹಾಗೂ ಒಂಟಿಕಣ್ಣಿನಕಬ್ಬು ಪೈರು ಬೆಳೆಯನ್ನು ರೈತರು ಬೆಳೆಯುತ್ತಿದ್ದಾರೆ .ನರೇಗಾಯೋಜನೆಯನ್ನು ಉಪಯೋಗಿಸಿಕೊಂಡು ಸುಮಾರು 2000 ಹೆಕ್ಟೇರ್ ಪ್ರದೇಶದಲ್ಲಿ ವಿವಿಧರಾಜ್ಯ ಮತ್ತು ದೇಶಗಳಿಗೆ ರಫ್ತು ಮಾಡುವಗುಣಮಟ್ಟದರಾಗಿ ಬೆಳೆಯಾಗುತ್ತಿದೆ. ಭತ್ತದ ನಾಟಿಗಾಗಿ ಹೊರ ಜಿಲ್ಲೆಗಳಿಂದ ಮಂಡ್ಯಜಿಲ್ಲೆಗೆಕಾರ್ಮಿಕರನ್ನು ಕರೆತರಲಾಗಿತ್ತಿದೆಇದರ ಬದಲು ನಾಟಿ ಮಾಡಲುಯಾಂತ್ರಿಕತೆ ಪದ್ಧತಿಯನ್ನುಜಿಲ್ಲೆಯ ಕೆಲವು ರೈತರು ಅಳವಡಿಸಿಕೊಂಡಿದ್ದಾರೆ. ಈ ಪದ್ಧತಿಗಳ ಬಗ್ಗೆ ಹೆಚ್ಚಿನರೈತರಿಗೆ ಪರಿಚಯಿಸಲು ವಿಶೇಷ ದ್ವೈಮಾಸಿಕ ತಾಂತ್ರಿಕಕಾರ್ಯಾಗಾರವನ್ನುಆಯೋಜಿಸಲಾಗಿದ 'ಎಂದರು. ಜಿಲ್ಲಾಧಿಕಾರಿಡಾ; ಕುಮಾರ, ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕಅಧಿಕಾರಿ ಕೆ.ಆರ್.ನಂದಿನಿ, ಜಿಲ್ಲಾ ಪೊಲೀಸ್ ವರ್ಶ್ರಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಕೃಷಿ ವಿಶ್ವವಿದ್ಯಾನಿಲಯದ ವಿಶೇಷಾಧಿಕಾರಿ ಹರಿಣಿಕುಮಾರ್, ವಿ.ಸಿ.ಫಾರಂ ನ ಡೀನ್ ಫತೀಮ ಸೇರಿದಂತೆ ಕೃಷಿ ವಿಜ್ಞಾನಿಗಳು, ರೈತರು ಉಪಸ್ಥಿತರಿದ್ದರು.

## ದೇಸಿ ತಳಿ ಸಂರಕ್ಷಣೆ ಮತ್ತು ಉತ್ತೇಜನ ಸಂರಕ್ಷಕರ ನೋಂದಣಿಗೆ ಕೃಷಿ ಇಲಾಖೆ ಮನವಿ

**ನಾಗಮಂಗಲ:** ವೈಜ್ಞಾನಿಕವಾಗಿ ಅಭಿವೃದ್ಧಿಪಡಿಸಲಾಗಿರುವ ಅಧಿಸೂಚಿತ ಪ್ರಭೇದಗಳಿಗಿಂತ ಪೋಷಕಾಂಶಗಳ ಸಮೃದ್ಧಿವಾಗಿರುವ ದೇಸಿ ತಳಿ ಸಂರಕ್ಷಣೆಗೆ ರಾಜ್ಯ ಸರ್ಕಾರ ಮುಂದಾಗಿದ್ದು ರೈತರು ಈ ಕಾರ್ಯಕ್ರಮದ ಉಪಯೋಗ ಪಡೆಯಲು ತಮ್ಮ ಹತ್ತಿರದ ರೈತಸಂಪರ್ಕ ಕೇಂದ್ರ ನೋಂದಾಯಿಸಿಕೊಳ್ಳುವಂತೆ ತಾಲೂಕು ಸಹಾಯಕ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ದೇಸಿ ತಳಿ ಸಂರಕ್ಷಣೆಯ ಯೋಜನೆ ಮತ್ತು ಉದ್ದೇಶ ಕಣ್ಮರೆಯಾಗುತ್ತಿರುವ ತಳಿಗಳನ್ನು ಸಂರಕ್ಷಿಸುವ ಜೊತೆಗೆ ಆಯಾ ಸ್ಥಳೀಯ ಪ್ರದೇಶಕ್ಕೆ ಸೂಕ್ತವಾದ ದೇಸಿ ತಳಿಗಳನ್ನು ಗುರುತಿಸುವುದು ಮತ್ತು ಸಂರಕ್ಷಣೆ ಮಾಡುವುದು ಪ್ರಮುಖ ಉದ್ದೇಶವಾಗಿದೆ.

ಗುರುತಿಸಿದ ದೇಸಿ ತಳಿಗಳನ್ನು ಕೃಷಿ ವಿಶ್ವವಿದ್ಯಾನಿಲಯದ ಸಹಾಯದೊಂದಿಗೆ ಅಭಿವೃದ್ಧಿಪಡಿಸಿ ಬಿಡುಗಡೆ ಮಾಡಲಾಗುವುದು ಹಾಗೂ ದೇಸಿ ತಳಿಗಳನ್ನು ಹಿಂದಿನಿಂದಲೂ ಸಂರಕ್ಷಿಸಿ ಕೃಷಿ ಮಾಡುತ್ತಿರುವ ರೈತರಿಗೆ ಬೆಂಬಲ ನೀಡುವುದು.

ಕಾರ್ಯಕ್ರಮದ ಅಡಿಯಲ್ಲಿ ಆಯ್ಕೆಯಾದ ಬೆಳಗಳು ಭತ್ತ ರಾಗಿ ಜೋಳ ತೊಗರಿ ಉರುಳಿ

ಅವರೇ ಅಲಸಂದೆ ಮಡಿಕಿ ಕಾಳು, ಹುಚ್ಚಳ್ಳು ಕುಸುಬೆ ಎಳ್ಳು ನವಣೆ ಸಾಮೆ.ಊದಲು ಕುರುಲೆ ಹಾರಕ ಬರುಗ ಸಲಹಾ ಸಮಿತಿಯು ಶಿಫಾರಸು ಮಾಡಿದೆ.

ಜಿಲ್ಲೆಯಲ್ಲಿ ದೇಸಿ ತಳಿಗಳ ಸಂರಕ್ಷಣೆ ಮಾಡುತ್ತಿರುವ ರೈತರನ್ನು ಇಲಾಖೆಯ ವತಿಯಿಂದ ಗುರುತಿಸಿ ಮೂಲ ಸಮೀಕ್ಷೆಯನ್ನು ಕೆ ಕಿಸನ್ ಮೊಬೈಲ್ ಅಪ್ಲಿಕೇಶನ್ ನಲ್ಲಿ ದಾಖಲಿಸಲಾಗುತ್ತದೆ.

ರೈತರು ಇಂತಹ ಕಾರ್ಯಕ್ರಮವನ್ನು ಸದುಪಯೋಗಪಡಿಸಿಕೊಳ್ಳಲು 28 –5 –2025ರ ಒಳಗಾಗಿ ತಾಲೂಕಿನ ರೈತರು ನೋಂದಣಿಗಾಗಿ ರೈತ ಸಂಪರ್ಕ ಕೇಂದ್ರ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಸಂಪರ್ಕಿಸಲು ತಿಳಿಸಲಾಗಿದೆ.

## ತನುಜ ನಾಮನಿರ್ದೇಶಿತ ಸದಸ್ಯೆ



**ಮೈಸೂರು:** ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಗೆ ಆಡಳಿತ ಮಂಡಳಿ ನಾಮನಿರ್ದೇಶಿತ ಸದಸ್ಯರಾಗಿ ಟಿ.ಸಿ.ತನುಜ ಅವರನ್ನು ನೇಮಕ ಮಾಡಲಾಗಿದೆ. ತನುಜ ಅವರು ಮೈಸೂರಿನ ಹೆಬ್ಬಾಳಿನ ಸುಬ್ರಹ್ಮಣ್ಯನಗರದ ನಿವಾಸಿಯಾಗಿದ್ದು, ವಕೀಲರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಇವರನ್ನು ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ಆಡಳಿತ ಮಂಡಳಿಗೆ ನಾಮನಿರ್ದೇಶಿತ ಸದಸ್ಯರನ್ನಾಗಿ ನೇಮಿಸಲಾಗಿದೆ.

# ಕರ್ನಾಟಕ ರಾಜ್ಯ ಅಹಿಂದ ಒಕ್ಕೂಟದ ಅಧ್ಯಕ್ಷರಾಗಿ ದ್ಯಾವಪ್ಪನಾಯಕ ಆಯ್ಕೆ

**ಮೈಸೂರು:** ಕರ್ನಾಟಕ ರಾಜ್ಯ ಅಹಿಂದ ಒಕ್ಕೂಟದ ಅಧ್ಯಕ್ಷರನ್ನಾಗಿ ಹಿರಿಯ ಹೋರಾಟಗಾರ, ಜನಪರ ಮುಖಂಡ ದ್ಯಾವಪ್ಪನಾಯಕ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು.

ನಗರದ ಜಲದರ್ಶಿನಿ ಅತಿಥಿ ಗೃಹದಲ್ಲಿ ಶನಿವಾರ ಮೈಸೂರು ಜಿಲ್ಲಾ ಮಡಿವಾಳ ಸಂಘದ ಅಧ್ಯಕ್ಷ ಸತ್ಯನಾರಾಯಣ, ಗೌರವಾಧ್ಯಕ್ಷ ಬಿ.ಜಿ.ಕೇಶವ ಮತ್ತು ಸವಿತಾ ಸಮಾಜದ ಮೈಸೂರು ಜಿಲ್ಲಾ ಅಧ್ಯಕ್ಷ ನಾಗೇಶ ಅವರ ನೇತೃತ್ವದಲ್ಲಿ ಅಹಿಂದ ವರ್ಗ ಗಳ 24 ಸಮುದಾಯಗಳ ಮುಖಂಡರು ಒಟ್ಟಾಗಿ ಸೇರಿ ಸುದೀರ್ಘ ಸಭೆ ನಡೆಸಿ, ದ್ಯಾವಪ್ಪನಾಯಕ ಅವರನ್ನು ಹಂಗಾಮಿ ಅಧ್ಯಕ್ಷರನ್ನಾಗಿ ಅವಿರೋಧ ವಾಗಿ ಆಯ್ಕೆ ಮಾಡಿದರು.

ಇದಕ್ಕೂ ಮುನ್ನ ನಡೆದ ಸಭೆಯಲ್ಲಿ ರಾಜ್ಯ ಮಟ್ಟದ ನೂತನ ಅಹಿಂದ ಸಂಘಟನೆಯ ನೇತೃತ್ವ ವಹಿಸಲು ಆಕಾಂಕ್ಷಿಗಳು ಇದ್ದರೆ ಹೆಸರು ಸೂಚಿಸಿ ಎಂದು ಸಭೆಯಲ್ಲಿ ಕೋರಲಾಯಿತು. ಈ ವೇಳೆ ಯಾರೊಬ್ಬರೂ ಅಧ್ಯಕ್ಷರಾಗಲು ಮುಂದೆ ಬರೆದಿದ್ದ ಕಾರಣ. ಮೈಸೂರು ಜಿಲ್ಲಾ ಮಡಿವಾಳ ಸಂಘದ ಅಧ್ಯಕ್ಷರಾದ ಸತ್ಯನಾರಾಯಣ ಅವರು ದ್ಯಾವಪ್ಪನಾಯಕ ಅವರ ಹೆಸರನ್ನು ಸೂಚಿಸಿದರು.

ಸವಿತಾ ಸಮಾಜದ ಮೈಸೂರು ಜಿಲ್ಲಾ ಅಧ್ಯಕ್ಷರಾದ ನಾಗೇಶ್ ಅವರು ದ್ಯಾವಪ್ಪನಾಯಕ ಅವರ ಹೆಸರನ್ನು ಅನುಮೋದಿಸಿದರು. ಬಳಿಕ ಸಭೆಯಲ್ಲಿ ಸೇರಿದ್ದ ಎಲ್ಲ ಸಮುದಾಯಿಗಳ ಮುಖಂಡರು ಚಪ್ಪಾಳೆ ಹೊಡೆಯುವ ಮೂಲಕ ದ್ಯಾವಪ್ಪನಾಯಕ ಅವರನ್ನು ಹ0ಗಾಮಿ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿದರು.

ಈ ಸಂದರ್ಭದಲ್ಲಿ ಮೈಸೂರು ಜಿಲ್ಲಾ ಸವಿತಾ ಸಮಾಜದ ಅಧ್ಯಕ್ಷರಾದ ನಾಗೇಶ್ ಅವರು ಮಾತನಾಡಿ, ಹಿರಿಯ ಹೋರಾಟಗಾರ ಮತ್ತು ಪ್ರಾಮಾಣಿಕ ವ್ಯಕ್ತಿತ್ವ ಹೊಂದಿರುವ ಜನಪರ ಮುಖಂಡರಾದ ದ್ಯಾವಪ್ಪ ನಾಯಕ ಅವರನ್ನು ಕರ್ನಾಟಕ ರಾಜ್ಯ ಅಹಿಂದ ಒಕ್ಕೂಟದ ಹಂಗಾಮಿ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಗಿದೆ. ಮುಂದೆ ಇವರ ನೇತೃತ್ವದಲ್ಲಿ ಎಲ್ಲ ಸಮುದಾಯಗಳಿಗೆ ಆದ್ಯತೆ ನೀಡುವ ಮೂಲಕ 25 ಜನರ ಸಮಿತಿ ರಚಿಸಲಾಗುವುದು. ಸಮಿತಿಯಲ್ಲಿ ಎಲ್ಲ ಕೋಮುಗಳಿಗೂ, ಮಹಿಳೆಯರಿಗೂ ಆದ್ಯತೆ ನೀಡಲಾಗುವುದು ಎಂದರು.



ಮೈಸೂರು ಜಿಲ್ಲಾ ಮಡಿವಾಳ ಸಂಘದ ಅಧ್ಯಕ್ಷರಾದ ಸತ್ಯನಾರಾಯಣ ಅವರು ಮಾತನಾಡಿ, ದ್ಯಾವಪ್ಪ ನಾಯಕ ಅವರು ತಳ ಸಮುದಾಯದ ನೋವುಗಳನ್ನು ಬಲ್ಲವರಾಗಿದ್ದಾರೆ. ಈ ಸಮುದಾಯದ ಜನರಿಗೆ ಯಾವುದೇ ರೀತಿಯ ಸಂಕಷ್ಟಗಳು ಬಂದರೂ ಅದನ್ನು ಗಂಭೀರವಾಗಿ ಪರಿಗಣಿಸಿ ನ್ಯಾಯ ಒದಗಿಸಬೇಕು. ತಳ ಸಮುದಾಯದ ಮಕ್ಕಳ ಶಿಕ್ಷಣ, ಆರೋಗ್ಯ ಉದ್ಯೋಗಕ್ಕೆ ತಮ್ಮ ಸಮಯವನ್ನು ಮೀಸಲಿಟ್ಟು ಹೋರಾಟ ನಡೆಸಬೇಕು. ನಾವೆಲ್ಲರೂ ಅವರಿಗೆ ಬೆಂಬಲವಾಗಿ ನಿಲ್ಲುತ್ತೇವೆ ಎಂದರು.

ಮೈಸೂರು ಜಿಲ್ಲಾ ಮಡಿವಾಳ ಸಂಘದ ಗೌರವ ಅಧ್ಯಕ್ಷರಾದ ಬಿ.ಜಿ.ಕೇಶವ ಮಾತನಾಡಿ, ಸಾಂಸ್ಕೃತಿಕ ನಗರಿ ಮೈಸೂರು ನಗರವನ್ನು ಕೇಂದ್ರ ಸ್ಥಾನವಾಗಿಟ್ಟುಕೊಂಡು ಒಂದು ರಾಜ್ಯಮಟ್ಟದ ಆಹಿಂದಾ ಸಂಘಟನೆ ಕಟ್ಟಬೇಕು ಎಂದು ನಾವು ಹಲವಾರು ದಿನಗಳಿಂದ ಚಿಂತನೆ ನಡೆಸಿದ್ದೆವು. ಈ ಸಂಘದ ನೇತೃತ್ವವಹಿಸಲು ಸೂಕ್ತ ಅಭ್ಯರ್ಥಿಯ ಹುಡುಕಾಟದಲ್ಲಿದ್ದಾಗ ನಮಗೆ ದ್ಯಾವಪ್ಪ ನಾಯಕ ಕಂಡು ಬಂದರು. ಈಗಾಗಲೇ ಹಲವು ಸಂಘಟನೆಗಳ ನೇತೃತ್ವವಹಿಸಿದ್ದ ಅವರು ಹಲವಾರು ಜನಪರ ಹೋರಾಟಗಳಲ್ಲಿಯೂ ಭಾಗವಹಿಸಿ ಜನರಿಗೆ ನ್ಯಾಯ ಕೊಡಿಸಿದ್ದ ಅನುಭವ ಇದ್ದ ಕಾರಣ 24 ಸಮುದಾಯಗಳ ಮುಖಂಡರು ಇಂದು ಒಟ್ಟಾಗಿ ಸೇರಿ ಅವರನ್ನು ಆಯ್ಕೆ ಮಾಡಿದ್ದೇವೆ. ಯಾವುದೇ ಸಣ್ಣ ಪುಟ್ಟ ಲೋಪದೋಷಗಳು ಇಲ್ಲ ದಂತೆ ಅವರ ನೇತೃತ್ವದಲ್ಲಿ ನಾವು ಕಾರ್ಯನಿರ್ವಹಿಸಿ ಸಂಘಟನೆಯನ್ನು ಬಲವಾಗಿ ಕಟ್ಟುತ್ತೇವೆ ಎಂದರು.

ವಿವಿಧ ಸಮುದಾಯದ ಮುಖಂಡರಾದ ಎಸ್. ರಾಜೇಶ್, ಎಂ.ವಿ.ಶ್ರೀನಿವಾಸ ಮಿತ್ರ ಆನಂದ್ ಸಿಂಗ್. ಸಂತೋಷ್ ಕಿರಾಳು, ಡಿಸೋಜಾ, ಶ್ರೀಧರ್, ಸರಸ್ವತಿ, ಡಿ.ಎನ್.ಬಾಬು, ತೊಂಡಾಳು ಶಂಕರ್, ಎಸ್.ಮಂಜುನಾಥ್, ಎಸ್. ಮಹದೇವ, ಎನ್.ಕೃಷ್ಣ, ಕೆ.ನಾಗರಾಜು, ಹೆಚ್ .ಜಿ.ರೇವಣ್ಣ, ಸುಶೀಲಮ್ಮ, ಲಕ್ಷ್ಮಿ, ಶ್ರೀರಾಮ್, ಪ್ರಕಾಶ್ ಇದ್ದರು.

## 2025 ನೇ ಶೈಕಣಿಕ ಸಾಲಿನ ಐ.ಟಿ ಐ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

**ಮೈಸೂರು:** ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ವತಿಯಿಂದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ನಂಜನಗೂಡು ಇಲ್ಲಿ 2025 ನೇ ಸಾಲಿನ ಪ್ರವೇಶತಿಗಾಗಿ ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅಥವಾ ಖುದ್ದಾಗಿ ಕಚೇರಿಗೆ ಬಂದು ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಹಾಗೂ ಆನ್‌ಲೈನ್ ನಲ್ಲಿ ಅರ್ಜಿ ಸಲ್ಲಿಸಿದ ಮತ್ತು ಮೊದಲ ಸುತ್ತಿನ ಪ್ರವೇಶ ವಂಚಿತ ಅಭ್ಯರ್ಥಿಗಳಿಗೆ ಭರ್ತಿಯಾದದೆ ಉಳಿದ ಸ್ಥಾನಗಳಿಗೆ ನೇರ ದಾಖಲೆಗೆ ಅವಕಾಶವಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ 7090056455, 9972966843, 8123651975, 9686807387, 8123651975, 9902649326, 8431750755 ಅನ್ನು ಸಂಪರ್ಕಿಸಬಹುದು.

## ಬಹಿರಂಗ ಹರಾಜು ಪ್ರಕ್ರಿಯೆ

**ಮೈಸೂರು:** ಮೈಸೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿ ಅಬಕಾರಿ ಪ್ರಕರಣಗಳಲ್ಲಿ ಜಪ್ತಾಗಿ ನಿಯಮಾನುಸಾರ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡಿರುವ ಮೈಸೂರು ವಲಯ–1, ಮೈಸೂರು ವಲಯ –2, ಮೈಸೂರು ವಲಯ–3 ಹಾಗೂ ಮೈಸೂರು ವಲಯ–4 ರಲ್ಲಿರುವ ವಾಹನಗಳನ್ನು ಟೆಂಡರ್ ಕಂ ಬಹಿರಂಗ ಹರಾಜು ಮೂಲಕ ಮೇ 29 ರಂದು ಬೆಳಗ್ಗೆ 10.30 ಗಂಟೆಗೆ ಅಬಕಾರಿ ಉಪ ಅಧೀಕ್ಷಕರ ಕಚೇರಿ, ಉಪವಿಭಾಗ, ಮೈಸೂರು ಇಲ್ಲಿ ವಾಹನ ಎಲ್ಲಿದೆಯೋ, ಹೇಗಿದೆಯೋ ಹಾಗೆಯೇ ಬಹಿರಂಗ ಹರಾಜು ಮಾಡಲಾಗುವುದು. ಆಸಕ್ತರು ಹರಾಜಿನಲ್ಲಿ ಭಾಗವಹಿಸಬಹುದು ಎಂದು ಮೈಸೂರು ನಗರ ಜಿಲ್ಲೆಯ ಡೆಪ್ಯೂಟಿ ಕಮಿಷನರ್ ಆಫ್ ಎಕ್ಸೈಸ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಂಗನವಾಡಿ ಹುದ್ದೆಗೆ ಆಹ್ವಾನ

**ಮೈಸೂರು:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಮೈಸೂರು ನಗರ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ 01 ಅಂಗನವಾಡಿ ಕಾರ್ಯಕರ್ತೆ ಹಾಗೂ 14 ಅಂಗನವಾಡಿ ಸಹಾಯಕಿಯರ ಖಾಲಿ ಹುದ್ದೆಗಳನ್ನು ಗೌರವಧನ ಆಧಾರಿತ ಸೇವೆಗಳನ್ನು ಭರ್ತಿ ಮಾಡಲು ಅರ್ಹ ಮಹಿಳಾ ಅಭ್ಯರ್ಥಿಗಳು ಹಾಗೂ ಮಹಿಳಾ ಲಿಂಗತ್ವ ಅಲ್ಪಸಂಖ್ಯಾತರಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಕಚೇರಿ, ಮೈಸೂರು ನಗರ, ಬಾಲಭವನ ಆವರಣ, ಬನ್ನಿಮಂಟಪ, ಮೈಸೂರು. ದೂ.ಸಂ: 0821–2491962 ಅನ್ನು ಸಂಪರ್ಕಿಸಬಹುದು ಎಂದು ಮೈಸೂರು ನಗರದ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಹಿರಂಗ ಹರಾಜು ಪ್ರಕ್ರಿಯೆ

**ಮೈಸೂರು:** ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್), ಲೋಕೋಪಯೋಗಿ ಇಲಾಖೆ, ವಿದ್ಯುತ್ ಉಪ ವಿಭಾಗ, ಮೈಸೂರು ಇವರ ವತಿಯಿಂದ ಮೈಸೂರು ನಗರದ ನಜರಾಬಾರ್‌ನಲ್ಲಿರುವ ಲೋಕೋಪಯೋಗಿ ಇಲಾಖೆ ಆವರಣದಲ್ಲಿರುವ ಕೆಎ–01 ಜಿ 5353 ಅಂಬಾಸಿಡರ್ ಕಾರ್ ನ್ನು ಈಗಿರುವ ಜಾಗದಲ್ಲಿಯೇ ಎಲ್ಲಿ ಹೇಗಿದೆಯೋ ಹಾಗೆ ಮೇ 30 ರಂದು ಬೆಳಗ್ಗೆ 11:30 ಗಂಟೆಗೆ ಬಹಿರಂಗ ಹರಾಜು ಮಾಡಲಾಗುವುದು. ಆಸಕ್ತರು ಹರಾಜಿನಲ್ಲಿ ಭಾಗವಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಈ ಕಚೇರಿಯ ಕೆಲಸದ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಲೋಕೋಪಯೋಗಿ ಇಲಾಖೆ, ವಿದ್ಯುತ್ ಉಪವಿಭಾಗ, ಸಹಾಯಕ ಕಾರ್ಯಪಾಲಕ ಅಭಿಯಂತರರು(ವಿ), ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯಾರ್ಥಿನಿಲಯ ಪ್ರವೇಶಕ್ಕೆ ಅರ್ಜಿ

**ಮೈಸೂರು:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಹುಣಸೂರು ಟೌನಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಪಿಯುಸಿ, ಐ.ಟಿ.ಐ ಮತ್ತು ಡಿಪ್ಲೋಮೋ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರವರ್ಗ–1, 2ಎ, 2ಬಿ, 3ಎ, 3ಬಿ, ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2025–26ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ ಮಿತಿ: ಪ್ರವರ್ಗ–1, ಎಸ್.ಸಿ ಎಸ್.ಟಿ. ರೂ. 2.50 ಲಕ್ಷ, ಪ್ರವರ್ಗ–2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ, ವರ್ಗ ಹಾಗೂ ಇತರೆ ರೂ. 1.00 ಲಕ್ಷ ಇಲಾಖೆಯ ವೆಬ್‌ಸೈಟ್ ಸಂಪರ್ಕಿಸಿ ಆನ್‌ಲೈನ್ ನಲ್ಲಿ ಅರ್ಜಿಯನ್ನು ಸಲ್ಲಿಸಬೇಕು. ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಲು ಜೂನ್ 20 ಕೊನೆಯ ದಿನಾಂಕವಾಗಿರುತ್ತದೆ. ವಿದ್ಯಾರ್ಥಿಯು ಆನ್‌ಲೈನ್ ಅರ್ಜಿಯ ಪ್ರತಿ ಹಾಗೂ ಆಪ್‌ಲೋಡ್ ಮಾಡಲಾದ ದಾಖಲಾತಿಗಳ ಪ್ರತಿಗಳನ್ನು ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರಿಂದ ದೃಢೀಕರಿಸಿ, ಸಂಬಂಧಪಟ್ಟ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿ, ನಂ–268/15, ಗಣೇಶ್ ಕುಮಾರು ಸ್ವಾಮಿ ಪೆಟ್ರೋಲ್ ಬಂಕ್ ಹಿಂಭಾಗ, ನರಸಿಂಹಸ್ವಾಮಿ ತಿಟ್ಟು, ಹುಣಸೂರು ಟೌನ್ ಅಥವಾ ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯದ ಮೇಲ್ವಿಚಾರಕರನ್ನು ಸಂಪರ್ಕಿಸಬಹುದು.

## ನೇಮಕಾತಿಗಾಗಿ ಅರ್ಜಿ ಆಹ್ವಾನ

**ಮೈಸೂರು:** ವಿಕಲಚೇತನರ ಹಾಗೂ ಹಿರಿಯ ನಾಗರಿಕ ಸಬಲೀಕರಣ ಇಲಾಖೆಯ ಗ್ರಾಮೀಣ ಪುನರ್ವಸತಿ ಕಾರ್ಯಕ್ರಮದಡಿಯಲ್ಲಿ ತಿ.ನರಸೀಪುರ ತಾಲ್ಲೂಕಿನ ಬಿ.ಸೀಹಳ್ಳಿ ಮತ್ತು ಹನುಮನಾಳು ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಾಗಿ ಮಾಸಿಕ ರೂ. 9000/–ಗಳ ಗೌರವಧನದ ಆಧಾರದ ಮೇರೆಗೆ ಕರ್ತವ್ಯ ನಿರ್ವಹಿಸಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಸಮರ್ಥ ವಿಕಲಚೇತನ ವ್ಯಕ್ತಿಗಳು ಅರ್ಜಿ ನಮೂನೆಯನ್ನು ಸಂಬಂಧಪಟ್ಟ ತಾಲ್ಲೂಕು ಪಂಚಾಯಿತಿಯಲ್ಲಿರುವ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರಿಂದ ಅರ್ಜಿ ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ಜೂನ್ 04 ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ವೀಣಾ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರು, ತಿ.ನರಸೀಪುರ ತಾಲ್ಲೂಕು ಮೊ.ಸಂ: 8050829685 ಅನ್ನು ಸಂಪರ್ಕಿಸಬಹುದು.

# ಗ್ಯಾರಂಟಿ ಯೋಜನೆಗಳ ಬಗ್ಗೆ ಹೆಚ್ಚು ಅರಿವು ಕಾರ್ಯಕ್ರಮಗಳನ್ನು ನಡೆಸಿ ಜನರಲ್ಲಿ ಜಾಗೃತಿ ಮೂಡಿಸಿ

**ಮೈಸೂರು:** ಗ್ಯಾರಂಟಿ ಯೋಜನೆಗಳ ಬಗ್ಗೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಸಾರ್ವಜನಿಕರಿಗೆ ಅರಿವು ಮೂಡಿಸಬೇಕು, ಗ್ಯಾರಂಟಿ ಯೋಜನೆಗಳಿಗೆ ಸಂಬಂಧ ಪಟ್ಟಂತಹ ಅರಿವು ಕಾರ್ಯಕ್ರಮಗಳನ್ನು ಹೆಚ್ಚು ಮಾಡಿ ಜನರಲ್ಲಿ ಜಾಗೃತಿ ಮೂಡಿಸಬೇಕು ಎಂದು ಗ್ಯಾರಂಟಿ ಯೋಜನೆ ಅನು?ನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷರಾದ ಅರುಣ್ ಕುಮಾರ್. ಎಸ್ ಅವರು ಹೇಳಿದರು.

ಜಿಲ್ಲಾ ಪಂಚಾಯತ್‌ನ ಡಿ.ದೇವರಾಜು ಅರಸು ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಗ್ಯಾರಂಟಿ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರದಿಂದ ಸಿಗುವಂತಹ ಪಂಚ ಗ್ಯಾರಂಟಿ ಯೋಜನೆಗಳು ಪ್ರತಿಯೊಬ್ಬರಿಗೂ ತಲುಪುವಂತೆ ಪ್ರತಿಯೊಂದು ಇಲಾಖೆಯು ಕಾರ್ಯ ನಿರ್ವಹಿಸಬೇಕು. ಎಲ್ಲಾ ಯೋಜನೆಯೋಗಳ ಬಗ್ಗೆ ಫಲಾನುಭವಿಗಳಿಗೆ ತಿಳಿಸಬೇಕು ಎಂದು ಗ್ಯಾರಂಟಿ ಯೋಜನೆಗಳ ಬಗ್ಗೆ ಫಲಾನುಭವಿಗಳಿಗೆ ಏನಾದರೂ ಸಮಸ್ಯೆಗಳಿದ್ದರೆ ಅವರಿಗಾಗಿ ದೂರು ಪೆಟ್ಟಿಗೆಯನ್ನು ತೆರೆಯಬೇಕು ಎಂದು ಸೂಚಿಸಿದರು.

ಗೃಹಲಕ್ಷ್ಮೀ ಯೋಜನೆಯ ಬಗ್ಗೆ ಹೆಚ್ಚು ಅರಿವು ಕಾರ್ಯಕ್ರಮಗಳನ್ನು ಮಾಡಬೇಕು, ಈ ಯೋಜನೆಯ ಬಗ್ಗೆ ಎಲ್ಲರಿಗೂ ಪ್ರಚಾರ ಮಾಡಿ ಮಾದರಿ ಯೋಜನೆಯನ್ನಾಗಿ ಮಾಡಬೇಕು. ಸಿ.ಡಿ.ಪಿ.ಓ ಗಳು ಪ್ರತಿ ಗ್ರಾಮ ಪಂಚಾಯಿತಿಗಳಿಗೂ ಹೋಗಿ ವಿಚಾರಣೆ ಮಾಡಬೇಕು. ಹತ್ತಿರದಲ್ಲಿ ಇರುವಂತಹ ಅಂಗನವಾಡಿ ಕಾರ್ಯಕರ್ತೆಯರು ಫಲಾನುಭವಿಗಳಿಗೆ ಅನುಕೂಲ ಆಗುತ್ತಿದೆಯೇ ಎಂದು ವಿಚಾರಣೆ ಮಾಡಬೇಕು ಎಂದು ಹೇಳಿದರು.

ಗ್ಯಾರಂಟಿ ಯೋಜನೆಗಳ ಸೂಕ್ತ ಅನುಷ್ಠಾನದಲ್ಲಿ ಎಲ್ಲಾ ಅಧಿಕಾರಿಗಳು ಶ್ರದ್ಧೆಯಿಂದ ಕೆಲಸ ಮಾಡಬೇಕು ಸರ್ಕಾರದ ಕೆಲಸ ಎಂದು ತಿಳಿಯದೇ ಪ್ರತಿಯೊಂದು ಇಲಾಖೆಯಯವರು ಜೊತೆಗೂಡಿ ಕೆಲಸ ನಿರ್ವಹಿಸಬೇಕೆಂದು ಎಲ್ಲಾ ಅಧಿಕಾರಿಗಳಿಗೂ ಸೂಚಿಸಿದರು.

ಅನ್ನಭಾಗ್ಯ ಯೋಜನೆಯ ಬಗ್ಗೆ ಎಲ್ಲಾ ಕಡೆಗಳಲ್ಲಿಯೂಪ್ರಚಾರಫಲಕಗಳನ್ನು ಅಳವಡಿಸಬೇಕು ತಾಲ್ಲೂಕುವಾರು ನ್ಯಾಯ ಬೆಲೆ ಅಂಗಡಿಗಳ ಕಡೆ ಹೆಚ್ಚು ಗಮನವಹಿಸಬೇಕು. ಅನ್ನಭಾಗ್ಯ ಯೋಜನೆಯಲ್ಲಿ ಯಾವುದೇ ಲೋಪ ನಡೆಯದಂತೆ ಕ್ರಮ ವಹಿಸಬೇಕು ಇದು ಪ್ರತಿಯೊಬ್ಬ ಅಧಿಕಾರಿಗಳ ಜವಾಬ್ದಾರಿಯಾಗಿದೆ ಅನ್ನಭಾಗ್ಯ ಯೋಜನೆಯ ಸಂಬಂಧ ಪಟ್ಟಂತೆ ಆಪ್ ಅನ್ನು ಕ್ರಿಯೇಟ್ ಮಾಡಬೇಕು ಎಂದು ಹೇಳಿದರು.

ರಾಜ್ಯದ ಜನರಿಗೆ 200 ಯೂನಿಟ್ ಉಚಿತ ವಿದ್ಯುತ್ ಅನ್ನು ಗೃಹಜ್ಯೋತಿ ಯೋಜನೆಯಡಿ ನೀಡುತ್ತಿದ್ದು, ಈ ಬಗ್ಗೆ ಗ್ರಾಮೀಣ ಮಟ್ಟದಲ್ಲಿ ಇದರ ಬಗ್ಗೆ ಜಾಗೃತಿ ಮೂಡಿಸಬೇಕು. ಯುವನಿಧಿ ಯೋಜನೆಯಡಿ ಜಿಲ್ಲೆಯಲ್ಲಿ ಒಟ್ಟು 11154 ಅಭ್ಯರ್ಥಿಗಳು ನೊಂದಣಿಯಾಗಿದ್ದು, ಫೆಬ್ರವರಿ ಮಾಹೆಯ ಅಂತ್ಯಕ್ಕೆ 8286 ಫಲಾನುಭವಿಗಳು ಈ ಯೋಜನೆಯ ಸದುಪಯೋಗವನ್ನು ಪಡೆದುಕೊಳ್ಳುತ್ತಿದ್ದಾರೆ ಎಂದು ಮಾಹಿತಿ ನೀಡಿದರು.

ಯಾವುದೇ ಗ್ಯಾರಂಟಿ ಯೋಜನೆಗಳ ಬಗ್ಗೆ ಅಪಸ್ವರ ಬರದಂತೆ ಪ್ರತಿಯೊಂದು ಇಲಾಖೆಯವರು ಹೆಚ್ಚು ಕ್ರಮವಹಿಸಬೇಕು. ಪ್ರತಿಯೊಂದು ಯೋಜನೆಗಳು ಜನರಿಗೆ ತಲುಪುವಂತೆ ಮಾಡಬೇಕು ಎಂದು ಹೇಳಿದರು.

ಈ ಸಭೆಯಲ್ಲಿ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಹಣಾ ಅಧಿಕಾರಿ ಯುಕೇಶ್ ಕುಮಾರ್, ಗ್ಯಾರಂಟಿ ಯೋಜನೆಯ ಜಿಲ್ಲಾ ಮಟ್ಟದ ಉಪಾಧ್ಯಕ್ಷರಾದ ಚಂದ್ರಶೇಖರ್, ಸಾ.ಮಾ.ಯೋಗೇಶ್, ಪ್ರೊ.ಶಿವಕುಮಾರ್, ಹುಣಸೂರು ಬಸವಣ್ಣ, ಹಾಗೂ ಸದಸ್ಯರಾದ ಲತಾ, ಕೆ. ಮಾರುತಿ, ರಘು, ಅಬ್ದುಲ್ ಖಾನ್ ಪ್ರಸನ್ನ ಬಾಬು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

## ನಾಗಮಂಗಲ ಕಂದಾಯ ಇಲಾಖೆ ಭ್ರಷ್ಟಾಚಾರ ಬ್ರಹ್ಮಾಂಡಕ್ಕೆ ಕಡಿವಾಣ ಉಂಟೆ?

**ನಾಗಮಂಗಲ:** ತಾಲೂಕಿನ ಕಂದಾಯ ಇಲಾಖೆಯಲ್ಲಿ ಭ್ರಷ್ಟಾಚಾರ ಬ್ರಹ್ಮಾಂಡ ಎಂಬುದು ಸುಮ್ಮನೆ ಹೇಳುವ ಬದಲು ಸಾಕ್ಷಿಯಾಗಿ ತಾಲೂಕಿನ ಕಂದಾಯ ಇಲಾಖೆ ಅಧಿಕಾರಿಗಳು ಅಮಾನತ್ತಾಗಿರುವುದು ಸಾರ್ವಜನಿಕ ಗೊತ್ತಾಗಿದ್ದು ತಾಲೂಕಿನ ಆಡಳಿತಕ್ಕೆ ತಕ್ಷಣವೇ ಭ್ರಷ್ಟಾಚಾರ ಬ್ರಹ್ಮಾಂಡಕ್ಕೆ ಕಡಿವಾಣ ಆಗಬೇಕಾಗಿದ್ದು ತಾಲೂಕಿನ ಪ್ರಜ್ಞಾವಂತರ ಕೂಗಾಗಿದೆ.

> **ತಾಲೂಕು ಆಡಳಿತಕ್ಕೆ ಮೇಜರ್ ಸರ್ಜರಿ ಅಗತ್ಯ ಪ್ರಜ್ಞಾವಂತರ ಕೂಗು**
> **ಕಂದಾಯ ಇಲಾಖೆಯ ಬಗೆದಷ್ಟು ಭ್ರಷ್ಟಾಚಾರದ ಬಯಲು**

ತಾಲೂಕಿನ ಆಡಳಿತ ಸೌಧ ಮುಂದೊಂದು ದಿನ ಭ್ರಷ್ಟಾಚಾರದ ಕೇಂದ್ರೀಕೃತವಾಗುವ ಮೊದಲೇ ತಾಲೂಕಿನ ಸಂಬಂಧಪಟ್ಟ ಆಡಳಿತದ ಅಧಿಕಾರಿಗಳು ಮೌನ ಹೆಜ್ಜೆಯಾಗಿದ್ದು ಸಾರ್ವಜನಿಕವಾಗಿ ಗೊತ್ತಿರುವ ವಿಷಯವಾಗಿದೆ.

ಕಂದಾಯ ಇಲಾಖೆಯಲ್ಲಿ ಹೊಸ ಕಡತಗಳನ್ನು ಸೃಷ್ಟಿ ಮಾಡಿ ಬೇರೊಬ್ಬರಿಗೆ ಮಾಡುವುದು ಇಂತಹ ಒಂದಲ್ಲ ಎರಡಲ್ಲ ಅನೇಕ ಸಂಗತಿಗಳು ನಡೆಯುತ್ತಿದ್ದು ಭ್ರಷ್ಟಾಚಾರದ ವ್ಯವಸ್ಥೆ ಇನ್ನು ಅನೇಕ ಇಲಾಖೆಗಳಲ್ಲಿ ಇಂತಹ ಸಂಗತಿಗಳು ಬೆಳಕಿಗೆ ಬಾರದೆ ತೊಳಲಾಟದಲ್ಲಿ ಕಚೇರಿಯ ಒಳಗಡೆ ನರಳುತ್ತಿವೆ ಆದಷ್ಟು ಬೇಗ ಇಂತಹ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕುವ ಮುಖಾಂತರ ಬಡಜನರ ಆಶಾಕಿರಣವಾಗಿರುವ ಆಡಳಿತ ವ್ಯವಸ್ಥೆಗೆ ಚುರುಕು ಮುಟ್ಟಿಸುವ ಕೆಲಸ ಆಗಬೇಕೆಂಬುದು ನಾಗಮಂಗಲ ತಾಲೂಕಿನ ಪ್ರಜ್ಞಾವಂತ ವಿದ್ಯಾವಂತರ ಕೂಗು ಆಗ್ರಹವಾಗಿದೆ.

ತಾಲೂಕಿನ ಉಸ್ತುವಾರಿ ಸಚಿವರಾದ ಚೆಲುವರಾಯಸ್ವಾಮಿ ಯವರು ಇಂತಹ ಭ್ರಷ್ಟ ವ್ಯವಸ್ಥೆಗೆ ಕಡಿವಾಣ ಹಾಕುವ ಮುಖಾಂತರ ಆಡಳಿತ ಸೌಧಕ್ಕೆ ಪಾರದರ್ಶಕವಾದ ವ್ಯವಸ್ಥೆಯನ್ನು ಮಾಡಬೇಕಾಗಿದ್ದು ಇಂತಹ ಅನೇಕ ಸಂಗತಿಗಳು ಹೊರಬೀಳುವ ಮೊದಲೇ ಬಾರಿ ಸರ್ಜರಿ ನೀಡಬೇಕೆಂಬುದು ಜನತೆಯ ಆಗ್ರಹವಾಗಿದೆ.

# ಬಡ ಜನತೆಯ ಕಣ್ಣಿನ ದೃಷ್ಟಿಗೆ ನವಚೈತನ್ಯ ನೀಡಬೇಕೆಂಬ ಉದ್ದೇಶದಿಂದ ಪ್ರತಿ ತಿಂಗಳು ಕಣ್ಣಿನ ತಪಾಸಣಾ ಶಿಬಿರ

**ಶಿರಾ:** ಗ್ರಾಮೀಣ ಪ್ರದೇಶದ ರೈತ ಹಾಗೂ ಬಡ ಕುಟುಂಬದ ವೃದ್ಧರು ಕಣ್ಣಿನ ಆರೋಗ್ಯದ ಬಗ್ಗೆ ಹೆಚ್ಚು ಕಾಳಜಿ ವಹಿಸುವುದಿಲ್ಲ, ಕಣ್ಣಿಗೆ ಪೊರೆ ಬಂದಿದ್ದರು ಆರ್ಥಿಕ ಸಮಸ್ಯೆ, ಬದುಕಿನ ಜಂಜಾಟದಲ್ಲಿ ಎಲ್ಲವನ್ನು ಮರೆತುಬಿಡುತ್ತಾರೆ.

ಅಂತಹವರ ದೃಷ್ಟಿಗೆ ನವ ಚೈತನ್ಯ ನೀಡಬೇಕೆಂಬ ಉದ್ದೇಶದಿಂದ ಪ್ರತಿ ತಿಂಗಳು ಕಣ್ಣಿನ ತಪಾಸಣಾ ಶಿಬಿರ ಆಯೋಜನೆ ಮಾಡಿ ಶಸ್ತ್ರ ಚಿಕಿತ್ಸೆಯನ್ನು ಉಚಿತವಾಗಿ ಮಾಡಿಸುವ ಮೂಲಕ ಸಮಾಜಕ್ಕೆ ನಮ್ಮದೊಂದು ಸೇವೆ ಎಂಬ ಭಾವನೆಯೊಂದಿಗೆ ಜನಸೇವೆ ಮಾಡುತ್ತಿದ್ದೇನೆ ಎಂದು ಜೆಡಿಎಸ್ ಹಿರಿಯ ಮುಖಂಡ ಆರ್.ಉಗ್ರೇಶ್ ಹೇಳಿದರು.

ಶಿರಾ ತಾಲೂಕಿನ ಹೊಸೂರು ಗ್ರಾಮದಲ್ಲಿ ಲಯನ್ಸ್ ಕ್ಲಬ್ ಹಾಗೂ ಆರ್.ಉಗ್ರೇಶ್ ಅಭಿಮಾನಿ ಬಳಗದ ವತಿಯಿಂದ ಹಮ್ಮಿಕೊಂಡಿದ್ದ ಉಚಿತ ಕಣ್ಣಿನ ಶಸ್ತ್ರ ಚಿಕಿತ್ಸಾ ತಪಾಸಣಾ ಶಿಬಿರ ಉದ್ಘಾಟಿಸಿ ಮಾತನಾಡಿದರು.

ಲಯನ್ಸ್ ಕ್ಲಬ್ ಮತ್ತು ಆರ್. ಉಗ್ರೇಶ್ ಅಭಿಮಾನಿ ಬಳಗ ಇದುವರೆಗೂ 400ಕ್ಕೂ ಹೆಚ್ಚು ಜನರಿಗೆ ಕಣ್ಣಿನ ಶಸ್ತ್ರ ಚಿಕಿತ್ಸೆ ಮಾಡಿಸಿ ಅವರ ದೃಷ್ಟಿಗೆ ನವ ಚೈತನ್ಯ ನೀಡಿದ್ದೇವೆ, ಇಂಥವರ ಸೇವೆಯಲ್ಲಿ ಭಗವಂತನನ್ನು ಕಾಣುವಷ್ಟು ತೃಪ್ತಿ ಸಿಗುತ್ತದೆ ಎಂದರು. ಶಿರಾ ಲಯನ್ಸ್ ಕ್ಲಬ್ ಅಧ್ಯಕ್ಷ ಡಾ.ಮಂಜುನಾಥ್ ಮಾತನಾಡಿ ವೃದ್ಧರ ಕಣ್ಣಿಗೆ ಮತ್ತೊಮ್ಮೆ ದೃಷ್ಟಿ ನೀಡಿ, ಅವರ ಬದುಕಿನಲ್ಲಿ ಉಲ್ಲಾಸ ಮೂಡಿಸುವುದೇ ನಮ್ಮ ಗುರಿ ಎಂದರು. ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷ ಹನುಮಂತ ರಾಯಪ್ಪ ಮಾತನಾಡಿ ಗ್ರಾಮೀಣ ಪ್ರದೇಶಗಳಲ್ಲಿ ಕಣ್ಣಿನ ತಪಾಸಣಾ ಶಿಬಿರ ಏರ್ಪಡಿಸಿ ಕಣ್ಣಿನ ಪೊರೆ ಬಂದಿರುವ ಬಡ ಕುಟುಂಬಗಳ ವೃದ್ಧರಿಗೆ ಮರು ದೃಷ್ಟಿ ನೀಡುವುದು ಪುಣ್ಯದ ಕೆಲಸ, ಇಂತಹ ಕೆಲಸ ಮಾಡುತ್ತಿರುವ ಲಯನ್ಸ್ ಕ್ಲಬ್ ಮತ್ತು ಆರ್ ಉಗ್ರೇಶ್ ಅಭಿಮಾನಿಗಳ ಸಂಘದ ಸೇವೆ ಶ್ಲಾಘನೀಯ ಎಂದರು. ಶಿರಾ ಲಯನ್ಸ್ ಕ್ಲಬ್ ನ ಹೆಚ್.ಆರ್. ರಾಜಣ್ಣ , ಕಾರ್ಯದರ್ಶಿ ಹಿಮಂತರಾಜು, ಪಿ ಎಲ್ ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಟಿ. ಡಿ.ಮಲ್ಲೇಶ್, ಬಂದ ಕುಂಟೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಮಾಜಿ ಅಧ್ಯಕ್ಷ ತಿಮ್ಮೇಗೌಡ, ಗ್ರಾಮ ಪಂಚಾಯತಿ ಮಾಜಿ ಸದಸ್ಯ ರಾಜಣ್ಣ, ಮುಖಂಡ ಪಾಪಣ್ಣ, ಕಾಡುಗೊಲ್ಲ ಸಂಘದ ಕಾರ್ಯದರ್ಶಿ ಚಂದ್ರಪ್ಪ, ಗಂಗಾಧರ ,ಧನಂಜಯ, ರಘು, ನರಸಿಂಹ ,ಹುಣಸೆ ಹಳ್ಳಿ ಮಧು ಇದ್ದರು.




# ದರಕಾಸ್ತು ನಕಲಿ ಕಡತ ಸೃಷ್ಟಿಸಿದ ನಾಲ್ವರು ಕಂದಾಯ ಅಧಿಕಾರಿಗಳ ಅಮಾನತು

**ನಾಗಮಂಗಲ:** ತಾಲೂಕಿನ ಕಂದಾಯ ಇಲಾಖೆಯಲ್ಲಿ ಭ್ರಷ್ಟಾಚಾರ ಎಗ್ಗಿಲ್ಲದಂತೆ ನಡೆಯುತ್ತಿರುವುದಕ್ಕೆ ಸಾಕ್ಷಿ ಎಂಬಂತೆ ದರಕಾಸ್ತು ಶಾಖೆಯ ನಾಲ್ವರು ಅಧಿಕಾರಿಗಳು ನಕಲಿ ಕಡತವನ್ನು ಸೃಷ್ಟಿ ಮಾಡಿ ಮತ್ತೊಬ್ಬ ವ್ಯಕ್ತಿಗೆ ಜಮೀನು ಮಂಜೂರಿಗೆ ಅವಕಾಶ ಮಾಡಿಕೊಟ್ಟಿರುವ ಪ್ರಕರಣ ಬೆಳಕಿಗೆ ಬಂದಿದೆ. ಈ ಸಂಬಂಧ ಮಾಜಿ ದರಕಾಸ್ತು ಕಮಿಟಿ ಸದಸ್ಯ ನರಸಿಂಹಮೂರ್ತಿ ಮೈಸೂರಿನ ಕಂದಾಯ ಇಲಾಖೆಯ ಪ್ರಾದೇಶಿಕ ಆಯುಕ್ತರ ಕಚೇರಿಗೆ ದೂರು ನೀಡಿದ್ದು, ಈ ನಕಲಿ ಕಡತ ಸೃಷ್ಟಿಸಿದ ಅಧಿಕಾರಿಗಳ ವಿರುದ್ಧ ತನಿಖೆಯಿಂದ ಈ ನಾಲ್ವರು ಕಳ್ಳ ಅಧಿಕಾರಿಗಳು ನಡೆಸಿದ ನಕಲಿ ಕಡತ ವ್ಯವಹಾರ ಬಟಾ ಬಯಲಿಗೆ ಬಂದು ಎಲ್ಲರೂ ಕೂಡ ಅಮಾನತ್ತಾಗಿದ್ದಾರೆ.







ತನಿಕೆಯಿಂದ ಈ ಅಧಿಕಾರಿಗಳು ಮಾಡಿದ ಭ್ರಷ್ಟಾಚಾರ ಸಾಬೀತಾಗಿದ್ದು, ಮೈಸೂರಿನ ಕಂದಾಯ ಇಲಾಖೆ ಪ್ರಾದೇಶಿಕ ಆಯುಕ್ತರಾದ ರಮೇಶ್ ಡಿಎಸ್, ಉಪ ತಹಶಿಲ್ದಾರ್ ಪ್ರಸನ್ನ ಕುಮಾರ್ ಅವರನ್ನು ಅಮಾನತ್ತು ಮಾಡಿ ಉಳಿದ ಮೂವರು ಅಧಿಕಾರಿಗಳನ್ನು ಅಮಾನತ್ತು ಮಾಡಲು ಮಂಡ್ಯ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ಆದೇಶ ಮಾಡಿದ್ದರು

ಈ ಆದೇಶದ ಅನ್ವಯ ಮಂಡ್ಯ ಜಿಲ್ಲಾಧಿಕಾರಿಗಳಾದ ಡಾ. ಕುಮಾರ ಅವರು ಇಂದು ರಾಜಸ್ವ ನಿರೀಕ್ಷಕರಾದ ಶಶಿಧರ್. ಗಣೇಶ್ ಸಿ ಹಾಗೂ ಗ್ರಾಮ ಆಡಳಿತ ಅಧಿಕಾರಿ ಹೆಚ್ಚು ಕರ್ಣ ರವರನ್ನು ಅಮಾನತ್ತು ಮಾಡಿ ವರ್ಗಾವಣೆ ಮಾಡಿ ಭ್ರಷ್ಟ ಅಧಿಕಾರಿಗಳಿಗೆ ಬಿಸಿಮುಟ್ಟಿಸಿದ್ದಾರೆ

ಕೃಷಿ ಸಚಿವ ಚೆಲುವರಾಯಸ್ವಾಮಿ ರವರು ಕ್ಯಾಬಿನೆಟ್ ಮಂತ್ರಿ ಆದ ನಂತರ ನಾಗಮಂಗಲ ಕ್ಷೇತ್ರ ಅನಾಥವಾಗಿದೆ. ಅಧಿಕಾರಿಗಳಿಗೆ ಹೇಳುವವರು ಕೇಳುವವರು ಯಾರು ಇಲ್ಲ. ಪ್ರಸ್ತುತ ನಾಗಮಂಗಲ ತಾಲೂಕ ಕಚೇರಿಯಲ್ಲಿ ಭ್ರಷ್ಟಾಚಾರ ತಾಂಡವಾಡುತ್ತಿದ್ದು, ಇಲ್ಲಿನ ಅಧಿಕಾರಿಗಳ ನಿರ್ಲಕ್ಷತನ ಕಚೇರಿಗೆ ಭೇಟಿ ನೀಡಿದರೆ ತಿಳಿಯುತ್ತದೆ ಎಂದು ಸ್ಥಳೀಯರು ದೂರುತ್ತಿದ್ದಾರೆ.

ಪ್ರಸ್ತುತ ಸಾರ್ವಜನಿಕರ ಆರೋಪದಂತೆ ಅಧಿಕಾರಿಗಳು ಸಹಿ ಮಾಡಿ ಹೋದರೆ ಮತ್ತೆ ಬರುವುದು ಅನುಮಾನ. ತಾಲೂಕ ಕಚೇರಿಯಲ್ಲಿ ಲೋಕಾಯುಕ್ತರ ಕೇಸಿನಲ್ಲಿ ತಗಲಾಕಿಕೊಂಡ ಅಧಿಕಾರಿಗಳುನಕಲಿ ಸರ್ಟಿಫಿಕೇಟ್ ನೀಡಿ ಗ್ರಾಮ ಆಡಳಿತ ಅಧಿಕಾರಿ ಹುದ್ದೆ ಪಡೆದಿರುವವರು ಮಿಲಿಟರಿ ಕೋಟದಲ್ಲಿ ಅಕ್ರಮವಾಗಿ ಬಂದಿರುವ ಅಧಿಕಾರಿಗಳುದಂಡೆ ಇದೆ ಎನ್ನಲಾಗುತ್ತಿದೆ.

ಕಚೇರಿಯಲ್ಲಿ ಮಹಿಳಾ ಉದ್ಯೋಗಿಗಳು ಕಾರ್ಯನಿರ್ವಹಿಸುವುದು ಬಿಟ್ಟರೆ, ಪುರುಷ ಸಿಬ್ಬಂದಿ ಕೈಗೆ ಸಿಗುವುದು ಕಷ್ಟ. ಇನ್ನಾದರೂ ತಾಲೂಕ ಕಚೇರಿಯನ್ನು ಮೇಜರ್ ಸರ್ಜರಿಯ ಮೂಲಕ ಸಾರ್ವಜನಿಕರ ಕೆಲಸಗಳಿಗೆ ಸುಗಮವಾಗುವ ರೀತಿ ಮಾಡುವರೆ ಕೃಷಿ ಸಚಿವರು ಎಂದು ಕಾದು ನೋಡಬೇಕಾಗಿದೆ ಎಂದು ಸಾರ್ವಜನಿಕರ ಅಳಲಾಗಿದೆ.

ಸಂಜೆ ಮುಗಿಲು
ಭಾನುವಾರ
25.5.2025



# ಸಮುದ್ರದೊಳಕ್ಕೆ ಬಿದ್ದ ಅಪಾಯಕಾರಿ ಸರಕು: ಕೇರಳದಲ್ಲಿ ಅಲರ್ಟ್ ಘೋಷಣೆ

**ತಿರುವನಂತಪುರಂ:** ಸರಕು ಹಡಗಿನಲ್ಲಿ ಸಾಗಣೆಯಾಗುತ್ತಿದ್ದ ತೈಲ ಕಂಟೈನರ್ ಗಳು ಅಪಘಾತಕ್ಕೀಡಾಗಿ ಕೇರಳ ಕರಾವಳಿಯ ಸಮುದ್ರದೊಳಕ್ಕೆ ಬಿದ್ದಿದ್ದು, ಈ ಘಟನೆಯಿಂದ ಜನರು ಗಾಬರಿಗೊಳಗಾಗಿರುವ ಘಟನೆ ನಡೆದಿದೆ.

ಪ್ರಾಥಮಿಕ ವರದಿಗಳ ಪ್ರಕಾರ, ಅರಬ್ಬಿ ಸಮುದ್ರದ ಕೊಚ್ಚಿ ತೀರದ ನೈರುತ್ಯ ದಿಕ್ಕಿನಿಂದ ಸುಮಾರು 38 ನಾಟಿಕಲ್ ಮೈಲಿ ದೂರದಲ್ಲಿ ಈ ಅಪಘಾತ ಸಂಭವಿಸಿದೆ.



ವಿಳಿಂಜಮ್ ನಿಂದ ಕೊಚ್ಚಿ ತೀರವನ್ನು ಸಮೀಪಿಸುತ್ತಿದ್ದ ವೇಳೆ ಲಿಬರಿಯನ್ ಫ್ಲ್ಯಾಗ್ ಕ್ಯಾರಿಯರ್ ಹಡಗು ವಾಲಿಕೊಂಡಿದ್ದರಿಂದ, ಸುಮಾರು 10 ಕಂಟೈನರ್ ಗಳು ಸಮುದ್ರಕ್ಕೆ ಉರುಳಿವೆ ಎಂದು ಶಂಕಿಸಲಾಗಿದೆ. ಈ ಹಡಗಿನಲ್ಲಿ ಪ್ರಯಾಣಿಸುತ್ತಿದ್ದ ಎಲ್ಲ 24 ಮಂದಿ ಸಿಬ್ಬಂದಿಯನ್ನು ಭಾರತೀಯ ಕರಾವಳಿ ರಕ್ಷಣಾ ಪಡೆ ಹಾಗೂ ನೌಕಾಪಡೆ ರಕ್ಷಿಸಿವೆ.

ಈ ಕಂಟೈನರ್ ಗಳು ಸಾಗರ ಅನಿಲ ತೈಲ ಹಾಗೂ ತೀರಾ ಕಡಿಮೆ ಪ್ರಮಾಣದ ಸಲ್ಫರ್ ಇಂಧನ ತೈಲವನ್ನು ಹೊತ್ತೊಯ್ಯುತ್ತಿದ್ದವು ಎಂದು ಹೇಳಲಾಗಿದೆ. ಅಪಾಯಕಾರಿ ವಸ್ತುವನ್ನು ಹೊಂದಿದ್ದ ಕಂಟೈನರ್ ಗಳು ಅರಬ್ಬಿ ಸಮುದ್ರಕ್ಕೆ ಉರುಳಿದ್ದು, ಈ ವಸ್ತು ಸಮುದ್ರ ತೀರಕ್ಕೆ ಕೊಚ್ಚಿಕೊಂಡು ಬರಬಹುದು ಎಂದು ಕರಾವಳಿ ರಕ್ಷಣಾ ಪಡೆ ಮಾಹಿತಿ ನೀಡಿದ್ದು, ಹೀಗಾಗಿ, ಜನರು ಅದರ ಬಳಿ ತೆರಳಬಾರದು ಅಥವಾ ಅದನ್ನು ಮುಟ್ಟಬಾರದು ಎಂದು ಕೇರಳ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ ಜನರಿಗೆ ಎಚ್ಚರಿಕೆ ನೀಡಿದೆ.

# ರಾಜೀನಾಮೆಗೆ ಮುಂದಾದ ಬಾಂಗ್ಲಾದೇಶ ಮಧ್ಯಂತರ ಸರ್ಕಾರದ ಮುಖ್ಯಸ್ಥ

**ಢಾಕಾ:** ಬಾಂಗ್ಲಾದೇಶದಲ್ಲಿ ಶೇಖ್ ಹಸೀನಾ ಸರ್ಕಾರ ಪತನಗೊಂಡಾಗಿನಿಂದಲೂ ಅರಾಜಕತೆ ಮುಂದುವರೆದಿದೆ. ಇತ್ತೀಚಿನ ಮಾಹಿತಿಯ ಪ್ರಕಾರ, ಅಲ್ಲಿನ ಮಧ್ಯಂತರ ಸರ್ಕಾರದ ಮುಖ್ಯಸ್ಥ ಪ್ರೊಫೆಸರ್ ಮೊಹಮ್ಮದ್ ಯೂನಸ್ ರಾಜೀನಾಮೆ ನೀಡುವ ಬಗ್ಗೆ ಚಿಂತನೆ ನಡೆಸಿದ್ದಾರೆ. ರಾಜಕೀಯ ಒತ್ತಡದಿಂದಾಗಿ ತಮ್ಮ ಹುದ್ದೆ ನಿರ್ವಹಿಸಲು ಕಷ್ಟಪಡುತ್ತಿದ್ದಾರೆ ಎಂದು ವಿದ್ಯಾರ್ಥಿ ನೇತೃತ್ವದ ನ್ಯಾಷನಲ್ ಸಿಟಿಜನ್ ಪಾರ್ಟಿ (ಎನ್‌ಸಿಪಿ) ಮುಖ್ಯಸ್ಥ ನಹಿದ್ ಇಸ್ಲಾಂ ಅವರ ಹೇಳಿಕೆ ಉಲ್ಲೇಖಿಸಿ ಬಿಬಿಸಿ ಬಾಂಗ್ಲಾ ಸುದ್ದಿ ಪ್ರಕಟಿಸಿದೆ.

ಯೂನಸ್ ರಾಜೀನಾಮೆ ಕುರಿತಾದ ಸುದ್ದಿಯನ್ನು ನಾವು ನೋಡುತ್ತಿದ್ದೇವೆ. ಹೀಗಾಗಿ, ನಾನು ಈ ವಿಚಾರದ ಬಗ್ಗೆ ಚರ್ಚಿಸಲು ಸರ್(ಯೂನಸ್) ಅವರನ್ನು ಭೇಟಿ ಮಾಡಲು ಹೋಗಿದ್ದೆ. ಅವರು ಕೂಡ ಅದರ ಬಗ್ಗೆಯೇ ಯೋಚಿಸುತ್ತಿರುವುದಾಗಿ ಹೇಳಿದರು. ಕೆಲಸ ಮಾಡಲು ಸಾಧ್ಯವಾಗುತ್ತಿಲ್ಲ ಎಂದು ಅವರು ಭಾವಿಸಿದ್ದಾರೆ ಎಂದು ಇಸ್ಲಾಂ ಬಿಬಿಸಿ ಬಾಂಗ್ಲಾಗೆ ತಿಳಿಸಿದ್ದಾರೆಂದು ವರದಿಯಾಗಿದೆ.

ರಾಜಕೀಯ ಪಕ್ಷಗಳು ನಿರೀಕ್ಷಿತ ಮಟ್ಟ ತಲುಪದ ಹೊರತು ಅವರು ಕೆಲಸ ಮಾಡಲು ಸಾಧ್ಯವಾಗುವುದಿಲ್ಲ ಎಂದು ಯೂನಸ್ ಅವರ ಮುಖ್ಯ ಸಲಹೆಗಾರ ತಿಳಿಸಿದ್ದಾರೆ. ಆದರೆ, ದೇಶದ ಭದ್ರತೆ, ಭವಿಷ್ಯದ ಸಲುವಾಗಿ ಹಾಗೂ ಸಾಮೂಹಿಕ ದಂಗೆಯ ನಿರೀಕ್ಷೆಗಳನ್ನು ತಲುಪುವ ನಿಟ್ಟಿನಲ್ಲಿ ನೀವು ಗಟ್ಟಿಯಾಗಿರಿ ಎಂದು ಯೂನಸ್‌ಗೆ ಸಲಹೆ ನೀಡಿರುವುದಾಗಿ ನಹಿದ್ ಇಸ್ಲಾಂ ಹೇಳಿದ್ದಾರೆ.

ಪಕ್ಷಗಳು ಒಗ್ಗಟ್ಟು ಪ್ರದರ್ಶಿಸುವ ನಿರೀಕ್ಷೆಯಿದೆ. ಅಲ್ಲದೆ, ತಮ್ಮೊಂದಿಗೆ ಸಹಕರಿಸುತ್ತಾರೆಂದು ಯೂನಸ್ ಭಾವಿಸಿದ್ದಾರೆ ಎಂದು ಅವರ ಮುಖ್ಯ ಸಲಹೆಗಾರ ಹೇಳಿದ್ದಾರೆ. ಆದರೆ ರಾಜಕೀಯ ಪಕ್ಷವೇ ಯೂನಸ್ ಅವರು ರಾಜೀನಾಮೆ ನೀಡಬೇಕೆಂದು ಬಯಸಿದರೆ, ಅವರ ಮೇಲೆ ನಂಬಿಕೆ, ಭರವಸೆ ಇಲ್ಲದ ಸ್ಥಾನದಲ್ಲಿ ಅವರು ಯಾಕೆ ಮುಂದುವರೆಯುತ್ತಾರೆ ಎಂದು ನಹಿದ್ ಇಸ್ಲಾಂ ಅಭಿಪ್ರಾಯಪಟ್ಟಿದ್ದಾರೆ.

# ಜಲ ಬಾಂಬ್ ನಿಂದ ನಾವು ಹಸಿವಿನಿಂದ ಸಾಯಬಹುದು- ಪಾಕ್ ಸಂಸದ ಆತಂಕ

**ಇಸ್ಲಾಮಾಬಾದ್:** ಪಾಕಿಸ್ತಾನದಲ್ಲಿ ನೀರಿನ ಕೊರತೆಯ ಆತಂಕ ಹೆಚ್ಚುತ್ತಿರುವ ಬೆನ್ನಲ್ಲೇ, ಸೆನೆಟರ್ ಸಯ್ಯದ್ ಅಲಿ ಜಾಫರ್ ಅವರು ಶಹಬಾಜ್ ಶರೀಫ್ ನೇತೃತ್ವದ ಸರ್ಕಾರವನ್ನು ಭಾರತವು ಸಿಂಧೂಜಲ ಒಪ್ಪಂದವನ್ನು ಸ್ಥಗಿತಗೊಳಿಸಿದ ನಂತರ ಉಂಟಾಗಿರುವ ಜಲಬಾಂಬ್ ಅನ್ನು ನಿಷ್ಕ್ರಿಯಗೊಳಿಸಲು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದಾರೆ. ಈ ನಿರ್ಧಾರವು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಏಪ್ರಿಲ್ 22 ರಂದು ನಡೆದ ಭಯೋತ್ಪಾದಕ ದಾಳಿಗೆ ಪ್ರತಿಕ್ರಿಯೆಯಾಗಿ ಭಾರತವು ತೆಗೆದುಕೊಂಡಿದೆ. ಇಂಡಸ್ ಜಲಾನಯನ ಪ್ರದೇಶವು ನಮ್ಮ ಜೀವನಾಡಿಯಾಗಿದೆ, ಎಂದು ಜಾಫರ್ ಹೇಳಿದ್ದಾರೆ. ಇದು ನಮ್ಮ ಮೇಲೆ ತೂಗುತ್ತಿರುವ ನೀರಿನ ಬಾಂಬ್‌ನಂತೆ, ಇದನ್ನು ನಾವು ನಿಷ್ಕ್ರಿಯಗೊಳಿಸಬೇಕು, ಎಂದು ಅವರು ಸೆನೆಟ್‌ನಲ್ಲಿ ಮಾತನಾಡುತ್ತಾ ಎಚ್ಚರಿಕೆ ನೀಡಿದ್ದಾರೆ. ಈ ವಿಷಯವನ್ನು ತಕ್ಷಣವೇ ಪರಿಹರಿಸದಿದ್ದರೆ ಪಾಕಿಸ್ತಾನಕ್ಕೆ ಗಂಭೀರ ಪರಿಣಾಮಗಳು ಎದುರಾಗಬಹುದು ಎಂದು ಅವರು ಎಚ್ಚರಿಸಿದ್ದಾರೆ. ನೀರಿನ ಬಿಕ್ಕಟ್ಟನ್ನು ಈಗ ಪರಿಹರಿಸದಿದ್ದರೆ, ನಾವು ಹಸಿವಿನಿಂದ ಸಾಯಬಹುದು, ಎಂದು ಅವರು ಒತ್ತಿ ಹೇಳಿದ್ದಾರೆ. ಜಾಫರ್ ಅವರು, ಇಂಡಸ್ ನದಿ ವ್ಯವಸ್ಥೆಯಿಂದ ಒಬ್ಬರಿಗೆ ಹತ್ತು ಜನರು ನೀರಿಗಾಗಿ ಅವಲಂಬಿತರಾಗಿದ್ದಾರೆ ಎಂದು ಗಮನಸೆಳೆದಿದ್ದಾರೆ. ನಮ್ಮ 90% ಬೆಳೆಗಳು ಈ ನೀರನ್ನು ಅವಲಂಬಿಸಿವೆ. ನಮ್ಮ ಎಲ್ಲಾ ವಿದ್ಯುತ್ ಯೋಜನೆಗಳು ಮತ್ತು ಜಲಾಶಯಗಳು ಈ ನೀರಿನ ಮೇಲೆ ನಿರ್ಮಿತವಾಗಿವೆ. ಆದ್ದರಿಂದ, ಇದು ನೀರಿನ ಬಾಂಬ್‌ನಂತೆ ಇದ್ದು, ಇದನ್ನು ಪರಿಹರಿಸಬೇಕು, ಎಂದು ಅವರು ಹೇಳಿದ್ದಾರೆ. ಭಾರತವು ಇಂಡಸ್ ಜಲ ಸಂಧಿಯನ್ನು ಸ್ಥಗಿತಗೊಳಿಸಿರುವುದು ಪಹಲ್ಗಾಮ್ ದಾಳಿಯ ನಂತರವೇ ಆಗಿದೆ, ಈ ದಾಳಿಯಲ್ಲಿ 26 ಜನರು ಸಾವನ್ನಪ್ಪಿದ್ದರು. ಪಾಕಿಸ್ತಾನದ ಈ ನೀರಿನ ಬಿಕ್ಕಟ್ಟು ದೇಶದ ಕೃಷಿ ಮತ್ತು ಜಲವಿದ್ಯುತ್ ಯೋಜನೆಗಳ ಮೇಲೆ ಗಂಭೀರ ಪರಿಣಾಮ ಬೀರಬಹುದು ಎಂದು ತಜ್ಞರು ಆತಂಕ ವ್ಯಕ್ತಪಡಿಸಿದ್ದಾರೆ.

# ವಿಶ್ವದ ಅತಿ ಎತ್ತರದ ಗಿರಿಶಿಖರ ಮೌಂಟ್ ಎವರೆಸ್ಟ್ ಏರಿದ ಅಂಧ ಮಹಿಳೆ




**ಕಿನ್ನೌರ್:** 29 ವರ್ಷದ ದೃಷ್ಟಿಹೀನ ಭಾರತೀಯ ಮಹಿಳೆಯೊಬ್ಬಳು ಜಗತ್ತಿನ ಅತಿ ಎತ್ತರದ ಗಿರಿಶಿಖರ ಮೌಂಟ್ ಎವರೆಸ್ಟ್ ಏರುವ ಮೂಲಕ ಇತಿಹಾಸ ಬರೆದಿದ್ದಾರೆ. ಹಿಮಾಚಲ ಪ್ರದೇಶದ ಕಿನ್ನೌರ್ ಜಿಲ್ಲೆಯ ಚಾಂಗೊ ಗ್ರಾಮದ ಚೋಂಜನ್ ಅಂಗ್ಮೋ, ಮೌಂಟ್ ಎವರೆಸ್ಟ್ ಏರಿದ ಅಂಧ ಮಹಿಳೆ. ಜಗತ್ತಿನ ಅತಿ ಎತ್ತರದ ಗಿರಿಶಿಖರ ಏರಿದ ಮೊದಲ ಅಂಧ ಮಹಿಳೆ ಎಂಬ ಹೆಗ್ಗಳಿಕೆಗೂ ಚೋಂಜನ್ ಪಾತ್ರರಾಗಿದ್ದಾರೆ.

ತನ್ನ 8ನೇ ವಯಸ್ಸಿನಲ್ಲಿ ದೃಷ್ಟಿ ಕಳೆದುಕೊಂಡ ಚೋಂಜನ್, ವಿಶ್ವದ ಅತಿ ಎತ್ತರದ 8,848 ಮೀಟರ್ ಶಿಖರದ ಮೇಲೆ ವಿಜಯದ ಪತಾಕೆ ಹಾರಿಸುವ ಮೂಲಕ ಹೊಸ ದಾಖಲೆ ಬರೆದಿದ್ದಾರೆ. ಮೇ 19, 2025ರಂದು ಬೆಳಗ್ಗೆ 8:30ಕ್ಕೆ ದಂಡು ಶೆರ್ಪಾ ಮತ್ತು ಗುರುಂಗ್ ಮೈಲಾ ಅವರೊಂದಿಗೆ ಈ ಎವರೆಸ್ಟ್ ದಂಡಯಾತ್ರೆ ಏರುವ ಸಾಹಸ ಕೈಗೊಂಡಿದ್ದರು. ಈ ಸಾಧನೆ ತೋರಲು ತಮಗೆ ಸ್ಫೂರ್ತಿ ನೀಡಿದ ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾದ ಪ್ರಾಯೋಜಕತ್ವಕ್ಕೆ ಚೋಂಜನ್ ಕೃತಜ್ಞತೆ ವ್ಯಕ್ತಪಡಿಸಿದ್ದಾರೆ.

ಹೋರಾಟಗಳಿಂದ ತುಂಬಿದ ಜೀವನ. ಎಂಟನೇ ವಯಸ್ಸಿನಲ್ಲಿ, ಮೂರನೇ ತರಗತಿಯಲ್ಲಿ ಓದುತ್ತಿದ್ದಾಗ, ತಾನು ತನ್ನ ದೃಷ್ಟಿಯನ್ನು ಕಳೆದುಕೊಂಡೆ. ದೃಷ್ಟಿ ಕಳೆದುಕೊಂಡರೂ ಧೈರ್ಯ ಕಳೆದುಕೊಳ್ಳಲಿಲ್ಲ. ಮೌಂಟ್ ಎವರೆಸ್ಟ್ ಏರುವುದು ನನ್ನ ಕನಸಾಗಿತ್ತು. ಅದು ಈಗ ಈಡೇರಿದೆ. ಕುರುಡುತನ ಅಡ್ಡಿಯಾಗಲು ನಾನು ಎಂದಿಗೂ ಬಿಡಲಿಲ್ಲ. ನನ್ನ ಧೈರ್ಯ ಮತ್ತು ದೃಢಸಂಕಲ್ಪ ಪರ್ವತಕ್ಕಿಂತ ಎತ್ತರ ಮತ್ತು ಬಲಶಾಲಿ ಎಂಬುದನ್ನು ತೋರಿಸಿದ್ದೇನೆ. ಪೋಷಕರು ಲೇಹ್‌ನಲ್ಲಿರುವ ಮಹಾಬೋಧಿ ಶಾಲೆ ಮತ್ತು ದೃಷ್ಟಿಹೀನ ಮಕ್ಕಳ ಹಾಸ್ಟೆಲ್‌ಗೆ ಸೇರಿಸಿದ ಬಳಿಕ ಜೀವನಕ್ಕೆ ಹೊಸ ದಿಕ್ಕು ಸಿಕ್ಕಿತು'' ಎಂದು ಚೊಂಗ್ಜಿನ್ ತನ್ನ ಸಾಹಸವನ್ನು ಹೇಳಿಕೊಂಡಿದ್ದಾಳೆ.

# ಪೂಂಚ್‌ಗೆ ಭೇಟಿ ನೀಡಿ ಸಂತ್ರಸ್ತರಿಗೆ ಸಾಂತ್ವನ ಹೇಳಿದ ರಾಹುಲ್ ಗಾಂಧಿ

**ಜಮ್ಮು ಕಾಶ್ಮೀರ:** ಜಮ್ಮು ಮತ್ತು ಕಾಶ್ಮೀರದ ಪೂಂಚ್ ಗಡಿಯಲ್ಲಿ ಪಾಕಿಸ್ತಾನ ನಡೆಸಿದ ಶೆಲ್ ದಾಳಿಯ ವೇಳೆ ಹಾನಿಗೊಳಗಾದ ಸಂತ್ರಸ್ತ ಕುಟುಂಬದವರನ್ನು ಇಂದು ರಾಹುಲ್ ಗಾಂಧಿ ಭೇಟಿ ನೀಡಿ ಸಾಂತ್ವನ ಹೇಳಿದರು. ಇದೊಂದು ದೊಡ್ಡ ದುರಂತ ಎಂದಿರುವ ಕಾಂಗ್ರೆಸ್ ನಾಯಕ ಈ ವಿಚಾರವನ್ನು ರಾಷ್ಟ್ರೀಯ ಮಟ್ಟದಲ್ಲಿ ಚರ್ಚಿಸುವುದಾಗಿ ಅಲ್ಲಿನ ಜನರಿಗೆ ಇದೇ ವೇಳೆ ಅವರು ಭರವಸೆ ನೀಡಿದ್ದಾರೆ.

ಪೂಂಚ್‌ಗೆ ಭೇಟಿ ನೀಡಿದ ವಿಪಕ್ಷ ನಾಯಕ ರಾಹುಲ್ ಗಾಂಧಿ. ಮೇ 7ರಿಂದ 10ರವರೆಗೆ ನಡೆದ ಬಾಂಬ್ ಶೆಲ್ ದಾಳಿಯಲ್ಲಿ ಕುಟುಂಬ ಸದಸ್ಯರನ್ನು ಕಳೆದುಕೊಂಡ ಸಂತ್ರಸ್ತರೊಂದಿಗೆ ಸುಮಾರು ಒಂದು ಘಂಟೆಗಳ ಕಾಲ ಮಾತುಕತೆ ನಡೆಸಿದರು.

ಇದೊಂದು ದೊಡ್ಡ ದುರಂತವಾಗಿದೆ. ಅನೇಕ ಜನರು ತಮ್ಮ ಜೀವ ಕಳೆದುಕೊಂಡಿದ್ದಾರೆ. ಪಾಕಿಸ್ತಾನವು ಭಾರತೀಯ ನಾಗರಿಕರನ್ನು ನೇರವಾಗಿ ಗುರಿಯಾಗಿಸಿ ದಾಳಿ ನಡೆಸಿದೆ. ಜನರೊಂದಿಗೆ ನಾನು ಮಾತುಕತೆ ನಡೆಸಿದ್ದು, ಅವರ ಸಮಸ್ಯೆಗಳನ್ನು ಅರ್ಥೈಸಿಕೊಂಡಿದ್ದೇನೆ. ಈ ವಿಚಾರವನ್ನು ರಾಷ್ಟ್ರಮಟ್ಟದಲ್ಲಿ ಚರ್ಚಿಸುವಂತೆ ಅವರು



ನನ್ನನ್ನು ಕೋರಿದ್ದಾರೆ. ನಾನು ಅದನ್ನು ಮಾಡುತ್ತೇನೆ ಎಂದು ರಾಹುಲ್ ಗಾಂಧಿ ವರದಿಗಾರರಿಗೆ ತಿಳಿಸಿದರು.

ಭೇಟಿ ಬೆನ್ನಲ್ಲೇ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದು, ಪೂಂಚ್‌ನಲ್ಲಿ ಪಾಕಿಸ್ತಾನ ಪಡೆ ನಡೆಸಿದ ಬಾಂಬ್ ಶೆಲ್ ದಾಳಿಯಲ್ಲಿ ಜೀವ ಕಳೆದುಕೊಂಡ ಸಂತ್ರಸ್ತ ಕುಟುಂಬಸ್ಥರನ್ನು ಇಂದು ನಾನು ಭೇಟಿಯಾದೆ. ಹಾನಿಗೊಂಡ ಮನೆಗಳು, ಚದುರಿದ ವಸ್ತುಗಳು, ಕಣ್ಣಲ್ಲಿ ನೀರು, ಪ್ರೀತಿ ಪಾತ್ರರನ್ನು ಕಳೆದುಕೊಂಡವರ ನೋವಿನ ಕಥೆಗಳು ಆಲಿಸಿದೆ. ಈ ಕುಟುಂಬಗಳು ಯುದ್ಧದ ಭಾರವನ್ನು ಶೌರ್ಯ ಮತ್ತು ಘನತೆಯೊಂದಿಗೆ ಪ್ರತಿ ಭಾರಿ ಭರಿಸಿದ್ದು, ಅವರ ಧೈರ್ಯಕ್ಕೆ ಸೆಲ್ಯೂಟ್. ನಾನು ಸಂತ್ರಸ್ತ ಕುಟುಂಬದ ಜೊತೆಗಿದ್ದೇನೆ. ನಾನು ಅವರ ಬೇಡಿಕೆ ಮತ್ತು ಸಮಸ್ಯೆಗಳ ಬಗ್ಗೆ ರಾಷ್ಟ್ರ ಮಟ್ಟದಲ್ಲಿ ಖಂಡಿತವಾಗಿ ಧ್ವನಿ ಎತ್ತುತ್ತೇನೆ ಎಂದರು.

# ಪಾಕಿಸ್ತಾನದ ಮೇಲೆ ಯಾವುದೇ ಸಮಯದಲ್ಲಿ ಭಾರತದಿಂದ ದಾಳಿ: ಜೈಶಂಕರ್

**ದೆಹಲಿ:** ಪಹಲ್ಗಾಮ್ ದಾಳಿಯ ನಂತರ, ಪಾಕಿಸ್ತಾನದಲ್ಲಿರುವ ಭಯೋತ್ಪಾದಕ ನೆಲೆಗಳನ್ನು ನಾಶಮಾಡಲು ಭಾರತ ಆಪರೇಷನ್ ಸಿಂಧೂರ್ ಪ್ರಾರಂಭಿಸಿತು. ನಂತರದ ಬೆಳವಣಿಗೆಯಿಂದಾಗಿ ಪಾಕಿಸ್ತಾನ ಕದನ ವಿರಾಮವನ್ನು ಕೋರಿತು. ಕದನ ವಿರಾಮವೂ ಜಾರಿಗೆ ಬಂತು. ಇದೀಗ ಎರಡೂ ದೇಶಗಳು ಪರಸ್ಪರ ದಾಳಿ ಮಾಡುವುದನ್ನು ನಿಲ್ಲಿಸಿವೆ. ಆದರೆ ಭಾರತ ಆಪರೇಷನ್ ಸಿಂಧೂರ್ ಅನ್ನು ಸಂಪೂರ್ಣವಾಗಿ ನಿಲ್ಲಿಸಿದೆಯೇ.. ಎಂಬ ಪ್ರಶ್ನೆ ಹಲವರ ತಲೆಯಲ್ಲಿದೆ. ಈ ಕುರಿತು ಡಚ್ ಮಾಧ್ಯಮಕ್ಕೆ ನೀಡಿದ ಸಂದರ್ಶನದಲ್ಲಿ ವಿದೇಶಾಂಗ ಸಚಿವ ಜೈಶಂಕರ್ ಅವರು ಭಾರತದ ನಿಲುವನ್ನು ಸ್ಪಷ್ಟವಾಗಿ ತಿಳಿಸಿದರು. ಪಹಲ್ಗಾಮ್ ದಾಳಿಯ ನಂತರ ಪ್ರಾರಂಭಿಸಲಾದ ಆಪರೇಷನ್ ಸಿಂಧೂರ್ ಇನ್ನೂ ಮುಗಿದಿಲ್ಲ. ಈ ಅಭಿಯಾನ ಮುಂದುವರೆದಿದೆ. ಪಾಕ್‌ನಿಂದ ಕಾರ್ಯನಿರ್ವಹಿಸುತ್ತಿರುವ ಭಯೋತ್ಪಾದಕರು ಮತ್ತೆ ಭಯೋತ್ಪಾದಕ ದಾಳಿಗಳನ್ನು ನಡೆಸಿದರೆ, ಭಾರತವೂ ಅದೇ ರೀತಿ ಪ್ರತಿಕ್ರಿಯಿಸುತ್ತದೆ ಮತ್ತು ಭಯೋತ್ಪಾದಕರನ್ನು ಗುರಿಯಾಗಿಸುತ್ತದೆ ಎಂದು ಜೈಶಂಕರ್ ಹೇಳಿದರು. ಪಾಕ್ ಸೇನೆಯು ಭಯೋತ್ಪಾದಕರೊಂದಿಗೆ ನೇರ ಸಂಪರ್ಕ ಹೊಂದಿದೆ ಎಂಬುದು ಈಗ ಬಹಿರಂಗವಾಗಿದೆ. ಪಾಕಿಸ್ತಾನ ಸೇನೆ ಮತ್ತು ಭಯೋತ್ಪಾದಕರನ್ನು ಬೇರ್ಪಡಿಸುವುದು ಅಸಾಧ್ಯ, ಎಂದು ಜೈಶಂಕರ್ ಹೇಳಿದ್ದಾರೆ. ಒಟ್ಟಾರೆಯಾಗಿ ಪಾಕ್‌ನಿಂದ ಒಂದೇ ಒಂದು ಗುಂಡು ಬಂದರೂ ಆಪರೇಷನ್ ಸಿಂಧೂರ ಆಕ್ಟಿವ್ ಆಗುತ್ತೆ ಅಂತ ಪಾಕಿಸ್ತಾನಕ್ಕೆ ಖಡಕ್ ಎಚ್ಚರಿಕೆ ನೀಡಿದರು.



# ಟೆಕ್ಸಾಸ್‌ನ ಉನ್ನತ ವಿಜ್ಞಾನ ಅಕಾಡೆಮಿ ಅಧ್ಯಕ್ಷರಾಗಿ ಭಾರತೀಯ ಮೂಲದ ಪ್ರಾಧ್ಯಾಪಕ ನೇಮಕ

**ಹೂಸ್ಟನ್ (ಅಮೆರಿಕ):** ಭಾರತೀಯ ಮೂಲದ ಪ್ರಾಧ್ಯಾಪಕ ಗಣೇಶ್ ಠಾಕೂರ್ ಅವರನ್ನು ಟೆಕ್ಸಾಸ್ ಅಕಾಡೆಮಿ ಆಫ್ ಮೆಡಿಸಿನ್, ಎಂಜಿನಿಯರಿಂಗ್, ವಿಜ್ಞಾನ ಮತ್ತು ತಂತ್ರಜ್ಞಾನ ಸಂಸ್ಥೆಯ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆ. ಇವರು ಈ ಹುದ್ದೆಯನ್ನು ಅಲಂಕರಿಸಿದ ಮೊದಲ ಹೂಸ್ಟನ್ ವಿಶ್ವವಿದ್ಯಾಲಯದ ಅಧ್ಯಾಪಕರಾಗಿದ್ದಾರೆ.



ಯುಎಚ್‌ನ ಕಲೆನ್ ಕಾಲೇಜ್ ಆಫ್ ಎಂಜಿನಿಯರಿಂಗ್‌ನಲ್ಲಿ ಪೆಟ್ರೋಲಿಯಂ ಎಂಜಿನಿಯರಿಂಗ್ ಪ್ರಾಧ್ಯಾಪಕರಾಗಿರುವ ಠಾಕೂರ್ ಅವರು ಫೆಬ್ರವರಿಯಲ್ಲಿ ಈ ಸಂಸ್ಥೆಗೆ ಪ್ರಾಧ್ಯಾಪಕರಾಗಿ ಸೇರಿಕೊಂಡರು ಎಂದು ವಿಶ್ವವಿದ್ಯಾಲಯ ಪ್ರಕಟಣೆಯಲ್ಲಿ ತಿಳಿಸಿದೆ. ಯುಎಚ್‌ನ ಸಂಶೋಧನೆಯ ಗೋಚರತೆ ಹೆಚ್ಚಿಸುವುದು ಮತ್ತು ಟೆಕ್ಸಾಸ್‌ನ ಉನ್ನತ ಸಂಸ್ಥೆಗಳಲ್ಲಿ ಸಹಯೋಗವನ್ನು ಉತ್ತೇಜಿಸುವುದು ಅವರ ಗುರಿಯಾಗಿದೆ.

ವಾಸ್ತವ ಜಗತ್ತಿನ ಸವಾಲುಗಳನ್ನು ಎದುರಿಸುವ ನಿಟ್ಟಿನಲ್ಲಿ TAMEST ಸಂಸ್ಥೆ UH, UT ಆಸ್ಟಿನ್, ಟೆಕ್ಸಾಸ್ A&M ಮತ್ತು ಇತರ ಸಂಸ್ಥೆಗಳಿಂದ ಬುದ್ಧಿಜೀವಿಗಳನ್ನು ಒಟ್ಟುಗೂಡಿಸುವ ಕೆಲಸ ಮಾಡುತ್ತದೆ ಎಂದು ಠಾಕೂರ್ ಹೇಳಿದರು.

ಯುಎಸ್ ರಾಷ್ಟ್ರೀಯ ಅಕಾಡೆಮಿಗಳ 350 ಸದಸ್ಯರು ಮತ್ತು ಎಂಟು ನೊಬೆಲ್ ಪ್ರಶಸ್ತಿ ವಿಜೇತರನ್ನು ಒಳಗೊಂಡಿದೆ. ಇದರ ಮುಂದಿನ ವಾರ್ಷಿಕ ಸಮ್ಮೇಳನ ಹವಾಮಾನ ಬದಲಾವಣೆಯ ಮೇಲೆ ಕೇಂದ್ರೀಕರಿಸಿದ್ದು, 2026ರ ಫೆಬ್ರವರಿಯಲ್ಲಿ ಸ್ಯಾನ್ ಆಂಟೋನಿಯೊದಲ್ಲಿ ನಡೆಯಲಿದೆ.

ಠಾಕೂರ್ ಅವರು ಈ ಹುದ್ದೆಯಲ್ಲಿ 2027 ರವರೆಗೆ ಮುಂದುವರಿಯಲಿದ್ದಾರೆ. ಈ ಅವಧಿಯಲ್ಲಿ ಹೂಸ್ಟನ್ ಸಂಸ್ಥೆಯನ್ನು ವಿಜ್ಞಾನ ಮತ್ತು ನಾವೀನ್ಯತೆಯ ರಾಷ್ಟ್ರೀಯ ಕೇಂದ್ರವಾಗಿ ರೂಪಿಸಲು ಯೋಜಿಸಿದ್ದಾರೆ.

# ಹಾರ್ವರ್ಡ್ ವಿವಿಗೆ ವಿದೇಶಿ ವಿದ್ಯಾರ್ಥಿಗಳ ದಾಖಲಾತಿ ನಿರ್ಬಂಧಿಸಿದ ಟ್ರಂಪ್ ಆದೇಶಕ್ಕೆ ನ್ಯಾಯಾಲಯ ತಡೆ

**ವಾಷಿಂಗ್ಟನ್:** ಹಾರ್ವರ್ಡ್ ವಿಶ್ವವಿದ್ಯಾಲಯಕ್ಕೆ ವಿದೇಶಿ ವಿದ್ಯಾರ್ಥಿಗಳನ್ನು ದಾಖಲಿಸಿಕೊಳ್ಳದಂತೆ ನಿರ್ಬಂಧಿಸಿದ ಟ್ರಂಪ್ ಸರಕಾರದ ಆದೇಶಕ್ಕೆ ಅಮೆರಿಕದ ನ್ಯಾಯಾಲಯ ತಾತ್ಕಾಲಿಕವಾಗಿ ತಡೆ ನೀಡಿದೆ.



ಟ್ರಂಪ್ ಸರಕಾರದ ಆದೇಶವು ಅಮೆರಿಕ ಸಂವಿಧಾನದ ಸ್ಪಷ್ಟ ಉಲ್ಲಂಘನೆ ಎಂದು ಹಾರ್ವರ್ಡ್ ವಿವಿ ಮ್ಯಾಸಚೂಸೆಟ್ಸ್ ಫೆಡರಲ್ ನ್ಯಾಯಾಲಯದಲ್ಲಿ ಮೊಕದ್ದಮೆ ಹೂಡಿದ ಕೆಲವೇ ಗಂಟೆಗಳಲ್ಲಿ ಈ ತೀರ್ಪು ಹೊರ ಬಂದಿದೆ. 2025-2026ರ ಶೈಕ್ಷಣಿಕ ವರ್ಷದಿಂದ ಜಾರಿಗೆ ಬರಬಹುದಾಗಿದ್ದ ಹೋಮ್ಲ್ಯಾಂಡ್ ಸೆಕ್ಯುರಿಟಿ ಇಲಾಖೆಯ ಆದೇಶವನ್ನು ಪ್ರಶ್ನಿಸಿದ್ದ ಹಾರ್ವರ್ಡ್ ವಿವಿಯ ಅರ್ಜಿಯನ್ನು ಪುರಸ್ಕರಿಸಿದ ಬೋಸ್ಟನ್ ಜಿಲ್ಲಾ ನ್ಯಾಯಾಧೀಶೆ ಆಲಿಸನ್ ಬರೋಸ್ ತಾತ್ಕಾಲಿಕವಾಗಿ ತಡೆಯಾಜ್ಞೆಯನ್ನು ವಿಧಿಸಿದರು.

ಟ್ರಂಪ್ ಆಡಳಿತ ಹಾರ್ವರ್ಡ್ ವಿಶ್ವವಿದ್ಯಾಲಯಕ್ಕೆ ಅಂತಾರಾಷ್ಟ್ರೀಯ ವಿದ್ಯಾರ್ಥಿಗಳನ್ನು ದಾಖಲಿಸಿಕೊಳ್ಳದಂತೆ ನಿರ್ಬಂಧವನ್ನು ವಿಧಿಸಿತ್ತು. ಹೋಮ್ಲ್ಯಾಂಡ್ ಸೆಕ್ಯುರಿಟಿ ಕಾರ್ಯದರ್ಶಿ ಕ್ರಿಸ್ಟಿ ನೋಯೆಮ್ ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದು, ಹಿಂಸೆ, ಯೆಹೂದ್ಯ ವಿರೋಧಿತ್ವವನ್ನು ಬೆಳೆಸಿದ್ದಕ್ಕಾಗಿ ಮತ್ತು ಕ್ಯಾಂಪಸ್‌ನಲ್ಲಿ ಚೀನೀ ಕಮ್ಯುನಿಸ್ಟ್ ಪಕ್ಷದೊಂದಿಗೆ ಸಮನ್ವಯ ಸಾಧಿಸಿದ್ದಕ್ಕಾಗಿ ಟ್ರಂಪ್ ಆಡಳಿತವು ಹಾರ್ವರ್ಡ್ ವಿವಿಯನ್ನು ಹೊಣೆಗಾರರನ್ನಾಗಿ ಮಾಡುತ್ತಿದೆ ಎಂದು ಹೇಳಿದ್ದರು.

# ಪಾಕ್ ನುಸುಳುಕೋರನನ್ನು ಹೊಡೆದುರುಳಿಸಿದ ಬಿಎಸ್‌ಎಫ್

**ಗಾಂಧಿನಗರ:** ಜಮ್ಮು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಏ. 22ರಂದು ಪಾಕ್ ಮೂಲದ ಉಗ್ರರು ದಾಳಿ ನಡೆಸಿದ ಬಳಿಕ ಎರಡು ದೇಶಗಳ ನಡುವೆ ಪರಿಸ್ಥಿತಿ ಉದ್ವಿಗ್ನವಾಗಿಯೇ ಮುಂದುವರಿದಿದೆ. ಈ ಹಿನ್ನೆಲೆಯಲ್ಲಿ ಭಾರತ ಅಂತಾರಾಷ್ಟ್ರೀಯ ಗಡಿಯಲ್ಲಿ ಕಣ್ಗಾವಲು ಬಿಗಿಗೊಳಿಸಿದೆ. ಅದರಂತೆ ಶುಕ್ರವಾರ ರಾತ್ರಿ, ಗಡಿ ಭದ್ರತಾ ಪಡೆ ಗುಜರಾತ್‌ನ ಬನಸ್ಕಾಂತ ಜಿಲ್ಲೆಯಲ್ಲಿ ಭಾರತದೊಳಕ್ಕೆ ನುಸುಳಲು ಯತ್ನಿಸಿದ ಪಾಕಿಸ್ತಾನಿ ಪ್ರಜೆಯನ್ನ ಹೊಡೆದುರುಳಿಸಿದೆ.

ಭಾರತ-ಪಾಕಿಸ್ತಾನ ಅಂತಾರಾಷ್ಟ್ರೀಯ ಗಡಿಯನ್ನು ದಾಟಿ ಅನುಮಾನಾಸ್ಪದ ವ್ಯಕ್ತಿ ಒಳ ಬರುತ್ತಿರುವುದನ್ನು ಬಿಎಸ್‌ಎಫ್ ಸಿಬ್ಬಂದಿ ಗಮನಿಸಿ ಕೂಡಲೇ ಕ್ರಮ ಕೈಗೊಂಡವು ಎಂದು ಮೂಲಗಳು ತಿಳಿಸಿವೆ. ಒಳನುಸುಳುಕೋರನಿಗೆ ಆರಂಭದಲ್ಲಿ ಎಚ್ಚರಿಕೆ ನೀಡಲಾಯಿತು. ಆದರೆ ಆತ ಅದನ್ನು ಕಿವಿ ಮೇಲೆ ಹಾಕಿಕೊಳ್ಳದೆ ಮುಂದೆ ಮುಂದೆ ಬರತೊಡಗಿದ. ಕೊನೆಗೆ ಗತ್ಯಂತರವಿಲ್ಲದೆ ಗುಂಡಿನ ದಾಳಿ ನಡೆಸಬೇಕಾಯ್ತು ಎಂದು ಬಿಎಸ್‌ಎಫ್ ಸಿಬ್ಬಂದಿ ವಿವರಿಸಿದರು.



ಪಹಲ್ಗಾಮ್ ದಾಳಿಗೆ ಸೇಡು ತೀರಿಸಿಕೊಂಡ ಭಾರತ ಆಪರೇಷನ್ ಸಿಂದೂರ್ ಮೂಲಕ ಪಾಕ್ ಆಕ್ರಮಿತ ಕಾಶ್ಮೀರ, ಪಾಕಿಸ್ತಾನದ ಮೇಲೆ ದಾಳಿ ನಡೆಸಿ ಉಗ್ರರ ನೆಲೆಗಳನ್ನು ಧ್ವಂಸಗೊಳಿಸಿದೆ. ಇದಾದ ಬಳಿಕ ಪಾಕಿಸ್ತಾನ ಕದನ ವಿರಾಮ ಉಲ್ಲಂಘಿಸಿ ಭಾರತದ ಮೇಲೆ ಶೆಲ್ಲಿಂಗ್, ಡ್ರೋನ್ ದಾಳಿ ನಡೆಸಿದ್ದು, ಅದನ್ನು ಹಿಮ್ಮೆಟ್ಟಿಸಲಾಗಿದೆ. ಈ ಹಿನ್ನೆಲೆಯಲ್ಲಿ ಭದ್ರತೆಯನ್ನು ಇನ್ನಷ್ಟು ಬಿಗಿಗೊಳಿಸಲಾಗಿದೆ.

# ದೆಹಲಿಯಲ್ಲಿ ಭಾರೀ ಮಳೆ ವಿಮಾನ ಹಾರಾಟದಲ್ಲಿ ವ್ಯತ್ಯಯ

**ನವದೆಹಲಿ:** ದೆಹಲಿ ಮತ್ತು ಎನ್‌ಆರ್‌ಸಿಯ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಶನಿವಾರ ರಾತ್ರಿ, ಇಡೀ ಗುಡುಗು ಸಹಿತ ಭಾರೀ ಮಳೆಯಾಗಿದ್ದು, ಹಲವೆಡೆ ರಸ್ತೆಗಳು ಜಲಾವೃತವಾಗಿ ಸಂಚಾರ ಅಸ್ತವ್ಯಸ್ತವಾಗಿದೆ. ಇಂದಿರಾ ಗಾಂಧಿ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬೀಸಿದ ಬಿರುಗಾಳಿ ಮತ್ತು ಭಾರೀ ಮಳೆಯಿಂದಾಗಿ 100ಕ್ಕೂ ಹೆಚ್ಚು ವಿಮಾನಗಳ ಕಾರ್ಯಾಚರಣೆ ವಿಳಂಬವಾಗಿದೆ. ಅಲ್ಲದೇ ಭಾರೀ ಮಳೆಗೆ 25ಕ್ಕೂ ಹೆಚ್ಚು ವಿಮಾನಗಳನ್ನು ಬೇರೆಡೆಗೆ ತಿರುಗಿಸಲಾಗಿದೆ. ದೆಹಲಿಯ ಮೋತಿ ಬಾಗ್, ಮಿಂಟೋ ರಸ್ತೆ, ದೆಹಲಿ ಕಂಟೋನ್ಮೆಂಟ್ ಮತ್ತು ದೀನ್ ದಯಾಳ್ ಉಪಾಧ್ಯಾಯ ಮಾರ್ಗಗಳು ಸಂಪೂರ್ಣ ಜಲಾವೃತವಾಗಿತ್ತು. ಮಹಿಪಾಲಪುರ ಮೇಲ್ಸೇತುವೆಯ ಕೆಳಗೆ ನೀರು ನಿಂತ ಪರಿಣಾಮ ವಾಹನ ಸಂಚಾರಕ್ಕೆ ಅಡಚಣೆಯಾಗಿದೆ. ದೆಹಲಿಯ ಇಂದಿರಾ ಗಾಂಧಿ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ವಿಮಾನ ಕಾರ್ಯಾಚರಣೆಗಳ ಮೇಲೆ ಮಳೆ ಪರಿಣಾಮ ಬೀರಿದೆ. ದೆಹಲಿಯ ಮೇಲಿನ ಪ್ರತಿಕೂಲ ಹವಾಮಾನದಿಂದಾಗಿ ವಿಮಾನ ಕಾರ್ಯಾಚರಣೆಗಳಲ್ಲಿ ತಾತ್ಕಾಲಿಕ ಅಡಚಣೆ ಉಂಟಾಗಿದೆ ಎಂದು ಇಂಡಿಗೋಎಕ್ಸ್‌ನಲ್ಲಿ ಪೋಸ್ಟ್ ಮಾಡುವ ಮೂಲಕ ಮಾಹಿತಿ ನೀಡಿದೆ. ಇದೀಗ ಭಾರೀ ಮಳೆಗೆ ರಾಜಧಾನಿ ನವದೆಹಲಿ ಸೇರಿ ಹಲವೆಡೆ ಹವಾಮಾನ ಇಲಾಖೆ ರೆಡ್ ಅಲರ್ಟ್ ಘೋಷಿಸಿದೆ.

# ಈಶಾನ್ಯ ರಾಜ್ಯಗಳಿಗೆ 75 ಸಾವಿರ ಕೋಟಿ ರೂಪಾಯಿ ಹೂಡಿಕೆ ಗುರಿ ನಿಗದಿಪಡಿಸಿದೆ ರಿಲಯನ್ಸ್: ಮುಕೇಶ್ ಅಂಬಾನಿ

**ನವದೆಹಲಿ:** ರಿಲಯನ್ಸ್ ಇಂಡಸ್ಟ್ರೀಸ್ ಅಧ್ಯಕ್ಷ ಮುಕೇಶ್ ಅಂಬಾನಿ ಅವರು ಈಶಾನ್ಯ ರಾಜ್ಯಗಳಲ್ಲಿ ತಮ್ಮ ಹೂಡಿಕೆಯನ್ನು 75 ಸಾವಿರ ಕೋಟಿ ರೂಪಾಯಿಗಳಿಗೆ ಹೆಚ್ಚಿಸುವ ಗುರಿಯನ್ನು ಹೊಂದಿದ್ದಾರೆ. ಸದ್ಯಕ್ಕೆ ಕಂಪನಿಯು ಈ ರಾಜ್ಯಗಳಲ್ಲಿ ಸುಮಾರು 30 ಸಾವಿರ ಕೋಟಿ ರೂಪಾಯಿ ಹೂಡಿಕೆಯನ್ನು ಹೊಂದಿದೆ. ಅಂದರೆ, ಮುಂದಿನ ಐದು ವರ್ಷಗಳಲ್ಲಿ, ಈ ರಾಜ್ಯಗಳಲ್ಲಿ ಸುಮಾರು 45 ಸಾವಿರ ಕೋಟಿ ರೂಪಾಯಿಗಳ ಹೊಸ ಹೂಡಿಕೆಯನ್ನು ರಿಲಯನ್ಸ್ ಮಾಡಲಿದೆ. ದೆಹಲಿಯ ಭಾರತ್ ಮಂಟಪದಲ್ಲಿ ನಡೆಯುತ್ತಿರುವ 'ರೈಸಿಂಗ್ ನಾರ್ಥ್ ಈಸ್ಟ್ ಇನ್ವೆಸ್ಟರ್ಸ್ ಸಮ್ಮಿಟ್'ನಲ್ಲಿ ಮುಕೇಶ್ ಅಂಬಾನಿ ಮಾತನಾಡಿದರು. ಸಶಸ್ತ್ರ ಪಡೆಗಳ ಅಪ್ರತಿಮ ಶೌರ್ಯದಿಂದಾಗಿ ಯಶಸ್ವಿಯಾದ ಆಪರೇಷನ್ ಸಿಂಧೂರ್‌ಗೆ ಪ್ರಧಾನಿ ಮೋದಿ ಮತ್ತು ದೇಶವನ್ನು ಅಭಿನಂದಿಸುವ ಮೂಲಕ ಮುಕೇಶ್ ಅಂಬಾನಿ ತಮ್ಮ ಭಾಷಣವನ್ನು ಪ್ರಾರಂಭಿಸಿದರು.

ಈ ಪ್ರಸ್ತಾವಿತ ಹೂಡಿಕೆಯು 25 ಲಕ್ಷಕ್ಕೂ ಹೆಚ್ಚು ನೇರ ಮತ್ತು ಪರೋಕ್ಷ ಉದ್ಯೋಗಾವಕಾಶ ಸೃಷ್ಟಿಸುತ್ತದೆ ಎಂದು ಅಂಬಾನಿ ಹೇಳಿದರು. ಈಶಾನ್ಯ ರಾಜ್ಯಗಳಲ್ಲಿ 350 ಜೈವಿಕ ಅನಿಲ ಸ್ಥಾವರಗಳನ್ನು ಸ್ಥಾಪಿಸುವ ಬದ್ಧತೆಯನ್ನು ಮುಕೇಶ್ ವ್ಯಕ್ತಪಡಿಸಿದರು. ಜಿಯೋ



ಬಗ್ಗೆ ಉಲ್ಲೇಖಿಸಿದ ಮುಕೇಶ್ ಅಂಬಾನಿ, ರಿಲಯನ್ಸ್ ಜಿಯೋದ 5ಜಿ ನೆಟ್‌ವರ್ಕ್ ಈಶಾನ್ಯ ರಾಜ್ಯಗಳ ಜನಸಂಖ್ಯೆಯ ಸುಮಾರು ಶೇಕಡಾ 90ರಷ್ಟನ್ನು ತಲುಪಿದೆ ಎಂದು ಹೇಳಿದರು. 50 ಲಕ್ಷ ಜನರು ಜಿಯೋ 5ಜಿ ನೆಟ್‌ವರ್ಕ್‌ಗೆ ಸಂಪರ್ಕ ಹೊಂದಿದ್ದು, ಈ ವರ್ಷ ಈ ಸಂಖ್ಯೆ ದ್ವಿಗುಣಗೊಳ್ಳಲಿದೆ. ರೈತರ ಆದಾಯವನ್ನು ಹೆಚ್ಚಿಸಲು ರಿಲಯನ್ಸ್ ರೀಟೇಲ್ ನೇರ ಖರೀದಿಯನ್ನು ಪ್ರೋತ್ಸಾಹಿಸುತ್ತದೆ. ಪ್ರಧಾನ ಮಂತ್ರಿಯವರನ್ನು ಈ ಸಂದರ್ಭದಲ್ಲಿ ಶ್ಲಾಘಿಸಿದ ಮುಕೇಶ್ ಅಂಬಾನಿ, ನಿಮ್ಮ ಪ್ರಯತ್ನಗಳಿಂದಾಗಿ ಈಶಾನ್ಯವು ತುದಿಯಿಂದ ಹೊರಬಂದು ಭಾರತದ ಅಭಿವೃದ್ಧಿ ನಕ್ಷೆಯಲ್ಲಿ ಹೊರಹೊಮ್ಮಿದೆ ಎಂದು ಹೇಳಿದರು.

ಆರೋಗ್ಯ ಕ್ಷೇತ್ರದಲ್ಲಿ ರಿಲಯನ್ಸ್ ಫೌಂಡೇಷನ್‌ನ ಕೆಲಸದ ಬಗ್ಗೆ ಮಾಹಿತಿ ನೀಡಿದ ಅವರು, ರಿಲಯನ್ಸ್ ಫೌಂಡೇಷನ್ ಮಣಿಪುರದಲ್ಲಿ 150 ಹಾಸಿಗೆಗಳ ಕ್ಯಾನ್ಸರ್ ಆಸ್ಪತ್ರೆಯನ್ನು ಸ್ಥಾಪಿಸಿದೆ. ಇದರೊಂದಿಗೆ, ಜೀನೋಮಿಕ್ ಡೇಟಾವನ್ನು ಬಳಸಿಕೊಂಡು ಸ್ತನ ಕ್ಯಾನ್ಸರ್ ಆರೈಕೆಯನ್ನು ಮುನ್ನಡೆಸಲು ಫೌಂಡೇಷನ್ ಮಿಜೋರಾಂ ವಿಶ್ವವಿದ್ಯಾಲಯದೊಂದಿಗೆ ಸಹಕರಿಸುತ್ತಿದೆ ಎಂದರು. ಗುವಾಹತಿಯಲ್ಲಿ ಸುಧಾರಿತ ಆನ್ವಿಕ ರೋಗನಿರ್ಣಯ ಮತ್ತು ಸಂಶೋಧನಾ ಪ್ರಯೋಗಾಲಯವನ್ನು ಸ್ಥಾಪಿಸಿದೆ. ಇದು ಭಾರತದಲ್ಲಿ ಅತಿ ದೊಡ್ಡ ಜೀನೋಮ್ ಅನುಕ್ರಮ ಸಾಮರ್ಥ್ಯಗಳೊಂದಿಗೆ ಸಜ್ಜುಗೊಳ್ಳಲಿದೆ. ಈಶಾನ್ಯ ರಾಜ್ಯಗಳಲ್ಲಿ, ರಿಲಯನ್ಸ್ ಫೌಂಡೇಷನ್ ಎಲ್ಲ ಎಂಟು ರಾಜ್ಯಗಳೊಂದಿಗೆ ಒಟ್ಟಾಗಿ ಒಲಿಂಪಿಕ್ ತರಬೇತಿ ಕೇಂದ್ರಗಳನ್ನು ಸ್ಥಾಪಿಸುತ್ತದೆ, ಇಲ್ಲಿಂದ ತರಬೇತಿ ಪಡೆದು ಬರುವ ಯುವಕರು ಒಲಿಂಪಿಕ್ಸ್‌ನಲ್ಲಿ ಪದಕ ವಿಜೇತರಾಗಲು ಸಾಧ್ಯವಾಗುತ್ತದೆ ಎಂದರು.

# ಆಸ್ಟ್ರೇಲಿಯಾದಲ್ಲಿ ಭೀಕರ ಪ್ರವಾಹ

**ಆಸ್ಟ್ರೇಲಿಯಾ:** ಇಲ್ಲಿನ ಆಗ್ನೇಯದಲ್ಲಿ ಶುಕ್ರವಾರ ಪ್ರವಾಹದ ನೀರಿನಲ್ಲಿ ಸಿಲುಕಿದ್ದ ಕಾರಿನಲ್ಲಿ ವ್ಯಕ್ತಿಯೊಬ್ಬನ ಶವ ಪತ್ತೆಯಾಗಿದ್ದು, ಮೂರು ದಿನಗಳ ಕಾಲ ನಿರಂತರ ಮಳೆಯಿಂದಾಗಿ ಇಡೀ ಪಟ್ಟಣಗಳು ಜಲಾವೃತಗೊಂಡು, ಜಾನುವಾರುಗಳು ಕೊಚ್ಚಿಹೋಗಿ, ಮನೆಗಳು ನಾಶವಾದ ನಂತರ ಸಾವಿನ ಸಂಖ್ಯೆ ನಾಲ್ಕಕ್ಕೆ ಏರಿದೆ.

ಸಿಡ್ನಿಯ ಉತ್ತರಕ್ಕೆ ಸುಮಾರು 550 ಕಿ.ಮೀ (342 ಮೈಲುಗಳು) ದೂರದಲ್ಲಿರುವ ಕಾಫ್ಸ್ ಬಂದರಿನ ಬಳಿ ಆ ವ್ಯಕ್ತಿ ಪತ್ತೆಯಾಗಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ವಾರದ ಆರಂಭದಲ್ಲಿ ಪ್ರವಾಹ ಪ್ರಾರಂಭವಾದಾಗಿನಿಂದ ಕಾಣೆಯಾದ ವ್ಯಕ್ತಿಗಾಗಿ ಹುಡುಕಾಟ ಮುಂದುವರೆದಿದೆ.

ಹವಾಮಾನ ಪರಿಸ್ಥಿತಿಗಳು ಕಡಿಮೆಯಾದ ನಂತರ ಅಗತ್ಯ ಸಾಮಗ್ರಿಗಳನ್ನು ಪೂರೈಸುವ ಪ್ರಯತ್ನಗಳನ್ನು ಚುರುಕುಗೊಳಿಸಲು ತುರ್ತು ಸೇವೆಗಳ ಸಿಬ್ಬಂದಿ ಪ್ರಯತ್ನಿಸುತ್ತಿದ್ದಾರೆ ಎಂದು ಹೇಳಿದರು.

ಆದರೆ ಅಧಿಕಾರಿಗಳು ತಮ್ಮ ಪ್ರವಾಹಕ್ಕೆ ಸಿಲುಕಿದ ಮನೆಗಳಿಗೆ ಮರಳುತ್ತಿರುವ ನಿವಾಸಿಗಳಿಗೆ ಅಪಾಯಗಳ ಬಗ್ಗೆ ಎಚ್ಚರದಿಂದಿರಲು ಎಚ್ಚರಿಕೆ ನೀಡಿದರು.

ನಿಮ್ಮ ಮನೆ ಅಥವಾ ಆವರಣವು ಮುಳುಗಿದ್ದರೆ, ಪ್ರವಾಹದ ನೀರಿನಲ್ಲಿ ಮಾಲಿನ್ಯಕಾರಕಗಳಿವೆ. ಕ್ರಿಮಿಕೀಟಗಳು, ಹಾವುಗಳು ಇರಬಹುದುಯ. ಆದ್ದರಿಂದ ನೀವು ಆ ಅಪಾಯಗಳನ್ನು ನಿರ್ಣಯಿಸಬೇಕು. ವಿದ್ಯುತ್ ಕೂಡ ಅಪಾಯವನ್ನುಂಟುಮಾಡಬಹುದು ಎಂದು ರಾಜ್ಯ ತುರ್ತು ಸೇವೆಗಳ ಉಪ ಆಯುಕ್ತ ಡೇಮಿಯನ್ ಜಾನ್ಸ್ಟನ್ ವರದಿಗಾರರಿಗೆ ತಿಳಿಸಿದರು.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಪಾಕಿಸ್ತಾನದಿಂದ ಬಂದು ಭಾರತದಲ್ಲಿ ಸೂಪರ್ ಸ್ಟಾರ್ !



ಬಾಲಿವುಡ್ ಸೂಪರ್‌ಸ್ಟಾರ್ ಒಬ್ಬರು ಪಾಕಿಸ್ತಾನದಿಂದ ಕುಟುಂಬ ಸಮೇತ ಇಲ್ಲಿಗೆ ಬಂದರು. ಇಂದು, ಈ ನಟ ತನಗಾಗಿ ಒಂದು ವಿಶಿಷ್ಟ ಗುರುತನ್ನು ಸೃಷ್ಟಿಸಿಕೊಂಡಿದ್ದಾರೆ. ಅಷ್ಟೇ ಅಲ್ಲ ಅವರು ಭಾರತ ಪಾಕಿಸ್ತಾನ ವಿರುದ್ಧ ನಡೆಸಿದ ಆಪರೇಷನ್ ಸಿಂದೂರ್ ಬಗ್ಗೆ ಮೆಚ್ಚುಗೆ ಸೂಚಿಸಿದ್ದಾರೆ. ಈ ವಿಚಾರ ಸೋಶಿಯಲ್ ಮೀಡಿಯಾದಲ್ಲಿ ಸಾಕಷ್ಟು ಚರ್ಚೆ ಆಗುತ್ತಿದ್ದು, ಅವರ ಬಗ್ಗೆ ಮೆಚ್ಚುಗೆ ವ್ಯಕ್ತವಾಗಿದೆ.



ಭಾರತ ಮತ್ತು ಪಾಕಿಸ್ತಾನ ನಡುವೆ ಪ್ರಸ್ತುತ ಉದ್ವಿಗ್ನ ವಾತಾವರಣವಿದೆ. ಭಾರತದಲ್ಲಿ ಪಾಕಿಸ್ತಾನಿ ಕಲಾವಿದರಿಂದ ಹಿಡಿದು ಸಾಮಾನ್ಯ ನಾಗರಿಕರವರೆಗೆ ಎಲ್ಲವನ್ನೂ ನಿಷೇಧಿಸಲಾಗಿದೆ. ಆದರೆ ನಿಮಗೆ ತಿಳಿದಿದೆಯೇ, ಬಾಲಿವುಡ್‌ನ ಸೂಪರ್‌ಸ್ಟಾರ್ ಒಬ್ಬರು ಪಾಕಿಸ್ತಾನದಿಂದ ತಪ್ಪಿಸಿಕೊಂಡು ಇಂದು ಸೂಪರ್ ಸ್ಟಾರ್ ನಟರಾಗಿದ್ದಾರೆ. ನಾವು ಮಾತನಾಡುತ್ತಿರುವ ನಟನ ಹೆಸರು ಸುರೇಶ್ ಒಬೆರಾಯ್. ವಿವೇಕ್ ಒಬೆರಾಯ್ ಅವರ ತಂದೆ. ಸುರೇಶ್ ಅವರು ಮೂಲತಃ ಪಾಕಿಸ್ತಾನದವರು. ಆದರೆ ದೇಶ ವಿಭಜನೆಯಾದಾಗ ಅವರ ಇಡೀ ಕುಟುಂಬ ಭಾರತಕ್ಕೆ ಬಂದಿತು.

ಸುರೇಶ್ ಡಿಸೆಂಬರ್ 17, 1946 ರಂದು ಪಾಕಿಸ್ತಾನದ ಕ್ವೆಟ್ಟಾದಲ್ಲಿ ಜನಿಸಿದರು. ಅವರ ತಂದೆ ರಿಯಲ್ ಎಸ್ಟೇಟ್ ಏಜೆಂಟ್ ಆಗಿದ್ದರು ಮತ್ತು ಅವರ ಕುಟುಂಬವು ತುಂಬಾ ಶ್ರೀಮಂತವಾಗಿತ್ತು. ಆದರೆ ವಿಭಜನೆಯ ನಂತರ, ಅವರು ಎಲ್ಲವನ್ನೂ ತೊರೆದು ಭಾರತಕ್ಕೆ ಬಂದರು.

ಸುರೇಶ್ ಒಂದು ಸಂದರ್ಶನದಲ್ಲಿ, ಬಾಲ್ಯದಲ್ಲಿ ನಿರಾಶ್ರಿತನಾಗಿ ಇಲ್ಲಿ ಮತ್ತು ಅಲ್ಲಿ ವಾಸಿಸುತ್ತಿದ್ದೆ ಎಂದು ಹೇಳಿದರು. ಅವರ ಬಳಿ ಒಂದು ಹೊತ್ತು ಊಟಕ್ಕೂ ಹಣವಿರಲಿಲ್ಲ. ಸುರೇಶ್ ತಮ್ಮ ವೃತ್ತಿಜೀವನವನ್ನು ರೇಡಿಯೋ ನಿರೂಪಕರಾಗಿ ಪ್ರಾರಂಭಿಸಿದರು. ಅವರು ತಮ್ಮ ಧ್ವನಿಯಿಂದಾಗಿ ಅಪಾರ ಜನಪ್ರಿಯತೆಯನ್ನು ಗಳಿಸಿದರು. ಕ್ರಮೇಣ, ಅವರಿಗೆ ಚಲನಚಿತ್ರಗಳ ಆಫರ್‌ಗಳು ಬರಲು ಪ್ರಾರಂಭಿಸಿದವು. ಲಾವಾರಿಸ್, ವಿಧಾತ, ನಮಕ್ ಹಲಾಲ್, ಕಾಮ್ಚೋರ್ ಚಿತ್ರಗಳ ಮೂಲಕ ಅವರು ಹೆಸರು ಮಾಡಿದರು.

ಸುರೇಶ್ ಅವರಿಗೆ ಜನಿಸಿದವರೇ ವಿವೇಕ್ ಒಬೆರಾಯ್. ಇವರು ಬಾಲಿವುಡ್ ನಲ್ಲಿ ಸಾಕಷ್ಟು ಹೆಸರು ಮಾಡಿದರು. ಆದರೆ, ಸಲ್ಮಾನ್ ಖಾನ್ ಅವರನ್ನು ಎದುರು ಹಾಕಿಕೊಳ್ಳುವ ಮೂಲಕ ಒಂದಷ್ಟು ಆಫರ್ ಗಳನ್ನು ಕಳೆದುಕೊಂಡರು. ಆದರೆ, ಅವರು ಛಲ ಬಿಡದೆ ಹೊಸ ಸಿನಿಮಾಗಳನ್ನು ಒಪ್ಪಿಕೊಂಡು ನಟಿಸುತ್ತಿದ್ದಾರೆ.

# '45' ಸಿನಿಮಾದಿಂದ ಬಿಡುಗಡೆ ಆಯ್ತು ಶಿವನ ಹಾಡು 'ಶಿವಂ ಶಿವಂ ಸನಾತನಂ'

'45' ಸಿನಿಮಾದಲ್ಲಿ 'ಹ್ಯಾಟ್ರಿಕ್ ಹೀರೋ' ಶಿವರಾಜ್ ಕುಮಾರ್, ಉಪೇಂದ್ರ, ರಾಜ್ ಬಿ. ಶೆಟ್ಟಿ ಅವರು ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. ಖ್ಯಾತ ಸಂಗೀತ ನಿರ್ದೇಶಕ ಅರ್ಜುನ್ ಜನ್ಯ ಈ ಸಿನಿಮಾಗೆ ಆ ಯಕ್ಷನ್-ಕಟ್ ಹೇಳಿದ್ದಾರೆ. ಅವರ ನಿರ್ದೇಶನದಲ್ಲಿ ಮೂಡಿಬರುತ್ತಿರುವ ಮೊದಲ ಸಿನಿಮಾ ಇದು. 'ಸೂರಜ್ ಪ್ರೊಡಕ್ಷನ್ಸ್' ಮೂಲಕ ಶ್ರೀಮತಿ ಉಮಾ ರಮೇಶ್ ರೆಡ್ಡಿ ಅವರು ನಿರ್ಮಾಣ ಮಾಡಿದ್ದಾರೆ. '45' ಸಿನಿಮಾಗಾಗಿ ವಿ. ನಾಗೇಂದ್ರ ಪ್ರಸಾದ್ ಅವರು 'ಶಿವಂ ಶಿವಂ ಸನಾತನಂ..' ಹಾಡು ಬರೆದಿದ್ದಾರೆ. ಅರ್ಜುನ್ ಜನ್ಯ ಸಂಗೀತ ನೀಡಿರುವ ಈ ಹಾಡಿಗೆ ವಿಜಯ್ ಪ್ರಕಾಶ್ ಧ್ವನಿ ನೀಡಿದ್ದಾರೆ. ಇತ್ತೀಚೆಗೆ ಈ ಸಾಂಗ್ ರಿಲೀಸ್ ಆಯಿತು.



ಆನಂದ ಪೀಠಾಧೀಶ್ವರ ಆಚಾರ್ಯ ಮಹಾಮಂಡಲೇಶ್ವರ ಅನಂತ ಶ್ರೀ ವಿಭೂಷಿತ ಶ್ರೀಬಾಲ್ಕಾನಂದ ಗಿರಿ ಜಿ ಮಹಾರಾಜ್ ಅವರು ದೆಹಲಿಯಿಂದ ಬಂದು ಈ ಹಾಡನ್ನು ಬಿಡುಗಡೆ ಮಾಡಿದರು. ಬಳಿಕ ಅವರು ಚಿತ್ರತಂಡದವನ್ನು ಆಶೀರ್ವದಿಸಿದರು. ಕಾರ್ಯಕ್ರಮದಲ್ಲಿ ಈ ಗೀತೆಗೆ ಶಿವರಾಜ್ ಕುಮಾರ್ ಡ್ಯಾನ್ಸ್ ಮಾಡಿದ್ದು ವಿಶೇಷವಾಗಿತ್ತು. 'ಆನಂದ್ ಆಡಿಯೋ' ಮೂಲಕ ಈ ಹಾಡು ರಿಲೀಸ್ ಆಗಿದೆ.

ನಿರ್ಮಾಪಕ ರಮೇಶ್ ರೆಡ್ಡಿ ಅವರು ಈ ಸಂದರ್ಭದಲ್ಲಿ ಮಾತನಾಡಿದರು. ದೂರದಿಂದ ಬಂದು ಹಾಡು ಬಿಡುಗಡೆ ಮಾಡಿಕೊಟ್ಟ ಪೂಜ್ಯರಿಗೆ ಅವರು ಧನ್ಯವಾದ ಅರ್ಪಿಸಿದರು. 'ನಮ್ಮ ಸಿನಿಮಾಗೆ ಅರ್ಜುನ್ ಜನ್ಯ ಅವರಂತಹ ಡೈರೆಕ್ಟರ್ ಸಿಕ್ಕಿದ್ದು ತುಂಬ ಖುಷಿ ಆಗಿದೆ. ಈ ಸಿನಿಮಾದ ಶುರುವಿನಿಂದ ಅವರು ಈ ಸಂಪೂರ್ಣವಾಗಿ ತೊಡಗಿಸಿಕೊಂಡಿದ್ದಾರೆ. ಈಗ ಬಿಡುಗಡೆ ಆಗಿರುವ ಶಿವನ ಕುರಿತ ಹಾಡು ನನ್ನ ಮನಸ್ಸಿಗೆ ಬಹಳ ಹತ್ತಿರವಾಗಿದೆ. ಈ ಸಾಂಗ್ ಇಡೀ ದೇಶದಲ್ಲಿ ಸದ್ದು ಮಾಡಲಿದೆ' ಎಂದು ರಮೇಶ್ ರೆಡ್ಡಿ ಹೇಳಿದರು.

ನಿರ್ದೇಶಕ ಅರ್ಜುನ್ ಜನ್ಯ ಅವರು ಮಾತನಾಡಿ, 'ಶಿವನ ಕುರಿತಾದ ಹಾಡು ಬರೆದುಕೊಟ್ಟ ನಾಗೇಂದ್ರ ಪ್ರಸಾದ್ ಮತ್ತು ಧ್ವನಿ ನೀಡಿದ ವಿಜಯ್ ಪ್ರಕಾಶ್ ಅವರಿಗೆ ಧನ್ಯವಾದಗಳು. ಈ ಹಾಡು ಮತ್ತು ಸಿನಿಮಾ ಇಷ್ಟು ಚೆನ್ನಾಗಿ ಮೂಡಿಬರಲು ನಿರ್ಮಾಪಕ ರಮೇಶ್ ರೆಡ್ಡಿ ಅವರೇ ಮುಖ್ಯ ಕಾರಣ. ನಾನು ಡೈರೆಕ್ಷನ್ ಮಾಡಲು ಪ್ರೇರಣೆ ನೀಡಿದ್ದೇ ಶಿವರಾಜ್ ಕುಮಾರ್. ಅವರ ಪ್ರೋತ್ಸಾಹಕ್ಕೆ ನಾನು ಚಿರ ಋಣಿ ಆಗಿರುವೆ' ಎಂದರು.

ಶಿವರಾಜ್ ಕುಮಾರ್ ಅವರು ಅರ್ಜುನ್ ಜನ್ಯ ಪ್ರತಿಭೆಯನ್ನು ಹೊಗಳಿದರು. 'ಅರ್ಜುನ್ ಜನ್ಯ ಕರ್ನಾಟಕ ಮಾತ್ರವಲ್ಲದೇ ಇಡೀ ದೇಶದಲ್ಲೇ ಉತ್ತಮ ನಿರ್ದೇಶಕನಾಗಿ ಹೆಸರು ಮಾಡುತ್ತಾರೆ. ಈಗ ಬಿಡುಗಡೆ ಆಗಿರುವ ಶಿವನ ಹಾಡಂತೂ ಬಹಳ ಚೆನ್ನಾಗಿದೆ. ನಿರ್ಮಾಪಕ ರಮೇಶ್ ರೆಡ್ಡಿ ನಮ್ಮ ಕುಟುಂಬದವರಂತೆ. ಕಳೆದ ವರ್ಷ ನಾನು ಈ ಸಿನಿಮಾಗೆ ಕನ್ನಡದಲ್ಲಿ ಡಬ್ಬಿಂಗ್ ಮುಗಿಸಿದ್ದೆ. ಈಗ ತಮಿಳಿನಲ್ಲಿ ಡಬ್ ಮಾಡುತ್ತಿದ್ದೇನೆ. ಆದಷ್ಟು ಎಲ್ಲಾ ಭಾಷೆಗಳಲ್ಲೂ ನಾನೇ ಡಬ್ ಮಾಡುತ್ತೇನೆ' ಎಂದು ಶಿವಣ್ಣ ಹೇಳಿದರು.

# 'ಸಿನಿಮಾ ವಿಚಾರದಲ್ಲಿ ನಾನು ಲಕ್ಕಿ ಅನ್ನೋದನ್ನು ಒಪ್ಪಿಕೊಳ್ಳುತ್ತೇನೆ

ನಟಿ ರುಕ್ಮಿಣಿ ವಸಂತ್ ಅವರು ದೊಡ್ಡ ಮಟ್ಟದಲ್ಲಿ ಖ್ಯಾತಿ ಪಡೆದಿದ್ದಾರೆ. ಇದಕ್ಕೆ ಕಾರಣ ಆಗಿದ್ದು 'ಸಪ್ತ ಸಾಗರದಾಚೆ ಎಲ್ಲೋ' ಚಿತ್ರ. ರಕ್ಷಿತ್ ಶೆಟ್ಟಿ ನಟನೆಯ ಈ ಚಿತ್ರದಿಂದಾಗಿ ಅವರಿಗೆ ಪರಭಾಷೆಗಳಿಂದ ಆಫರ್ ಬರುತ್ತಿದೆ. ಪ್ರಭಾಸ್, ಜೂನಿಯರ್ ಎನ್ ಟಿಆರ್ ಅವರಂಥ ಸ್ಟಾರ್ ಹೀರೋಗೆ ಅವರು ನಾಯಕಿ ಆಗಿ ಆಯ್ಕೆ ಆಗುತ್ತಿದ್ದಾರೆ ಎಂದು ವರದಿಗಳು ಕೇಳಿ ಬಂದಿವೆ. ಹೀಗಿರುವಾಗಲೇ ರುಕ್ಮಿಣಿ ವಸಂತ್ ಅವರು ಅದೃಷ್ಟದ ಬಗ್ಗೆ ಮಾತನಾಡಿದ್ದಾರೆ. ತಾವು ಲಕ್ಕಿ ಎಂದು ಅವರು ಎಲ್ಲರ ಎದುರು ಒಪ್ಪಿಕೊಂಡಿದ್ದಾರೆ.





ರುಕ್ಮಿಣಿ ವಸಂತ್ ಅವರು ಈ ಮೊದಲು ಕೆಲ ಸಿನಿಮಾ ಮಾಡಿದ್ದರು. ಆದರೆ, 'ಸಪ್ತ ಸಾಗರದಾಚೆ ಎಲ್ಲೋ' ಚಿತ್ರ ಅವರ ಅದೃಷ್ಟವನ್ನು ಬದಲಿಸಿತೂ ಎಂದರೂ ತಪ್ಪಾಗಲಿಕ್ಕಿಲ್ಲ. ಇದನ್ನು ಅವರು ಕೂಡ ಒಪ್ಪಿಕೊಳ್ಳುತ್ತಾರೆ. ತಮಗೆ ಅದೃಷ್ಟ ಇತ್ತು ಎಂದಿರೋ ಅವರು, ಶ್ರಮ ಕೂಡ ಸೇರಿದೆ ಎಂದು ಹೇಳಿಕೊಂಡಿದ್ದಾರೆ. ಅವರ ಮಾತನ್ನು ಅನೇಕರು ಒಪ್ಪಿಕೊಂಡಿದ್ದಾರೆ.

'ನೀವು ಲಕ್ಕಿ ಬಿಡಿ' ಎಂದು ಕೆಲವು ನಟಿಯರಿಗೆ ಕೆಲವರು ಹೇಳಿದ್ದು ಇದೆ. ಆಗ ಅವರಿಗೆ ಸಿಟ್ಟೇ ಬಂದುಬಿಡುತ್ತದೆ. 'ಅವರಿಗೆ ನಾನು ಹಾಕಿದ ಶ್ರಮ ಕಾಣುವುದಿಲ್ಲ' ಎನ್ನುತ್ತಾರೆ. ಆದರೆ, ರುಕ್ಮಿಣಿ ವಸಂತ್ ಅವರು ಈ ರೀತಿ ಅಲ್ಲ. ಅವರು ಬೇರೆಯದೇ ಅಭಿಪ್ರಾಯ ಹೇಳುತ್ತಾರೆ.

'ಅದೃಷ್ಟ ಮುಖ್ಯ. ಸಪ್ತ ಸಾಗರದಾಚೆ ಸಿನಿಮಾ ನನಗೆ ಬ್ರೇಕ್ ನೀಡಿತು. ನಾನು ಡೈರೆಕ್ಟರ್ ಗೆ ಮೆಸೇಜ್ ಮಾಡಿದೆ. ನಾನು ನ್ಯೂಸ್ ಪೇಪರ್ ನಲ್ಲಿ ನಾಯಕಿಗಾಗಿ ಹುಡುಕಾಟ ನಡೆಸುತ್ತಿದ್ದೀರಿ ಎಂಬುದನ್ನು ನೋಡಿದೆ. ಆಡಿಷನ್ ಮಾಡಬಹುದಾ ಎಂದು ಕೇಳಿದ್ದೆ. ನಾನು ನಟನೆ ಕಲಿತಿದ್ದೇನೆ ಎಂದು ಅವರಿಗೆ ಹೇಳಿದ್ದೆ. ಅವರು ಮೆಸೇಜ್ ನೋಡಿ ಓಕೆ ಎಂದರು. ಆಡಿಷನ್ ಕೊಟ್ಟು ಆಯ್ಕೆ ಆದೆ. ಅವರು ನನ್ನ ಮೆಸೇಜ್ ನೋಡದೇ ಇದ್ದಿದ್ದರೆ ಆ ಸಿನಿಮಾದಲ್ಲಿ ನಾನು ಇರ್ತಾ ಇರಲಿಲ್ಲ. ನಾವು ಕಷ್ಟಪಟ್ಟು ಕೆಲಸ ಮಾಡಿದ್ದೇವೆ. ಅದೇ ರೀತಿ ಅದೃಷ್ಟ ಕೂಡ ಮುಖ್ಯ. ನೀವು ಲಕ್ಕಿ ಎಂದರೆ ನನಗೆ ಕೋಪ ಬರಲ್ಲ. ಇದು ಅದೃಷ್ಟ ಹಾಗೂ ಶ್ರಮದ ಕಾಂಬಿನೇಷನ್' ಎಂದಿದ್ದಾರೆ ಅವರು.

ರಶ್ಮಿಕಾ ಮಂದಣ್ಣ ವಿಚಾರದಲ್ಲೂ ಹಿಗೇಯೇ ಆತಿತು. 'ಕಿರಿಕ್ ಪಾರ್ಟಿ' ಚಿತ್ರಕ್ಕೆ ಅವರು ಆಡಿಷನ್ ನೀಡಿ ಆಯ್ಕೆ ಆದರು. ಆ ಬಳಿಕ ಕರ್ನಾಟಕ ಕ್ರಶ್ ಆದರು. ನಂತರ ನ್ಯಾಷನಲ್ ಕ್ರಶ್ ಆದರು. ಅವರಿಗೆ ಅದೃಷ್ಟ ಸಾಕಷ್ಟು ಸಹಾಯ ಮಾಡಿತ್ತು. ಆದರೆ, ರಶ್ಮಿಕಾ ಇದನ್ನು ಒಪ್ಪಿಕೊಳ್ಳುವುದಿಲ್ಲ.

# ಮೊದಲು ನಿಮ್ಮ ಪಕ್ಕದ ರಾಜ್ಯದ ಭಾಷೆ ಕಲಿಯಿರಿ, ಹಿಂದಿ ಆಮೇಲೆ: ಕಮಲ್ ಹಾಸನ್

ಹಿಂದಿ ಹೇರಿಕೆಯ ಬಗ್ಗೆ ದೊಡ್ಡದಾಗಿ ಚರ್ಚೆ ಆಗುತ್ತಿದೆ. ದಕ್ಷಿಣ ಭಾರತದ ಬ್ಯಾಂಕ್ ಮುಂತಾದ ಕಡೆಗಳಲ್ಲಿ ಹಿಂದಿ ಮಂದಿ ಕಿರಿಕ್ ಮಾಡಿದ ಘಟನೆಗಳು ಆಗಾಗ ವರದಿ ಆಗುತ್ತಿವೆ. ಇತ್ತೀಚೆಗಷ್ಟೇ ಕರ್ನಾಟಕದಲ್ಲಿ ಇಂಥದ್ದೊಂದು ಘಟನೆ ನಡೆದಿತ್ತು. ಇದೇ ಸಂದರ್ಭದಲ್ಲಿ ನಟ ಕಮಲ್ ಹಾಸನ್ ಅವರು ದಕ್ಷಿಣ ಭಾರತದ ಭಾಷೆಗಳ ಉಳಿವಿನ ಅನಿವಾರ್ಯತೆ ಬಗ್ಗೆ ಮಾತನಾಡಿದ್ದಾರೆ. ಕೇರಳದಲ್ಲಿ ಅವರು 'ಥಗ್ ಲೈಫ್' ಸಿನಿಮಾದ ಪ್ರಚಾರ ಕಾರ್ಯದಲ್ಲಿ ಭಾಗಿಯಾಗಿದ್ದಾರೆ. ಈ ವೇಳೆ ಹಿಂದಿ ಕಲಿಯುವುದಕ್ಕಿಂತ ಮುನ್ನ ಪಕ್ಕದ ರಾಜ್ಯಗಳ ಭಾಷೆ ಕಲಿಯಿರಿ ಎಂದು ಅವರು ಹೇಳಿದ್ದಾರೆ.



ಕೇರಳದಲ್ಲಿ ಕಮಲ್ ಹಾಸನ್ ಅವರಿಗೆ ಅಪಾರ ಸಂಖ್ಯೆಯ ಅಭಿಮಾನಿಗಳು ಇದ್ದಾರೆ. ಕಮಲ್ ಹಾಸನ್ ಅವರನ್ನು ನೋಡಿ ಅಲ್ಲಿನ ಅಭಿಮಾನಿಗಳು ಖುಷಿಪಟ್ಟಿದ್ದಾರೆ. ಅವರನ್ನು ಉದ್ದೇಶಿಸಿ ಕಮಲ್ ಹಾಸನ್ ಮಾತನಾಡಿದರು. 'ಮೊದಲು ನೀವು ನಿಮ್ಮ ಪಕ್ಕದ ರಾಜ್ಯದ ಭಾಷೆಯನ್ನು ಕಲಿಯಬೇಕು. ಆಮೇಲೆ ನಾವು ಹಿಂದಿ ಬಗ್ಗೆ ಮಾತನಾಡಬಹುದು' ಎಂದು ಕಮಲ್ ಹಾಸನ್ ಅವರು ಹೇಳಿದ್ದಾರೆ.

'ನಾವೆಲ್ಲರೂ ದ್ರಾವಿಡರು, ಒಂದೇ ಕುಟುಂಬದವರು. ನೀವು ತಮಿಳುನಾಡಿನಲ್ಲಿ ಮಲಯಾಳಂ ಮಾತನಾಡಬಹುದು. ಆದರೆ ಹೆಚ್ಚು ಹೊತ್ತು ಮಾತನಾಡಿದರೆ ಅರ್ಥ ಮಾಡಿಕೊಳ್ಳಲು ಕಷ್ಟ ಆಗುತ್ತದೆ. ಆದರೆ ನೀವು ಕೇರಳದಲ್ಲಿ ತಮಿಳು ಮಾತನಾಡಿದರೆ ಜನರು ಅರ್ಥ ಮಾಡಿಕೊಳ್ಳುತ್ತಾರೆ' ಎಂದು ಕಮಲ್ ಹಾಸನ್ ಅವರು ಹೇಳಿದರು.

'ನಮ್ಮ ಭಾಷೆ ಕಳೆದು ಹೋಗದಂತೆ ಕಾಪಾಡಿಕೊಳ್ಳುವುದು ನಮ್ಮ ಜವಾಬ್ದಾರಿ. ಇದನ್ನು ಹೇಳಲು ಎಷ್ಟು ಧೈರ್ಯ ಬೇಕು ಗೊತ್ತಾ ನಾವೆಲ್ಲರೂ ದ್ರಾವಿಡರು, ಒಂದೇ ಕುಟುಂಬದವರು ಎಂಬುದೇ ಹೆಮ್ಮೆ' ಎಂದಿದ್ದಾರೆ ಕಮಲ್ ಹಾಸನ್. ಅವರು ಮಾತನಾಡಿರುವ ವಿಡಿಯೋ ವೈರಲ್ ಆಗಿದೆ. ಜನರು ಹಲವು ರೀತಿಯಲ್ಲಿ ಕಮೆಂಟ್ ಮಾಡುತ್ತಿದ್ದಾರೆ.

'ಥಗ್ ಲೈಫ್' ಸಿನಿಮಾಗೆ ಮಣಿರತ್ನಂ ಅವರು ನಿರ್ದೇಶನ ಮಾಡಿದ್ದಾರೆ. ಕಮಲ್ ಹಾಸನ್ ಜೊತೆ ಸಿಂಬು, ತ್ರಿಷಾ, ಅಭಿರಾಮಿ, ಐಶ್ವರ್ಯಾ ಲಕ್ಷ್ಮಿ, ಅಶೋಕ್ ಸೆಲ್ವನ್, ಪಂಕಜ್ ತ್ರಿಪಾಠಿ, ನಾಸರ್ ಮುಂತಾದವರು ಈ ಸಿನಿಮಾದಲ್ಲಿ ನಟಿಸಿದ್ದಾರೆ. 'ರಾಜ್ ಕಮಲ್ ಫಿಲ್ಸ್ ಇಂಟರ್ ನ್ಯಾಷನಲ್', 'ಮದ್ರಾಸ್ ಟಾಕೀಸ್', 'ರೆಡ್ ಜೈಂಟ್ ಮೂವೀಸ್' ಸಂಸ್ಥೆಗಳು ಈ ಚಿತ್ರವನ್ನು ನಿರ್ಮಾಣ ಮಾಡಿವೆ.

## ಗೆಲುವಿನ ವಿದಾಯ ಹೇಳಿದ ಡೆಲ್ಲಿ ಕ್ಯಾಪಿಟಲ್ಸ್

# ಪಂಜಾಬ್ ವಿರುದ್ಧ 6 ವಿಕೆಟ್‌ಗಳ ಜಯ



**ಜೈಪುರ:** ಸಂಘಟಿತ ಬೌಲಿಂಗ್ ಬ್ಯಾಟಿಂಗ್ ಪ್ರದರ್ಶನದ ನೆರವಿನೊಂದಿಗೆ ಪಂಜಾಬ್ ಕಿಂಗ್ಸ್ ವಿರುದ್ಧ ಡೆಲ್ಲಿ ಕ್ಯಾಪಿಟಲ್ಸ್ ತಂಡ ಆರು ವಿಕೆಟ್ಗಳ ಅಮೋಘ ಜಯ ಸಾಧಿಸಿದೆ. ಈ ಗೆಲುವಿನೊಂದಿಗೆ 18ನೇ ಆವೃತ್ತಿಗೆ ವಿದಾಯ ಹೇಳಿದೆ. ಆದ್ರೆ 13 ಪಂದ್ಯಗಳಲ್ಲಿ 8 ಗೆಲುವಿನೊಂದಿಗೆ 17 ಅಂಕ ಪಡೆದಿರುವ ಪಂಜಾಬ್ 2ನೇ ಸ್ಥಾನ ಕಾಯ್ದುಕೊಂಡಿದೆ.

ಇಲ್ಲಿನ ಸವಾಯಿ ಮಾನಸಿಂಗ್ ಕ್ರೀಡಾಂಗಣದಲ್ಲಿ ನಡೆದ 66ನೇ ಐಪಿಎಲ್ ಪಂದ್ಯದಲ್ಲಿ ಟಾಸ್ ಗೆದ್ದ ಡೆಲ್ಲಿ ಕ್ಯಾಪಿಟಲ್ಸ್ ತಂಡ ಫೀಲ್ಡಿಂಗ್ ಆಯ್ದುಕೊಂಡಿತು. ಮೊದಲಿಗೆ ಬ್ಯಾಟ್ ಬೀಸಿದ ಪಂಜಾಬ್ ಕಿಂಗ್ಸ್ 20 ಓವರ್ಗಳಲ್ಲಿ 8 ವಿಕೆಟ್ ನಷ್ಟಕ್ಕೆ 206 ರನ್ ಗಳಿಸಿತು. ಈ ಮೂಲಕ ಡೆಲ್ಲಿಗೆ 207 ರನ್ಗಳ ಗುರಿ ನೀಡಿತು. ಪಂಜಾಬ್ ತಂಡ ನೀಡಿದ ಗುರಿ ಬೆನ್ನಟ್ಟಿದ ಡೆಲ್ಲಿ ಕ್ಯಾಪಿಟಲ್ಸ್ 19.3 ಓವರ್ಗಳಲ್ಲಿ 4 ವಿಕೆಟ್ ನಷ್ಟಕ್ಕೆ 208 ರನ್ ಗಳಿಸಿ ಗೆಲುವು ಸಾಧಿಸಿತು.

ತಂಡದಿಂದ ಮೊದಲು ಬ್ಯಾಟ್ ಬೀಸಿದ ಕೆಎಲ್ ರಾಹುಲ್ ಹಾಗೂ ಫಾಫ್ ಡುಪ್ಲೆಸಿಸ್ ಜೊತೆಯಾಟವಾಡಿ 33 ಎಸೆತಗಳಿಗೆ 55 ರನ್ ಗಳಿಸಿಕೊಟ್ಟರು. ಕೆಎಲ್ ರಾಹುಲ್ 21 ಎಸೆತಕ್ಕೆ 35 ರನ್ (6 ಬೌಂಡರಿ, 1 ಸಿಕ್ಸ್) ಗಳಿಸಿ ಮೊದಲ ವಿಕೆಟ್ ಒಪ್ಪಿಸಿದರೇ, ತಂಡದ ನಾಯಕ ಫಾಫ್ ಡುಪ್ಲೆಸಿಸ್ 15 ಎಸೆತಗಳಿಗೆ 23 ರನ್ (2 ಬೌಂಡರಿ, 1 ಸಿಕ್ಸ್) ಗಳಿಸಿ ಔಟಾದರು. ಸೇದಿಕುಲ್ಲಾ ಅಟಲ್ 16 (22) ರನ್ ಗಳಿಸಿ ಪೆವಿಲಿಯನ್ಗೆ ಮರಳಿದರು. ಕರುಣ್ ನಾಯರ್ 27 ಎಸೆತಗಳಿಗೆ 44 ರನ್ (5 ಬೌಂಡರಿ, 2 ಸಿಕ್ಸ್) ಸಿಡಿಸಿ ವಿಕೆಟ್ ಒಪ್ಪಿಸಿದರು. ಕರುಣ್ ನಾಯರ್ ಹಾಗೂ ಸಮೀರ್ ರಿಜ್ವಿ ಜೊತೆಯಾಟವಾಡಿ 30 ಎಸೆತಗಳಿಗೆ 62 ರನ್ ಗಳಿಸಿಕೊಟ್ಟು ತಂಡವನ್ನು ಗೆಲುವಿನತ್ತ ಕೊಂಡೊಯ್ದರು. ರಿಜ್ವಿ 25 ಎಸೆತಗಳಿಗೆ 58 ರನ್ (3 ಬೌಂಡರಿ, 5 ಸಿಕ್ಸ್) ಗಳಿಸಿಕೊಟ್ಟು ಅಜೇಯರಾಗಿ ಉಳಿದು ತಂಡವನ್ನು ಗೆಲುವಿನ ದಡ ಸೇರಿಸುವಲ್ಲಿ ಪ್ರಮುಖ ಪಾತ್ರ ವಹಿಸಿದರು.

ಮೊದಲಿಗೆ ಫೀಲ್ಡಿಗಿಳಿದ ಪಂಜಾಬ್ ತಂಡದ ಪ್ರಿಯಾಂಶ್ ಆರ್ಯ 9 ಎಸೆತಗಳಿಗೆ 6 ರನ್ (1 ಫೋರ್) ಗಳಿಸಿ ಔಟಾದರು. ಬಳಿಕ ಪ್ರಭಸಿಮ್ರನ್ ಸಿಂಗ್ ಹಾಗೂ ಜೋಶ್ ಇಂಗ್ಲಿಸ್ ಜೊತೆಯಾಟವಾಡಿ 21 ಎಸೆತಗಳಿಗೆ 47 ರನ್ ಸಿಡಿಸಿ ತಂಡವನ್ನು ಮುನ್ನಡೆಸಿದರು. ಜೋಶ್ ಇಂಗ್ಲಿಸ್ 12 ಎಸೆತಗಳಿಗೆ 32 ರನ್ (3 ಫೋರ್, 2 ಸಿಕ್ಸ್) ಗಳಿಸಿ ಪೆವಿಲಿಯನ್ಗೆ ಮರಳಿದರು. ಪ್ರಭಸಿಮ್ರನ್ 18 ಎಸೆತಗಳಿಗೆ 28 ರನ್ (4 ಫೋರ್, 1 ಸಿಕ್ಸ್) ಗಳಿಸಿ ಔಟಾದರು. ಶಶಾಂಕ್ ಸಿಂಗ್ 10 (11) ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ಬಳಿಕ ಕ್ರೀಸ್ಗಿಳಿದ ತಂಡದ ನಾಯಕ ಶ್ರೇಯಸ್ ಅಯ್ಯರ್ 34 ಎಸೆತಗಳಿಗೆ 53 ರನ್ (5 ಫೋರ್, 2 ಸಿಕ್ಸ್) ಕಲೆಹಾಕಿ ಮಿಂಚಿದರು. ಶ್ರೇಯಸ್ ಐಯ್ಯರ್ ಹಾಗೂ ನೇಹಲ್ ವಧೇರಾ ಜೊತೆಯಾಟವಾಡಿ 28 ಎಸೆತಗಳಿಗೆ 41 ರನ್ ಗಳಿಸಿಕೊಟ್ಟರು. ನೇಹಲ್ ವಧೇರಾ 16 (16) ರನ್ ಗಳಿಸಿ ಔಟಾದರು. ಮಾರ್ಕಸ್ ಸ್ಟೊಯಿನಿಸ್ 16 ಬಾಲ್ಗಳಿಗೆ 44 ರನ್ (3 ಫೋರ್, 4 ಸಿಕ್ಸ್) ಹಾಗೂ ಹರ್ಪ್ರೀತ್ ಬ್ರಾರ್ 2 (7) ರನ್ ಗಳಿಸಿ ಅಜೇಯರಾಗಿ ಉಳಿದರು.

ಡೆಲ್ಲಿ ಪರವಾಗಿ ಮುಸ್ತಾಫಿಜುರ್ ರಹಮಾನ್ 3 ವಿಕೆಟ್ ಕಿತ್ತರು. ವಿಪ್ರಾಜ್ ನಿಗಮ್ ಹಾಗೂ ಕುಲದೀಪ್ ಯಾದವ್ ತಲಾ ವಿಕೆಟ್ ಪಡೆದರು. ಮುಕೇಶ್ ಕುಮಾರು ಒಂದು ವಿಕೆಟ್ ಕಿತ್ತರು. ಪಂಜಾಬ್ ತಂಡದ ಪರ ಹರ್ಪ್ರೀತ್ ಬ್ರಾರ್ 2 ವಿಕೆಟ್ ಕಿತ್ತರೇ, ಮಾರ್ಕೋ ಜಾನ್ಸೆನ್ ಮತ್ತು ಪ್ರವೀಣ್ ದುಬೆ ತಲಾ ಒಂದು ವಿಕೆಟ್ ಕಿತ್ತರು.

# 70 ಗಂಟೆ ಕೆಲಸ ಮಾಡುವುದಕ್ಕಿಂತ, ಎಷ್ಟು ಮಾನಸಿಕವಾಗಿ ಸಿದ್ಧರಾಗಿದ್ದೀರಿ ಎನ್ನುವುದು ಮುಖ್ಯ



**ನವದೆಹಲಿ:** ಇನ್ಫೋಸಿಸ್ ಸಂಸ್ಥಾಪಕ ನಾರಾಯಣ ಮೂರ್ತಿ ಅವರ ವಾರದಲ್ಲಿ 70 ಗಂಟೆ ಕೆಲಸ ಮಾಡಬೇಕು ಎಂಬ ಹೇಳಿಕೆ ಇದೀಗ ಮತ್ತೆ ಮುನ್ನೆಲೆಗೆ ಬಂದಿದೆ. ನಾರಾಯಣ ಮೂರ್ತಿ ಹೇಳಿರುವ ಈ ಸಿದ್ಧಾಂತ ಬಗ್ಗೆ ಅನೇಕ ಪರ-ವಿರೋಧ ವ್ಯಕ್ತಪಡಿಸಿದ್ದರು. ಆದರೆ ಇದೀಗ ಆರ್ಟ್ ಆಫ್ ಲಿವಿಂಗ್ ಪ್ರತಿಷ್ಠಾನದ ಸಂಸ್ಥಾಪಕರು ರವಿಶಂಕರ್ ಗುರೂಜಿ ಅವರು ಕೂಡ ಈ ನೀತಿಯನ್ನು ವಿರೋಧಿಸಿದ್ದಾರೆ. ಮಾನಸಿಕ ಸ್ಪಷ್ಟತೆ, ಶಕ್ತಿ ಮತ್ತು ಸಮತೋಲನದಿಂದ ಬೆಂಬಲಿತವಾಗದ ಹೊರತು, ಹೆಚ್ಚು ಸಮಯ ಕೆಲಸ ಮಾಡುವುದರಿಂದ ಉತ್ತಮ ಫಲಿತಾಂಶಗಳು ಖಾತರಿಪಡಿಸುವುದಿಲ್ಲ ಎಂದು ಹೇಳಿದರು. ಕೆಲಸದಲ್ಲಿ ವಿಶ್ರಾಂತಿ ಮತ್ತು ಮಾನಸಿಕ ಉಪಸ್ಥಿತಿ ಇರಬೇಕು ಹಾಗೂ ಅದಕ್ಕೆ ಹೆಚ್ಚು ಮಹತ್ವ ನೀಡಬೇಕು ಎಂದು ಹೇಳಿದ್ದಾರೆ. ಪ್ರಮಾಣವಲ್ಲದ ಹಾಗೂ ಗುಣಮಟ್ಟ ನಮ್ಮ ವೃತ್ತಿಪರ ಕೊಡುಗೆ ನೀಡುತ್ತದೆ ಎಂದು ಇಂಡಿಯಾ ಟುಡೇ ನೀಡಿದ ಸಂದರ್ಶನದಲ್ಲಿ ಹೇಳಿದ್ದಾರೆ.

ರವಿಶಂಕರ್ ಗುರೂಜಿ 70 ಗಂಟೆ ಕೆಲಸದ ಬಗ್ಗೆ ಮಾತನಾಡುವಾಗ ಉದಾಹರಣೆಯನ್ನು ಕೂಡ ನೀಡಿದ್ದಾರೆ. ನೀವು ನಿಮ್ಮ ಕಾರನ್ನು ಪೆಟ್ರೋಲ್, ಡೀಸೆಲ್ ಇಲ್ಲದೆ ಓಡಿಸಲು ಸಾಧ್ಯವೇ ಇಲ್ಲ ಸಾಧ್ಯವೇ ಇಲ್ಲ, ಅದು ಹಾಳಾಗುವುದು ಖಂಡಿತ, ನೀವು ಎಷ್ಟು ಗಂಟೆಗಳನ್ನು ಕೆಲಸ ಮಾಡುತ್ತೀರಿ ಎಂಬುದು ಮುಖ್ಯವಲ್ಲ, ಆ ಸಮಯದಲ್ಲಿ ನೀವು ಎಷ್ಟು ಮಾನಸಿಕವಾಗಿ ಸಿದ್ಧರಾಗಿದ್ದೀರಾ ಎನ್ನುವುದು ಮುಖ್ಯ. ನವೆಂಬರ್ 2024 ರಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ, ದೇಶವು ಆರ್ಥಿಕವಾಗಿ ಬೆಳೆಯಲು ಯುವ ಭಾರತೀಯರು ವಾರಕ್ಕೆ 70 ಗಂಟೆಗಳ ಕಾಲ ಕೆಲಸ ಮಾಡಬೇಕು ಎಂಬ ಹೇಳಿಕೆಯನ್ನು ನೀಡಿದ್ದ ನಾರಾಯಣ ಮೂರ್ತಿ ಅವರ ಹೇಳಿಕೆಯನ್ನು ಉಲ್ಲೇಖಿಸಿ ಹೇಳಲಾಗಿದೆ. ಕೆಲಸ-ಜೀವನದ ಸಮತೋಲನ ಬಹಳ ಮುಖ್ಯ ಎಂದು ಹೇಳಿದ್ದಾರೆ.

ಇನ್ನು ಈ ಹಿಂದೆ ನಾರಾಯಣ ಮೂರ್ತಿ ತಾನು ಹೇಳಿಕೆ ಬದ್ಧನಾಗಿದ್ದೇನೆ. ನಾನು ನನ್ನ ದೃಷ್ಟಿಕೋನವನ್ನು ಬದಲಾಯಿಸಿಲ್ಲ, ಇದು ನನ್ನ ಅಂತ್ಯವರೆಗೆ ಇರುತ್ತದೆ ಎಂದು ಹೇಳಿದರು. ಆದರೆ ರವಿಶಂಕರ್ ಗುರೂಜಿ ಬೇರೆ ದೃಷ್ಟಿಕೋನದಲ್ಲಿ ಹೇಳಿದ್ದಾರೆ. ಹಲವು ಜನರು ತಮ್ಮ ಕಚೇರಿಗಳಲ್ಲಿ ಉಪಸ್ಥಿತರಿರುತ್ತಾರೆ, ಆದರೆ ಅವರ ಮನಸ್ಸು ಬೇರೆಡೆ ಇರುತ್ತದೆ. ಒಂದು ಪತ್ರ ಬರೆಯಲು ಆತನಿಗೆ 2-3 ಗಂಟೆ ಬೇಕು. ಅದರಲ್ಲೂ ಆತನ ಗಮನ ಅದರ ಮೇಲೆ ಇರುವುದಿಲ್ಲ. ಬೇರೆ ಬೇರೆ ಯೋಚನೆಗಳು ಬರುತ್ತದೆ. ಇದೇ ರೀತಿ ಕೆಲಸದಲ್ಲೂ ಗುಣಮಟ್ಟದ ಸಮಯ ಮತ್ತು ಗಮನ ಬೇಕು ಎಂದು ಹೇಳಿದ್ದಾರೆ.

ರವಿಶಂಕರ್ ಗುರೂಜಿ ಮತ್ತೊಂದು ಉದಾಹರಣೆಯನ್ನು ನೀಡಿದ್ದಾರೆ. ಒಂದು ಕಾರು ಚಲನೆ ಮಾಡುವಾಗ ಪೆಟ್ರೋಲ್ ಅಥವಾ ಡೀಸೆಲ್ ಖಾಲಿಯಾಗುತ್ತ ಬರುತ್ತಿದೆ ಎಂದರೆ ಅದನ್ನು ನಿಲ್ಲಿಸಿ ಪೆಟ್ರೋಲ್ ಅಥವಾ ಡೀಸೆಲ್ ತುಂಬುತ್ತೇವೆ. ನೀವು ಕಾರನ್ನು ನಿಲ್ಲಿಸಿ, ಪೆಟ್ರೋಲ್ ತುಂಬಿಸಿ, ನಂತರ ಮತ್ತೆ ಸ್ಟಾರ್ಟ್ ಮಾಡಬೇಕು. ನನಗೆ ಇಂಧನ ತುಂಬಿಸಲು ಸಮಯವಿಲ್ಲ ಹೋದ್ರೆ, ರಸ್ತೆಯ ಮಧ್ಯದಲ್ಲಿ ಸಿಲುಕಿಕೊಳ್ಳುತ್ತೀರಿ. ಮನುಷ್ಯನು ಕೂಡ ಹಾಗೆ ಚಾರ್ಜ್ ಮಾಡಲು ಸಮಯ ತೆಗೆದುಕೊಳ್ಳಬೇಕು. ವಿಶ್ರಾಂತಿ ತೆಗೆದುಕೊಳ್ಳುವುದರಿಂದ ಒಬ್ಬ ವ್ಯಕ್ತಿ ಹೆಚ್ಚು ಉತ್ಪಾದಕನಾಗಬಹುದು, ನಿಮ್ಮಲ್ಲಿ ಉತ್ತಮ ಶಕ್ತಿ ಇದ್ದರೆ ಮತ್ತು ನೀವು ಕ್ರಿಯಾಶೀಲರಾಗಿದ್ದರೆ, ಯಾರಾದರೂ 7 8 ಗಂಟೆಗಳಲ್ಲಿ ಮಾಡುವ ಯಾವುದೇ ಕೆಲಸವನ್ನು ನೀವು 3 4 ಗಂಟೆಗಳಲ್ಲಿ ಮಾಡಬಹುದು. ನೀವು ಏನು ಸಾಧಿಸುತ್ತೀರಿ ಎಂಬುದು ಮುಖ್ಯ, ನೀವು ಎಷ್ಟು ಹೊತ್ತು ಮೇಜಿನ ಬಳಿ ಕುಳಿತುಕೊಳ್ಳುತ್ತೀರಿ ಎಂಬುದಲ್ಲ ಎಂದು ಹೇಳಿದರು.

# ಬಂದ್ಬಿಟ್ಟ.. ಆರ್‌ಸಿಬಿ ತಂಡಕ್ಕೆ ರಣ ಬೇಟೆಗಾರ ಬಂದೇ ಬಿಟ್ಟ..!



ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಪ್ರಮುಖ ವೇಗಿ ಜೋಶ್ ಹೇಝಲ್‌ವುಡ್ ಆರ್‌ಸಿಬಿ ತಂಡವನ್ನು ಕೂಡಿಕೊಂಡಿದ್ದಾರೆ. ಭುಜದ ನೋವಿನ ಕಾರಣ ಕಳೆದ ಮೂರು ಪಂದ್ಯಗಳಿಂದ ಹೊರಗುಳಿದಿದ್ದ ಹೇಝಲ್‌ವುಡ್ ಭಾನುವಾರ ಬೆಂಗಳೂರಿಗೆ ಆಗಮಿಸಿದ್ದಾರೆ. ಹೀಗಾಗಿ ಮುಂದಿನ ಪಂದ್ಯಗಳಿಗೆ ಅವರು ಲಭ್ಯರಿರಲಿದ್ದಾರೆ.

ಇದಕ್ಕೂ ಮುನ್ನ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧದ ಪಂದ್ಯದ ವೇಳೆ ಜೋಶ್ ಹೇಝಲ್‌ವುಡ್ ಭುಜದ ನೋವಿಗೆ ತುತ್ತಾಗಿದ್ದರು. ಹೀಗಾಗಿ ಅವರು ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧದ ಪಂದ್ಯದಲ್ಲಿ ಕಣಕ್ಕಿಳಿದಿರಲಿಲ್ಲ. ಇದಾದ ಬಳಿಕ ಐಪಿಎಲ್ ಸ್ಥಗಿತಗೊಂಡಿದ್ದರಿಂದ ಅವರು ಆಸ್ಟ್ರೇಲಿಯಾಗೆ ಮರಳಿದ್ದರು.

ಆದರೆ ಆ ಬಳಿಕ ಐಪಿಎಲ್ ಆರಂಭವಾದರೂ ಜೋಶ್ ಹೇಝಲ್‌ವುಡ್ ಬ್ರಿಸ್ಬೇನ್‌ನಲ್ಲೇ ಚಿಕಿತ್ಸೆ ಮುಂದುವರೆಸಿದ್ದರು. ಇದೀಗ ಸಂಪೂರ್ಣ ಫಿಟ್‌ನೆಸ್ ಸಾಧಿಸಿರುವ ಅವರು ಐಪಿಎಲ್‌ಗಾಗಿ ಆಗಮಿಸಿದ್ದಾರೆ. ಹೀಗಾಗಿ ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧದ ಕೊನೆಯ ಲೀಗ್ ಪಂದ್ಯಕ್ಕೆ ಹೇಝಲ್ ವುಡ್ ಲಭ್ಯರಿರಲಿದ್ದಾರೆ.

ಇತ್ತ ಪ್ಲೇಆಫ್ ಪಂದ್ಯಕ್ಕೂ ಮುನ್ನ ಜೋಶ್ ಹೇಝಲ್‌ವುಡ್ ಮರಳಿರುವುದು ಆರ್‌ಸಿಬಿ ತಂಡದ ಬಲ ಬೌಲಿಂಗ್ ಬಲ ಹೆಚ್ಚಿಸಿದೆ. ಏಕೆಂದರೆ ಈ ಬಾರಿಯ ಐಪಿಎಲ್‌ನಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಪರ ಅತ್ಯಧಿಕ ವಿಕೆಟ್ ಪಡೆದಿರುವ ಬೌಲರ್ ಹೇಝಲ್‌ವುಡ್. 10 ಪಂದ್ಯಗಳಲ್ಲಿ 36.5 ಓವರ್‌ಗಳನ್ನು ಎಸೆದಿರುವ ಆಸೀಸ್ ವೇಗಿ ಒಟ್ಟು 18 ವಿಕೆಟ್ ಕಬಳಿಸಿದ್ದಾರೆ.

ಹಾಗೆಯೇ 10 ಪಂದ್ಯಗಳಲ್ಲಿ ಜೋಶ್ ಹೇಝಲ್‌ವುಡ್ ಬರೋಬ್ಬರಿ 103 ಡಾಟ್ ಬಾಲ್ ಮಾಡಿದ್ದರು. ಅಂದರೆ ಆರ್‌ಸಿಬಿ ಪರ ರನ್ ನಿಯಂತ್ರಿಸುವಲ್ಲಿ ಹಾಗೂ ವಿಕೆಟ್ ಕಬಳಿಸುವಲ್ಲಿ ಹೇಝಲ್‌ವುಡ್ ಪ್ರಮುಖ ಪಾತ್ರವಹಿಸಿದ್ದರು. ಇದೀಗ ನಿರ್ಣಾಯಕ ಪಂದ್ಯಗಳಿಗೂ ಮುನ್ನ ಅವರ ಆಗಮನದಿಂದಾಗಿ ಆರ್‌ಸಿಬಿ ತಂಡಕ್ಕೆ ಆನೆಬಲ ಬಂದಂತಾಗಿದೆ.

# ಲೋಕಕ್ಕೆ ಜಲ ವಾಯು ಗಂಡಾಂತರ, ಮತ್ತೆ ಯುದ್ಧ ಭೀತಿ: ಕೋಡಿ ಶ್ರೀ ಸ್ಫೋಟಕ ಭವಿಷ್ಯ

**ಬೆಳಗಾವಿ:** ಲೋಕಕ್ಕೆ ಜಲ ಹಾಗೂ ವಾಯು ಗಂಡಾಂತರವಿದೆ. ಮತ್ತೆ ಯುದ್ಧ ಭೀತಿ ಇದ್ದು ಕೆಲವು ದೇಶಗಳು ನಾಶವಾಗಲಿವೆ ಎಂದು ಕೋಡಿಮಠ ಸಂಸ್ಥಾನದ ಡಾ. ಶಿವಾನಂದ ಶಿವಯೋಗಿ ರಾಜೇಂದ್ರ, ಸ್ವಾಮೀಜಿ ಸ್ಫೋಟಕ ಭವಿಷ್ಯ ನುಡಿದಿದ್ದಾರೆ. ಬೆಳಗಾವಿಯಲ್ಲಿ ಮಾತನಾಡಿದ ಅವರು, ಕೊವಿಡ್ ಕುರಿತು ಕೂಡ ಮತ್ತೆ ಸ್ಫೋಟಕ ಭವಿಷ್ಯ ನುಡಿದಿದ್ದಾರೆ. ಐದು ವರ್ಷ ಮಹಾಮಾರಿ ಬೇರೆ ಬೇರೆ ರೂಪದಲ್ಲಿ ಇರಲಿದೆ. ಜನರು ಹುಷಾರಾಗಿ ಇರೋದು ಒಳ್ಳೆಯದು. ಉಸಿರಾಟಕ್ಕೆ ತೊಂದರೆಯಾಗಿ ಸಾವು ಬರುವ ಸಾಧ್ಯತೆಗಳಿವೆ. ಲೋಕಕ್ಕೆ ವಾಯು, ಜಲದಿಂದ ಐದು ವರ್ಷ ಗಂಡಾಂತರವಿದೆ ಎಂದು ಅವರು ಹೇಳಿದ್ದಾರೆ.



**ಹಿಮಾಲಯ ಕರಗಿ ದೆಹಲಿ ತಲುಪಲಿದೆ:** ಹಿಮಾಲಯ ಕರಗಿ ದೆಹಲಿ ವರೆಗೆ ತಲುಪಲಿದೆ. ಮೇಘಸ್ಫೋಟ ಆಗುವ ಸಾಧ್ಯತೆಗಳಿವೆ. ಭೂಕಂಪಗಳು ಸಂಭವಿಸಲಿವೆ. ಮತೀಯ ಗಲಭೆಗಳು ಹೆಚ್ಚಾಗಲಿವೆ. ರಾಜಕೀಯವಾಗಿ ಅರಸನ ಮನೆಗೆ ಕಾರ್ಮೋಡ ಕವಿದಿತ್ತು. ಯುದ್ಧದ ಭೀತಿ ಮತ್ತೆ ಪ್ರಾರಂಭ ಆಗಲಿದೆ. ಜನರಲ್ಲಿ ಅಶಾಂತಿ ಇದೆ. ಕೆಲವು ದೇಶಗಳು ಅಳಿದು ಹೋಗಲಿವೆ. ಹೊಸ ಹೊಸ ದೇಶಗಳು ಉತ್ಪತ್ತಿಯಾಗುತ್ತವೆ ಎಂದು ಅವರು ಭವಿಷ್ಯ ನುಡಿದಿದ್ದಾರೆ.

**ರಾಜಕೀಯ ಮುಖಂಡರಿಗೆ ಸಾವು!:** ಅನೇಕ ರಾಜಕೀಯ ಮುಖಂಡರಿಗೆ ಸಾವಿದೆ ಹಾಗೂ ಭಯವಿದೆ. ಮುಂದಿನ ಸಂಕ್ರಾಂತಿಯವರೆಗೂ ರಾಜ್ಯ ಸರ್ಕಾರಕ್ಕೆ ಅಪಾಯವಿಲ್ಲ, ಸಂಕ್ರಾಂತಿಯ ನಂತರ ಏನಾಗುತ್ತದೆಯೋ ನೋಡಬೇಕು ಎಂದು ಸ್ವಾಮೀಜಿ ಹೇಳಿದ್ದಾರೆ.

Printed, Published & Owned by N.Venugopal Krishna, Printed at Dashapramathi Mudranalaya, No.45, 4th Cross, Srigandhadakaval, Bengaluru-560079.
Published at No.45, 4th Cross, Srigandhadakaval, Bengaluru-560079. Editor: N.Venugopal Krishna, Mobile No.+91 94835 89085,
email: sanjemugilu@gmail.com, RNI No.KARKAN/2002/08054